ಸಂಪುಟ: 04 ಸಂಚಿಕೆ: 157 ಪುಟಗಳು: 08 ಸೋಮವಾರ 19 ಆಗಸ್ಟ್ 2024 www.udayavahini.in epaper.udayavahini.in Udayavahini news Udayavahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ RNI No. KARKAN/2021/80833 9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ಶುದ್ಧ ಚಾರಿತ್ರ್ಯವೊಂದೇ ಕಷ್ಟ ಪರಂಪರೆಗಳ ಅಭೇದ್ಯ ಕೋಟೆಯನ್ನು ಸೀಳಿಕೊಂಡು ಹೋಗಬಲ್ಲದು

# ಮುಂದಿನ 6 ತಿಂಗಳಲ್ಲಿ ಅರ್ಧದಷ್ಟು ಬಿಜೆಪಿ ನಾಯಕರು ಜೈಲಿಗೆ ಹೋಗ್ತಾರೆ

• ಉದಯವಾಹಿನಿ, ಬೆಂಗಳೂರು

ಮುಂದಿನ ಆರು ತಿಂಗಳಲ್ಲಿ ರಾಜ್ಯದ ಅರ್ಧದಷ್ಟು ಬಿಜೆಪಿ ನಾಯಕರು ಜೈಲಿನಲ್ಲಿರುತ್ತಾರೆ ಅಥವಾ ಜಾಮೀನಿಗಾಗಿ ಓಡುತ್ತಾರೆ ಎಂದು ಸಚಿವ ಪ್ರಿಯಾಂಕ್ ಖರ್ಗೆ ಭವಿಷ್ಯ ನುಡಿದಿದ್ದಾರೆ.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರದಲ್ಲಿ ನಡೆದ ನಿವೇಶನ ಹಂಚಿಕೆ ಹಗರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಕಾನೂನು ಕ್ರಮ ಜರುಗಿಸಲು ರಾಜ್ಯಪಾಲ ಥಾವರ್ ಚಂದ್ ಗೆಹ್ಲೋಟ್ ಅನುಮತಿ ನೀಡಿರುವ ಬಗ್ಗೆ ಪ್ರತಿಕ್ರಿಯಿಸಿದ ಅವರು, ಕಾಂಗ್ರೆಸ್ ತನ್ನ ಮೊದಲ ಆದ್ಯತೆ ಉತ್ತಮ ಆಡಳಿತವಾಗಿರುವುದರಿಂದ ಮಾಟಗಾತಿಗೆ ಹೋಗಿಲ್ಲ ಎಂದರು. ನಮ್ಮ ಮೊದಲ ಆದ್ಯತೆ

**ಪ್ರಿಯಾಂಕ್ ಖರ್ಗೆ ಭವಿಷ್ಯ**

ದಕ್ಷ ಆಡಳಿತವನ್ನು ನೀಡುವುದು. ಮಾಟಗಾತಿಯಲ್ಲ. ಆದರೆ, ಹಿಂದಿನ ಸರ್ಕಾರದಲ್ಲಿ ಸಾಕಷ್ಟು ವ್ಯತ್ಯಾಸಗಳಿವೆ ಎಂದು ಖರ್ಗೆ ಸುದ್ದಿಗಾರರಿಗೆ ತಿಳಿಸಿದರು.

ಬಿಜೆಪಿ ನಾಯಕರ ವಿರುದ್ಧ 35 ಕ್ಕೂ ಹೆಚ್ಚು ಪ್ರಕರಣಗಳಿವೆ. ಮೂರರಿಂದ ನಾಲ್ಕು ಪ್ರಕರಣಗಳಲ್ಲಿ ಮಧ್ಯಂತರ ವರದಿಯನ್ನು ಸಲ್ಲಿಸಲಾಗಿದೆ. ರಾಜ್ಯ ಸರ್ಕಾರವು ಅಪರಾಧ ತನಿಖಾ ಇಲಾಖೆಯ ವಿಶೇಷ ತನಿಖಾ ತಂಡವನ್ನು ರಚಿಸಿದೆ ಎಂದು ಸಚಿವರು ಹೇಳಿದರು.

ನಾವು ಈ ಪ್ರಕರಣಗಳನ್ನು ಸೂಕ್ಷ್ಮವಾಗಿ ಗಮನಿಸುತ್ತಿದ್ದೇವೆ. ನಾವು ಆ ಪ್ರಕರಣಗಳ ಕೆಳಭಾಗಕ್ಕೆ ಹೋಗುತ್ತೇವೆ. ಇದು ಸಮಯ ತೆಗೆದುಕೊಳ್ಳುತ್ತದೆ. ಹಿಂದಿನ ಸರ್ಕಾರದಲ್ಲಿ ತೀವ್ರ ಭ್ರಷ್ಟಾಚಾರ ನಡೆದಿತ್ತು. ನಾವು ಅದರ ಮೇಲೆ ಕೆಲಸ ಮಾಡುತ್ತಿದ್ದೇವೆ.

ಮುಂದಿನ ಆರು ತಿಂಗಳಲ್ಲಿ ಅರ್ಧದಷ್ಟು ಬಿಜೆಪಿ ನಾಯಕರು ಜಾಮೀನಿಗಾಗಿ ಓಡುತ್ತಾರೆ ಅಥವಾ ಜೈಲಿನಲ್ಲಿರುತ್ತಾರೆ ಎಂದು



ಭವಿಷ್ಯ ನುಡಿದರು. ರಾಜ್ಯಪಾಲರ ಪಾತ್ರದ ಬಗ್ಗೆ ಹಲವಾರು ಪ್ರಕರಣಗಳಿವೆ. ಅದನ್ನು ಕಲ್ಲಿನಲ್ಲಿ ಸ್ಥಾಪಿಸಲಾಗಿದೆ ಮತ್ತು ನ್ಯಾಯಾಲಯದ ಮುಂದೆ ಇಡಲಾಗುವುದು ಎಂದು ಸಚಿವರು ಹೇಳಿದರು. ಪ್ರಶ್ನೆಯೊಂದಕ್ಕೆ ಉತ್ತರಿಸಿದ ಖರ್ಗೆ, ಬಿಜೆಪಿ ನಾಯಕರು ಸಿದ್ದರಾಮಯ್ಯ ವಿರುದ್ಧದ ಪ್ರಕರಣವನ್ನು ತಾರ್ಕಿಕ ಅಂತ್ಯಕ್ಕೆ ಕೊಂಡೊಯ್ಯಲು ಯಾವುದೇ ಮಾರ್ಗವಿಲ್ಲ, ಏಕೆಂದರೆ ಅವರ ಬಳಿ ಯಾವುದೇ ಪುರಾವೆಗಳಿಲ್ಲ.

ಅವರು ಮಾಡಬಹುದಾದ ಏಕೈಕ ಕೆಲಸವೆಂದರೆ ಅವರು ಸಿಬಿಐ, ಆದಾಯ ತೆರಿಗೆ, ಜಾರಿ ನಿರ್ದೇಶನಾಲಯ ಮತ್ತು ರಾಜ್ಯಪಾಲರನ್ನು ಬಳಸಿಕೊಂಡು ಪ್ರಕರಣವನ್ನು ಜೀವಂತವಾಗಿಡಬಹುದು ಎಂದು ಅವರು ಹೇಳಿದರು. ರಾಜ್ಯದಲ್ಲಿನ ರಾಜಕೀಯ ಪ್ರಕ್ಷುಬ್ಧತೆಗೆ ಗೆಹ್ಲೋಟ್ ಅವರನ್ನು ದೂಷಿಸಿದ ಖರ್ಗೆ, ರಾಜ್ಯಪಾಲರು ಕರ್ನಾಟಕದ ಕೈಗೊಂಬೆಯೇ ಹೊರತು ಕರ್ನಾಟಕದ ಸಾಂವಿಧಾನಿಕ ಮುಖ್ಯಸ್ಥರಲ್ಲ ಎಂದು ಆರೋಪಿಸಿದರು.

## ಪ್ರಾಸಿಕ್ಯೂಷನ್‌ಗೆ ಅನುಮತಿ: ಸಿಎಂ ಹೈಕೋರ್ಟ್ ಗೆ ಅರ್ಜಿ ಸಲ್ಲಿಕೆ

• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಸಿಎಂ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಜಿಕ್ಯೂಷನ್ ಗೆ ಅನುಮತಿ ನೀಡಿರುವ ವಿಚಾರವಾಗಿ ಸಿದ್ದರಾಮಯ್ಯ ಅವರು ನಾಳೆ ಸೋಮವಾರ ಹೈಕೋರ್ಟ್ ಗೆ ಅರ್ಜಿ ಸಲ್ಲಿಸಲಿದ್ದಾರೆ ಎಂದು ತಿಳಿದು ಬಂದಿದೆ. ಹೌದು ಈ ಕುರಿತಂತೆ ಸಿಎಂ ಸಿದ್ದರಾಮಯ್ಯ ವಕೀಲರು ಹಾಗೂ ಆಪ್ತರ ಜೊತೆ ಸಮಾಲೋಚನೆ ನಡೆಸಿದ್ದು, ಸಿಎಂ ಕಾನೂನು ಸಲಹೆಗಾರ ಪೊನ್ನಣ್ಣ ನೇತೃತ್ವದಲ್ಲಿ ಈ ಒಂದು ಸಮಾಲೋಚನೆ ಸಭೆ ನಡೆದಿದ್ದು ಸಭೆಯಲ್ಲಿ ಹೈಕೋರ್ಟ್ ಮೆಟ್ಟಿಲೇರುವ ಬಗ್ಗೆ ಅಂತಿಮ ತೀರ್ಮಾನ ಕೈಗೊಳ್ಳಲಾಗಿದೆ. ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಸಿಎಂ. ಸಿದ್ದರಾಮಯ್ಯ ಅವರಿಗೆ ಪ್ರಾಜಿಕ್ಯೂಷನ್ ಗೆ ಅನುಮತಿ ವಿಚಾರವಾಗಿ ಸಿಎಂ ಸಿದ್ದರಾಮಯ್ಯ ಕಾನೂನು ಹೋರಾಟಕ್ಕೆ ಮುಂದಾಗಿದ್ದಾರೆ. ಹಾಗಾಗಿ ನಾಳೆ ಹೈ ಕೋರ್ಟ್‌ಗೆ ಅರ್ಜಿ ಸಲ್ಲಿಸಲು ಸಿದ್ಧತೆ ಮಾಡಿಕೊಂಡಿದ್ದು, ಇಂದು ವಕೀಲರಾದ ಅಭಿಷೇಕ್ ಮನು ಸಿಂಘ್ವಿ ಹಾಗೂ ಕಪಿಲ್ ಸಿಬಲ್ ಬೆಂಗಳೂರಿಗೆ ಆಗಮಿಸಿದ್ದಾರೆ.

## ಗವರ್ನರ್ ವಿರುದ್ಧ ನಾಲಿಗೆ ಹರಿಬಿಟ್ಟ ಶಾಸಕ ನರೇಂದ್ರಸ್ವಾಮಿ

• ಉದಯವಾಹಿನಿ, ಮಂಡ್ಯ

ಮುಡಾ ಹಗರಣಕ್ಕೆ ಸಂಬಂಧಿಸಿದಂತೆ ಸಿಎಂ ವಿರುದ್ಧ ಪ್ರಾಜಿಕ್ಯೂಷನ್ ಗೆ ಅನುಮತಿ ವಿಚಾರವಾಗಿ ರಾಜ್ಯದ ಎಲ್ಲಾ ಜಿಲ್ಲಾ, ತಾಲ್ಲೂಕು ಕೇಂದ್ರಗಳಲ್ಲಿ ಕಾಂಗ್ರೆಸ್ ಪ್ರತಿಭಟನೆ ಮಾಡುತ್ತಿದೆ. ಅದೇ ರೀತಿಯಾಗಿ ಮಂಡ್ಯ ಜಿಲ್ಲೆಯಲ್ಲಿ ಮಳವಳ್ಳಿಯ ಕಾಂಗ್ರೆಸ್ ಶಾಸಕ ಪಿ.ಎಂ ನರೇಂದ್ರಸ್ವಾಮಿ ರಾಜ್ಯಪಾಲರ ವಿರುದ್ಧ ನಾಲಿಗೆ ಹರಿ ಬಿಟ್ಟಿದ್ದು ನೀನು ರಾಜ್ಯಪಾಲ ಆಗೋಕೆ ನಾಲಾಯಕ್ ಎಂದು ಹೇಳಿದರು. ಮಂಡ್ಯ ಜಿಲ್ಲೆಯ ಮಳವಳ್ಳಿ ಪಟ್ಟಣದಲ್ಲಿ ಪ್ರತಿಭಟನೆ ವೇಳೆ ಮಳವಳ್ಳಿ ಕ್ಷೇತ್ರದ ಕಾಂಗ್ರೆಸ್ ಶಾಸಕ ಪಿ.ಎಂ ನರೇಂದ್ರಸ್ವಾಮಿ ನಾಲಿಗೆ ಹರಿಬಿಟ್ಟಿದ್ದು, ರಾಜ್ಯಪಾಲ ಆಗೋಕೆ ನೀನು ನಾಲಾಯಕ್ ಎಂದು ನರೇಂದ್ರಸ್ವಾಮಿ ಹೇಳಿಕೆ ನೀಡಿದ್ದಾರೆ. ರಾಜ್ಯಪಾಲರ ವಿರುದ್ಧ ಅಸಂಬದ್ಧ ಪದ ಬಳಸಿದ್ದಾರೆ. ಎಚ್ಡಿಕೆ ವಿರುದ್ಧ ಚಾರ್ಜ್ ಶೀಟ್ ಸಲ್ಲಿಸೋಕೆ ಲೋಕಾಯುಕ್ತ ಕೇಳಿದ್ದಾರೆ. ಆದರೆ ಎಂಟು ತಿಂಗಳಿಂದ ಈ ಬಗ್ಗೆ ಕ್ರಮ ಕೈಗೊಳ್ಳದೆ ಕೂತಿದಿಯಲ್ಲಪ್ಪ? ಮಹಾನ್ ಇಂಡಸ್ಟ್ರಿಯಲಿಸ್ಟ್ ನಿರಾಣಿ ವಿರುದ್ಧ 108 ಹಗರಣಗಳಿವೆ. ಶಶಿಕಲಾ ಜೊಲ್ಲೇ ವಿಚಾರದಲ್ಲಿ ಜೊಲ್ಲು ಸುರಿಸಿಕೊಂಡು ಕೂತಿದೀಯಲ್ಲಪ್ಪ? ಎಂದು ನಾಲಿಗೆ ಹರಿಬಿಟ್ಟಿದ್ದಾರೆ.

## ಕುಮಾರಸ್ವಾಮಿಯದ್ದು ಎಲ್ಲವನ್ನು ತೆಗೆದು ಇಡುತ್ತೇನೆ

• ಉದಯವಾಹಿನಿ, ರಾಮನಗರ

ಪ್ರಾಜಿಕ್ಯೂಷನ್ ಗೆ ಅನುಮತಿ ವಿಚಾರಕ್ಕೆ ಸಂಬಂಧಿಸಿದಂತೆ ಇಂದು ಕಾವೇರಿಯಲ್ಲಿ ಸಿಎಂ ಇಬ್ರಾಹಿಂ ಅವರು ಸಿಎಂ ಸಿದ್ದರಾಮಯ್ಯ ಅವರನ್ನು ಭೇಟಿ ಮಾಡಿ ಮಾಧ್ಯಮಗಳೊಂದಿಗೆ ಮಾತನಾಡಿದರು. ಕೇಂದ್ರ ಸರ್ಕಾರ ರಾಜ್ಯದ ಸ್ವಾಭಿಮಾನಕ್ಕೆ ತಂದಿದೆ ಎಂದು ಕಾವೇರಿ ನಿವಾಸದಲ್ಲಿ ಸಿಎಂ ಸಿದ್ದರಾಮಯ್ಯ ಭೇಟಿ ಬಳಿಕ ಸಿಎಂ ಇಬ್ರಾಹಿಂ ಹೇಳಿಕೆ ನೀಡಿದರು. ಸುಪ್ರೀಂ ಕೋರ್ಟ್ ನ ತೀರ್ಪನ್ನು ರಾಜ್ಯಪಾಲರು ಉಲ್ಲಂಘಿಸಿದ್ದಾರೆ. ಕುಮಾರಸ್ವಾಮಿ, ಯಡಿಯೂರಪ್ಪ ವಿರುದ್ಧವು ಪ್ರಕರಣಗಳು ಇವೆ. ಅವರ ವಿರುದ್ಧ ರಾಜಕೀಯ ಏಕೆ ಅನುಮತಿ ಕೊಟ್ಟಿಲ್ಲ? ಸಾಮಾನ್ಯ ಮನುಷ್ಯನ ಮೇಲೆ ಪ್ರಾಸಿಕ್ಯೂಷನ್ ಗೆ ಅನುಮತಿ ಕೊಟ್ಟಿದ್ದಾರೆ. ರಾಜ್ಯಪಾಲರ ನಿರ್ಧಾರದ ವಿರುದ್ಧ ನಾನು ಪ್ರತಿಭಟನೆ ಮಾಡುತ್ತೇನೆ. ಸಿಎಂ ಸಿದ್ದರಾಮಯ್ಯ ಟಗರು ಇದ್ದಂತೆ ಧೈರ್ಯ ಹೇಳಿದ್ದೇನೆ. ಮೊದಲು ಸಿಎಂ ಜೊತೆಯಲ್ಲಿ ನಾನು ಇರಲಿಲ್ಲ. ಆದರೆ ಈಗ ಅವರ ಜೊತೆಯಲ್ಲಿ ಇರುತ್ತೇನೆ. ರಾಜ್ಯಪಾಲರು ಇವರ ಮನೆ ಕ್ಲರ್ಕ್ ಅಮಿತ್ ಶಾ ಮನೆ ಮುಂದೆ ಹೋಗಿ ಅಪ್ಪ ಮಗ ಏಕೆ ಕೂತಿದ್ದರು? ಸುಪ್ರೀಂಕೋರ್ಟಿಗೆ ಹೋಗಿ ಅಂತ ಕುಮಾರಸ್ವಾಮಿ ಹೇಳುತ್ತಾರೆ. ರಾಜ್ಯಪಾಲರು ಟೀಜೆ ಅಬ್ರಹಾಂಗು ಇದೇ ರೀತಿ ಹೇಳಬೇಕಿತ್ತು. ಮಾಜಿ ಸಿಎಂ ಕುಮಾರಸ್ವಾಮಿ ಅವರದು ನಿತ್ಯ ತೆಗೆದು ಇಡುತ್ತೇನೆ ಎಂದರು.

• ಉದಯವಾಹಿನಿ, ಬೆಂಗಳೂರು

ಮೂಡಾ ಹಗರಣದಲ್ಲಿ ಸಿಎಂ ಸಿದ್ದರಾಮಯ್ಯ ವಿರುದ್ಧ ತನಿಖೆ ನಡೆಸಲು ರಾಜ್ಯಪಾಲರು ಆದೇಶ ನೀಡಿರುವ ಹಿನ್ನಲೆ ಸಿದ್ದರಾಮಯ್ಯನವರು ಕಾನೂನು ಸಮರಕ್ಕೆ ಮುಂದಾಗಿದ್ದಾರೆ. ಪ್ರಾಸಿಕ್ಯೂಶನ್‌ಗೆ ತಡೆ ಕೋರಿ ಇಂದು ಹೈಕೋರ್ಟ್‌ನಲ್ಲಿ ಅರ್ಜಿ ಸಲ್ಲಿಸಲಿದ್ದಾರೆ. ಅದಕ್ಕೆ ಬೇಕಾಗಿರುವ ತಯಾರಿ, ಕಾನೂನು ತಜ್ಞರ ಸಲಹೆ ಪಡೆದಿದ್ದಾರೆ. ಇನ್ನು ಶಾಸಕರನ್ನು ವಿಶ್ವಾಸಕ್ಕೆ ತೆಗೆದುಕೊಳ್ಳಲು ಮುಂದಾಗಿದ್ದಾರೆ. ಸಭೆಯಲ್ಲಿ ಎಲ್ಲಾ ಶಾಸಕರ ಬೆಂಬಲ ತಿಳಿದುಕೊಳ್ಳಲಿದ್ದಾರೆ. ಪಕ್ಷದೊಳಗೆ ಆಗಿರಬಹುದಾದ ಒಂದಷ್ಟು ಚರ್ಚೆ, ಪರ-ವಿರೋಧದ ಮಾತುಗಳಿಗೆ ಸ್ಪಷ್ಟನೆ ಕೊಡಲಿದ್ದಾರೆ. ಬಿಜೆಪಿ, ಜೆಡಿಎಸ್ ನಾಯಕರ ಅಕ್ರಮಗಳ ಬಗ್ಗೆಯೂ, ಹೋರಾಟಗಳ ಬಗ್ಗೆಯೂ ಚರ್ಚೆ ನಡೆಸುವ ಸಾಧ್ಯತೆ ಇದೆ. ಇಂದು ದೆಹಲಿಯಿಂದ ಹಿರಿಯ ವಕೀಲರಾದ ಕಬಿಲ್ ಸಿಬಲ್, ಅಭಿಷೇಕ್ ಮನುಸಿಂಘ್ವಿ ರಾಜ್ಯಕ್ಕೆ ಆಗಮಿಸಲಿದ್ದಾರೆ. ಸಿಎಂ ಪರವಾಗಿ ಹೈಕೋರ್ಟ್ ಮೊರೆ ಹೋಗಲಿದ್ದಾರೆ. ಈಗಾಗಲೇ ಸಿಎಂ ಹೈಕಮಾಂಡ್ ನಾಯಕರ ಜೊತೆಗೆ ಮಾತುಕತೆ ನಡೆಸಿದ್ದಾರೆ.

ಮೈಸೂರು ನಗರಾಭಿವೃದ್ಧಿ ಪ್ರಾಧಿಕಾರ (ಮುಡಾ)ದ

**ರಾಜಭವನ, ಬಿಜೆಪಿ ಕಚೇರಿಗೆ ಬಿಗಿ ಪೊಲೀಸ್ ಭದ್ರತೆ**

ಮುಡಾ ಅಕ್ರಮಕ್ಕೆ ಸಂಬಂಧಿಸಿದಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್ ಗೆ ಅನುಮತಿ ನೀಡಿದ ಬೆನ್ನಲ್ಲೇ ರಾಜಭವನ, ಮಲ್ಲೇಶ್ವರದಲ್ಲಿರುವ ಬಿಜೆಪಿ ಕಚೇರಿಗೆ ಬಿಗಿ ಪೊಲೀಸ್ ಭದ್ರತೆ ಕಲ್ಪಿಸಲಾಗಿದೆ.

ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ವಿರೋಧಿಸಿ ಬೆಂಗಳೂರು ಸೇರಿದಂತೆ ರಾಜ್ಯಾದ್ಯಂತ ಕಾಂಗ್ರೇಸ್ ಪಕ್ಷದ ಕಾರ್ಯಕರ್ತರು, ಮುಖಂಡರು ರಸ್ತೆಗಳಿಗೆ ಇಳಿದು ಪ್ರತಿಭಟನೆ ನಡೆಸಿದರು.

ನಿವೇಶನ ಹಂಚಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ರಾಜ್ಯಪಾಲರು ತಮ್ಮ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಪ್ರಶ್ನಿಸಿ ಮುಖ್ಯಮಂತ್ರಿ ಸಿದ್ದರಾಮಯ್ಯರವರು ಇಂದು ನ್ಯಾಯಾಲಯದ ಮೊರೆ ಹೋಗಲಿದ್ದು, ರಾಜ್ಯಪಾಲರ ಆದೇಶಕ್ಕೆ ತಡೆ ನೀಡಿ ಅದನ್ನು ವಜಾ ಮಾಡುವಂತೆ ಕೋರಿ ಇಂದು ರಾಜ್ಯ ಉಚ್ಚನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಲಿದ್ದಾರೆ. ರಾಜ್ಯಪಾಲರ ಪ್ರಾಸಿಕ್ಯೂಷನ್ ಆದೇಶದ ವಿರುದ್ಧ ಕಾನೂನು ಹೋರಾಟಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅಣಿಯಾಗಿದ್ದು, ಅದರಂತೆ ಕಾನೂನು ಹೋರಾಟದ ಸ್ವರೂಪಗಳ ಬಗ್ಗೆ ಸುಪ್ರೀಂಕೋರ್ಟ್‌ನ ಹಿರಿಯ ನ್ಯಾಯವಾದಿಗಳ ಜತೆ ಸಮಾಲೋಚನೆಯನ್ನೂ ಮುಖ್ಯಮಂತ್ರಿಗಳು ನಡೆಸಿದ್ದು, ರಾಜ್ಯಪಾಲರ ಆದೇಶವನ್ನು ಪ್ರಶ್ನೆ ಮಾಡಿ ರಾಜ್ಯ ಉಚ್ಚನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಲಿದ್ದಾರೆ ಎಂದು ಮುಖ್ಯಮಂತ್ರಿಗಳ ಆಪ್ತ ಮೂಲಗಳು ಹೇಳಿವೆ. ಸುಪ್ರೀಂ ಕೋರ್ಟ್‌ನ ಹಿರಿಯ ನ್ಯಾಯವಾದಿಗಳಾದ ಕಪಿಲ್‌ಸಿಬಲ್ ಮತ್ತು ಅಭಿಷೇಕ್ ಮನು ಸಿಂಘ್ವಿ ಅವರು ದೆಹಲಿಯಿಂದ ಬೆಂಗಳೂರಿಗೆ ಆಗಮಿಸಿದ್ದು, ಇವರಿಬ್ಬರ ಜತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಕಾನೂನು ಹೋರಾಟ ರೂಪುರೇಷೆಗಳ ಬಗ್ಗೆ ಸುದೀರ್ಘ ಚರ್ಚೆ ನಡೆಸಿದರು.

ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ಆದೇಶವನ್ನು ನ್ಯಾಯಾಲಯದಲ್ಲಿ ಪ್ರಶ್ನಿಸುವ ತೀರ್ಮಾನವನ್ನು ಕಾಂಗ್ರೇಸ್ ಪಕ್ಷ ಕೈಗೊಂಡಿದ್ದು, ಹೈಕಮಾಂಡ್ ಸಹ ಮುಖ್ಯಮಂತ್ರಿ ಸಿದ್ದರಾಮಯ್ಯರವರ ಬೆನ್ನಿಗೆ ನಿಂತು ಕಾನೂನು ಹೋರಾಟಕ್ಕೆ ಬೆಂಬಲ ನೀಡಿದೆ. ಅದರಂತೆ ಹೈಕಮಾಂಡ್ ಸೂಚನೆ ಮೇರೆಗೆ ಕಾಂಗ್ರೇಸ್ ನ ಹಿರಿಯ ನಾಯಕರು, ನ್ಯಾಯವಾದಿಗಳೂ ಆಗಿರುವ ಕಪಿಲ್ ಸಿಬಲ್ ಮತ್ತು ಅಭಿಷೇಕ್ ಮನು ಸಿಂಘ್ವಿ ಬೆಂಗಳೂರಿಗೆ ಬಂದಿದ್ದು, ರಾಜ್ಯಪಾಲರ ಪ್ರಾಸಿಕ್ಯೂಷನ್ ಆದೇಶವನ್ನು ಕೂಲಂಕುಷವಾಗಿ ಅಧ್ಯಯನ ಮಾಡಿ ಈ ಆದೇಶವನ್ನು ಪ್ರಶ್ನಿಸಿ ಯಾವ ರೀತಿ ನ್ಯಾಯಾಲಯದಲ್ಲಿ ಅರ್ಜಿ ಸಲ್ಲಿಸಬೇಕು ಎಂಬೆಲ್ಲ ವಿಚಾರಗಳ ಬಗ್ಗೆ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯದ ಹಲವು ಹಿರಿಯ ಕಾನೂನು ತಜ್ಞರು, ಸಂವಿಧಾನ ತಜ್ಞರ ಜತೆಯೂ ಸಮಾಲೋಚನೆ ನಡೆಸಿದರು.

ಕಾನೂನು ತಜ್ಞರ ಸಲಹೆಯಂತೆ ಮುಖ್ಯಮಂತ್ರಿ ಸಿದ್ದರಾಮಯ್ಯರವರು ರಾಜ್ಯ ಉಚ್ಚನ್ಯಾಯಾಲಯದಲ್ಲಿ ರಾಜ್ಯಪಾಲರ ಆದೇಶವನ್ನು ಪ್ರಶ್ನಿಸಿ ಅರ್ಜಿ ಸಲ್ಲಿಸಲಿದ್ದು, ರಾಜ್ಯಪಾಲರ ಪ್ರಾಸಿಕ್ಯೂಷನ್ ಆದೇಶ,ಕಾನೂನು ಸಂವಿಧಾನ ಬಾಹಿರ ಈ ಆದೇಶಕ್ಕೆ ತಡೆ ನೀಡಿ ಈ ಆದೇಶವನ್ನು ವಜಾ ಮಾಡಬೇಕು ಎಂದು ನ್ಯಾಯಾಲಯಕ್ಕೆ ಮನವಿ ಮಾಡಲಿದ್ದಾರೆ. ರಾಜ್ಯ ಹೈಕೋರ್ಟ್ ಅರ್ಜಿಯನ್ನು ವಿಚಾರಣೆಗೆ ತೆಗೆದುಕೊಳ್ಳುತ್ತ ಇಲ್ಲವೆ ನಾಡಿದ್ದು ಅರ್ಜಿ ವಿಚಾರಣೆಗೆ ಬರಲಿದೆಯೇ ಎಂಬುದು ಇಂದು ಮುಖ್ಯಮಂತ್ರಿಗಳು ಅರ್ಜಿ ಸಲ್ಲಿಸಿದ ನಂತರ ಗೊತ್ತಾಗಲಿದೆ.

# ಗವರ್ನಮೆಂಟ್ v/s ಗವರ್ನರ್

**ಪ್ರಾಸಿಕ್ಯೂಷನ್‌ಗೆ ಅನುಮತಿ ಹಿನ್ನಲೆ ಆ.21ರಂದು ಸಿಎಲ್‌ಪಿ ಸಭೆ ಕರೆದ ಸಿಎಂ**

**ಮುಡಾ ಹೊರೆ ಹೈಕೋರ್ಟ್‌ಗೆ ಸಿಎಂ ಮೊರೆ**

**ಸೋಮವಾರ ಪ್ರತಿಭಟನೆ, ಮೈಸೂರು ಬಂದ್ ಸಿಎಂಗೆ ತಲೆಭಾರ ಕೈ ನಾಯಕರ ಸಾಥ್**



**ಮೈಸೂರು ಬಂದ್**

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವ ರಾಜ್ಯಪಾಲರ ಆದೇಶದ ವಿರುದ್ಧ ಇಂದು ಮುಖ್ಯಮಂತ್ರಿ ಸಿದ್ದರಾಮಯ್ಯರವರ ತವರು ಜಿಲ್ಲೆ ಮೈಸೂರು ಬಂದ್‌ಗೆ ಕರೆ ನೀಡಲಾಗಿದೆ. ಅಹಿಂದಾ ಸಂಘಟನೆಗಳು, ಶೋಷಿತ ವರ್ಗದ ಸಂಘಟನೆಗಳು ಸಿದ್ದರಾಮಯ್ಯರವರ ಅಭಿಮಾನಿಗಳು ಈ ಬಂದ್‌ಗೆ ಕರೆ ನೀಡಿವೆ. ಹಾಗೆಯೇ ಟೀ ನರಸೀಪುರ ಪಟ್ಟಣ ಬಂದ್‌ಗೂ ಕರೆ ನೀಡಲಾಗಿದೆ.

**ಜನಪ್ರತಿನಿಧಿ ನ್ಯಾಯಾಲಯಕ್ಕೂ ಅರ್ಜಿ**

ಮುಡಾ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ಎಫ್‌ಐಆರ್ ದಾಖಲಿಸಲು ಅನುಮತಿ ಕೋರಿ ಜನಪ್ರತಿನಿಧಿ ನ್ಯಾಯಾಲಯದಲ್ಲಿ ಸಲ್ಲಿಸಲಾಗಿರುವ ಅರ್ಜಿಯ ಬಗ್ಗೆ ಈ ತಿಂಗಳ 20ರಂದು ಜನಪ್ರತಿನಿಧಿ ನ್ಯಾಯಾಲಯದ ನ್ಯಾಯಾಧೀಶರು ಆದೇಶ ನೀಡುವ ಸಾಧ್ಯತೆ ಇರುವುದರಿಂದ ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಆದೇಶ ನೀಡುವ ಮೊದಲು ತಮ್ಮ ಅಹವಾಲನ್ನು ಆಲಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಜನಪ್ರತಿನಿಧಿ ನ್ಯಾಯಾಲಯಕ್ಕೂ ಮಧ್ಯಂತರ ಅರ್ಜಿ ಸಲ್ಲಿಸುವ ಸಾಧ್ಯತೆಗಳು ಇವೆ. ಸ್ನೇಹಮಯಿ ಕೃಷ್ಣ ಮತ್ತು ಟಿ.ಜೆ ಅಬ್ರಹಾಂ ಜನಪ್ರತಿನಿಧಿಗಳ ವಿಶೇಷ ನ್ಯಾಯಾಲಯದಲ್ಲಿ ಖಾಸಗಿ ದೂರು ಸಲ್ಲಿಸಿ ಮುಖ್ಯಮಂತ್ರಿಗಳ ವಿರುದ್ಧ ಎಫ್‌ಐಆರ್ ದಾಖಲಿಸಲು ಅನುಮತಿ ಕೋರಿದ್ದಾರೆ. ಈ ಅರ್ಜಿಯ ಆದೇಶವನ್ನು ನ್ಯಾಯಾಲಯ ಇದೇ ತಿಂಗಳ 20ಕ್ಕೆ ಕಾಯ್ದಿರಿಸಿದೆ.

**ರಾಜ್ಯಾದ್ಯಂತ ಕಾಂಗ್ರೇಸ್ ಪ್ರತಿಭಟನೆ**

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರ ಪ್ರಾಸಿಕ್ಯೂಷನ್ ಆದೇಶವನ್ನು ಪ್ರಶ್ನಿಸಿ ಒಂದೆಡೆ ಕಾಂಗ್ರೆಸ್ ಪಕ್ಷ ಕಾನೂನು ಸಮರ ನಡೆಸುವ ಜತೆಗೆ ರಾಜ್ಯಪಾಲರ ಆದೇಶದ ವಿರುದ್ಧ ರಾಜ್ಯಾದ್ಯಂತ ಹೋರಾಟಕ್ಕೂ ಕಾಂಗ್ರೆಸ್ ಪಕ್ಷ ಮುಂದಾಗಿದ್ದು, ನಾಳೆ ರಾಜ್ಯದ ಎಲ್ಲಾ ಜಿಲ್ಲಾ ಕೇಂದ್ರಗಳಲ್ಲಿ ಕಾಂಗ್ರೆಸ್ ಮುಖಂಡರು, ಕಾರ್ಯಕರ್ತರು ರಾಜ್ಯಪಾಲರ ಆದೇಶದ ವಿರುದ್ಧ ಪ್ರತಿಭಟನಾ ಧರಣಿ ನಡೆಸಲಿದ್ದು, ಮೈಸೂರು ಬಂದ್‌ಗೂ ಕರೆ ನೀಡಲಾಗಿದೆ. ಕಾಂಗ್ರೆಸ್ ಹೋರಾಟದ ಬಗ್ಗೆ ಬೆಂಗಳೂರಿನ ಸುದ್ದಿಗಾರರಿಗೆ ಮಾಹಿತಿ ನೀಡಿದ ಕೆಪಿಸಿಸಿ ಅಧ್ಯಕ್ಷ ಹಾಗೂ ಉಪಮುಖ್ಯ ಮಂತ್ರಿ ಡಿ.ಕೆ ಶಿವಕುಮಾರ್ ಅವರು ಇಂದು ರಾಜ್ಯಪಾಲರ ಆದೇಶದ ವಿರುದ್ಧ ಜಿಲ್ಲೆಗಳಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆ ನಡೆಸಿ ಜಿಲ್ಲಾಧಿಕಾರಿ ಗಳ ಮೂಲಕ ರಾಷ್ಟ್ರಪತಿಗಳಿಗೆ ಮನವಿ ಸಲ್ಲಿಸಲಿದ್ದಾರೆ ಎಂದರು.



1 ಸಿದ್ದರಾಮಯ್ಯ ಕ್ಲೀನ್ ಚಿಟ್ ಪಡೆದು ಮತ್ತೆ ಬರಲಿ. ನನಗೂ ಸಂತೋಷ ಆಗುತ್ತೆ

2 ಗೌರಮ್ಮನಂತಿರುವ ಸಿದ್ದರಾಮಯ್ಯನ ಹೆಂಡತಿಯನ್ನೂ ಈ ಕೇಸ್‌ನಲ್ಲಿ ಸೇರಿಸಿಬಿಡ್ತಾರೇನೋ?

3 ಸಿಎಂ ರಾಜೀನಾಮೆ ಕೊಟ್ಟು ಕೇಸ್ ಎದುರಿಸಲಿ

# ಅವತ್ತು ಸಂವಿಧಾನ ಬೇರೆ ಇತ್ತೇ? ಈವತ್ತಿನ ಸಂವಿಧಾನ ಬೇರೆ ಇದೆಯೇ?

• ಉದಯವಾಹಿನಿ, ಬೆಂಗಳೂರು

ಮುಖ್ಯಮಂತ್ರಿ ಸಿದ್ದರಾಮಯ್ಯನವರು ತಮ್ಮ ಮೂಗಿನ ನೇರಕ್ಕೆ ಮಾತ್ರ ಯೋಚಿಸುವವರು ವಿಧಾನ ಪರಿಷತ್ ಸದಸ್ಯ ಎನ್.ರವಿ ಕುಮಾರ್ ಅವರು ಆಕ್ಷೇಪಿಸಿದರು. ಮಲ್ಲೇಶ್ವರದ ಬಿಜೆಪಿ ರಾಜ್ಯ ಕಾರ್ಯಾಲಯ ಜಗನ್ನಾಥ ಭವನದಲ್ಲಿ ಇಂದು ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಹಂಸರಾಜ್ ಭಾರದ್ವಾಜ್ ಅವರು ಈ ಹಿಂದೆ ಯಡಿಯೂರಪ್ಪ ಅವರ ವಿರುದ್ಧ ತನಿಖೆಗೆ ಅನುಮತಿ ನೀಡಿದ್ದನ್ನು ಸಿದ್ದರಾಮಯ್ಯನವರು ಸ್ವಾಗತಿಸಿದ್ದರು.


ಆಗ ಮಾನ್ಯ ಗವರ್ನರ್ ತೆಗೆದುಕೊಂಡ ಕ್ರಮವನ್ನು ಸ್ವಾಗತಿಸಿದ್ದ ಸಿದ್ದರಾಮಯ್ಯನವರು ಇವತ್ತಿನ

**ಸಿಎಂಗೆ ರವಿಕುಮಾರ್ ಪ್ರಶ್ನೆ**

ಗವರ್ನರ್ ತೆಗೆದುಕೊಂಡ ಕ್ರಮದ ಬಗ್ಗೆ ವಿರೋಧಿಸುತ್ತಾರೆ? ಅವತ್ತು ಸಂವಿಧಾನ ಬೇರೆ ಇತ್ತೇ? ಈವತ್ತಿನ ಸಂವಿಧಾನ ಬೇರೆ ಇದೆಯೇ? ಅದೇ ಸಂವಿಧಾನ ಅಲ್ಲವೇ? ಅದೇ ಭ್ರಷ್ಟಾಚಾರ ನಿಗ್ರಹ ಕಾಯ್ದೆಯ 17 ಎ ಅಲ್ಲವೇ ಎಂದು ಪ್ರಶ್ನಿಸಿದರು.

ಬೇರೆಯವರು ಮಾಡಿದರೆ ಭ್ರಷ್ಟಾಚಾರ. ಇವರು ಮಾಡಿದರೆ ಅದು ಭ್ರಷ್ಟಾಚಾರ ಅಲ್ಲ ಎಂದು ಆಕ್ಷೇಪಿಸಿದರು. ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯನವರ ಈ ಧೋರಣೆಯನ್ನು ಬಿಜೆಪಿ ಖಂಡಿಸುತ್ತದೆ ಎಂದು ತಿಳಿಸಿದರು.

ಮುಖ್ಯ ವಕ್ತಾರ ಅಶ್ವತ್ಥನಾರಾಯಣ್ ಅವರು ಮಾತನಾಡಿ, ಸುಳ್ಳನ್ನು ಹತ್ತು ಬಾರಿ ಹೇಳಿ ಅದನ್ನೇ ಸತ್ಯ ಎಂದು ಮಾಡಲು ಸಿದ್ದರಾಮಯ್ಯನವರು ಮುಂದಾಗಿದ್ದಾರೆ ಎಂದು ಟೀಕಿಸಿದರು. ಮುಡಾ ಅವ್ಯವಹಾರ ಸಂಬಂಧ ಆಗಿನ ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿಯವರು ತನಿಖೆ ಮಾಡಿಸಿ ವರದಿ ತರಿಸಿದ್ದರು. ಆ ವರದಿಯನ್ನು ಸಿದ್ದರಾಮಯ್ಯನವರು ಯಾಕೆ ಉಲ್ಲೇಖಿಸುತ್ತಿಲ್ಲ ಎಂದು ಪ್ರಶ್ನೆಯನ್ನು ಮುಂದಿಟ್ಟರು.



ಆ ವರದಿಯನ್ನು ಬಹಿರಂಗ ಪಡಿಸಿ. ಜವರ ಆ ಜಮೀನಿನ ಮಾಲಿಕರೇ ಅಲ್ಲ. ಸುಳ್ಳು ಹೇಳಿಕೊಂಡು, ಕೃಷ್ಣ ಬೈರೇಗೌಡ, ಸಿದ್ದರಾಮಯ್ಯನವರು ಮಾತನಾಡುತ್ತಾರೆ. ದಾಖಲಾತಿ ಪರಿಶೀಲಿಸಿ, ಅಂಕಿಅಂಶ ಪರಿಶೀಲಿಸಿ ಅದರ ಆಧಾರದಲ್ಲೇ ಪ್ರಾಸಿಕ್ಯೂಶನ್‌ಗೆ ಅನುಮತಿ ಕೊಟ್ಟಿದ್ದಾಗಿ ರಾಜ್ಯಪಾಲರು ತಿಳಿಸಿದ್ದಾರೆ. ಮಾನ್ಯ ಗವರ್ನರ್ ಅವರು ಸಾಂವಿಧಾನಾತ್ಮಕವಾಗಿಯೇ ನಡೆದುಕೊಂಡಿದ್ದಾರೆ. ಕಂದಾಯ ಸಚಿವರಾದ ಕೃಷ್ಣ ಬೈರೇಗೌಡರು ದಾಖಲೆಗಳನ್ನು ಪರಿಶೀಲಿಸಬೇಕು ಎಂದು ಸವಾಲು ಹಾಕಿದರು.

# ಕಾಂಗ್ರೆಸ್ ಸರ್ಕಾರ ನನ್ನನ್ನು ಹೆದರಿಸಿ ಬ್ಲ್ಯಾಕ್‌ಮೇಲ್ ಮಾಡುತ್ತಿದೆ

## ಸುಪ್ರೀಂ ಕೋರ್ಟ್ ನಲ್ಲಿರುವ ಪ್ರಕರಣ ಇಟ್ಟುಕೊಂಡು ರಾಜ್ಯಪಾಲರನ್ನು ಅಪಮಾನಿಸುವ, ನನ್ನನ್ನು ಬ್ಲಾಕ್ ಮೇಲ್ ಮಾಡುವ ಕೆಲಸ

• ಉದಯವಾಹಿನಿ, ಬೆಂಗಳೂರು

ರಾಜ್ಯ ಕಾಂಗ್ರೆಸ್ ಸರ್ಕಾರ ಮತ್ತು ಮಂತ್ರಿಗಳು ನನ್ನ ಹೆದರಿಸುವ ಕೆಲಸ ಮಾಡುತ್ತಿದ್ದಾರೆ. ಅದಕ್ಕೆಲ್ಲ ಜಗ್ಗುವ ಜಾಯಮಾನ ನನ್ನದಲ್ಲ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಹೇಳಿದ್ದಾರೆ.

ಯಾವುದೋ ಹಳೆಯ ಪ್ರಕರಣವನ್ನು ಕೆದಕಿ, ಸುಪ್ರೀಂ ಕೋರ್ಟ್‌ನಲ್ಲಿರುವ ಪ್ರಕರಣ ಇಟ್ಟುಕೊಂಡು ರಾಜ್ಯಪಾಲರನ್ನು ಅಪಮಾನಿಸುವ, ನನ್ನನ್ನು ಬ್ಲಾಕ್ ಮೇಲ್ ಮಾಡುವ ಕೆಲಸವನ್ನು ಸರ್ಕಾರ ಮಾಡುತ್ತಿದೆ. ಇದಕ್ಕೆಲ್ಲಾ ಕೇರ್ ಮಾಡುವ ಪೈಕಿ ನಾನಲ್ಲ, ಈ ಸರ್ಕಾರಕ್ಕೂ ಅದು ಗೊತ್ತಿದೆ ಎಂದು ಕಿಡಿಕಾರಿದರು.

ಸಿಎಂ ಸಿದ್ದರಾಮಯ್ಯ ಸೇರಿದಂತೆ ಎಲ್ಲಾರೂ ಕುಮಾರಸ್ವಾಮಿ ಮೇಲೆ ಏಕೆ ಪ್ರಾಸಿಕ್ಯೂಷನ್ ಗೆ ಅನುಮತಿ ಕೊಟ್ಟಿಲ್ಲಾ ಎಂದು ಕೇಳುತ್ತಿದ್ದಾರೆ. 2006ರಲ್ಲಿ ನಾನು ಸಿಎಂ ಆದ ಎರಡೇ ತಿಂಗಳಿಗೆ ಗಣಿಗಾರಿಕೆ ಮಾಲೀಕರಿಂದ ಹಣ ಸಂಗ್ರಹ ಮಾಡಿದ್ದೇನೆ ಎಂದು ಆರೋಪ ಮಾಡಿದ್ದರು. ಅದರ ಬಗ್ಗೆ ಒಂದು ಸಿಡಿ ಮಾಡಲು ಸಿಡಿ ಶಿವು ಪ್ರಯತ್ನ ಮಾಡಿದ್ದರು. ವಿಧಾನಸಭೆ ಕಲಾಪಕ್ಕೆ ಬಂದು ಆಪರೇಷನ್ ಸಕ್ಸಸ್ ಎಂದು ಹೇಳಿದ್ದರು. ನನ್ನ ಬಗ್ಗೆ ವಿಧಾನಸಭೆಯಲ್ಲಿ ಚರ್ಚೆ ನಡೆಯಿತು. ದೊಡ್ಡ ಪ್ರಮಾಣದಲ್ಲಿ ಚರ್ಚೆ ನಡೆಯಿತು. ನಾನು ಏಕಾಂಗಿಯಾಗಿ ಹೋರಾಟ ಮಾಡುತ್ತೇನೆ ಎಂದು ಹೇಳಿದ್ದೆ. ಸಿದ್ದರಾಮಯ್ಯ ಅವರಿಗೆ ಇದು ನೆನಪಿದೆಯಾ? ಎಂದು ಕೇಂದ್ರ ಸಚಿವರು ಪ್ರಶ್ನಿಸಿದರು.

ನಿಮ್ಮ ಹಾಗೆ ನಮ್ಮ ಕಾರ್ಯಕರ್ತರಿಗೆ ಬೀದಿಯಲ್ಲಿ ಬೆಂಕಿ ಹಾಕಿ ಅನ್ನಲಿಲ್ಲ. ಜಂತಕಲ್ ಮೈನಿಂಗ್ ಪ್ರಕರಣವನ್ನು ಹೈಕೋರ್ಟ್ ನಲ್ಲಿ ವಜಾ ಮಾಡಲಾಗಿದೆ. ಸಾಯಿ ವೆಂಕಟೇಶ್ವರ ಹಗರಣದ್ದು ತನಿಖೆ ಮಾಡಿ ಎಂದರು. ಇವರು ಬೇಕಾದರೆ ಸುಪ್ರೀಂ ಕೋರ್ಟ್ ಗೆ ಹೋಗಬಹುದು. ಇವರಿಗೆ ಬೇಡ ಎಂದವರು ಯಾರು? ಎಂದು ಕುಮಾರಸ್ವಾಮಿ ಅವರು ಖಾರವಾಗಿ ಪ್ರಶ್ನಿಸಿದರು.

**ಕೇರ್ ಮಾಡುವ ಪೈಕಿ ನಾನಲ್ಲ**

ನನ್ನನ್ನು ಹೆದರಿಸೋಕೆ ಇದನ್ನೆಲ್ಲಾ ಮಾಡುತ್ತಿದ್ದೀರಿ.. ಅಲ್ಲವೇ? ಯಾಕೆ ಈ ಡ್ರಾಮಾಗಳು? ನಿಮ್ಮ ಗೊಡ್ಡು ಬೆದರಿಕೆಗೆ ನಾನು ಹೆದರುತ್ತೇನೆಯೇ? ಅದು ನಿಮ್ಮ ಭ್ರಮೆಯಷ್ಟೇ. ರಾಜ್ಯಪಾಲರ ವಿರುದ್ಧ ರಾಷ್ಟ್ರದಲ್ಲಿ ಇದೇ ಮೊದಲ ಬಾರಿಗೆ ಈ ರೀತಿಯ ಕೀಳುಮಟ್ಟದ ಪ್ರತಿಭಟನೆಗಳು ನಡೆಯುತ್ತಿವೆ. ಸಂವಿಧಾನ ರಕ್ಷಣೆ ಮಾಡುತ್ತೇವೆ ಎಂದು ಬಡಾಯಿ ಕೊಚ್ಚಿಕೊಳ್ಳುವ



**ರಾಜ್ಯಪಾಲರಿಗೆ ಸರ್ಕಾರದಿಂದ ಧಮ್ಕಿ**

ರಾಜ್ಯಪಾಲರು ಮೂಡಾ ಹಗರಣ ವಿಚಾರಣೆಗೆ ಅನುಮತಿ ನೀಡಿದಾಕ್ಷಣ ಇಡೀ ಸಚಿವರು, ಶಾಸಕರನ್ನು ಇಟ್ಟುಕೊಂಡು ರಾಜ್ಯಪಾಲರಿಗೆ ಧಮ್ಕಿ ಹಾಕುವ, ಜನರನ್ನು ಎತ್ತಿ ಕಟ್ಟುವ ಕೆಲಸವನ್ನು ಸಿದ್ದರಾಮಯ್ಯ ಅವರು ಮಾಡುತ್ತಿದ್ದಾರೆ. ನಾನು ಹೀಗೆಲ್ಲಾ ಮಾಡಿಲ್ಲ, ನನ್ನ ವಿರುದ್ಧ ಆರೋಪ ಕೇಳಿಬಂದಾಗ ಒಬ್ಬನೇ ಎದುರಿಸುತ್ತೇನೆ ಎಂದು ಹೇಳಿದ್ದೆ. ವಿಧಾನಸಭೆ ಕಲಾಪದಲ್ಲಿಯೂ ಹೇಳಿದ್ದೇನೆ. ಬೇಕಾದರೆ ಕಡತ ತೆಗೆದು ನೋಡಬಹುದು ಎಂದು ಹೇಳಿದರು ಕೇಂದ್ರ ಸಚಿವರು. ನನ್ನ ವಿರುದ್ಧ 2006ರಲ್ಲಿ ಗಣಿ ಆರೋಪ ಮಾಡಿದಾಗ ನಾನೊಬ್ಬನೇ ಎದುರಿಸಿದೆ. ಶಾಸಕರು, ಸಚಿವರನ್ನು ಅಡ್ಡ ಇಟ್ಟುಕೊಂಡು ರಕ್ಷಣೆ ಪಡೆಯುವ ಕೆಲಸ ಮಾಡಲಿಲ್ಲ. ಹೇಡಿತನ ಪ್ರದರ್ಶಿಸಲಿಲ್ಲ, ಧೈರ್ಯವಾಗಿ ಒಬ್ಬನೇ ಎದುರಿಸಿದೆ ಎಂದರು ಸಚಿವರು.

ಕಾಂಗ್ರೆಸ್ ಪಕ್ಷದಿಂದ ಇಂಥ ಹೀನ ಕೆಲಸಗಳು ನಡೆಯುತ್ತಿವೆ ಎಂದು ಕುಮಾರಸ್ವಾಮಿ ಅವರು ಆರೋಪ ಮಾಡಿದರು. ಯಾರೋ ಒಬ್ಬರು ಸಿದ್ದರಾಮಯ್ಯನವರ ಜತೆ ಬಂಡೆಯಂತೆ ನಿಲ್ಲುವೆ ಎಂದು ಸೋಗು ಹಾಕುತ್ತಿದ್ದಾರೆ. ಆ ಬಂಡೆಯಿಂದಲೇ ಸಿದ್ದರಾಮಯ್ಯ ಅವರಿಗೆ ಡೇಂಜರ್. ಆ ಬಂಡೆಯಿಂದಲೇ ಸಿದ್ದರಾಮಯ್ಯ ಅವರಿಗೆ ಈ ಗತಿ ಬಂದಿದೆ. ವೈನಾಡು, ಉತ್ತರ ಕನ್ನಡದಲ್ಲಿ ಭಾರೀ ಮಳೆಯಾಗಿ ಭೂ ಕುಸಿತ ಉಂಟಾಯಿತಲ್ಲ, ಆ ಮಣ್ಣಿನ ಜತೆ ಬಂದು ಬಿದ್ದವಲ್ಲ ಬಂಡೆಗಳು, ಅವೇ ಜನರ ಜೀವ ಜೀವ ತೆಗೆದಿದ್ದು. ಸಿದ್ದರಾಮಯ್ಯ ಅವರಿಗೆ ಬಂಡೆಯಿಂದಲೇ ಪತನ ಶುರುವಾಗಿದೆ ಎಂದು ಕೇಂದ್ರ ಸಚಿವರು ಮಾರ್ಮಿಕವಾಗಿ ಹೇಳಿದರು.

**ರಾಜ್ಯದಲ್ಲಿ ಅತ್ಯಂತ ಕೆಟ್ಟ ಪರಿಸ್ಥಿತಿ**

ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ ನಂತರ ಕಾಂಗ್ರೆಸ್ ವರಸೆಯೇ ಬದಲಾಗಿದೆ. ಸಾಂವಿಧಾನಿಕ ಮುಖ್ಯಸ್ಥರಾಗಿರುವ ರಾಜ್ಯಪಾಲರ ವಿರುದ್ಧ ಅತ್ಯಂತ ಕೆಟ್ಟದಾಗಿ, ಅವಹೇಳನಕಾರಿಯಾಗಿ ಪ್ರತಿಭಟನೆ ಮಾಡಿಸುತ್ತಿದೆ. ಸಚಿವರು, ಶಾಸಕರು ರಾಜ್ಯಪಾಲರ ಬಗ್ಗೆ ಬಹಳ ಅಗೌರವದಿಂದ ನಡೆದುಕೊಳ್ಳುತ್ತಿದ್ದಾರೆ. ಬೇರೆ ಯಾವ ರಾಜ್ಯದಲ್ಲಿ ಇಂಥ ಕೆಟ್ಟ ಪರಿಸ್ಥಿತಿ ನಾನು ನೋಡಿಲ್ಲ ಎಂದು ಕುಮಾರಸ್ವಾಮಿ ಆಕ್ರೋಶ ವ್ಯಕ್ತಪಡಿಸಿದರು.

ನಮ್ಮ ಪಾದಯಾತ್ರೆಗೂ ಈ ಪ್ರಕರಣಕ್ಕೂ ಸಂಬಂಧ ಇಲ್ಲ. ಹಗರಣದ ಬಗ್ಗೆ ಜನರಿಗೆ ಮನವರಿಕೆ ಮಾಡಿಕೊಡುವ ಏಕೈಕ ಉದ್ದೇಶಕ್ಕೆ ಈ ಪಾದಯಾತ್ರೆ ನಡೆಸಲಾಯಿತು. ಒಟ್ಟಿನಲ್ಲಿ ಜೆಡಿಎಸ್ ಬಿಜೆಪಿ ಸಂಘಟಿತ ಹೋರಾಟವನ್ನು ಜನರು ಗಮನಿಸಿದ್ದಾರೆ ಎಂದು ಕುಮಾರಸ್ವಾಮಿ ಅವರು ಹೇಳಿದರು.

ಈ ದಿನದ ದರ | ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹7,277/Gram24ct ₹6,670/Gram22ct | ಬೆಳ್ಳಿ: ₹86.00/Gram



## ಸಿದ್ಧಸೂಕ್ತಿ

ಡಾ ಆರೂಢಭಾರತೀ ಸ್ವಾಮೀಜಿ
ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ
ರಾಮೋಹಳ್ಳಿ

### ಗಾತ್ರ ಮೂರರೊಳೊಂದಿ ತೋರ್ಪವು

ನಿಜಗುಣರ ಪರಮಾನುಭವ ಬೋಧೆಯ ಮಾತು. ಜೀವನಿಗೆ ಸ್ಥೂಲ ಸೂಕ್ಷ್ಮ ಕಾರಣ ಎಂಬ ಮೂರು ಶರೀರಗಳು ಇರುವುದರಿಂದ ಮೂರು ಅವಸ್ಥೆಗಳು. ಆಕಾಶ ವಾಯು ಅಗ್ನಿ ಜಲ ಪೃಥ್ವಿ ಎಂಬ ಐದು ಭೂತಗಳು, ಕಣ್ಣು ಮುಂತಾದ ಐದು ಜ್ಞಾನೇಂದ್ರಿಯಗಳು ಕೈ ಮುಂತಾದ ಐದು ಕರ್ಮೇಂದ್ರಿಯಗಳು, ಪ್ರಾಣಾದಿ ಪಂಚ ಪ್ರಾಣಗಳು, ಮನಸ್ಸು ಮುಂತಾದ ಐದು ಅಂತಃಕರಣ ಒಟ್ಟು ಈ ಇಪ್ಪತ್ತೈದು ತತ್ತ್ವಗಳಿಂದ ಕೂಡಿದ ಈ ದೇಹ ಸ್ಥೂಲ ಶರೀರ. ಹುಟ್ಟುವಿಕೆ ಇರುವಿಕೆ ಬೆಳೆಯುವಿಕೆ ಶಿಥಿಲತೆ ಕ್ಷೀಣತೆ ಹಾಗೂ ನಾಶ ಎಂಬ ಆರು ವಿಕಾರ ಈ ಸ್ಥೂಲ ದೇಹಕ್ಕಿದೆ. ಆದ್ದರಿಂದ ದೇಹ ಅನಿತ್ಯ. ಈ ಸ್ಥೂಲ ಶರೀರದ ಆಶ್ರಯದಲ್ಲಿ ತೋರುವ ಅವಸ್ಥೆ ಜಾಗ್ರ. ದೇಹ ಅನಿತ್ಯವಾದರೂ ದೇಹವುಳ್ಳ ದೇಹೀ ಜೀವ ಆತ್ಮಾ ಈ ಯಾವ ವಿಕಾರಕ್ಕೂ ಒಳಪಡದ ನಿರ್ವಿಕಾರೀ ನಿತ್ಯ.

## ದಾಸವಾಣಿ ಕಾರ್ಯಕ್ರಮ



ಉದಯವಾಹಿನಿ ಚಿತ್ರ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನ ಚಾಮರಾಜಪೇಟೆಯ ಸಿತಾಪತಿ ಅಗ್ರಹಾರದಲ್ಲಿರುವ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠದಲ್ಲಿ ಪರಮಪೂಜ್ಯ ಶ್ರೀ ಸುಬುಧೇಂದ್ರತೀರ್ಥ ಶ್ರೀಪಾದಂಗಳವರ ಆದೇಶಾನುಸಾರ ಶ್ರೀ ರಾಘವೇಂದ್ರ ಸ್ವಾಮಿಗಳ ಪೂರ್ವಾರಾಧನೆ ಪ್ರಯುಕ್ತ ಆಗಸ್ಟ್ 20, ಮಂಗಳವಾರ ಸಂಜೆ 6-00ಕ್ಕೆ ಶ್ರೀಮತಿ ಸುಮಲತಾ ಮಂಜುನಾಥ್, ಶ್ರೀಮತಿ ಐಶ್ವರ್ಯ ಶ್ರೀನಿಧಿ ಕುಲಕರ್ಣಿ ಇವರಿಂದ ದಾಸವಾಣಿ ಕಾರ್ಯಕ್ರಮ. ವಾದ್ಯ ಸಹಕಾರ : ಶ್ರೀ ಶಶಿಧರ್ (ಪಿಟೀಲು), ಶ್ರೀ ಶ್ರೀನಿವಾಸ್ ಅನಂತರಾಮಯ್ಯ (ಮೃದಂಗ). ಸ್ಥಳ ನಂಜನಗೂಡು ಶ್ರೀ ರಾಘವೇಂದ್ರ ಸ್ವಾಮಿಗಳ ಮಠ, ಸೀತಾಪತಿ ಅಗ್ರಹಾರ, ಚಾಮರಾಜಪೇಟೆ, ಬೆಂಗಳೂರು-18

## ಬೆಂಗಳೂರಿನಲ್ಲಿ ಯುವತಿ ಮೇಲೆ ಅತ್ಯಾಚಾರ ಯತ್ನ ನಡೆದಿರುವುದು ನಿಜ: ಗೃಹ ಸಚಿವ

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಯುವತಿ ಮೇಲೆ ಅತ್ಯಾಚಾರಕ್ಕೆ ಯತ್ನ ನಡೆದಿರುವುದು ನಿಜ ಎಂದು ಗೃಹ ಸಚಿವ ಡಾ.ಜಿ.ಪರಮೇಶ್ವರ್ ತಿಳಿಸಿದ್ದಾರೆ.ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಬೆಂಗಳೂರಿನಲ್ಲಿ ಯುವತಿ ಮೇಲೆ ಅತ್ಯಾಚಾರಕ್ಕೆ ಯತ್ನ ನಡೆದಿರುವುದು ನಿಜ. ಸಂತ್ರಸ್ತೆ ಯುವತಿಎ ವೈದ್ಯಕೀಯ ಪರೀಕ್ಷೆ ನಡೆಯುತ್ತಿದೆ ಎಂದು ಹೇಳಿದ್ದಾರೆ. ಹೆಚ್ ಎಸ್ ಆರ್ ಲೇಔಟ್ ನಲ್ಲಿ ಯುವತಿ ಮೇಲೆ ಗ್ಯಾಂಗ್ ರೇಪ್ ನಡೆದಿದೆ ಎನ್ನಲಾಗಿದ್ದು, ಸದ್ಯ ಯುವತಿಯನ್ನು ಹೆಬ್ಬಗೋಡಿಯ ಖಾಸಗಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಕೋರಮಂಗಲದ ಪಬ್ ಗೆ ಹೋಗಿದ್ದ ಯುವತಿ ಅಪಘಾತವಾಗಿದೆ. ಬಳಿಕ ಆಟೋದಲ್ಲಿ ಹೋಗುತ್ತಿದ್ದ ವೇಳೆ ಎರಡರಿಂದ ಮೂವರು ಕಾಮುಕರು ಅತ್ಯಾಚಾರ ನಡೆಸಿದ್ದಾರೆ ಎನ್ನಲಾಗಿದ್ದು, ಹೆಚ್ ಎಸ್ ಆರ್ ಲೇಔಟ್‌ನಲ್ಲಿ ಪ್ರಕರಣ ದಾಖಲಾಗಿದೆ ಎಂದು ಹೇಳಲಾಗಿದೆ.

## ಆಟೋದಲ್ಲಿ ಹೋಗುತ್ತಿದ್ದ ಯುವತಿ ಮೇಲೆ ಗ್ಯಾಂಗ್ ರೇಪ್

• ಉದಯವಾಹಿನಿ, ಬೆಂಗಳೂರು

ರಾಜಧಾನಿ ಬೆಂಗಳೂರಿನಲ್ಲಿ ಪೈಶಾಚಿಕ ಕೃತ್ಯವೊಂದು ಬೆಳಕಿಗೆ ಬಂದಿದ್ದು, ಆಟೋದಲ್ಲಿ ಹೋಗುತ್ತಿದ್ದ ಯುವತಿಯ ಮೇಲೆ ಕಿರಾತಕರು ಸಾಮೂಹಿಕ ಅತ್ಯಾಚಾರ ನಡೆದಿದೆ ಎನ್ನಲಾಗಿದೆ. ಹೆಚ್ ಎಸ್ ಆರ್ ಲೇಔಟ್ ನಲ್ಲಿ ಯುವತಿ ಮೇಲೆ ಗ್ಯಾಂಗ್ ರೇಪ್ ನಡೆದಿದೆ ಎನ್ನಲಾಗಿದ್ದು, ಸದ್ಯ ಯುವತಿಯನ್ನು ಹೆಬ್ಬಗೋಡಿಯ ಖಾಸಗಿ ಆಸ್ಪತ್ರೆಗೆ ದಾಖಲಿಸಿ ಚಿಕಿತ್ಸೆ ನೀಡಲಾಗುತ್ತಿದೆ. ಕೋರಮಂಗಲದ ಪಬ್‌ಗೆ ಹೋಗಿದ್ದ ಯುವತಿ ಅಪಘಾತವಾಗಿದೆ. ಬಳಿಕ ಆಟೋದಲ್ಲಿ ಹೋಗುತ್ತಿದ್ದ ವೇಳೆ ಎರಡರಿಂದ ಮೂವರು ಕಾಮುಕರು ಅತ್ಯಾಚಾರ ನಡೆಸಿದ್ದಾರೆ ಎನ್ನಲಾಗಿದ್ದು, ಹೆಚ್ ಎಸ್ ಆರ್ ಲೇಔಟ್‌ನಲ್ಲಿ ಪ್ರಕರಣ ದಾಖಲಾಗಿದೆ ಎಂದು ಹೇಳಲಾಗಿದೆ.

## ಬೆಂಗಳೂರಿನ ಈ ಮಾರ್ಗದಲ್ಲಿ ಸಂಚಾರ ಬಂದ್

• ಉದಯವಾಹಿನಿ, ಬೆಂಗಳೂರು

ನಗರದ ವೀರಣ್ಣಪಾಳ್ಯದಿಂದ ಹೆಬ್ಬಾಳ ವೃತ್ತದವರೆಗಿನ ಸರ್ವಿಸ್ ರಸ್ತೆಯಲ್ಲಿ ಬಿಬಿಎಂಪಿ ವತಿಯಿಂದ ಗುಂಡಿ ದುರಸ್ತಿ ಕಾರ್ಯ ನಡೆಯುತ್ತಿರುವ ಹಿನ್ನೆಲೆಯಲ್ಲಿ ಸಂಚಾರ ಪೊಲೀಸರು ಸಂಚಾರ ನಿಯಮ ಜಾರಿಗೊಳಿಸಿದ್ದಾರೆ. ದುರಸ್ತಿ ಕಾರ್ಯವು ಆ. 19,2024 ರಿಂದ ಆಗಸ್ಟ್ 21,2024 ರವರೆಗೆ ನಡೆಯಲಿದೆ. ಈ ಅವಧಿಯಲ್ಲಿ, ಪ್ರತಿ ರಾತ್ರಿ 10:00 ರಿಂದ ಬೆಳಿಗ್ಗೆ 6:00 ರವರೆಗೆ ಸರ್ವಿಸ್ ರಸ್ತೆಯನ್ನು ಸಾರ್ವಜನಿಕರಿಗೆ ಮುಚ್ಚಲಾಗುತ್ತದೆ. ವೀರಣ್ಣಪಾಳ್ಯದಿಂದ ಹೆಬ್ಬಾಳ ವೃತ್ತದ ಕಡೆಗೆ ಪ್ರಯಾಣಿಸುವ ಪ್ರಯಾಣಿಕರು ಹೊರ ವರ್ತುಲ ರಸ್ತೆಯ ಮುಖ್ಯ ಮಾರ್ಗವನ್ನು ಪರ್ಯಾಯ ಮಾರ್ಗವಾಗಿ ಬಳಸಲು ಸೂಚಿಸಲಾಗಿದೆ. ಈ ಸಮಯದಲ್ಲಿ ಸಾರ್ವಜನಿಕರ ಸಹಕಾರ ನೀಡುವಂತೆ ಬೆಂಗಳೂರು ನಗರ ಸಂಚಾರ ಪೊಲೀಸರು ವಿನಂತಿಸಿದ್ದಾರೆ. ಇದಕ್ಕೂ ಮುನ್ನ ಕರ್ನಾಟಕ ಕಂದಾಯ ಸಚಿವ ಕೃಷ್ಣ ಬೈರೇಗೌಡ ಅವರು ಎಕ್ಸ್‌ನಲ್ಲಿ ವೀಡಿಯೊ ವನ್ನು ಹಂಚಿಕೊಂಡಿದ್ದು, ಬೆಂಗಳೂರಿನಲ್ಲಿ ದುರಸ್ತಿಯಾಗದ ರಸ್ತೆಯನ್ನು ಎತ್ತಿ ತೋರಿಸಿದ್ದಾರೆ ಮತ್ತು ಈ ಸಮಸ್ಯೆಯನ್ನು ಪರಿಹರಿಸುವಂತೆ ಬಿಬಿಎಂಪಿ ಮತ್ತು ಬೆಂಗಳೂರು ಮೆಟ್ರೋ ರೈಲು ನಿಗಮ ನಿಯಮಿತಅನ್ನು ಒತ್ತಾಯಿಸಿದ್ದಾರೆ.

## ರಾಜೀನಾಮೆ ಕೊಟ್ಟು ಪರಪ್ಪನ ಅಗ್ರಹಾರಕ್ಕೆ ಎಂಟ್ರಿ ಗ್ಯಾರಂಟಿ: ಬಿಜೆಪಿ

• ಉದಯವಾಹಿನಿ, ಬೆಂಗಳೂರು

ಮುಡಾ ಪ್ರಕರಣ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣ ಉಲ್ಲೇಖಿಸಿ ರಾಜ್ಯ ಕಾಂಗ್ರೆಸ್ ಸರ್ಕಾರವನ್ನು ಟೀಕಿಸಿರುವ ಬಿಜೆಪಿ, ಸಿಎಂ ಸಿದ್ದರಾಮಯ್ಯ, ಡಿಸಿಎಂ ಡಿಕೆ ಶಿವಕುಮಾರ್ ರಾಜೀನಾಮೆ ನೀಡುವುದು ಸೇರಿ ಕೆಲ ಸಚಿವರು ಪರಪ್ಪನ ಅಗ್ರಹಾರ ಜೈಲು ಸೇರುವುದು ಗ್ಯಾರಂಟಿ ಎಂದು ಕುಟುಕಿದೆ. ಈ ಕುರಿತಾದ ಪೋಸ್ಟರ್‌ಗಳನ್ನು ತನ್ನ 'X' ಖಾತೆಯಲ್ಲಿ ರಾಜ್ಯ ಬಿಜೆಪಿಯು ಶೇರ್ ಮಾಡಿದ್ದು, ಮುಡಾ ಹಗರಣದ ರೂವಾರಿ ಸಿದ್ದರಾಮಯ್ಯನವರೇ ಮೊಂಡತನ ಬಿಟ್ಟು ರಾಜೀನಾಮೆ ನೀಡಿ ಎಂದು ಆಗ್ರಹಿಸಿದೆ. ರಾಜ್ಯ ಕಾಂಗ್ರೆಸ್ ಸರ್ಕಾರವೇ ಭ್ರಷ್ಟಾಚಾರ, ಸ್ವಜನ ಪಕ್ಷಪಾತ, ಕಮಿಷನ್ ದಂಧೆ ಹಾಗೂ ವರ್ಗಾವಣೆ ದಂಧೆಯಲ್ಲಿ ಮುಳುಗಿದೆ. ವಿರೋಧ ಪಕ್ಷಗಳು ಹಾಗೂ ಜನರ ಕಣ್ಣು ತಪ್ಪಿಸಬಹುದು ಕಾನೂನಿಗೆ ಮಣ್ಣೆರಚಲು ಸಾಧ್ಯವಿಲ್ಲ. ರಾಜೀನಾಮೆ ಕೊಟ್ಟು ತೊಲಗಿ ಎಂದು ಹೇಳಿದೆ. ಇನ್ನು ಕರುನಾಡಿನ ಸ್ಕ್ಯಾಮ್ ಸಿಎಂ ಸಿದ್ದರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರಕ್ಕೆ ಕಡಿವಾಣ ಬಿದ್ದಿದೆ. ರಾಜ್ಯಪಾಲರು ತನಿಖೆಗೆ ಆದೇಶ ನೀಡಿರುವುದು ನಾಡಿನ ಸಮಸ್ತ ಜನರ ನೆಮ್ಮದಿಗೆ, ರಾಜ್ಯದ ಅಭಿವೃದ್ಧಿಗೆ ನಾಂದಿಯಾಡಲಿದೆ ಎಂದು ಬಿಜೆಪಿ ಅಭಿಪ್ರಾಯಪಟ್ಟಿದೆ.

## ಖಾಸಗಿ ವೈದ್ಯಕೀಯ ಕಾಲೇಜು ಶುಲ್ಕ ಶೇ. 10ರಷ್ಟು ಹೆಚ್ಚಳ

• ಉದಯವಾಹಿನಿ, ಬೆಂಗಳೂರು

ವೈದ್ಯಕೀಯ ವಿದ್ಯಾರ್ಥಿಗಳಿಗೆ ರಾಜ್ಯ ಸರ್ಕಾರ ಬಿಗ್ ಶಾಕ್ ನೀಡಿದ್ದು, ರಾಜ್ಯದ ಖಾಸಗಿ ವೈದ್ಯಕೀಯ ಕಾಲೇಜುಗಳ ಶುಲ್ಕವನ್ನು ಶೇ. 10ರಷ್ಟು ಹೆಚ್ಚಳ ಮಾಡಲು ವೈದ್ಯಕೀಯ ಶಿಕ್ಷಣ ಇಲಾಖೆ ಗ್ರೀನ್ ಸಿಗ್ನಲ್ ನೀಡಿದೆ. ರಾಜ್ಯದ ಖಾಸಗಿ ಕಾಲೇಜು ಆಡಳಿತ ಮಂಡಳಿ ಪ್ರತಿನಿಧಿಗಳು ಶೇಕಡ 15 ರಿಂದ 20 ರಷ್ಟು ಶುಲ್ಕ ಹೆಚ್ಚಳಕ್ಕೆ ಬೇಡಿಕೆ ಸಲ್ಲಿಸಿದ್ದು, ಶೇ.10ರಷ್ಟು ಶುಲ್ಕ ಹೆಚ್ಚಳಕ್ಕೆ ನಿರ್ಧರಿಸಲಾಗಿದೆ ಎಂದು ವೈದ್ಯಕೀಯ ಶಿಕ್ಷಣ ಸಚಿವ ಡಾ. ಶರಣ್ ಪ್ರಕಾಶ್ ಪಾಟೀಲ್ ತಿಳಿಸಿದ್ದಾರೆ.

# ನಾವು ಸುಮ್ಮನೆ ರಾಜ್ಯಪಾಲರ ಮೇಲೆ ಆರೋಪ ಮಾಡುತ್ತಿಲ್ಲ

## ಆರ್ಟಿಕಲ್ 17ಎ ನಿಯಮ ಗಾಳಿಗೆ ತೂರಿ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ: ಪ್ರಿಯಾಂಕ್ ಖರ್ಗೆ ಕಿಡಿ


• ಉದಯವಾಹಿನಿ, ಬೆಂಗಳೂರು

ಮುಡಾ ಹಗರಣದಲ್ಲಿ ಮುಖ್ಯಮಂತ್ರಿ ವಿರುದ್ಧ ರಾಜ್ಯಪಾಲರು ನೀಡಿರುವಂತ ಪ್ರಾಸಿಕ್ಯೂಷನ್ ಅನುಮತಿ ಆರ್ಟಿಕಲ್ 17ಎ ನಿಯಮಗಾಳಿಗೆ ತೂರಿದಂತೆ ಆಗಿದೆ. ಅವರು ಕಾನೂನಿನ ಕಗ್ಗೊಲೆ ಮಾಡಿದ್ದಾರೆ. ಬಿಜೆಪಿಯ ಕೈಗೊಂಬೆಯಂತೆ ವರ್ತಿಸಿದ್ದಾರೆ ಎಂಬುದಾಗಿ ಸಚಿವ ಪ್ರಿಯಾಂಕ್ ಖರ್ಗೆ ಕಿಡಿಕಾರಿದ್ದಾರೆ. ಭಾನುವಾರ ಕ್ವೀನ್ಸ್ ರಸ್ತೆಯ ಕೆಪಿಸಿಸಿ ಕಚೇರಿಯಲ್ಲಿ ನಡೆದ ಮಾಧ್ಯಮಗೋಷ್ಠಿಯಲ್ಲಿ ಮಾತನಾಡಿದಂತ ಅವರು, ಮುಖ್ಯಮಂತ್ರಿಗಳ ವಿರುದ್ಧದ ಪ್ರಸಿಕ್ಯೂಷನ್ ಪ್ರಕರಣದಿಂದಾಗಿ ರಾಜ್ಯಪಾಲರ ನಡೆ ಹಾಗೂ ಅವರ ಕಾರ್ಯಗಳ ಮೇಲೆ ಬೆಳಕು ಚೆಲ್ಲಿದಂತಾಗಿದೆ. ರಾಜ್ಯಪಾಲರ ಕಾರ್ಯಭಾರಗಳ ಮೇಲೆ ಅನೇಕ ಬಾರಿ ಚರ್ಚೆಯಾಗಿದೆ. ಬಾಬಾ ಸಾಹೇಬ್ ಅಂಬೇಡ್ಕರ್ ಅವರು ಆರ್ಟಿಕಲ್ 163ರ ಪ್ರಕಾರ ಹೀಗೆ ಹೇಳಿದ್ದಾರೆ. ರಾಜ್ಯಪಾಲರು ಮಂತ್ರಿಗಳ ಕೌನ್ಸಿಲ್ ಮೂಲಕ ಸಲಹೆಗಳನ್ನು ಪಡೆಯಬೇಕು ಎಂದರು.

ವಿ.ಜಿ.ಖೇರ್ ಅವರು ಬಾಂಬೆಯ ಮೊದಲ ರಾಜ್ಯಪಾಲರು. ರಾಜ್ಯಪಾಲರು ತಮಗೆ ಇರುವ ಅಲ್ಪಶಕ್ತಿಯಲ್ಲಿ ಹೆಚ್ಚು ಕೆಲಸ ಮಾಡಬಹುದು. ಜೊತೆಗೆ ದುರಾಡಳಿತ ಮಾಡಬೇಕು ಎಂದು ಸಂವಿಧಾನವನ್ನು ತಿರುಚಿ ಕೆಲಸ ಮಾಡಲು ತೊಡಗಿದರೆ ಅದನ್ನು ಕೂಡ ಮಾಡಬಹುದು ಎಂದು ಹೀಗೆ ಹೇಳಿದ್ದರು. ಇದೇ ರೀತಿಯ ಘಟನೆ ಕರ್ನಾಟಕದಲ್ಲಿ ನಡೆಯುತ್ತಿದೆ ರಾಜ್ಯಪಾಲರು ತಮ್ಮ ಅಧಿಕಾರವನ್ನು ದುರಾಡಳಿತಕ್ಕೆ ಬಳಸಿಕೊಳ್ಳುತ್ತಿದ್ದಾರೆ. ನಾವು ಸುಮ್ಮನೆ ರಾಜ್ಯಪಾಲರ ಮೇಲೆ ಆರೋಪವನ್ನು ಮಾಡುತ್ತಿಲ್ಲ ಎಂದರು. ಕಳೆದ ಹತ್ತು ವರ್ಷಗಳಲ್ಲಿ ಬಿಜೆಪಿ ಐಟಿ, ಇಡಿ, ಸಿಬಿಐ ಹಾಗೂ ರಾಜ್ಯಪಾಲರನ್ನು ಬಳಸಿ ತಮ್ಮ ಮಾತು ಕೇಳದ ರಾಜ್ಯ ಸರ್ಕಾರಗಳನ್ನು ಅಸ್ಥಿರಗೊಳಿಸುವ ಕೆಲಸ ಮಾಡುತ್ತಿದೆ.

2019ರ ಮಹಾರಾಷ್ಟ್ರ ಚುನಾವಣೆಯಲ್ಲಿ ಬಿಜೆಪಿಗೆ ಬಹುಮತ ದೊರೆಯುವುದಿಲ್ಲ. ಆದರೆ ಅಲ್ಲಿನ ರಾಜ್ಯಪಾಲರು ದೇವೇಂದ್ರ ಫಡ್ನವಿಸ್ ಅವರಿಗೆ ಬೆಳಗಿನ ಜಾವ ಐದು ಗಂಟೆಗೆ ಪ್ರಮಾಣವಚನ ಬೋಧಿಸುತ್ತಾರೆ. ಈ ಸರ್ಕಾರ ಕೇವಲ 80 ಗಂಟೆಗಳಲ್ಲಿ ಬಿದ್ದು ಹೋಗುತ್ತದೆ ಎಂದು ತಿಳಿಸಿ ದರು. ಉದ್ಧವ್ ಠಾಕ್ರೆ ಮುಖ್ಯಮಂತ್ರಿ ಆಗಿ ಪ್ರಮಾಣ ವಚನ ಸ್ವೀಕರಿಸುತ್ತಾರೆ. ಅವರನ್ನು ಮೇಲ್ಮನೆಗೆ ಕಳಿಸಬೇಕು ಎಂದು ತೀರ್ಮಾನ ಮಾಡಲಾಗುತ್ತದೆ. ಇದಕ್ಕೆ ರಾಜ್ಯಪಾಲರು ಆರು ತಿಂಗಳ ಕಾಲ ಅನುಮೋದನೆಯನ್ನೇ ನೀಡುವುದಿಲ್ಲ. ಆನಂತರ ಉದ್ಧವ್ ಠಾಕ್ರೆ ಅವರು ದೆಹಲಿಗೆ ತೆರಳಿ ರಾಷ್ಟ್ರಪತಿಗಳು, ಪ್ರಧಾನಿಗಳ ಗಮನಕ್ಕೆ ತಂದು ಇದು ಅಸಾಂವಿಧಾನಿಕ ನಡೆ ಎಂದಾಗ ಠಾಕ್ರೆ ಅವರಿಗೆ ಅವಕಾಶ ಸಿಗುತ್ತದೆ ಎಂದರು.

> **ಪ್ರಾಸಿಕ್ಯೂಷನ್‌ಗೆ ಅನುಮತಿ**
>
> **2016ರ ಅರುಣಾಚಲ ಪ್ರದೇಶ ಪ್ರಕರಣದಲ್ಲಿ ನ್ಯಾಯಾಲಯವು ಹೀಗೆ ಹೇಳಿತ್ತು. ಸರ್ಕಾರ ತನಿಖೆಗೆ ಸಹಕರಿಸುತ್ತಿಲ್ಲ, ತನಿಖೆಗೆ ಆದೇಶ ನೀಡಿಲ್ಲ, ಪುರಾವೆಗಳನ್ನು ನೀಡುತ್ತಿಲ್ಲ, ವರದಿಗಳನ್ನು ಪರಿಶೀಲಿಸಲು ಆಗುತ್ತಿಲ್ಲ, ರಾಜ್ಯಪಾಲರು ಸಮನ್ಸ್ ನೀಡಿದಾಗ ಬರುತ್ತಿಲ್ಲ ಹೀಗಿದ್ದಾಗ ಮಾತ್ರ ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡ ಬಹುದು ಎಂದು ಹೇಳಲಾಗಿದೆ.**



ಉದಯವಾಹಿನಿ ಚಿತ್ರ

> **ಪ್ರಸ್ತುತ ರಾಜ್ಯಪಾಲರು ಅನುಮತಿ ನೀಡಿರುವುದು ಸಂಪೂರ್ಣ ಕಾನೂನುಬಾಹಿರ. ಇತ್ತೀಚಿಗೆ ಜಸ್ಟಿಸ್ ನಾಗರತ್ನ ಅವರು ರಾಜ್ಯಪಾಲರು ಕೇವಲ ಒಂದು ಪಕ್ಷದ ಹಿತಾಸಕ್ತಿಗೆ ಅನುಗುಣವಾಗಿ ಕೆಲಸ ಮಾಡುತ್ತಿದ್ದಾರೆ ಎಂದು ಹೇಳಿದ್ದರು ಎಂದು ಸಚಿವ ಪ್ರಿಯಾಂಕ್ ಖರ್ಗೆ ಕಿಡಿಕಾರಿದರು.**

ಪಶ್ಚಿಮ ಬಂಗಾಳ ರಾಜ್ಯಪಾಲರಾಗಿದ್ದ ಜಗದೀಪ್ ಧನಕರ್ ಅವರ ರಾಜಕೀಯ ಹಸ್ತಕ್ಷೇಪದಿಂದ ಕಾನೂನು ಸಂಘರ್ಷ ಉಂಟಾಗಿತ್ತು. ಕೇರಳದ ರಾಜ್ಯಪಾಲರಾಗಿದ್ದ ಆರಿಫ್ ಮೊಹಮ್ಮದ್ ಖಾನ್ ಅವರಿಗೆ ಸರ್ಕಾರವು ಕೇಂದ್ರ ಸರ್ಕಾರ ಜಾರಿಗೆ ತಂದಿದ್ದ ಮೂರು ಕರಾಳ ಕಾಯ್ದೆಗಳ ವಿರುದ್ಧ ವಿಶೇಷ ಅಧಿವೇಶ ನಡೆಸಲು ಅನುಮತಿ ನೀಡಬೇಕೆಂದು ಪತ್ರ ಬರೆಯುತ್ತದೆ.

ಆದರೆ ರಾಜ್ಯಪಾಲರು ಅಧಿವೇಶ ನಡೆಸಲು ಅನುಮತಿಯನ್ನೇ ನೀಡುವುದಿಲ್ಲ ಎಂದರು. 2018ರಲ್ಲಿ ಕರ್ನಾಟಕದಲ್ಲಿ ರಾಜ್ಯಪಾಲರಾಗಿದ್ದ ವಾಜುಬಾಯಿ ವಾಲಾ ಅವರು ಯಡಿಯೂರಪ್ಪನವರಿಗೆ ಬಹುಮತ ಇಲ್ಲದಿದ್ದರೂ ಸಹ ಪ್ರಮಾಣವಚನ ಬೋಧಿಸಿ 15 ದಿನಗಳ ಒಳಗೆ ಬಹುಮತ ಸಾಬೀತು ಪಡಿಸಲು ಅವಕಾಶ ನೀಡಿದ್ದರು.

ಆಗ ಕಾಂಗ್ರೆಸ್ ಪಕ್ಷವು ಸುಪ್ರೀಂಕೋರ್ಟ್‌ಗೆ ಹೋದಾಗ ನ್ಯಾಯಾಲಯವು 15 ದಿನ ಅಲ್ಲ ಕೇವಲ ಮೂರು ದಿನದಲ್ಲಿ ಸಾಬೀತು ಪಡಿಸುವಂತೆ ಹೇಳಿತು. ಆನಂತರ ಸರ್ಕಾರ ಬಿದ್ದುಹೋಯಿತು ವಾಗ್ದಾಳಿ ನಡೆಸಿದರು. ನವೆಂಬರ್ 2023ರಲ್ಲಿ ಸುಪ್ರೀಂ ಕೋರ್ಟ್ ತಮಿಳುನಾಡಿನ ರಾಜಭವನ ಸೂಕ್ಷ್ಮವಾಗಿ ಪರಿಶೀಲಿಸಿತ್ತು. ಚುನಾಯಿತ ಸರ್ಕಾರ ಚರ್ಚೆ ನಡೆಸಿ ಅನುಮೋದನೆ ಮಾಡಿದ್ದ 10 ಬಿಲ್ ಗಳನ್ನು ರಾಜ್ಯಪಾಲರು ಸಹಿ ಮಾಡದೆ ವಾಪಸ್ ಕಳುಹಿಸಿದ್ದರು ಎಂದರು.

ಜನವರಿ 2023ರಲ್ಲಿ ಇದೆ ತಮಿಳುನಾಡಿನ ರಾಜ್ಯಪಾಲರು ರಾಜ್ಯಪಾಲರ ಭಾಷಣವನ್ನೇ ಧಿಕ್ಕರಿಸಿ ಹೊರ ನಡೆದಿದ್ದರು.

## ಬೆಂಗಳೂರು ವಿದ್ಯಾರ್ಥಿನಿ ರೇಪ್ ಕೇಸ್‌ಗೆ ಬಿಗ್ ಟ್ವಿಸ್ಟ್

• ಉದಯವಾಹಿನಿ, ಬೆಂಗಳೂರು

ಬೆಂಗಳೂರಿನಲ್ಲಿ ಪದವಿ ವಿದ್ಯಾರ್ಥಿನಿ ಮೇಲೆ ಅತ್ಯಾಚಾರ ಪ್ರಕರಣಕ್ಕೆ ಸಂಬಂಧಿಸಿದಂತೆ ಸ್ಫೋಟಕ ಟ್ವಿಸ್ಟ್ ಸಿಕ್ಕಿದೆ. ಮೊದಲು ಆಟೋದಲ್ಲಿ ಕರೆದೊಯ್ದು ಅತ್ಯಾಚಾರ ಮಾಡಲಾಗಿದೆ ಎಂದು ಹೇಳಲಾಗುತ್ತಿತ್ತು. ಆದರೆ, ಈಗ ಬೈಕ್‌ನಲ್ಲಿ ಡ್ರಾಪ್ ಕೊಡುವುದಾಗಿ ಕರೆದೊಯ್ದ ವ್ಯಕ್ತಿಯೇ ಯುವತಿಯನ್ನು ನಿರ್ಜನ ಪ್ರದೇಶದ ಶೆಡ್‌ಗೆ ಕರೆದೊಯ್ದು ಅತ್ಯಾಚಾರಕ್ಕೆ ಯತ್ನಿಸಿದ್ದಾನೆ ಎಂದು ತಿಳಿದುಬಂದಿದೆ.

ಪ್ರಕರಣದ ಕುರಿತು ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಬೆಂಗಳೂರು ಪೂರ್ವ ವಿಭಾಗದ ಹೆಚ್ಚುವರಿ ಪೊಲೀಸ್ ಆಯುಕ್ತ ರಮಣ್ ಗುಪ್ತಾ ಅವರು, ಈ ಘಟನೆ ನಿನ್ನೆ ರಾತ್ರಿ ಸುಮಾರು 1 ಗಂಟೆ ಸುಮಾರಿಗೆ ನಡೆದಿದೆ.

ರಾತ್ರಿ ವೇಳೆ ವಾಪಸ್ ರೂಮಿಗೆ ಹೋಗುವಾಗ ಯುವತಿ ಸ್ನೇಹಿತನ ಕಾರನ್ನ ತಾನೇ ಓಡಿಸೋದಾಗಿ ಹೇಳಿ ಕಾರು ಚಾಲನೆ ಮಾಡಿದ್ದಾಳೆ. ಆದರೆ,

> **ಈ ಘಟನೆಯಲ್ಲಿ ಯುವತಿ ಮೇಲೆ ಹಲ್ಲೆ, ಲೈಂಗಿಕ ದೌರ್ಜನ್ಯ ಆಗಿರುವುದು ಖಚಿತವಾಗಿದೆ. ಆದರೆ, ಅತ್ಯಾಚಾರ ಆಗಿದೆಯೋ ಇಲ್ಲವೋ ಎಂಬುದರ ಬಗ್ಗೆ ಸ್ಪಷ್ಟ ಮಾಹಿತಿ ಲಭ್ಯವಾಗಿಲ್ಲ. ಈಗಾಗಲೇ ವೈದ್ಯಕೀಯ ಪರೀಕ್ಷೆಯನ್ನು ಮಾಡಲಾಗಿದ್ದು, ವರದಿ ಬಂದ ನಂತರ ಖಚಿತ ಮಾಹಿತಿ ಲಭ್ಯವಾಗಲಿದೆ**
>
> **-ರಮಣ್ ಗುಪ್ತಾ, ಪೊಲೀಸ್‌ಆಯುಕ್ತ**


ಕಾರನ್ನು ಸರಿಯಾಗಿ ಓಡಿಸಲು ಬರದೇ ಮೂರು ಆಟೋಗಳಿಗೆ ಟಚ್ ಮಾಡಿದ್ದಾಳೆ. ಆಟೋ ಚಾಲಕರು ಯುವತಿ ಮೇಲೆ ಗಲಾಟೆ ಮಾಡಲು ಮುಂದಾಗುದ್ದಾರೆ. ಆಗ ಯುವತಿ ಭಯದಿಂದ ಪೊಲೀಸರ ಸಹಾಯವಾಣಿ 112ಗೆ ಕರೆ ಮಾಡಿದ್ದಾಳೆ ಎಂದು ತಿಳಿಸಿದರು. ಈ ವೇಳೆ ಪೊಲೀಸರು ಸ್ಥಳಕ್ಕೆ ಬಂದು ನನ್ನನ್ನು ವಶಕ್ಕೆ ಪಡೆಯಬಹುದು ಎಂದು ಭಯದಿಂದ ತನ್ನ ರೂಮಿಗೆ ಹೋಗಲು ತಡರಾತ್ರಿ ವೇಳೆ ಅಪರಿಚಿತ ಬೈಕ್ ಸವಾರರಿಗೆ ಅಡ್ಡ ಹಾಕಿ ಡ್ರಾಪ್ ಕೇಳಿದ್ದಾಳೆ. ಬೈಕ್‌ನಲ್ಲಿ ಯುವತಿ ಕುಳಿತ ನಂತರ ತನ್ನ ಮೊಬೈಲ್‌ನಲ್ಲಿದ್ದ ಅಲರ್ಟ್ ಆಪ್ ಆನ್ ಮಾಡಿ ತನ್ನ ಸ್ನೇಹಿತೆ, ಅಪ್ಪನಿಗೆ ತುರ್ತು ಸಹಾಯದ ಕುರಿತ ಸಂದೇಶ ಹೋಗುವಂತೆ ಲೊಕೇಷನ್ ಆನ್ ಮಾಡಿದ್ದಾಳೆ.

ಅಷ್ಟೊತ್ತಿಗಾಗಲೇ ಮುಖ್ಯ ರಸ್ತೆಯನ್ನು ಬಿಟ್ಟು ಒಳ ರಸ್ತೆಯಲ್ಲಿ ಸಾಗಿದ್ದ ಬೈಕ್ ಸವಾರ ಖಾಲಿ ಶೆಡ್ ಬಳಿ ಬೈಕ್ ನಿಲ್ಲಿಸಿ ಆಕೆಯನ್ನು ಶೆಡ್ ನೊಳಗೆ ಕೂಡಿಹಾಕಿ ಅತ್ಯಾಚಾರಕ್ಕೆ ಯತ್ನಿಸಿದ್ದಾನೆ. ಶೆಡ್‌ಗೆ ತನ್ನ ಸ್ನೇಹಿತೆಯೊಂದಿಗೆ ಪೊಲೀಸರು ಆಗಮಿಸಿದಾಗ ಆರೋಪಿ ಅಲ್ಲಿಂದ ಪರಾರಿಯಾಗಿದ್ದಾನೆ.

ಅತ್ಯಾಚಾರಕ್ಕೆ ಒಳಗಾದ ಯುವತಿಯನ್ನು ತಕ್ಷಣ ಹೆಬ್ಬಗೋಡಿಯ ಖಾಸಗಿ ಆಸ್ಪತ್ರೆಗೆ ಸೇರಿಸಲಾಗಿದೆ.

## ವಿಕ್ರಾಂತ್ ರೋಣಾ ಸಿನಿಮಾ ನಿರ್ಮಾಪಕ ಜಾಕ್ ಮಂಜು ವಿರುದ್ಧ ಎಫ್‌ಐಆರ್ ದಾಖಲು

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ನ್ಯಾಯಾಲಯಕ್ಕೆ ಸಲ್ಲಿಸಲಾಗಿದ್ದಂತ ಪಿಸಿಆರ್ ಆಧರಿಸಿ, ವಿಕ್ರಾಂತ್ ರೋಣಾ, ಡೆಡ್ಲಿ ಸೋಮ ಸಿನಿಮಾ ನಿರ್ಮಾಪಕ ಜಾಕ್ ಮಂಜು ವಿರುದ್ಧ ಎಫ್‌ಐಆರ್ ದಾಖಲಾಗಿದೆ. ಸ್ಯಾಂಡಲ್ ವುಡ್ ನಿರ್ಮಾಪಕ ಶಿವಶಂಕರ್ ಎಂಬುವರು ಕೋರ್ಟ್‌ಗೆ ನಿರ್ಮಾಪಕ ಜಾಕ್ ಮಂಜು ಮೋಸ ಮಾಡಿದ್ದಾರೆ ಎಂಬುದಾಗಿ ಪಿಸಿಆರ್ ದಾಖಲಿಸಿದ್ದರು. ಈ ಅರ್ಜಿಯ ಆಧಾರದ ಮೇಲೆ ಕೋರ್ಟ್ ನಿರ್ಮಾಪಕ ಜಾಕ್ ಮಂಜು ಸೇರಿದಂತೆ ಸಿದ್ದೇಶ್, ಮುರುಳಿ ಎಂಬುವರ ವಿರುದ್ಧ ಎಫ್ ಐಆರ್ ದಾಖಲಿಸಲು ಸೂಚಿಸಿತ್ತು. ಹೀಗಾಗಿ ಕೋರ್ಟ್ ಸೂಚನೆಯ ಹಿನ್ನಲೆಯಲ್ಲಿ ಬೆಂಗಳೂರಿನ ಉಪ್ಪಾರಪೇಟೆ ಪೊಲೀಸ್ ಠಾಣೆಯಲ್ಲಿ ಎಫ್‌ಐಆರ್ ದಾಖಲಿಸಲಾಗಿದೆ.

ಮಾಯಾನಗರಿ ಚಿತ್ರದ ಸಂಬಂಧ ನಿರ್ಮಾಪಕ ಶಿವಶಂಕರ್ ಕೋರ್ಟ್ ಗೆ ಪಿಸಿಆರ್ ದಾಖಲಿಸಿದ್ದರು. ಈ ಚಿತ್ರಕ್ಕೆ ಹೂಡಿಕೆ ಮಾಡಿದ್ದಂತ ಹಣವನ್ನು ನೀಡಿರಲಿಲ್ಲ. ಸಿದ್ದೇಶ್ ಎಂಬುವರು ಎಕ್ಸಿಕ್ಯೂಟಿವ್ ಪ್ರೊಡ್ಯೂಸರ್ ಆಗಿದ್ದರೇ, ಮುರುಳಿ ಎಂಬುವರು ಶಾಲಿನಿ ಆರ್ಟ್ಸ್ ಮೇಲ್ವಿಚಾರಕ ಆಗಿದ್ದರು. ಇವರಿಬ್ಬರು ಶಿವಶಂಕರ್ ಭೇಟಿ ಮಾಡಿ, ಹಣ ಹೂಡುವುದಕ್ಕೆ ಕೋರಿದ್ದರು. ಜಾಕ್ ಮಂಜು ಕೂಡ ಶಿವಶಂಕರ್ ಅವರಿಗೆ ಪರಿಚಯ ಮಾಡಲಾಗಿತ್ತು.

ಮಾಯಾನಗರಿ ಚಿತ್ರಕ್ಕೆ ಹೂಡಿಕೆ ಮಾಡಿದ್ದಂತ ಹಣವನ್ನು ಶಿವಶಂಕರ್ ವಾಪಾಸ್ ಕೇಳಿದ್ದರು. ಆದರೇ ಕೊಟ್ಟಿರಲಿಲ್ಲ. ಜಾಕ್ ಮಂಜು ಅವರನ್ನು ಕೊಡಿಸುವಂತೆ ಕೇಳಲಾಗಿತ್ತು. ಅದಕ್ಕೂ ಉತ್ತರಿಸಲಾಗಿರಲಿಲ್ಲ. ಹೀಗಾಗಿ ಕೋರ್ಟ್‌ಗೆ ಶಿವಶಂಕರ್ ಹಣ ಮೋಸ ಮಾಡಿದಂತ ಆರೋಪದಲ್ಲಿ ಪಿಸಿಆರ್ ಸಲ್ಲಿಸಿ, ನಿರ್ಮಾಪಕ ಜಾಕ್ ಮಂಜು, ಸಿದ್ದೇಶ್, ಮುರುಳಿ ಎಂಬುವರ ವಿರುದ್ಧ ಎಫ್‌ಐ ಆರ್ ಗೆ ಕೋರಿದ್ದರು. ಕೋರ್ಟ್ ಇವರ ಅರ್ಜಿಯನ್ನು ಪರಿಗಣಿಸಿ, ಪೊಲೀಸರಿಗೆ ಸೂಚಿಸದ ಪರಿಣಾಮ ಈಗ ಮೂವರ ವಿರುದ್ಧ ಎಫ್‌ಐಆರ್ ದಾಖಲಾಗಿದೆ.

## ಕೋರಮಂಗಲ ಪಿಜಿ ಕೊಲೆ ಪ್ರಕರಣ ಮಾಲೀಕನ ವಿರುದ್ಧ ಪ್ರಕರಣ ದಾಖಲು

• ಉದಯವಾಹಿನಿ, ಬೆಂಗಳೂರು

ಕಳೆದ ತಿಂಗಳು ಬಿಹಾರ ಮೂಲದ ಮಹಿಳೆಯನ್ನು ಕೊಲೆ ಕೇಸಿಗೆ ಸಂಬಂಧಿಸಿದಂತೆ ಪೇಯಿಂಗ್ ಗೆಸ್ಟ್ ವಸತಿ ಗೃಹದ ಮಾಲೀಕರ ವಿರುದ್ಧ ಕೋರಮಂಗಲ ಪೊಲೀಸರು ಪ್ರಕರಣ ದಾಖಲಿಸಿದ್ದಾರೆ.

ಬೆಂಗಳೂರಿನ ಕೋರಮಂಗಲದ ಪೇಯಿಂಗ್ ಗೆಸ್ಟ್ ಹೋಂನಲ್ಲಿ ಬಿಹಾರ ಮೂಲದ ಕೃತಿ ಕುಮಾರಿ (24) ಎಂಬ ಯುವತಿ ಯನ್ನು ಚಾಕುವಿನಿಂದ ಇರಿದು ಬರ್ಬರವಾಗಿ ಹತ್ಯೆ ಮಾಡಲಾಗಿದೆ.

ಬೆಂಗಳೂರಿನಲ್ಲಿ ವಾಸವಿದ್ದ ಮಧ್ಯಪ್ರದೇಶ ಮೂಲದ ಅಭಿಷೇಕ್ ಘೋಸಿ (24) ಪಿಜಿ ವಸತಿಗೃಹದಲ್ಲಿರುವ ಕೃತಿಯ ಕೋಣೆಗೆ ನಡೆದು, ಅವಳನ್ನು ಅನೇಕ ಬಾರಿ ಇರಿದು, ಕತ್ತು ಸೀಳಿ ಪರಾರಿಯಾಗಿದ್ದಾನೆ ಎಂದು ಪೊಲೀಸ್ ತನಿಖೆಯಿಂದ ತಿಳಿದುಬಂದಿದೆ.

ಕೃತಿ ತನ್ನ ಸ್ವಂತ ಪಿಜಿಯಲ್ಲಿ ಮಾಡಿದ ಕೊಲೆ ನಗರದಾದ್ಯಂತ ಆಘಾತದ ಅಲೆಗಳನ್ನು ಉಂಟುಮಾಡಿತ್ತು. ಪಿಜಿ ಸುರಕ್ಷತಾ ಸಮಸ್ಯೆಗಳನ್ನು ಎತ್ತಲಾಯಿತು.

ಪಿಜಿ ವಸತಿಗೃಹವು ಎಲ್ಲಾ ಸುರಕ್ಷತಾ ಕ್ರಮಗಳನ್ನು ಹೊಂದಿದೆ ಎಂದು ತನಿಖೆಯಿಂದ ತಿಳಿದುಬಂದಿದೆ, ಆದರೆ ಭದ್ರತಾ ವೈಫಲ್ಯವು ಕೊಲೆಗೆ ಕಾರಣವಾಯಿತು. ಸೆಕ್ಯುರಿಟಿ ಗಾರ್ಡ್ ಮುಂಭಾಗದ ಬಾಗಿಲನ್ನು ತೆರೆದಿಟ್ಟು ಮಹಡಿಗೆ ಹೋದರು. ರಿಸೆಪ್ಷನ್ ಮೇಲೆ ಯಾರೂ ನಿಗಾ ಇಟ್ಟಿರಲಿಲ್ಲ ಎಂದು ಪ್ರಕರಣದ ತನಿಖೆ ನಡೆಸುತ್ತಿರುವ ಹಿರಿಯ ಪೊಲೀಸ್ ಅಧಿಕಾರಿಯೊಬ್ಬರು ತಿಳಿಸಿದರು.

ಈ ನಿರ್ಲಕ್ಷ್ಯವನ್ನು ಗಮನಿಸಿದ ಪೊಲೀಸರು ಬಿಎನ್‌ಎಸ್ ಸೆಕ್ಷನ್ 125 ಅಡಿಯಲ್ಲಿ ಎಫ್‌ಐಆರ್ ದಾಖಲಿಸಿದ್ದಾರೆ, ಪಿಜಿ ಮಾಲೀಕ ಶ್ಯಾಮ್ ಸುಂದರ್ ರೆಡ್ಡಿ ಅವರನ್ನು ಪ್ರಮುಖ ಆರೋಪಿ ಎಂದು ಹೆಸರಿಸಿದ್ದಾರೆ

## ಬೋರ್‌ವೆಲ್ ಕೊರೆಸಲು 4 ಲಕ್ಷ ಸಬ್ಸಿಡಿ

• ಉದಯವಾಹಿನಿ, ಬೆಂಗಳೂರು

ರಾಜ್ಯ ಸರ್ಕಾರವು ರೈತ ಸಮುದಾಯಕ್ಕೆ ಸಿಹಿಸುದ್ದಿ ನೀಡಿದ್ದು, ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಗಂಗಾ ಕಲ್ಯಾಣ ನೀರಾವರಿ ಯೋಜನೆಯಲ್ಲಿ ಸೌಲಭ್ಯ ಪಡೆಯಲು ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಭಿವೃದ್ಧಿ ನಿಗಮ, ಕರ್ನಾಟಕ ಅಲೆಮಾರಿ, ಅರೆ ಅಲೆಮಾರಿ ಅಭಿವೃದ್ಧಿ ನಿಗಮ ಹಾಗೂ ಕರ್ನಾಟಕ ವಿಶ್ವಕರ್ಮ ಸಮುದಾಯಗಳ ಅಭಿವೃದ್ಧಿ ನಿಗಮಗಳ ವ್ಯಾಪ್ತಿಗೆ ಒಳಪಡುವ ಹಿಂದುಳಿದ ವರ್ಗಗಳ ಸಣ್ಣ ಮತ್ತು ಅತಿ ಸಣ್ಣ ರೈತರಿಗೆ ಗಂಗಾ ಕಲ್ಯಾಣ ನೀರಾವರಿ ಯೋಜನೆಯಲ್ಲಿ ಸೌಲಭ್ಯ ಒದಗಿಸಲಾಗುತ್ತಿದ್ದು, ಅರ್ಹ ರೈತ ಫಲಾನುಭವಿಗಳು ಅರ್ಜಿ ಸಲ್ಲಿಸಬಹುದು.

**ಗಂಗಾ ಕಲ್ಯಾಣ ಯೋಜನೆಗೆ ಅರ್ಜಿ ಸಲ್ಲಿಸಲು**

**ಅರ್ಹತೆ:** ಸಣ್ಣ, ಅತಿ ಸಣ್ಣ ರೈತರಾಗಿರಬೇಕು.

ಹಾಲಿ ಜಮೀನುಗಳು ಕೃಷಿ ಚಟುವಟಿಕೆಯಲ್ಲಿರಬೇಕು. ಯಾವುದೇ ಮೂಲದಿಂದ ನೀರಾವರಿ ಸೌಲಭ್ಯ ಹೊಂದಿರಬಾರದು.

ಫಲಾನುಭವಿಯು ಕರ್ನಾಟಕ ರಾಜ್ಯದ ಖಾಯಂ ನಿವಾಸಿಯಾಗಿರಬೇಕು.

ವಯಸ್ಸು 18 ರಿಂದ 60 ವರ್ಷದೊಳಗಿರಬೇಕು. ಕುಟುಂಬ ವಾರ್ಷಿಕ ವರಮಾನ ಗ್ರಾಮಾಂತರ ಪ್ರದೇಶದವರಿಗೆ ರೂ. 98 ಸಾವಿರ ಹಾಗೂ ಪಟ್ಟಣ ಪ್ರದೇಶದವರಿಗೆ ರೂ. 1.20 ಲಕ್ಷಗಳು ಒಳಗಿರಬೇಕು.

ಒಂದೇ ಸ್ಥಳದಲ್ಲಿ ಹೊಂದಿಕೊಂಡಂತೆ ಕನಿಷ್ಠ 02 ಎಕರೆ ಜಮೀನು ಹೊಂದಿರಬೇಕು.

ಗಂಗಾ ಕಲ್ಯಾಣ ಯೋಜನೆ ಅಡಿಯಲ್ಲಿ 4 ಲಕ್ಷ ಸಬ್ಸಿಡಿಯನ್ನು ನೀಡುವ ಮೂಲಕ ರಾಜ್ಯದ ರೈತರಿಗೆ ಬೋರ್‌ವೆಲ್ ಕೊರಸಿಕೊಳ್ಳುವ ಅವಕಾಶವನ್ನು ನೀಡಿದೆ.


ಗಂಗಾ ಕಲ್ಯಾಣ ಯೋಜನೆಗೆ ಅರ್ಜಿ ಸಲ್ಲಿಸಲು ಈ ದಾಖಲೆಗಳು ಕಡ್ಡಾಯ

ರೈತರು ಆಧಾರ್ ಜೋಡಣೆಯಾದ ಚಾಲ್ತಿಯಲ್ಲಿರುವ ಬ್ಯಾಂಕ್ ಖಾತೆ ಹೊಂದಿರಬೇಕು.

ಆಧಾರ್ ಕಾರ್ಡ್, ಬ್ಯಾಂಕ್ ಪಾಸ್ ಬುಕ್, ಜಾತಿ. ಆದಾಯ ಪ್ರಮಾಣ ಪತ್ರ,ಸ್ವಂತ ಜಮೀನಿನ ಪಹಣಿ,ಅರ್ಜಿದಾರರ ಭಾವಚಿತ್ರ.ಬಿಪಿಎಲ್ ರೇಷನ್ ಕಾರ್ಡ್,ಮೊಬೈಲ್ ಸಂಖ್ಯೆ ಅರ್ಜಿದಾರರು ಸೇವಾಸಿಂಧು ಪೋರ್ಟಲ್ ಮುಖಾಂತರ ಗ್ರಾಮ ಒನ್, ಕರ್ನಾಟಕ ಒನ್ ಸೇವಾ ಕೇಂದ್ರಗಳಲ್ಲಿ ಆನ್ಲೈನ್ ಮೂಲಕ ಅರ್ಜಿಯನ್ನು ಆಗಸ್ಟ್ 31 ರೊಳಗಾಗಿ ಸಲ್ಲಿಸಬಹುದು.

## ಝೀಕಾ ವೈರಸ್ ಆತಂಕ : ಆರೋಗ್ಯ ಇಲಾಖೆಯಿಂದ ಮಾರ್ಗಸೂಚಿ ಪ್ರಕಟ

• ಉದಯವಾಹಿನಿ ಬೆಂಗಳೂರು



ರಾಜ್ಯದಲ್ಲಿ ಡೆಂಗೀ ಬೆನ್ನಲ್ಲೇ ಝೀಕಾ ವೈರಸ್ ಅಬ್ಬರ ಶುರುವಾಗಿದ್ದು, ಈ ಹಿನ್ನೆಲೆಯಲ್ಲಿ ಎಚ್ಚೆತ್ತಿರುವ ಆರೋಗ್ಯ ಇಲಾಖೆಯು ಮಾರ್ಗಸೂಚಿ ಬಿಡುಗಡೆ ಮಾಡಿದೆ. ಡೆಂಘೀ ರೀತಿಯಲ್ಲೇ ಸೋಂಕಿತ ಈಡಿಸ್ ಸೊಳ್ಳೆ ಕಚ್ಚುವುದರಿಂದ ಝೀಕಾ ವೈರಸ್ ಹರಡುತ್ತದೆ. ಸೋಂಕು ಕಾಣಿಸಿಕೊಂಡ ತಕ್ಷಣ ಎಚ್ಚೆತ್ತು ಚಿಕಿತ್ಸೆ ಪಡೆಯುವ ಸಲುವಾಗಿ ರೋಗದ ಗುಣಲಕ್ಷಣ, ಸೋಂಕು ಉಂಟಾದರೆ ತೆಗೆದುಕೊಳ್ಳಬೇಕಿರುವ ಪರಿಹಾರ ಕ್ರಮ, ಸೊಳ್ಳೆ ನಿಯಂತ್ರಣ ಮಾಡಲು ಮಾಡಬೇಕಿರುವ ಕ್ರಮಗಳ ಬಗ್ಗೆ ಮಾರ್ಗಸೂಚಿ ಬಿಡುಗಡೆ ಮಾಡಲಾಗಿದೆ ಝೀಕಾ ವೈರಸ್ನ ಸೋಂಕು ಉಂಟಾದರೆ ನಿರ್ದಿಷ್ಟ ಚಿಕಿತ್ಸೆ ಹಾಗೂ ಲಸಿಕೆ ಲಭ್ಯವಿಲ್ಲ. ರೋಗ ಲಕ್ಷಣಗಳಿಗೆ ಅನುಗುಣವಾಗಿ ಚಿಕಿತ್ಸೆ ನೀಡಲಾಗುತ್ತದೆ. ಮನೆಯಲ್ಲಿಯೇ ಚಿಕಿತ್ಸೆ ಪಡೆಯಬಹುದು. ನಿರ್ಜಲೀಕರಣ ತಪ್ಪಿಸಲು ಹೆಚ್ಚು ನೀರಿನ ಅಂಶವುಳ್ಳ ಆಹಾರ ಪದಾರ್ಥ ಸೇವನೆ, ರೋಗ ಲಕ್ಷಣಗಳಿಗೆ ಅನುಗುಣವಾಗಿ ವೈದ್ಯರ ಸಲಹೆಯಂತೆ ನೀಡುವ ಔಷಧಿ ಪಡೆಯುವ ಜತೆಗೆ ಸಾಕಷ್ಟು ವಿಶ್ರಾಂತಿ ಪಡೆಯಬೇಕು. ಸೋಂಕು ಬೇರೆಯವರಿಗೆ ಹರಡದಂತೆ ಸೊಳ್ಳೆ ಪರದೆ ಉಪಯೋಗಿಸಬೇಕು ಎಂದು ಆರೋಗ್ಯ ಇಲಾಖೆ ಸಲಹೆ ನೀಡಿದೆ.

**ಝೀಕಾ ವೈರಸ್ ಎಂದರೇನು?:** ಝೀಕಾ ವೈರಸ್ ಸೊಳ್ಳೆಗಳ ಮೂಲಕ ವಾಹಕಗಳಾಗಿ ಹರಡುತ್ತದೆ. ಈಡಿಸ್ ಸೊಳ್ಳೆಗಳ ಮೂಲಕ ಈ ವೈರಸ್ ಹರಡುತ್ತದೆ. ಈ ವೈರಸ್ ಸಾಗಿಸುವ ಸೊಳ್ಳೆಗಳು ಮನುಷ್ಯರನ್ನು ಕಚ್ಚಿದಾಗ, ವೈರಸ್ ಮನುಷ್ಯರಿಗೆ ಹರಡುತ್ತದೆ. ಈ ಈಡಿಸ್ ಸೊಳ್ಳೆಗಳು ಹಗಲಿನ ವೇಳೆಯಲ್ಲಿ ಕಚ್ಚುತ್ತವೆ, ಹೆಚ್ಚಾಗಿ ಉಷ್ಣವಲಯದ, ಉಪೋಷ್ಣವಲಯದ ಪ್ರದೇಶಗಳಲ್ಲಿ ಕಂಡುಬರುತ್ತದೆ. ಝೀಕಾ ವೈರಸ್ ಕೇವಲ ಸೊಳ್ಳೆ ಕಡಿತದಿಂದ ಮಾತ್ರವಲ್ಲ, ರಕ್ತದ ವರ್ಗಾವಣೆ ಮೂಲಕವೂ ಹರಡಬಹುದು ಎಂದು ತಜ್ಞರು ಹೇಳುತ್ತಾರೆ.

**ಝೀಕಾ ರೋಗದ ಲಕ್ಷಣಗಳೇನು?**

ಸೌಮ್ಯ ಜ್ವರ, ದದ್ದುಗಳು, ಕಾಂಜಂಕ್ಟಿವಿಟಿಸ್, ಸ್ನಾಯು- ಕೀಲು ನೋವು, ಅಸ್ವಸ್ಥತೆ ಅಥವಾ ತಲೆನೋವು

**ಮುನ್ನೆಚ್ಚರಿಕಾ ಕ್ರಮಗಳು ಏನು.?:** ನಿಮ್ಮ ಮನೆಯಂಗಳದ ಸುತ್ತಮುತ್ತ ನೀರು ನಿಲ್ಲದಂತೆ ನೋಡಿಕೊಳ್ಳಿ. ಸದ್ಯ ಮಳೆ ಇರುವುದರಿಂದ ರಸ್ತೆಯ ಹೊಂಡಗಳಲ್ಲಿ ನೀರು ನಿಲ್ಲುವುದು ಸಾಮಾನ್ಯ. ಇಂತಹ ಕಡೆ ಸೊಳ್ಳೆಗಳು ಸಂತನೋತ್ಪತ್ತಿ ಹೆಚ್ಚಿಸಿಕೊಂಡು ಮನುಷ್ಯರ ಮೇಲೆ ಹಗಲಿನ ವೇಳೆ ದಾಳಿ ಮಾಡುತ್ತವೆ. ಇವುಗಳಿಂದ ರಕ್ಷಣೆ ಪಡೆದುಕೊಳ್ಳಲು ಬೇಕಾದ ಮುನ್ನೆಚ್ಚರಿಕಾ ಕ್ರಮ ತೆಗೆದುಕೊಳ್ಳಬೇಕು.

## ಜುಲೈ, ಆಗಸ್ಟ್ ತಿಂಗಳ ಗೃಹಲಕ್ಷ್ಮಿ ಹಣ ಖಾತೆಗೆ ಜಮಾ

• ಉದಯವಾಹಿನಿ, ಬೆಂಗಳೂರು




ಎರಡು ತಿಂಗಳುಗಳಿಂದ ಗೃಹಲಕ್ಷ್ಮಿ ಯೋಜನೆಯ ಹಣವನ್ನು ಸರ್ಕಾರ ಮಹಿಳೆಯರ ಖಾತೆಗೆ ವರ್ಗಾವಣೆ ಮಾಡಿಲ್ಲ ಎಂದು ಮಹಿಳೆಯರು ಆಕ್ರೋಶ ವ್ಯಕ್ತಪಡಿಸುತ್ತಿದ್ದಾರೆ. ಇದೀಗ ಎಲ್ಲಾ ತಾಂತ್ರಿಕ ದೋಷಗಳನ್ನು ಸರಿಪಡಿಸಿಕೊಂಡು ಮಹಿಳೆಯರಿಗೆ ಗೃಹಲಕ್ಷ್ಮಿ ಯೋಜನೆಯ ಎರಡು ಸಾವಿರ ರೂಪಾಯಿ ಅವರ ಖಾತೆಗೆ ಇಂದು ವರ್ಗಾಯಿಸಲಾಗುತ್ತಿದೆ.

ಹೌದು ಗೃಹಲಕ್ಷ್ಮಿ ಹಣ ಖಾತೆಗೆ ಸೇರಲು ಯಾಕೆ ವಿಳಂಬ ವಾಗುತ್ತಿದೆ ಎನ್ನುವುದರ ಕುರಿತು ಕೆಲವು ದಿನಗಳ ಹಿಂದೆ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಪ್ರತಿಕ್ರಿಯೆ ನೀಡಿದ್ದು, ತಿಂಗಳಿಗೆ 2,400 ಕೋಟಿ ರೂ. ಖರ್ಚಾಗುತ್ತಿದೆ. ಮಂಡ್ಯದಲ್ಲಿ ಡಿಪಿಟಿಗೆ ಪುಷ್ ಮಾಡಿ ಮೂರು ದಿನಗಳಾದವು. ಇನ್ನೂ ನಾಲ್ಕೈದು ಜಿಲ್ಲೆಗಳಿಗೆ ಯೋಜನೆಯ ಹಣ ದೊರೆಯಬೇಕಿದೆ. ಬ್ಯಾಂಕ್‌ಗಳಿಗೆ ಹಣ ಕಳುಹಿಸಿರುತ್ತೇವೆ. ಸ್ಥಳೀಯ ಮಟ್ಟವಾಗಿ ಯಜಮಾನಿಯರ ಖಾತೆಗೆ ವರ್ಗಾವಣೆಯಾಗಬೇಕು. ದೊಡ್ಡ ಮೊತ್ತದ ಹಣ ಆಗಿರುವ ಕಾರಣ ವಿಳಂಬ ಆಗುತ್ತಿರುತ್ತದೆ ಎಂದರು.ಜೂನ್ ತಿಂಗಳ ಹಣ ವರ್ಗಾವಣೆಯಾಗಿದೆ. ಜುಲೈ ತಿಂಗಳ ಹಣ ಇನ್ನೆರಡು ದಿನಗಳಲ್ಲಿ ಖಾತೆಗಳಿಗೆ ವರ್ಗಾವಣೆಯಾಗಲಿದೆ. ಆಗಸ್ಟ್ ತಿಂಗಳ ಹಣ ಕೂಡ ಯಜಮಾನಿಯರ ಖಾತೆಗೆ ವರ್ಗಾವಣೆ ಮಾಡುತ್ತೇವೆ. ವಿಳಂಬ ಆಗಬಾರದು ಎಂಬುದು ನಮ್ಮ ಚಿಂತನೆ. ಒಂದು ದಿನಕ್ಕೆ ನನಗೆ 500 ಕರೆಗಳು ಬರುತ್ತವೆ. ಮಂತ್ರಿಯಾಗಿ ಎಲ್ಲಾ ಕರೆಗಳಿಗೂ ನಾನು ಉತ್ತರ ನೀಡುತ್ತಿದ್ದೇನೆ ಎಂದು ಅವರು ತಿಳಿಸಿದರು.

ಇದೀಗ ತಾಂತ್ರಿಕ ದೋಷಗಳೆಲ್ಲವೂ ಬಗೆಹರಿದಿದ್ದು, ಇಂದೇ ಮಹಿಳೆಯರಿಗೆ ಅವರ ಖಾತೆಗೆ ಗೃಹಲಕ್ಷ್ಮಿ ಯೋಜನೆಯ ಅಡಿಯಲ್ಲಿ ಎರಡು ತಿಂಗಳ ಒಟ್ಟು 4 ಸಾವಿರ ಹಣ ಅವರ ಖಾತೆಗೆ ಜಮೆ ಮಾಡಲಾಗುತ್ತಿದೆ. ಹಾಗಾಗಿ 2000 ನಿರೀಕ್ಷೆಯಲ್ಲಿದ್ದ ಮಹಿಳೆಯರು ಸದ್ಯ ನಿಟ್ಟುಸಿರು ಬಿಡುವಂತಾಗಿದೆ.

# 10 ವರ್ಷಕ್ಕೂ ಹೆಚ್ಚು ಕಾಲ ಕೆಲಸ ಮಾಡಿದ ದಿನಗೂಲಿ ನೌಕರರ ಸೇವೆ ಕಾಯಂ

## 10 ವರ್ಷಗಳಿಗಿಂತ ದಿನಗೂಲಿ ಕಾರ್ಮಿಕರಾಗಿ ಕೆಲಸ ಮಾಡುತ್ತಿರುವ ಅರ್ಜಿದಾರರು ಸೇವೆಯನ್ನು ಖಾಯಂಗೊಳಿಸಲು ಅರ್ಹರು

• ಉದಯವಾಹಿನಿ, ಬೆಂಗಳೂರು

**ಹೈಕೋರ್ಟ್ ಮಹತ್ವದ ಆದೇಶ**

ಕರ್ನಾಟಕ ಹೈಕೋರ್ಟ್ ಇತ್ತೀಚೆಗೆ ತೋಟಗಾರಿಕೆ ಮತ್ತು ರೇಷ್ಮೆ ಇಲಾಖೆ ಹೊರಡಿಸಿದ ಅನುಮೋದನೆಯನ್ನು ರದ್ದುಗೊಳಿಸಿತು ಮತ್ತು ಮಂಜೂರಾದ ಹುದ್ದೆಯಿಲ್ಲದೆ 10 ವರ್ಷಗಳಿಗಿಂತ ಹೆಚ್ಚು ಕಾಲ ದಿನಗೂಲಿ ಕಾರ್ಮಿಕರಾಗಿ ಕೆಲಸ ಮಾಡುತ್ತಿರುವ ಅರ್ಜಿದಾರರು ಸೇವೆಯನ್ನು ಖಾಯಂಗೊಳಿಸಲು ಅರ್ಹರು ಎಂದು ಘೋಷಿಸಿತು.

ಮೈಸೂರು ಜಿಲ್ಲೆ ನಂಜನಗೂಡು ತಾಲ್ಲೂಕಿನ ಕಡಕೋಳದ ಶಾಂತಲಕ್ಷ್ಮಿ, 30ಕ್ಕೂ ಅಧಿಕ ಮಂದಿ ಸಲ್ಲಿಸಿದ ಅರ್ಜಿಗಳ ವಿಚಾರಣೆ ನಡೆಸಿದ ನ್ಯಾಯಮೂರ್ತಿ ಬಿ.ಎಂ. ಶ್ಯಾಮ್ ಪ್ರಸಾದ್ ಅವರಿದ್ದ ಏಕಸದಸ್ಯ ಪೀಠ ಈ ತೀರ್ಪು ನೀಡಿದೆ.ಶಾಂತಲಕ್ಷ್ಮಿ ಮತ್ತು ಇತರರು ಸಲ್ಲಿಸಿದ್ದ ಅರ್ಜಿಯನ್ನು ನ್ಯಾಯಮೂರ್ತಿ ಬಿ.ಎಂ.ಶ್ಯಾಮ್ ಪ್ರಸಾದ್ ಅವರಿದ್ದ ಏಕಸದಸ್ಯ ನ್ಯಾಯಪೀಠ ವಿಚಾರಣೆ ನಡೆಸಿ, '14.06.2010 ಮತ್ತು 15.06.2012ರ ಅನುಮೋದಿತ ಅನುಮೋದನೆಗಳನ್ನು ರದ್ದುಗೊಳಿಸಿ, ಅರ್ಜಿದಾರರು 2002/2005ರ ಯೋಜನೆಗಳ ಅನುಸಾರ ಸಕ್ರಮಗೊಳಿಸಲು ಅರ್ಹರು ಎಂದು ಘೋಷಿಸಿದರು. ಈ ಅರ್ಜಿಗಳಲ್ಲಿನ ಪ್ರತಿವಾದಿಗಳಿಗೆ ಮೂರು 3 ತಿಂಗಳ ಅವಧಿಯಲ್ಲಿ ಈ ನ್ಯಾಯಾಲಯದ ಘೋಷಣೆಯನ್ನು ಗಮನದಲ್ಲಿಟ್ಟುಕೊಂಡು ಸೂಕ್ತ ಆದೇಶಗಳನ್ನು ಹೊರಡಿಸಲು ನಿರ್ದೇಶಿಸಲಾಗಿದೆ. ಕರ್ನಾಟಕ ರಾಜ್ಯ ಕಾರ್ಯದರ್ಶಿ ವಿ ಪ್ರಕರಣದಲ್ಲಿ ಸುಪ್ರೀಂ ಕೋರ್ಟ್ ನೀಡಿದ ತೀರ್ಪನ್ನು ಉಲ್ಲೇಖಿಸಿ ಅರ್ಜಿದಾರರ ಮನವಿಯನ್ನು ತಿರಸ್ಕರಿಸಿ ರಾಜ್ಯ ಸರ್ಕಾರ ಅನುಮೋದನೆ ನೀಡಿತ್ತು. ಉಮಾದೇವಿ, ಈ ನಿರ್ಧಾರದಲ್ಲಿ ಸರ್ವೋಚ್ಚ ನ್ಯಾಯಾಲಯವು ಹೊರಡಿಸಿದ ನಿರ್ದೇಶನಗಳನ್ನು ಅನುಷ್ಠಾನಗೊಳಿಸುವ ಉದ್ದೇಶಕ್ಕಾಗಿ ರಾಜ್ಯ ಸರ್ಕಾರವು 05.01.2006ರಂದು ಹೊರಡಿಸಿದ ಸುತ್ತೋಲೆ. ಉಮಾದೇವಿ ಪ್ರಕರಣದಲ್ಲಿ, ನ್ಯಾಯಾಲಯವು ಒಂದು ಬಾರಿಯ ಕ್ರಮವಾಗಿ, ತಾತ್ಕಾಲಿಕವಾಗಿ ನೇಮಕಗೊಂಡ ಆದರೆ 10 ವರ್ಷಗಳಿಗಿಂತ ಹೆಚ್ಚು ಕಾಲ ಸೇವೆಯಲ್ಲಿ ಮುಂದುವರಿದವರನ್ನು ನಾಲ್ಕು ಷರತ್ತುಗಳಿಗೆ ಒಳಪಟ್ಟು ಖಾಯಂಗೊಳಿ ಸಲು ಅನುಮತಿ ನೀಡಿತ್ತು. ಮಂಜೂರಾದ ಹುದ್ದೆಯ ವಿರುದ್ಧ ಕಾಯಂಗೊಳಿಸಬೇಕಾಗಿತ್ತು ಮತ್ತು ಅರ್ಜಿದಾರರು ನ್ಯಾಯಾಲಯಗಳ ಯಾವುದೇ ಮಧ್ಯಂತರ ಆದೇಶವಿಲ್ಲದೆ 10 ವರ್ಷಗಳಿಗಿಂತ ಹೆಚ್ಚು ಕಾಲ ಸೇವೆಯಲ್ಲಿ ಮುಂದುವರಿಯಬೇಕಾಗಿತ್ತು. ಈ ನಿರ್ಧಾರಗಳ ಹಿನ್ನೆಲೆಯಲ್ಲಿ ರಾಜ್ಯ ಸರ್ಕಾರವು ದಿನಾಂಕ 19.07.2002 ಆದೇಶವನ್ನು ಹೊರಡಿಸಿ, ನಿರ್ದೇಶನಗಳನ್ನು ಅನುಷ್ಠಾನಗೊಳಿಸಲು, ಜಿಲ್ಲಾ ಪಂಚಾಯಿತಿಗಳಲ್ಲಿ ದಿನಗೂಲಿ ಕಾರ್ಮಿಕರಾಗಿ ಸೇವೆ ಸಲ್ಲಿಸುತ್ತಿರುವವರಿಗೆ ಮಾತ್ರವಲ್ಲದೆ ಇತರ ಇಲಾಖೆಗಳಲ್ಲಿನವರಿಗೂ ಅನ್ವಯಿಸುತ್ತದೆ. ಈ ಯೋಜನೆಯು ಜಿಲ್ಲಾ ಪಂಚಾಯಿತಿಗಳಲ್ಲಿ ದಿನಗೂಲಿ ಕಾರ್ಮಿಕರಾಗಿ ಸೇವೆ ಸಲ್ಲಿಸುತ್ತಿರುವವರಿಗೆ ಮಾತ್ರವಲ್ಲ, ಇತರ ಇಲಾಖೆಗಳಲ್ಲಿಯೂ ಸೇವೆ ಸಲ್ಲಿಸುತ್ತಿರುವವರಿಗೂ ಅನ್ವಯಿಸುತ್ತದೆ ಎಂದು ಸಲ್ಲಿಸಲಾಯಿತು. ಎಸ್. ನಾಗರಾಜು ಅವರ ಪ್ರಕರಣಕ್ಕೆ ಅನುಸಾರವಾಗಿ ರಾಜ್ಯವು ಪ್ರಾರಂಭಿಸಿದ ಮತ್ತೊಂದು ಯೋಜನೆಯ ಬಗ್ಗೆಯೂ ನ್ಯಾಯಾಲಯಕ್ಕೆ ತಿಳಿಸಲಾಯಿತು, ಇದು ದಿನಗೂಲಿ ಕಾರ್ಮಿಕರನ್ನು ಖಾಯಂಗೊಳಿಸಲು ಯೋಜನೆಯನ್ನು ರೂಪಿಸಲು ಕಾರಣವಾಯಿತು.

ಆದ್ದರಿಂದ ಅದೇ ಇಲಾಖೆಗಳಲ್ಲಿನ ಇದೇ ರೀತಿಯ ಸಂದರ್ಭದ ವ್ಯಕ್ತಿಗಳನ್ನು ಮಂಜೂರಾದ ಹುದ್ದೆಗಳಿಗೆ ವಿರುದ್ಧವಾಗಿ ನೇಮಕ ಮಾಡಲಾಗಿದೆಯೇ ಎಂಬ ಉಲ್ಲೇಖವಿಲ್ಲದೆ ಮೇಲೆ ತಿಳಿಸಿದ ಯೋಜನೆಗಳು, ಸರ್ಕಾರಿ ಆದೇಶಗಳ ಅಡಿಯಲ್ಲಿ ಖಾಯಂಗೊಳಿಸಿದ್ದರೆ, ಅರ್ಜಿದಾರರ ಮನವಿಗಳನ್ನು ಮಂಜೂರಾದ ಹುದ್ದೆಗಳ ವಿರುದ್ಧ ನೇಮಕಗೊಂಡಿಲ್ಲ, ಅವರು ಸೂಕ್ತವಾಗಿ ಅರ್ಹತೆ ಹೊಂದಿಲ್ಲ ಎಂಬ ಕಾರಣ ನೀಡಿ ತಿರಸ್ಕರಿಸಲಾಗುವುದಿಲ್ಲ. ಎಂದು ವಾದಿಸಲಾಯಿತು.

> **ಅರ್ಜಿದಾರರು ಸಮಾನತೆಯ ಆಧಾರದ ಮೇಲೆ ಖಾಯಂಗೊಳಿಸಬೇಕೆಂದು ಕೋರಿದ್ದರು. ಎಚ್.ಎಸ್. ರಘುಪತಿ ಗೌಡ ಪ್ರಕರಣ, ಡಬ್ಲ್ಯೂ.ಪಿ.ನಂ.33541-15 571 / 1998 ಪ್ರಕರಣದಲ್ಲಿ ಸಮನ್ವಯ ಪೀಠದ ತೀರ್ಪು, ಸಂಬಂಧಿತ ವಿಷಯಗಳು, ಸುಪ್ರೀಂ ಕೋರ್ಟ್ ನಿರ್ದೇಶನಗಳನ್ನು ಗಮನದಲ್ಲಿಟ್ಟುಕೊಂಡು ತಮ್ಮ ಪ್ರಕರಣವನ್ನು ಪರಿಗಣಿಸುವಂತೆ ಹೈಕೋರ್ಟ್ ಈ ಹಿಂದೆ ಪ್ರತಿವಾದಿಗಳಿಗೆ ನಿರ್ದೇಶನ ನೀಡಿತ್ತು.**




ಉದಯವಾಹಿನಿ ಚಿತ್ರ

# ಮುಗಿಯದ ರುಡಾ ನಿವೇಶನದಾರರ ಗೋಳು

## ದಶಕವಾದರೂ ಕೈ ಸೇರದ ಕ್ರಯಪತ್ರ, ಹದಿನೈದು ವರ್ಷಗಳ ಹಿಂದೆ ನಿವೇಶನ ಖರೀದಿಸಿದವರಿಗೆ ಇನ್ನೂ ಕ್ರಯಪತ್ರದ ಭಾಗ್ಯ ಸಿಕ್ಕಿಲ್ಲ

• ಉದಯವಾಹಿನಿ, ರಾಮನಗರ

ಇಲ್ಲಿನ ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರದಿಂದ (ರುಡಾ) ಹದಿನೈದು ವರ್ಷಗಳ ಹಿಂದೆ ನಿವೇಶನ ಖರೀದಿಸಿದವರಿಗೆ ಇನ್ನೂ ಕ್ರಯಪತ್ರದ ಭಾಗ್ಯ ಸಿಕ್ಕಿಲ್ಲ. 'ಇಂದಲ್ಲ, ನಾಳೆ ಕ್ರಯಪತ್ರ ಕೈ ಸೇರಲಿದೆ' ಎಂಬ ನಿರೀಕ್ಷೆಯಲ್ಲಿರುವ 1,830 ಖರೀದಿದಾರರಿಗೆ ಇದುವರೆಗೆ ಸಿಹಿ ಸುದ್ದಿ ಸಿಕ್ಕಿಲ್ಲ. ಸ್ವಂತ ಸೂರಿಗಾಗಿ ರಾಮನಗರದ ಜೀಗೇನಹಳ್ಳಿ ಬಡಾವಣೆ, ಅರ್ಚಕರಹಳ್ಳಿ ಹೆಲ್ತ್ ಸಿಟಿ ಹಾಗೂ ಚನ್ನಪಟ್ಟಣದ ಸುಣ್ಣಘಟ್ಟದ ಕಣ್ವ ಬಡಾವಣೆಯಲ್ಲಿ ಪ್ರಾಧಿಕಾರದ ನಿವೇಶನಗಳನ್ನು ಖರೀದಿಸಿದವರು, ನಿವೇಶನವನ್ನು ಮಾರಲೂ ಆಗದ, ಇತ್ತ ಮನೆಯನ್ನೂ ಕಟ್ಟಲಾಗದ ತ್ರಿಶಂಕು ಸ್ಥಿತಿಯಲ್ಲಿದ್ದಾರೆ. ಹಿಂದಿನ ಅಧಿಕಾರಿಗಳು ಮಾಡಿದ ಯಡವಟ್ಟಿಗೆ ನಿತ್ಯ ಶಾಪ ಹಾಕುತ್ತಿದ್ದಾರೆ.

**ನಕ್ಷೆಯೇ ಇಲ್ಲ:** ಹಂಚಿಕೆಯಾಗಿರುವ ನಿವೇಶನಗಳು ಗ್ರಾಮ ಪಂಚಾಯಿತಿ ವ್ಯಾಪ್ತಿಗೆ ಬರುತ್ತವೆ. ಈ ಪೈಕಿ, ಕಣ್ವ ಬಡಾವಣೆ, ಜೀಗೇನಹಳ್ಳಿ ನಿವೇಶನಗಳಿಗೆ ನಕ್ಷೆಯೇ ಇಲ್ಲ. ಅರ್ಚಕರಹಳ್ಳಿ ಜಾಗದ ಮಾಲೀಕತ್ವ ಇಂದಿಗೂ ಮೂಲ ಖಾತೆದಾರರ ಹೆಸರಲ್ಲಿದೆ. ಫಲಾನುಭವಿಗಳ ಪಟ್ಟಿಯನ್ನು ಪ್ರಾಧಿಕಾರದ ಸಮಿತಿಯಲ್ಲಿ ಮಂಡಿಸಿ ಅನುಮೋದನೆ ಪಡೆಯದ ಹಿಂದಿನ ಅಧಿಕಾರಿಗಳು, ಹಂಚಿಕೆಗೆ ಸಂಬಂಧಿಸಿದ ದಾಖಲೆಗಳನ್ನು ಸಹ


ಉದಯವಾಹಿನಿ ಚಿತ್ರ

ನಿರ್ವಹಣೆ ಮಾಡದೆ ನಿರ್ಲಕ್ಷ್ಯದ ಪರಮಾವಧಿ ತೋರಿದ್ದಾರೆ. ಹಿಂದೆ ಇದ್ದ ಅಧಿಕಾರಿಗಳು ಮಾಡಿದ ತಪ್ಪಿಗೆ ನಾವೀಗ ಪರದಾಡುತ್ತಿದ್ದೇವೆ. ರುಡಾ ಕಚೇರಿಗೆ ಅಲೆದು ಸಾಕಾಗಿದೆ. ನಿವೇಶನಕ್ಕೆ ಸಂಬಂಧಿಸಿದ ಮೂಲ ಕಡತಗಳೇ ಇಲ್ಲ ಎಂದು ಅಧಿಕಾರಿಗಳು ಹೇಳುತ್ತಾರೆ. ಇಂದಿಗೂ ಖರೀದಿದಾರರಿಂದ ಕಂದಾಯ ಪಾವತಿಸಿಕೊಳ್ಳುತ್ತಿದ್ದರೂ ಬಡಾವಣೆಯಲ್ಲಿ ಮೂಲಸೌಕರ್ಯ ಅಭಿವೃದ್ಧಿಪಡಿಸಿಲ್ಲ' ಎಂದು ನಿವೇಶನ ಖರೀದಿದಾರ ಪದ್ಮನಾಭ ಅಸಮಾಧಾನ ತೋಡಿಕೊಂಡರು.

ರಾಮಲಿಂಗಾ ರೆಡ್ಡಿ ರಾಮನಗರ ಜಿಲ್ಲಾ ಉಸ್ತುವಾರಿ ಸಚಿವ – ರಾಮಲಿಂಗಾ ರೆಡ್ಡಿ ರಾಮನಗರ ಜಿಲ್ಲಾ ಉಸ್ತುವಾರಿ ಸಚಿವನಿವೇಶನ ಖರೀದಿಸಿರುವವರಿಗೆ ಸರ್ಕಾರದ ಆದೇಶದ ಪ್ರಕಾರ ಕ್ರಯಪತ್ರ ವಿತರಣೆ ಮಾಡಲು ಈಗಾಗಲೇ ಸೂಚನೆ ನೀಡಲಾಗಿದೆ.

### ಕೆಡಿಪಿಯಲ್ಲೂ ಪ್ರತಿಧ್ವನಿಸಿತ್ತು

**ನಿವೇಶನ ಖರೀದಿದಾರರ ವಿಷಯವು ಕಳೆದ ವರ್ಷ ನಡೆದಿದ್ದ ಕೆಡಿಪಿ ಸಭೆಯಲ್ಲೂ ಪ್ರತಿಧ್ವನಿಸಿತ್ತು. ಉಪ ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್, ಉಸ್ತುವಾರಿ ಸಚಿವ ರಾಮಲಿಂಗಾ ರೆಡ್ಡಿ, ಮಾಜಿ ಸಂಸದ ಡಿ.ಕೆ. ಸುರೇಶ್, ಶಾಸಕ ಎಚ್.ಎ. ಇಕ್ಬಾಲ್ ಹುಸೇನ್ ಅವರ ಕಾಳಜಿಯಿಂದಾಗಿ, ಕೆಲ ತೊಡಕುಗಳು ಸರ್ಕಾರದ ಮಟ್ಟದಲ್ಲೇ ನಿವಾರಣೆಯಾಗಿದ್ದವು.ಅದರ ಬೆನ್ನಲ್ಲೇ, ಕ್ರಯಪತ್ರ ಹಂಚಿಕೆಗೆ ಕ್ರಮ ಕೈಗೊಳ್ಳುವಂತೆ ನಗರಾಭಿವೃದ್ಧಿ ಇಲಾಖೆಯು ಕಳೆದ ನವೆಂಬರ್‌ನಲ್ಲಿ ಪ್ರಾಧಿಕಾರಕ್ಕೆ ಪತ್ರ ಬರೆದಿತ್ತು. ಆದರೆ, ಇದುವರೆಗೆ ಹಂಚಿಕೆಗೆ ಕಾಲ ಕೂಡಿ ಬಂದಿಲ್ಲ.**

ಆದರೂ ವಿತರಣೆ ಮಾಡಿಲ್ಲವಾದರೆ ಇದೇ ತಿಂಗಳು ನಡೆಯುವ ಕೆಡಿಪಿ ಸಭೆಯಲ್ಲಿ ಆ ಕುರಿತು ಪರಿಶೀಲನೆ ನಡೆಸಿ ತೊಡಕು ನಿವಾರಿಸಲಾಗುವುದು ಎ.ಬಿ. ಚೇತನ್‌ಕುಮಾರ್ ಅಧ್ಯಕ್ಷ ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರ – ಎ.ಬಿ. ಚೇತನ್‌ಕು

**ಬದುಕಿಗೆ ಒಂದು ಸೂರಿರಲಿ ಎಂದು 20 09ರಲ್ಲಿ ಖರೀದಿಸಿದ ನಿವೇಶನದ 10 ವರ್ಷಗಳ ಗುತ್ತಿಗೆ ಅವಧಿ ಈಗಾಗಲೇ ಪೂರ್ಣಗೊಂಡಿದೆ. ಆದರೆ, ಇದುವರೆಗೆ ನಮಗೆ ಸೇಲ್ ಡೀಡ್ ಮತ್ತು ಖಾತೆ ಆಗಿಲ್ಲ. ಪಂಚಾಯಿತಿ ವ್ಯಾಪ್ತಿಯಲ್ಲಿರುವ ಭೂಮಿ ಪ್ರಾಧಿಕಾರಕ್ಕೆ ವರ್ಗಾವಣೆಯಾಗಿಲ್ಲ. ಅಲ್ಲೊಂದು ಮನೆ ನಿರ್ಮಿಸಿಕೊಳ್ಳೋಣ ಎಂದರೆ ಮೂಲಸೌಕರ್ಯ ಅಭಿವೃದ್ಧಿಪಡಿಸಿಲ್ಲ. ಹೀಗಾಗಿ, ಕಷ್ಟ ಕಾಲದಲ್ಲಿ ನಿವೇಶನ ಮಾರಾಟ ಮಾಡಲಾಗದ ಸ್ಥಿತಿ ಎದುರಾಗಿದೆ' ಎಂದು ಹೇಳಿದರು.**

ಮಾರ್ ಅಧ್ಯಕ್ಷ ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರಪ್ರಾಧಿಕಾರವೇ 3 ಬಡಾವಣೆಗಳಲ್ಲಿ ಮೂಲ ಸೌಕರ್ಯ ಕಲ್ಪಿಸಬೇಕಾದರೆ ನಿವೇಶನದಾರರಿಂದ ಪ್ರತಿ ಚದರ ಅಡಿಗೆ ಅಂದಾಜು 408 ಮೊತ್ತ ಪಡೆಯಬೇಕಾಗುತ್ತದೆ. ಅದು ಕಷ್ಟಕರ. ಹಾಗಾಗಿ ಆರ್ಥಿಕ ನೆರವು ನೀಡುವಂತೆ ಬಿಎಂಆರ್‌ಡಿಎಗೆ ಪತ್ರ ಬರೆಯಲಾಗಿದೆ– ಶಿವನಂಕಾರಿ ಗೌಡ ಆಯುಕ್ತ ರಾಮನಗರ ನಗರಾಭಿವೃದ್ಧಿ ಪ್ರಾಧಿಕಾರನಿವೇಶನ ಖರೀದಿಸಿರುವವರಿಗೆ ಕ್ರಯಪತ್ರ ಹಂಚಿಕೆ ಕುರಿತು ಈಗಾಗಲೇ ಪ್ರಾಧಿಕಾರದಲ್ಲಿ ಸಭೆ ನಡೆದಿದೆ. ಸಂಬಂಧಿಸಿದ ಗ್ರಾಮ ಪಂಚಾಯಿತಿ ಜೊತೆಗೂ ಚರ್ಚಿಸಿ ಆ ನಿಟ್ಟಿನಲ್ಲಿ ಅಗತ್ಯ ಪ್ರಯತ್ನ ಮಾಡಲಾಗುತ್ತಿದೆ

ಹಂಚಿಕೆಗೆ ಎರಡು ಸಲ ಆದೇಶವಾಗಿತ್ತುರುಡಾ ಆಯುಕ್ತರಿಂದಿಡಿದು ಶಾಸಕರು ಸಂಸದರು ಉಸ್ತುವಾರಿ ಸಚಿವರು ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ (ಬಿಎಂಆರ್‌ಡಿಎ) ನಗರಾಭಿವೃದ್ಧಿ ಇಲಾಖೆ ಆಯುಕ್ತರ ಕಚೇರಿ ವರೆಗೆ ನಿವೇಶನದಾರರು ಅಲೆದು ಮನವಿ ಸಲ್ಲಿಸಿ ಸಮಸ್ಯೆ ಬಗೆಹರಿಸುವಂತೆ ಬೇಡಿಕೊಂಡೆವು. ಅದ ರ ಪರಿಣಾಮವಾಗಿ 2022ರಲ್ಲಿ ಇಲಾಖೆಯು ಕ್ರಯ ಪತ್ರ ವಿತರಿಸುವಂತೆ ಆದೇಶಿಸಿತು. ಆಗ ತಾಂತ್ರಿಕ ಕಾರಣಗಳ ನೆಪವೊಡ್ಡಿ ವಿಳಂಬ ಮಾಡಿದರು. ಮತ್ತೆ ಕಚೇರಿಗಳಿಗೆ ಓಡಾಡದಿದಾಗ 2023ರ ನವೆಂಬರ್‌ನಲ್ಲಿ ಮತ್ತೊಂದು ಆದೇಶವಾಯಿತು. ಆಗಲೂ ಕೆಲ ಕಾರಣಗಳಿಂದಾಗಿ ಆಗಲಿಲ್ಲ. ಕಡೆಗೆ ಸರ್ಕಾರದ ಮಟ್ಟದಲ್ಲೇ ಚರ್ಚೆಗೆ ಬಂದು ನಿವೇಶನ ಸಮಸ್ಯೆ ಬಗೆಹರಿಸುವಂತೆ ಸೂಚನೆ ನೀಡಲಾಗಿದೆ. ಅದಾಗಿ ತಿಂಗಳುಗಳಾದರೂ ಕ್ರಯಪತ್ರ ಸಿಗುವ ಸೂಚನೆಗಳು ಕಾಣುತ್ತಿಲ್ಲ ಎಂದು ನಿವೇಶನ ಖರೀದಿದಾರ ಪದ್ಮನಾಭ ಅಳಲು ತೋಡಿಕೊಂಡರು.

# ವೈದ್ಯಕೀಯ ವಿದ್ಯಾರ್ಥಿನಿಯ ಮೇಲೆ ನಡೆದ ಅತ್ಯಾಚಾರ ಖಂಡಿಸಿ ಪ್ರತಿಭಟನೆ

• ಉದಯವಾಹಿನಿ, ಶಿಡ್ಲಘಟ್ಟ

ಪಶ್ಚಿಮಬಂಗಾಳದಲ್ಲಿ ವೈದ್ಯೆ ಡಾ.ಮೌಮಿತಾ ವಿದ್ಯಾರ್ಥಿನಿ ಮೇಲೆ ನಡೆದ ಅತ್ಯಾಚಾರ ಮತ್ತು ಹತ್ಯೆ ಮಾಡಿದ ಆರೋಪಿಗಳನ್ನ ಶೀಘ್ರವೇ ಬಂದಿಸಿ ಗಲ್ಲಿಗೇರಿಸಬೇಕೆಂದು ಗ್ರಾಮಾಂತರ ಮಂಡಲಾಧ್ಯಕ್ಷ ಸೀಕಲ್ ಆನಂದಗೌಡ ಪ್ರತಿಭಟಿಸಿದರು. ನಗರದ ಬಿಜೆಪಿ ಸೇವಾ ಸೌಧದ ಮಯೂರ ವೃತ್ತದಿಂದ ಕೋಟೆ ವೃತ್ತದವರೆಗೂ ಮೇಣದ ದೀಪ ಹಚ್ಚಿ ಮೆರವಣಿಗೆ ನಡೆಸಿ ,ಪೈಶಾಚಿಕ ಕೃತ್ಯವನ್ನು ಖಂಡಿಸಿ ಮಾತನಾಡಿದರು. ಯುವ ವೈದ್ಯೆ ಡಾ.ಮೌಮಿತಾ ಮೇಲೆ ಅತ್ಯಾಚಾರ ಮಾಡಿ ಹತ್ಯೆ ಮಾಡಿರುವ ವ್ಯಕ್ತಿಯ ವಿರುದ್ಧ ಸೂಕ್ತ ಕಾನೂನು ಕ್ರಮ ಜರುಗಿಸಬೇಕು. ಇಂತಹ ಹೇಯ ಕೃತ್ಯ ನಡೆಸಿದವರಿಗೆ ಕಾನೂನಿನ ಮೂಲಕ ಶಿಕ್ಷೆ ವಿಧಿಸಬೇಕು. ಮೃತಳ ಆತ್ಮಕ್ಕೆ ಶಾಂತಿ ಸಿಗಬೇಕು. ಈ ನಿಟ್ಟಿನಲ್ಲಿ ಕೇಂದ್ರ ಹಾಗೂ ರಾಜ್ಯ ಸರ್ಕಾರ ಕಠಿಣ ಕಾನೂನು ಕ್ರಮ ಕೈಗೊಳ್ಳಬೇಕು. ಇತ್ತೀಚಿನ ದಿನಗಳಲ್ಲಿ ಮಹಿಳೆಯರ ಮೇಲೆ ನಡೆಯುತ್ತಿರುವ ಅತ್ಯಾಚಾರಗಳು, ಕೊಲೆಗಳ ಕುರಿತು ತನಿಖೆ ಅಗತ್ಯವಾಗಿದ್ದು ಸರ್ಕಾರ ಕೂಡಲೇ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದು ಗ್ರಾಮಾಂತರ ಮಂಡಲಾಧ್ಯಕ್ಷ ಸೀಕಲ್ ಆನಂದಗೌಡ ಆಗ್ರಹಿಸಿದರು.

ಡಾ. ಸತ್ಯನಾರಾಯಣ ರಾವ್ ಮಾತನಾಡಿ, ಕೊಲ್ಕತ್ತಾದಲ್ಲಿ ನಡೆದ ಘಟನೆ ಇಡೀ ದೇಶವೇ ಮತ್ತು ವಿಶ್ವವನ್ನು ಬೆಚ್ಚಿ ಬೀಳಿಸಿದ್ದು, ವೈದ್ಯರು ಎಂತಹ ಸ್ಥಿತಿಯಲ್ಲಿ



ಉದಯವಾಹಿನಿ ಚಿತ್ರ

ಕೆಲಸ ಮಾಡಬೇಕಾಗಿದೆ ಎಂಬುದನ್ನು ಸಾಕ್ಷೀಕರಿಸಿದೆ. ವೃತ್ತಿಪರರು ಮಾತ್ರವಲ್ಲದೇ, ಆರೋಗ್ಯ ಸೇವೆ ಒದಗಿಸುವ ವೃತ್ತಿಯಲ್ಲಿರುವ ಅನೇಕರನ್ನು ತೀವ್ರ ಆತಂಕಕ್ಕೆ ದೂಡಿದೆ. ಇತರರ ಜೀವ ಉಳಿಸಲು ತಮ್ಮ ಜೀವನವನ್ನು ಮುಡಿಪಾಗಿಟ್ಟಿರುವ ವೈದ್ಯರ ಮೇಲೆ ಇಂತಹ ಕೃತ್ಯ ನಡೆದಿರುವುದು ನೋವುಂಟು ಮಾಡಿದೆ. ಈ ಪ್ರಕರಣ ಕುರಿತು ತನಿಖೆ ಅಗತ್ಯವಾಗಿದ್ದು, ಸರ್ಕಾರ ಕೂಡಲೇ ಅಗತ್ಯ ಕ್ರಮ ಕೈಗೊಳ್ಳಲೇಬೇಕು ಎಂದು ಆಗ್ರಹಿಸಿದರು.

ಜಿಲ್ಲಾ ಸಂಚಾಲಕ ಕನಕಪ್ರಸಾದ್, ನಿಕಟ ಪೂರ್ವ ಅಧ್ಯಕ್ಷ ಸುರೇಂದ್ರ ಗೌಡ, ನಗರ ಮಂಡಲ ಅಧ್ಯಕ್ಷ ನರೇಶ್, ಮಹಿಳಾ ಮೋರ್ಚಾ ಅಧ್ಯಕ್ಷೆ ಚಾತುರ್ಯ, ಎಸ್.ಟಿ. ಮೋರ್ಚಾ ಅಧ್ಯಕ್ಷ ಸೋಮಶೇಖರ್, ಅಲ್ಪಸಂಖ್ಯಾತ ಮೋರ್ಚಾ ಅಧ್ಯಕ್ಷ ಕದೀರ್ ಪಾಷ, ಎಸ್ಸಿ ಮೋರ್ಚಾ ಪ್ರಧಾನ ಕಾರ್ಯದರ್ಶಿ ಆನೂರು ಶಿವಕುಮಾರ್, ಮುಖಂಡರಾದ ಮಳ್ಳೂರಯ್ಯ, ಜೆ.ಎಸ್ ಭರತ್, ಮಧು, ಆನಂದ್, ಗ್ಯಾಸ್ ಭರತ್, ಪುರುಷೋತ್ತಮ್, ಎಂ ಮಂಜುಳಾ, ಕಿಟ್ಟಿ, ಶ್ರೀರಾಮ್ ಮತ್ತಿತರರು ಇದ್ದರು.

# ಪುರಸಭೆ ಗದ್ದುಗೆಗೆ ಪೈಪೋಟಿ

• ಉದಯವಾಹಿನಿ, ಮಳವಳ್ಳಿ

ಒಂದೂವರೆ ವರ್ಷದಿಂದ ಖಾಲಿ ಇದ್ದ ಪಟ್ಟಣದ ಪುರಸಭೆಯ ಎರಡನೇ ಅವಧಿಗೆ ಅಧ್ಯಕ್ಷ, ಉಪಾಧ್ಯಕ್ಷರ ಸ್ಥಾನಕ್ಕೆ ಮೀಸಲಾತಿ ಪ್ರಕಟವಾಗಿದ್ದು, ಪರಿಶಿಷ್ಟ ಜಾತಿಗೆ ಅಧ್ಯಕ್ಷ ಸ್ಥಾನ ಹಾಗೂ ಸಾಮಾನ್ಯ ವರ್ಗಕ್ಕೆ ಉಪಾಧ್ಯಕ್ಷ ಸ್ಥಾನ ನಿಗದಿಯಾಗಿದೆ. ಪುರಸಭೆ ಗದ್ದುಗೆ ಹಿಡಿಯಲು ಪೈಪೋಟಿ ಈಗಲೇ ಶುರುವಾಗಿದೆ.

ಮೊದಲ ಅವಧಿಯಲ್ಲಿ ಸಾಮಾನ್ಯ ಮಹಿಳೆಗೆ ಮೀಸಲಾಗಿದ್ದ ಸ್ಥಾನದಲ್ಲಿ ಜೆಡಿಎಸ್ ಸದಸ್ಯೆ ರಾಧಾ ನಾಗರಾಜು ಅಧ್ಯಕ್ಷರಾಗಿ ಹಾಗೂ ಟಿ.ನಂದಕುಮಾರ್, ಎಂ.ಟಿ. ಪ್ರಶಾಂತ್ ಸಾಮಾನ್ಯ ವರ್ಗದಿಂದ ಉಪಾಧ್ಯಕ್ಷರಾಗಿ ಆಯ್ಕೆಯಾಗಿದ್ದರು. ರಾಜ್ಯದಲ್ಲಿ ಬಿಜೆಪಿ– ಜೆಡಿಎಸ್ ಮೈತ್ರಿ ಆಗುವುದಕ್ಕೂ ಮೊದಲೇ ಪುರಸಭೆಯಲ್ಲಿ ಜೆಡಿಎಸ್‌ಗೆ ಬಿಜೆಪಿ ಬೆಂಬಲ ನೀಡಿತ್ತು. ಎರಡೂವರೆ ವರ್ಷಗಳ ಕಾಲ ಆಡಳಿತ ನಡೆಸಿದ್ದವು. ಒಂದು ವರ್ಷಕ್ಕೆ ಸ್ಥಾಯಿ ಸಮಿತಿ ಅಧ್ಯಕ್ಷರಾಗಿ ಪಕ್ಷೇತರ ಸದಸ್ಯ ಪುಟ್ಟಸ್ವಾಮಿ ಆಯ್ಕೆಯಾಗಿದ್ದರು. ಆದರೆ, ಎರಡನೇ ಅವಧಿಗೆ ಸದಸ್ಯರಲ್ಲಿ ಒಮ್ಮತ ಮೂಡದ ಹಿನ್ನೆಲೆಯಲ್ಲಿ ಸ್ಥಾಯಿ ಸಮಿತಿ ಅಧ್ಯಕ್ಷ ಸ್ಥಾನ ಖಾಲಿಯಾಗಿಯೇ ಇತ್ತು. ಈಗ ಅಧಿಕೃತವಾಗಿಯೇ ಬಿಜೆಪಿ–ಜೆಡಿಎಸ್ ಮೈತ್ರಿ ಮಾಡಿಕೊಂಡಿರುವುದರಿಂದ ಇವರೇ ಪಕ್ಷೇತರ ಸದಸ್ಯರ ಬೆಂಬಲದಿಂದ ಅಧಿಕಾರಕ್ಕೇರುವರೇ ಎನ್ನುವುದು ಕುತೂಹಲ ಮೂಡಿಸಿದೆ.2023ರ ವಿಧಾನಸಭಾ ಚುನಾವಣೆ ವೇಳೆ ಜೆಡಿಎಸ್‌ನ ಒಂದೆರಡು ಸದಸ್ಯರು ಪಕ್ಷದ ಚಟುವಟಿಕೆಯಿಂದ ದೂರ ಉಳಿದಿದ್ದರು. 7 ಮಂದಿ ಪಕ್ಷೇತರರಲ್ಲಿ ಕೆಲ ಸದಸ್ಯರು ಕಾಂಗ್ರೆಸ್ ಪರ ಇನ್ನೂ ಕೆಲವರು ಜೆಡಿಎಸ್‌ನೊಂದಿಗೆ ಗುರುತಿಸಿಕೊಂಡಿರುವುದು ಗುಟ್ಟಾಗಿ ಉಳಿದಿಲ್ಲ. 2023ರ ವಿಧಾನಸಭಾ ಚುನಾವಣೆಯಲ್ಲಿ ಪಿ.ಎಂ. ನರೇಂದ್ರಸ್ವಾಮಿ ಗೆದ್ದಿರುವುದರಿಂದ ಕೆಲ ಜೆಡಿಎಸ್ ಅಸಮಾಧಾನಿತರು ಹಾಗೂ ಪಕ್ಷೇತರ ಸದಸ್ಯರನ್ನು ಸೆಳೆದು ಪುರಸಭೆಯಲ್ಲಿ ಕಾಂಗ್ರೆಸ್‌ಗೆ ಅಧಿಕಾರ ದಕ್ಕುವಂತೆ ಮಾಡುವವರೇ ಎನ್ನುವುದನ್ನು ಕಾದು ನೋಡಬೇಕಿದೆ.

ಪರಿಶಿಷ್ಟ ಜಾತಿಗೆ ಸೇರಿದ ಕಾಂಗ್ರೆಸ್‌ನ ಹಿರಿಯ ಸದಸ್ಯ ಎಂ.ಆರ್. ರಾಜಶೇಖರ್, ಜೆಡಿಎಸ್ ಸಿದ್ದರಾಜು, ಕುಮಾರ್, ಪಕ್ಷೇತರ ಸದಸ್ಯರಾದ ಪುಟ್ಟಸ್ವಾಮಿ, ಪ್ರಮೀಳಾ, ಸವಿತಾ, ಅಧ್ಯಕ್ಷ ಸ್ಥಾನದ ಮೇಲೆ ಕಣ್ಣಿಟ್ಟಿದ್ದು, ಪಕ್ಷೇತರ ಸದಸ್ಯ ಪುಟ್ಟಸ್ವಾಮಿ ಸಹ ಪ್ರಬಲ ಅಕಾಂಕ್ಷಿಯಾಗಿದ್ದಾರೆ. ಉಪಾಧ್ಯಕ್ಷ ಸ್ಥಾನಕ್ಕೆ ಮೂರು ಪಕ್ಷಗಳು, ಪಕ್ಷೇತರ ಸದಸ್ಯರು ಅಕಾಂಕ್ಷಿಗಳಾಗಿದ್ದಾರೆ. ಪಕ್ಷೇತರರ ಸಹಕಾರದಿಂದ ಜೆಡಿಎಸ್ ಬಿಜೆಪಿ ಮೈತ್ರಿ ಗಟ್ಟಿಕೊಂಡು ಪುರಸಭೆಯನ್ನು ಮತ್ತೆ ಜೆಡಿಎಸ್ ಹಿಡಿತಕ್ಕೆ ಪಡೆಯಲು ಮಾಜಿ ಶಾಸಕ ಕೆ.ಅನ್ನದಾನಿ ಪ್ರಯತ್ನ ನಡೆಸುವವರೇ ಎನ್ನುವ ಪ್ರಶ್ನೆ ಮೂಡಿದೆ. ಕ್ಷೇತ್ರದಲ್ಲಿ ಕಾಂಗ್ರೆಸ್ ಶಾಸಕರು ಇರುವುದರಿಂದ ಸಹಜವಾಗಿಯೇ ಪುರಸಭೆಯಲ್ಲಿ ನಮ್ಮದೇ ಪಕ್ಷದ ಸದಸ್ಯರು ಅಧ್ಯಕ್ಷರಾಗಿರಬೇಕು ಎಂದು ಬಯಸಿದರೆ ಅಧ್ಯಕ್ಷ ಸ್ಥಾನ ಯಾವ ಪಕ್ಷದ ಪಾಲಾಗಲಿದೆ ಎನ್ನುವ ಕುತೂಹಲ ಮೂಡಿದೆ.

## ಸೂಸೈಡ್ ಕೇಸ್ : ಸಾಲಬಾಧೆಯಿಂದ ದಂಪತಿ ಆತ್ಮಹತ್ಯೆಗೆ ಶರಣು

• ಉದಯವಾಹಿನಿ, ಚಾಮರಾಜನಗರ

ರಾಜ್ಯದಲ್ಲಿ ಮತ್ತೊಂದು ಸೂಸೈಡ್ ಪ್ರಕರಣ ದಾಖಲಾಗಿದ್ದು, ಸಾಲಬಾಧೆಯಿಂದ ಬೇಸತ್ತು ದಂಪತಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ಚಾಮರಾಜನಗರ ಜಿಲ್ಲೆಯಲ್ಲಿ ನಡೆದಿದೆ.ಚಾಮರಾಜನಗರ ಜಿಲ್ಲೆಯ ಕೊಳ್ಳೇಗಾಲದ ನಾರಾಯಣಸ್ವಾಮಿ ಬೀದಿಯಲ್ಲಿ ದಂಪತಿ ಆತ್ಮಹತ್ಯೆಗೆ ಶರಣಾಗಿದ್ದಾರೆ. ನಾಗೇಶ್ (56), ಪತ್ನಿ ಸತ್ಯಲಕ್ಷ್ಮೀ (46) ನೇಣಿಗೆ ಶರಣಾದ ದಂಪತಿಗಳು.

ಕಳೆದ ಆರು ತಿಂಗಳಿನಿಂದ ಮೈಸೂರಿನಲ್ಲಿ ದಂಪತಿ ವಾಸವಾಗಿತ್ತು. ಶನಿವಾರ ರಾತ್ರಿ ಕೊಳ್ಳೇಗಾಲಕ್ಕೆ ಬಂದು ನೇಣಿಗೆ ಶರಣಾಗಿದ್ದಾರೆ. ಕೊಳ್ಳೆ ಗಾಲ ಟೌನ್ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ.

# ಗ್ರಾಪಂ ಸದಸ್ಯರು, ಮುಖಂಡರು, ರೈತರು ಗ್ರಾಪಂಗೆ ಮುತ್ತಿಗೆ

## ಎನ್ ಜಿ ಹುಲ್ಕೂರು ಕೆರೆಯಲ್ಲಿ ಮಣ್ಣು ತೆಗೆಯದಂತೆ ಕಾರಿಡಾರ್ ರಸ್ತೆಯ ಗುತ್ತಿಗೆದಾರರ ವಿರುದ್ಧ ಆಕ್ರೋಶ

• ಉದಯವಾಹಿನಿ, ಬೇತಮಂಗಲ

ಎನ್ ಜಿ ಹುಲ್ಕೂರು ಗ್ರಾಮದ ಕೆರೆಯಲ್ಲಿ ಕಾರಿಡಾರ್ ರಸ್ತೆಯ ಗುತ್ತಿಗೆದಾರರು ಯಾವುದೇ ಕಾರಣಕ್ಕೂ ಮಣ್ಣು ತೆಗೆಯುವುದಕ್ಕೆ ಬಿಡುವುದಿಲ್ಲ ಎಂದು ಸ್ಥಳೀಯ ಗ್ರಾಮ ಪಂಚಾಯಿತಿ ಸದಸ್ಯರು ಹಾಗೂ ರೈತರು ಆಕ್ರೋಶ ವ್ಯಕ್ತಪಡಿಸಿದರು.

ಎನ್ ಜಿ ಹುಲ್ಕೂರು ಗ್ರಾಮ ಪಂಚಾಯಿತಿ ಕಛೇರಿಯ ಮುಂಭಾಗದಲ್ಲಿ ಪ್ರತಿಭಟನೆ ನಡೆಸಿ ಯಾವುದೇ ಕಾರಣಕ್ಕೂ ಗ್ರಾಮ ಪಂಚಾಯಿತಿ ಅಧಿಕಾರಿಗಳು ಮಣ್ಣು ತೆಗೆಯುವುದಕ್ಕೆ ಅನುಮತಿ ನೀಡಬಾರದೆಂದು ಆಗ್ರಹಿಸಿದ್ದಾರೆ.

ಗ್ರಾಮ ಪಂಚಾಯಿತಿ ಮಾಜಿ ಅಧ್ಯಕ್ಷ ಸುನೀಲ್ ಕುಮಾರ್ ಮಾತನಾಡಿ. ಎನ್ ಜಿ ಹುಲ್ಕೂರು ಗ್ರಾಮ ಪಂಚಾಯಿತಿ ವ್ಯಾಪ್ತಿಯ ಸುಮಾರು 09 ಕೆರೆಗಳಲ್ಲಿ ಸುಮಾರು 20-30ಅಡಿಗಳ ವರೆಗೂ ಮಣ್ಣು ತೆಗೆದಿದ್ದಾರೆ, ಅಂದರೆ ಎನ್ ಜಿ ಹುಲ್ಕೂರು ಗ್ರಾಮದ ಕೆರೆಯೂ ರಸ್ತೆಯ ಪಕ್ಕದಲ್ಲಿಯೇ ಇದ್ದು, ಕೆರೆಯಲ್ಲಿಯೇ ಎರಡು ಮೂರು ಗ್ರಾಮಗಳಲ್ಲಿ ರಸ್ತೆಯಾಗಿದೆ, ಕಾರಿಡಾರ್ ರಸ್ತೆಯ ಗುತ್ತಿಗೆದಾರರು ಮಣ್ಣು ತೆಗೆಯುವುದರಿಂದ ನೂರಾರು ಮಂದಿ ಅಪಾಯಕ್ಕೆ ಸಿಲುಕುವುದರಲ್ಲಿ


ಉದಯವಾಹಿನಿ ಚಿತ್ರ

ಯಾವುದೇ ಅನುಮಾನವಿಲ್ಲ ಎಂದರು.

ಕಾರಿಡಾರ್ ರಸ್ತೆಯ ಗುತ್ತಿಗೆದಾರರು ಈಗಾಗಲೇ ಅಧಿಕಾರಿಗಳನ್ನು ದಿಕ್ಕು ತಪ್ಪಿಸಿ ಕೆರೆಯಲ್ಲಿ ಮಣ್ಣು ತೆಗೆಯಲು ಮುಂದಾಗಿದ್ದಾರೆ, ಮಣ್ಣು ತೆಗೆಯುವುದನ್ನು ತಡೆಯಲು ಮುಂದಾದ ರೈತರು ಹಾಗೂ ಸ್ಥಳೀಯ ಮುಖಂಡರು ವಿರುದ್ಧ ಪೊಲೀಸ್ ಠಾಣೆಗೆ ದೂರು ನೀಡಿ ದಬ್ಬಾಳಿಕೆ ನಡೆಸುತ್ತಿದ್ದಾರೆ, ಇಂತಹಾ ದಬ್ಬಾಳಿಕೆಗೆ ನಾವು ಎದುರಾಗುವುದಿಲ್ಲ ತಕ್ಷಣ ದಿಂದಲೇ ಮಣ್ಣು ತೆಗೆಯದಂತೆ ಅಧಿಕಾರಿಗಳು ನಿಲ್ಲಿಸಬೇಕು, ಮಣ್ಣು ತೆಗೆದರೆ ಉಗ್ರ ಹೋರಾಟಕ್ಕೂ ಸಿದ್ಧರಿದ್ದೇವೆ ಎಂದು ಎಚ್ಚರಿಕೆ ನೀಡಿದರು.

ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ ವೆಂಕಟರಾಮ್ ರೆಡ್ಡಿ ಮನವಿ ಸ್ವೀಕರಿಸಿ ತಕ್ಷಣ ಮಣ್ಣು ತೆಗೆಯದಂತೆ ಕ್ರಮ ಕೈಗೊಳ್ಳುತ್ತೇವೆ, ಉನ್ನತ ಮಟ್ಟದ ಅಧಿಕಾರಿಗಳ ಗಮನಕ್ಕೆ ತರುವುದಾಗಿ ಭರವಸೆ ನೀಡಿದ, ಹಿನ್ನೆಲೆ ಪ್ರತಿಭಟನೆಯನ್ನು ಕೈಬಿಡಲಾಯಿತು.

ಪ್ರತಿಭಟನೆಯಲ್ಲಿ ಗ್ರಾಮ ಪಂಚಾಯಿತಿ ಸದಸ್ಯರು, ಸ್ಥಳೀಯ ಮುಖಂಡರು ಹಾಗೂ ರೈತರು ಭಾಗವಹಿಸಿದ್ದರು.

# ನಕಲಿ ವೈದ್ಯ ವೆಂಕಟಪ್ಪನಿಗೆ ಎಚ್ಚರಿಕೆ ನೀಡಿದ ಆರೋಗ್ಯಾಧಿಕಾರಿ

• ಉದಯವಾಹಿನಿ, ಶಿಡ್ಲಘಟ್ಟ

ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಡಿ ಗ್ರೂಪ್ ನೌಕರರಾಗಿ ಸೇವೆ ಸಲ್ಲಿಸಿದ ವ್ಯಕ್ತಿಯೊಬ್ಬ ನಿವೃತ್ತಿ ಬಳಿಕ ತಾನು ವೈದ್ಯನೆಂದು ಹೇಳಿಕೊಂಡು ಕ್ಲಿನಿಕ್ ತೆರೆದು ಸಾರ್ವಜನಿಕರಿಗೆ ಚಿಕಿತ್ಸೆ ನೀಡುತ್ತಿದ್ದ ಪ್ರಕರಣವನ್ನು ತಾಲ್ಲೂಕಿನ ಆರೋಗ್ಯ ಇಲಾಖೆ ತಂಡ ಭೇದಿಸಿದೆ.

ಆರೋಗ್ಯ ಇಲಾಖೆ ಅಧಿಕಾರಿಗಳ ಕೈಗೆ ಸಿಕ್ಕಿಬಿದ್ದ ನಕಲಿ ವೈದ್ಯ ಹಾಗೂ ನಿವೃತ್ತ ಡಿ ಗ್ರೂಪ್ ನೌಕರನನ್ನು ವೆಂಕಟಪ್ಪ ಎಂದು ಗುರ್ತಿಸಲಾಗಿದೆ. ತಾಲ್ಲೂಕಿನಲ್ಲಿ ನಕಲಿ ವೈದ್ಯರ ಹಾವಳಿ ಹೆಚ್ಚಾಗಿರುವ ಹಿನ್ನೆಲೆಯಲ್ಲಿ ತಾಲ್ಲೂಕು ಆರೋಗ್ಯಾಧಿಕಾರಿ ಡಾ. ವೆಂಕಟೇಶಮೂರ್ತಿ ನೇತೃತ್ವದ ತಂಡ ಕಾರ್ಯಾಚರಣೆ ನಡೆಸಿದಾಗ ತಾಲ್ಲೂಕಿನ ದಿಬ್ಬೂರಹಳ್ಳಿಯಲ್ಲಿ ಬಾಡಿಗೆ ಕಟ್ಟಡವನ್ನು ಪಡೆದು ಚಿಕಿತ್ಸೆ ನೀಡುತ್ತಿರುವುದು ಕಂಡು ಬಂದಿದೆ. ತಾಲ್ಲೂಕಿನ ಸಾದಲಿ ಗ್ರಾಮದಲ್ಲಿ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಡಿ ಗ್ರೂಪ್ ನೌಕರರಾಗಿ ಕೆಲಸ ಮಾಡುತ್ತಿದ್ದ ವೆಂಕಟಪ್ಪ ನಿವೃತ್ತಿ ಹೊಂದಿದ ನಂತರ ಸಾದಲಿಯಲ್ಲಿ ನಕಲಿ ಕ್ಲಿನಿಕ್ ತೆರೆದಿದ್ದ ಬಳಿಕ ಅಲ್ಲಿಂದ ದಿಬ್ಬೂರಹಳ್ಳಿಗೆ ಸ್ಥಳಾಂತರ



ಉದಯವಾಹಿನಿ ಚಿತ್ರ

ಮಾಡಿ ನಕಲಿ ಕ್ಲಿನಿಕ್ ತೆರೆದು ಸುತ್ತಮುತ್ತಲಿನ ಗ್ರಾಮಸ್ಥರಿಗೆ ತಾನು ವೈದ್ಯನೆಂದು ಹೇಳಿಕೊಂಡು ಕ್ಲಿನಿಕ್‌ಗೆ ಬರುವ ಸಾರ್ವಜನಿಕರಿಗೆ ಅದರಲ್ಲೂ ಮಕ್ಕಳಿಗೆ ಮಹಿಳೆಯರಿಗೆ, ಹಿರಿಯ ನಾಗರಿಕರಿಗೆ ವೆಂಕಟಪ್ಪ ಚಿಕಿತ್ಸೆ ನೀಡಿ ಮಾತ್ರೆ, ಚುಚ್ಚುಮದ್ದು ನೀಡುತ್ತಿದ್ದನೆಂದು ಆರೋಗ್ಯಾಧಿಕಾರಿಗಳ ದಾಳಿ ವೇಳೆ ಕಂಡು ಬಂದಿದೆ.

ಕಾರ್ಯಾಚರಣೆ ವೇಳೆ ಸ್ಥಳೀಯ ಪ್ರಾಥಮಿಕ ಆರೋಗ್ಯ ಕೇಂದ್ರದ ವೈದ್ಯರಾದ ಡಾ. ಯಶ್ವಂತ ಪ್ರಸಾದ್, ಆರೋಗ್ಯ ನಿರೀಕ್ಷಕ ದೇವ ರಾಜ್ ಸೇರಿದಂತೆ ಮತ್ತಿತರರು ಇದ್ದರು. ಈ ವೇಳೆ 20 ಕ್ಕೂ ಹೆಚ್ಚು ಸಾರ್ವಜನಿಕರು ಚಿಕಿತ್ಸೆ ಪಡೆಯಲು ನಕಲಿ ಕ್ಲಿನಿಕ್‌ನಲ್ಲಿ ಇದ್ದರೆಂದು ಆರೋಗ್ಯಾಧಿಕಾರಿಗಳು ತಿಳಿಸಿದ್ದಾರೆ.

### ನಕಲಿ ವೈದ್ಯನಿಗೆ ಎಚ್ಚರಿಕೆ

**ಇನ್ನೂ ಡಿ ಗ್ರೂಪ್ ನೌಕರ ಯಾವುದೇ ನಾಮಫಲಕ ಇಲ್ಲದೇ ಕಾನೂನು ಬಾಹಿರವಾಗಿ ಕ್ಲಿನಿಕ್ ತೆರೆದು ಸಾರ್ವಜನಿಕರಿಗೆ ಚಿಕಿತ್ಸೆ ನೀಡುತ್ತಿರುವ ವೆಂಕಟಪ್ಪ ವಿರುದ್ದ ತಾಲ್ಲೂಕಿನ ಆರೋಗ್ಯಾಧಿಕಾರಿಗಳು ಈ ಹಿಂದೆಯೂ ಕ್ಲಿನಿಕ್ ಗೆ ಬೀಗ ಜಡಿದು ಎಚ್ಚರಿಕೆ ನೀಡಿದ್ದರು. ಈ ಭಾರಿಯೂ ಯಾವುದೇ ಕಾನೂನು ಕ್ರಮ ಕೈಗೊಳ್ಳದೇ, ಗೌರವಯುತವಾಗಿ ಕಳುಹಿಸಿಕೊಟ್ಟಿರುವುದು ಹಲವು ಅನುಮಾನಗಳಿಗೆ ಕಾರಣವಾಗಿದೆ. ಕ್ಲಿನಿಕ್‌ಗೆ ಬೀಗ ಜಡಿದಿರುವ ಅಧಿಕಾರಿಗಳು ಮತ್ತೆ ಇದೇ ರೀತಿ ಮುಂದುವರೆಸಿದರೆ ಕಾನೂನು ಕ್ರಮದ ಎಚ್ಚರಿಕೆ ಕೊಟ್ಟು ಕಳುಹಿಸಿದ್ದಾರೆ.**

# 15 ಕೋಟಿ ಅನುದಾನ ಕಾಮಗಾರಿಗಳ ಪಟ್ಟಿ ಕೊಡಿ

• ಉದಯವಾಹಿನಿ, ಕೋಲಾರ

ವಿಧಾನಸಭಾ ಕ್ಷೇತ್ರದ ರಸ್ತೆಗಳ ಅಭಿವೃದ್ಧಿಗೆ 15 ಕೋಟಿ ಅನುದಾನ ಬಿಡುಗಡೆಯಾಗಿದ್ದು ಗುಣಮಟ್ಟದ ಕಾಮಗಾರಿಗಳನ್ನು ಕೈಗೊಳ್ಳುವಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಕಾಮಗಾರಿಗಳ ಪಟ್ಟಿಯನ್ನು ಕೂಡಲೇ ಕೊಡುವಂತೆ ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರ ರಾಮಮೂರ್ತಿ ಅವರಿಗೆ ಶಾಸಕ ಕೊತ್ತೂರು ಮಂಜುನಾಥ್ ಸೂಚನೆ ನೀಡಿದರು.

ನಗರದ ಲೋಕೋಪಯೋಗಿ ಇಲಾಖೆಯ ಕಚೇರಿಯಲ್ಲಿ ಸಭೆಯಲ್ಲಿ ಮಾತನಾಡಿದ ಅವರು ಮಳೆಯಿಂದ ಗ್ರಾಮೀಣ ಪ್ರದೇಶಗಳಲ್ಲಿನ ಮುಖ್ಯರಸ್ತೆಗಳು ಹಾಳಾಗಿದ್ದು ಕೂಡಲೇ ರಸ್ತೆಗಳ ದುರಸ್ತಿ ಕಾರ್ಯ ಆರಂಭಿಸಲು ಕ್ರಿಯಾ ಯೋಜನೆ ರೂಪಿಸಬೇಕು ಸಾರ್ವಜನಿಕರ ಸಂಚಾರಕ್ಕೆ ಅನುಕೂಲ ಮಾಡಬೇಕು ಮುಂದೆ ಬಾಕಿ ಉಳಿದಿರುವ ರಸ್ತೆಗಳನ್ನು ಹಂತಹಂತವಾಗಿ ಪೂರ್ಣಗೊಳಿಸಬೇಕು ಅದಕ್ಕೆ ಅಗತ್ಯ ಕ್ರಮಗಳನ್ನು ಕೈಗೊಳ್ಳಬೇಕು ಎಂದು ಸೂಚಿಸಿದರು.

ಮುಂದಿನ ದಿನಗಳಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಬೈರತಿ ಸುರೇಶ್ ಅವರು ರಸ್ತೆಗಳ ಅಭಿವೃದ್ಧಿಗೆ ಗುದ್ದಲಿಪೂಜೆಗೆ ಬರಲಿದ್ದಾರೆ ಗ್ರಾಮೀಣ ಪ್ರದೇಶದ ಅಭಿವೃದ್ಧಿ ಯಾಗಿಲ್ಲದ ಮತ್ತು ವಾಹನ, ಸಾರ್ವಜನಿಕ ಸಂಚಾರಕ್ಕೆ ಯೋಗ್ಯವಲ್ಲದ


ಉದಯವಾಹಿನಿ ಚಿತ್ರ

ರಸ್ತೆಗಳ ಬಗ್ಗೆ ಮಾಹಿತಿ ನೀಡಬೇಕು ಶೀಘ್ರದಲ್ಲೇ ಹಂತ ಹಂತವಾಗಿ ಅಭಿವೃದ್ಧಿಗೆ ಚಾಲನೆ ನೀಡಲಾಗುವುದು

ಕ್ಷೇತ್ರದ ರಸ್ತೆಗಳ ಅಭಿವೃದ್ಧಿಗೆ ಹೆಚ್ಚು ಅನುದಾನ ನೀಡುವಂತೆ ಸರ್ಕಾರಕ್ಕೆ ಒತ್ತಡ ತಂದಿದ್ದೇನೆ ಕೊಡಲಿಕ್ಕೂ ಸರಕಾರ ಬದ್ದವಾಗಿದೆ ರಸ್ತೆ ಸೇರಿದಂತೆ ವಿವಿಧ ಗ್ರಾಮಗಳಲ್ಲಿ ಕಾಂಕ್ರಿಟ್ ರಸ್ತೆಗಳ ನಿರ್ಮಾಣಕ್ಕೆ ಭೂಮಿ ಪೂಜೆ ನಡೆಸಲಾಯಿತು ಕ್ಷೇತ್ರದ ಅಭಿವೃದ್ಧಿಗೆ ಮತ್ತಷ್ಟು ಶ್ರಮಿಸಲಾಗುವುದು ಎಂದರು

ಈ ಸಂದರ್ಭದಲ್ಲಿ ಎಂಎಲ್ಸಿ ಎಂ.ಎಲ್ ಅನಿಲ್ ಕುಮಾರ್, ಎಇಇ ಮಂಜುನಾಥ್ ಸೇರಿದಂತೆ ಅಧಿಕಾರಿಗಳು, ಸೇರಿದಂತೆ ಮುಖಂಡರಾದ ಸೀಸಂದ್ರ, ಗೋಪಾಲಗೌಡ, ಮೈಲಾಂಡಹಳ್ಳಿ ಮುರಳಿ, ಛತ್ರಕೋಡಿಹಳ್ಳಿ ಮಂಜುನಾಥ್, ಖಾದ್ರಿಪುರ ಬಾಬು, ಚಂಜಿಮಲೆ ಮುನೇಶ್, ಮೋಹನ್, ಮುಂತಾದವರು ಇದ್ದರು

# ಸಿದ್ದರಾಮಯ್ಯ ರಾಜೀನಾಮೆಗೆ ಅಹಿಂದ ಆಗ್ರಹ

## ಸರ್ಕಾರ ದಲಿತರ ಹೋರಾಟ, ವಿರೋಧ ಹತ್ತಿಕ್ಕಲು ದಲಿತ ಸಮುದಾಯದ ಹಿರಿಯ ಮುಖಂಡರನ್ನು ರಕ್ಷಣೆಗೆ ನಿಲ್ಲಿಸಿಕೊಂಡಿದೆ

• ಉದಯವಾಹಿನಿ, ತುಮಕೂರು

ಮುಖ್ಯಮಂತ್ರಿ ಸಿದ್ದರಾಮಯ್ಯ ನಯವಂಚಕರು, ತಮ್ಮನ್ನು ಅಧಿಕಾರದಲ್ಲಿ ಕೂರಿಸಿದ ದಲಿತರ ಬೆನ್ನಿಗೆ ಚೂರಿ ಹಾಕಿದ್ದಾರೆ. ದಲಿತ ಸಮುದಾಯದ ಶಾಪ ತಟ್ಟಿದ್ದು, ಮುಡಾ ಹಗರಣದ ಹೊಣೆಹೊತ್ತು ಕೂಡಲೇ ರಾಜೀನಾಮೆ ಕೊಡಬೇಕು ಎಂದು ಅಹಿಂದ ಸಂಘಟನೆಗಳ ಒಕ್ಕೂಟದ ರಾಜ್ಯ ಸಂಚಾಲಕ ಭಾಸ್ಕರ್ ಪ್ರಸಾದ್ ಇಲ್ಲಿ ಶನಿವಾರ ಒತ್ತಾಯಿಸಿದರು. ಕಾಂಗ್ರೆಸ್ ಸರ್ಕಾರ ಪರಿಶಿಷ್ಟ ಸಮು ದಾಯಗಳಿಗೆ ಮೋಸ ಮಾಡುತ್ತಿದೆ. ಕಳೆದ ಎರಡು ವರ್ಷದಲ್ಲಿ 26 ಸಾವಿರ ಕೋಟಿ ಎಸ್‌ಸಿಎಸ್‌ಪಿ, ಟಿಎಸ್‌ಪಿ ಹಣವನ್ನು ಗ್ಯಾರಂಟಿ ಯೋಜನೆಗಳಿಗೆ ಬಳಸಲಾಗಿದೆ. ಸರ್ಕಾರ ದಲಿತರ ಹೋರಾಟ, ವಿರೋಧ ಹತ್ತಿಕ್ಕಲು ದಲಿತ ಸಮುದಾಯದ ಹಿರಿಯ ಮುಖಂಡರನ್ನು ರಕ್ಷಣೆಗೆ ನಿಲ್ಲಿಸಿಕೊಂಡಿದೆ' ಎಂದು ಸುದ್ದಿಗೋಷ್ಠಿಯಲ್ಲಿ ಅಸಮಾಧಾನ ವ್ಯಕ್ತಪಡಿಸಿದರು.

ಪ್ರಬುದ್ಧ ಯೋಜನೆ ನಿಲ್ಲಿಸಿ ಭವಿಷ್ಯಕ್ಕೆ ಕಲ್ಲು ಹಾಕಿದ್ದಾರೆ' ಎಂದು ಪರಿಶಿಷ್ಟ ಸಮುದಾಯದ ಯುವತಿ ಹಾಕಿದ ಕಣ್ಣೀರಿನ ಶಾಪ ಸಿದ್ದರಾಮಯ್ಯ ಅವರಿಗೆ ತಟ್ಟಿದೆ. ಈಗಿನ ಸರ್ಕಾರದಲ್ಲಿ ದಲಿತರ ಅಭಿವೃದ್ಧಿಗೆ ಎಷ್ಟು ಹಣ ಮೀಸಲಿಟ್ಟಿದ್ದರು. ಅದರಲ್ಲಿ ಖರ್ಚು ಮಾಡಿದ್ದೆಷ್ಟು ಎಂಬುವುದರ ಕುರಿತು ಶ್ವೇತಪತ್ರ ಹೊರಡಿಸಲಿ ಎಂದು ಆಗ್ರಹಿಸಿದರು.ಒಕ್ಕೂಟದ ಸಂಚಾಲಕ ಪ್ರೊ.ಎ.ಹರಿರಾಂ, 'ಬಿಜೆಪಿಯರನ್ನು ದಲಿತ ವಿರೋಧಿಗಳು, ಕೋಮುವಾದಿಗಳು ಎಂದು ಟೀಕಿಸಿದ್ದೆವು. ಚುನಾವಣೆಯಲ್ಲಿ ಅವರನ್ನು ಮನೆಗೆ ಕಳುಹಿಸಲಾಯಿತು. ಎಲ್ಲವನ್ನು ಸರಿಪಡಿಸಲು ಸೂಕ್ತವಾದ ನಾಯಕತ್ವ ಬೇಕು ಎಂದು ಒಂದು ವರ್ಷದ ಕಾಲ ದಲಿತ, ಹಿಂದುಳಿದ ಸಂಘಟನೆಗಳು ಕಾಂಗ್ರೆಸ್ ಅಧಿಕಾರಕ್ಕೆ ಬರಲು ಶ್ರಮಿಸಿವೆ. ಕಾಂಗ್ರೆಸ್ ಅಧಿಕಾರ ಹಿಡಿದ ನಂತರ ಪರಿಶಿಷ್ಟರ ಯೋಜನೆಗಳಿಗೆ ಕತ್ತರಿ


ಉದಯವಾಹಿನಿ ಚಿತ್ರ

**'ಅಹಿಂದ' ಸಂಘಟನೆಗಳ ಒಕ್ಕೂಟದಿಂದ ಆ. 28ರಂದು ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ 'ಕಾಂಗ್ರೆಸ್ ಹಠಾವೋ ದಲಿತ್ ಬಚಾವೋ' ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ. ಪರಿಶಿಷ್ಟರ ರಕ್ಷಣೆ ನಮ್ಮ ಹಕ್ಕು ಕೇಳಲು ಪ್ರತಿಭಟನೆ ನಡೆಯಲಿದೆ. ನಮ್ಮ ಪಾಲಿನ ಹಣದಿಂದ ಬೇರೆಯವರ ಹೊಟ್ಟೆ ತುಂಬುತ್ತಿದೆ. ಪ್ರತಿ ವರ್ಷ ಸಾವಿರಾರು ಕೋಟಿ ಮೀಸಲಿಟ್ಟರೂ ಸಮುದಾಯಗಳ ಅಭಿವೃದ್ಧಿ ಸಾಧ್ಯವಾಗುತ್ತಿಲ್ಲ. ಎಲ್ಲಾ ಅಂಶಗಳನ್ನು ಮುಂದಿಟ್ಟುಕೊಂಡು ಹೋರಾಟ ರೂಪಿಸಲಾಗುವುದು ಎಂದು ಒಕ್ಕೂಟ ತಿಳಿಸಿದೆ.**

ಹಾಕುತ್ತಿದೆ' ಎಂದು ಆರೋಪಿಸಿದರು.

ದಲಿತ ವಿದ್ಯಾರ್ಥಿಗಳಿಗೆ ಕೊಡುತ್ತಿದ್ದ ವಿದ್ಯಾರ್ಥಿ ವೇತನ ನಿಲ್ಲಿಸಿದರು. ವಾಲ್ಮೀಕಿ ನಿಗಮದ ನೂರಾರು ಕೋಟಿ ಹಣ ಪಿಕ್ ಪಾಕೆಟ್ ಮಾಡಿದರು. ಹೆಂಡ ಹಂಚಲು, ಮತ ಖರೀದಿಗೆ ಬಳಸಿದರು. ದಲಿತ ರಾಮಯ್ಯ ಎಂದು ಕರೆಸಿಕೊಂಡು, ದಲಿತರ ದುಡ್ಡು ಲೂಟಿ ಹೊಡೆದರು. ಪರಿಶಿಷ್ಟರ ಹಣ ಪೀಕುವುದನ್ನು ಇಲ್ಲಿಗೆ ನಿಲ್ಲಿಸಬೇಕು ಎಂದರು.

ಕಾಂಗ್ರೆಸ್ ನಾಯಕರು ವಿಧಾನಸಭೆ ಚುನಾವಣೆ ಪೂರ್ವದಲ್ಲಿ ನಾವು ಅಧಿಕಾರಕ್ಕೆ ಬಂದರೆ ಖಾಸಗಿ ಕ್ಷೇತ್ರದಲ್ಲಿ ಮೀಸಲಾತಿ ಜಾರಿಗೆ ತರುವ ಭರವಸೆ ನೀಡಿದ್ದರು. ಈಗ ಇದರ ಬಗ್ಗೆ ಧ್ವನಿ ಎತ್ತುತ್ತಿಲ್ಲ. ಪರಿಶಿಷ್ಟ ಜಾತಿಯ ಒಳ ಮೀಸಲಾತಿ ಹಂಚಿಕೆ ಕುರಿತು ಸುಪ್ರೀಂ ಕೋರ್ಟ್ ತೀರ್ಪು ನೀಡಿದರೂ ಇನ್ನೂ ಒಂದು ನಿರ್ಧಾರಕ್ಕೆ ಬರುತ್ತಿಲ್ಲ. ತೀರ್ಪಿನ ನಂತರ ಸಿದ್ದರಾಮಯ್ಯ 'ಚರ್ಚೆ ಮಾಡುತ್ತೇನೆ. ಕರೆದು ಸಂಧಾನ ಮಾಡುತ್ತೇನೆ' ಎನ್ನುತ್ತಿದ್ದಾರೆ. ಇದನ್ನು ಬಿಟ್ಟು ಸದಾಶಿವ ಆಯೋಗದ ವರದಿಯನ್ನು ಯಥಾವತ್ತಾಗಿ ಜಾರಿಗೊಳಿಸಬೇಕು ಎಂದು ಆಗ್ರಹಿಸಿದರು. ಅಹಿಂದ ಸಂಘಟನೆಗಳ ಒಕ್ಕೂಟದ ಸಂಚಾಲಕರಾದ ಶಂಕರ್ ಲಿಂಗಯ್ಯ, ಶ್ರೀನಿವಾಸ್ ಮೂರ್ತಿ, ಸಿದ್ದಾಪುರ ಮಂಜುನಾಥ್ ಹಾಜರಿದ್ದರು. 'ಅಹಿಂದ' ಸಂಘಟನೆಗಳ ಒಕ್ಕೂಟದಿಂದ ಆ. 28ರಂದು ಬೆಂಗಳೂರಿನ ಸ್ವಾತಂತ್ರ್ಯ ಉದ್ಯಾನದಲ್ಲಿ ಕಾಂಗ್ರೆಸ್ ಹಠಾವೋ, ದಲಿತ್ ಬಚಾವೋ' ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ.

ಪರಿಶಿಷ್ಟರ ರಕ್ಷಣೆ, ನಮ್ಮ ಹಕ್ಕು ಕೇಳಲು ಪ್ರತಿಭಟನೆ ನಡೆಯಲಿದೆ. ನಮ್ಮ ಪಾಲಿನ ಹಣದಿಂದ ಬೇರೆಯವರ ಹೊಟ್ಟೆ ತುಂಬುತ್ತಿದೆ. ಪ್ರತಿ ವರ್ಷ ಸಾವಿರಾರು ಕೋಟಿ ಮೀಸಲಿಟ್ಟರೂ ಸಮುದಾಯಗಳ ಅಭಿವೃದ್ಧಿ ಸಾಧ್ಯವಾಗುತ್ತಿಲ್ಲ. ಎಲ್ಲಾ ಅಂಶಗಳನ್ನು ಮುಂದಿಟ್ಟುಕೊಂಡು ಹೋರಾಟ ರೂಪಿಸಲಾಗುವುದು ಎಂದು ಒಕ್ಕೂಟ ತಿಳಿಸಿದೆ.

# ಮಿನಿ ನ್ಯೂಸ್

## ಬಾಲಕಿ ಮೇಲೆ ಅತ್ಯಾಚಾರ ಯುವಕನ ಬಂಧನ

• ಉದಯವಾಹಿನಿ, ಮುಳಬಾಗಿಲು

ತಾಲ್ಲೂಕಿನ ಗ್ರಾಮವೊಂದರಲ್ಲಿ ಶನಿವಾರ ರಾತ್ರಿ, ಯುವಕನೊಬ್ಬ ಏಳು ವರ್ಷದ ಬಾಲಕಿ ಮೇಲೆ ಅತ್ಯಾಚಾರವೆಸಗಿದ್ದು, ಪ್ರಕರಣ ದಾಖಲಾಗಿದೆ. 21 ವರ್ಷದ ಯುವಕನನ್ನು ಪೊಲೀಸರು ಬಂಧಿಸಿದ್ದಾರೆ. ಬಾಲಕಿ ಗ್ರಾಮದ ಶಾಲೆಯಲ್ಲಿ ಒಂದನೇ ತರಗತಿ ಓದುತ್ತಿದ್ದಾಳೆ.ಆರೋಪಿ ಹಾಗೂ ಸಂತ್ರಸ್ತ ಬಾಲಕಿ ಒಂದೇ ಗ್ರಾಮದವರು. ಎಲ್ಲಾದರೂ ಗಾರೆ ಕೆಲಸ ಇದೆಯೇ ಎಂದು ಕೇಳಲು ಯುವಕನು ಬಾಲಕಿಯ ಮನೆಗೆ ಹೋಗಿದ್ದಾನೆ. ನಂತರ ಕೆಲಸದ ವಿಚಾರವಾಗಿ ಆಕೆಯ ತಂದೆ ಜೊತೆ ಹೊರ ಹೋಗಿದ್ದಾನೆ. ಹೊರ ಹೋದ ಯುವಕ ಪುನಃ ಬಂದು ಮಗಳಿಗೆ ಮೊಬೈಲ್ ತೋರಿಸುತ್ತಾ ಮನೆಯ ಮೇಲೆ ಕರೆದುಕೊಂಡು ಹೋಗಿ ಅತ್ಯಾಚಾರವೆಸಗಿ ಓಡಿ ಹೋಗಿದ್ದಾನೆ ಎಂದು ಬಾಲಕಿಯ ತಾಯಿ ದೂರಿನಲ್ಲಿ ತಿಳಿಸಿದ್ದಾರೆ.ಬಾಲಕಿಗೆ ರಕ್ತಸ್ರಾವವಾಗಿದ್ದು, ಚಿಕಿತ್ಸೆಗಾಗಿ ಮುಳಬಾಗಿಲು ನಗರದ ಆಸ್ಪತ್ರೆಯೊಂದಕ್ಕೆ ದಾಖಲಿಸಲಾಗಿದೆ.ಪೊಲೀಸರು ಯುವಕನನ್ನು ಬಂಧಿಸಿ ಪೋಕ್ಸೊ ಪ್ರಕರಣ ದಾಖಲಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ. ಮುಳಬಾಗಿಲು ತಾಲ್ಲೂಕಿನ ಪೊಲೀಸ್ ಠಾಣೆಯೊಂದರಲ್ಲಿ ಪ್ರಕರಣ ದಾಖಲಾಗಿದೆ.

## ಆನೆ ದಂತ ವಶ; ಮೂವರ ಬಂಧನ

• ಉದಯವಾಹಿನಿ, ಕೊಳ್ಳೇಗಾಲ

ಹನೂರು ತಾಲ್ಲೂಕಿನ ಪಿ.ಜಿ.ಪಾಳ್ಯ ಗ್ರಾಮದ ಮುಖ್ಯ ರಸ್ತೆಯಲ್ಲಿ ಕಾರಿನಲ್ಲಿ ಆನೆ ದಂತಗಳನ್ನು ಸಾಗಿಸುತ್ತಿದ್ದ ಮೂವರನ್ನು ನಗರದ ಅರಣ್ಯ ಸಂಚಾರಿ ದಳದ ಪೊಲೀಸರು ಭಾನುವಾರ ಬಂಧಿಸಿದ್ದಾರೆ.

ಚಾಮರಾಜನಗರ ತಾಲ್ಲೂಕಿನ ಅಂಕನಶೆಟ್ಟಿಪುರದ ಶಿವಮೂರ್ತಿ (57), ತಮಿಳುನಾಡಿನ ತಿರುಪೂರು ಜಿಲ್ಲೆಯ ರವನಪುರಂ ಗ್ರಾಮದ ಶಿವಕುಮಾರ್ (44), ಅಂಡಿಪಾಳ್ಯಂ ಚಿನ್ನಕವುಂಡನ್ ಅಂತೋಣಿ (46) ಆರೋಪಿಗಳು. ಬಂಧಿತರಿಂದ ಆನೆಯ 2 ದಂತ ಹಾಗೂ ಒಂದು ಕಾರು (ಟಿ.ಎನ್.59 ಸಿಆರ್. 1273) ಜಪ್ತಿ ಮಾಡಲಾಗಿದೆ.

ಖಚಿತ ಮಾಹಿತಿ ಮೇರೆಗೆ ಅರಣ್ಯ ಸಂಚಾರಿ ದಳದ ಪಿಎಸ್‌ಐ ವಿಜಯರಾಜ್, ಸಿಬ್ಬಂದಿ ದಾಳಿ ನಡೆಸಿ ದಂತಗಳ ಸಮೇತ ಬಂಧಿಸಿದ್ದಾರೆ. ವನ್ಯಜೀವಿ ಸಂರಕ್ಷಣಾ ಕಾಯ್ದೆಯಡಿ ಪ್ರಕರಣ ದಾಖಲಿಸಿಕೊಂಡು, ಆರೋಪಿಗಳನ್ನು ನ್ಯಾಯಾಂಗ ಮುಂದೆ ಹಾಜರುಪಡಿಸಲಾಗಿದೆ.

## ವೈದ್ಯರ ಮುಷ್ಕರ: ಚಿಕಿತ್ಸೆಸಿಗದೆ ಮಹಿಳೆ ಸಾವು

• ಉದಯವಾಹಿನಿ, ಕೋಲಾರ

ವೈದ್ಯರ ಮುಷ್ಕರದ ಹಿನ್ನೆಲೆಯಲ್ಲಿ ಬೈರಕೂರು ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿ ಸಕಾಲಕ್ಕೆ ಚಿಕಿತ್ಸೆ ಸಿಗದೆ ಮಹಿಳೆಯೊಬ್ಬರು ಶನಿವಾರ ಮೃತಪಟ್ಟಿದ್ದಾರೆ. ಮುಳಬಾಗಿಲು ತಾಲ್ಲೂಕಿನ ಅಪ್ಪಿಕೊಂಡೇನಹಳ್ಳಿ ಗ್ರಾಮದ ಅರುಣಮ್ಮ (35) ಚಿಕಿತ್ಸೆ ಸಿಗದೆ ಮೃತಪಟ್ಟ ಮಹಿಳೆ.ಮೂರು ದಿನಗಳಿಂದ ಜ್ವರದಿಂದ ಬಳಲುತ್ತಿದ್ದ ಮಹಿಳೆಯನ್ನು ಸಮೀಪದ ಬೈರಕೂರು ಪ್ರಾಥಮಿಕ ಆರೋಗ್ಯ ಕೇಂದ್ರಕ್ಕೆ ಕರೆತರಲಾಯಿತು. ಹೊರರೋಗಿಗಳ ವಿಭಾಗ (ಒಪಿಡಿ) ತೆರೆದಿದ್ದರೂ ವೈದ್ಯರು ಇರಲಿಲ್ಲ. ಅಲ್ಲಿದ್ದ ನರ್ಸ್ ಹಾಗೂ ಸಿಬ್ಬಂದಿ ಮಹಿಳೆಯನ್ನು ಆಂಬುಲೆನ್ಸ್‌ನಲ್ಲಿ ಮಲಗಿಸಿ ಉಸಿರಾಟ, ನಾಡಿ ಬಡಿತ ಪರೀಕ್ಷೆ ಮಾಡಿದರು. ಹೆಚ್ಚಿನ ಚಿಕಿತ್ಸೆಗಾಗಿ ಆಂಬುಲೆನ್ಸ್‌ನಲ್ಲಿ ಮುಳಬಾಗಿಲು ಸರ್ಕಾರಿ ಆಸ್ಪತ್ರೆಗೆ ಕಳಿಸಿದ್ದಾರೆ. ಮಾರ್ಗ ಮಧ್ಯೆ ಮಹಿಳೆ ಮೃತಪಟ್ಟಿದ್ದಾರೆ.ಆಸ್ಪತ್ರೆಗೆ ಬರುವ ಮಾರ್ಗ ಮಧ್ಯೆದಲ್ಲಿಯೇ ಮಹಿಳೆ ಮೃತಪಟ್ಟಿದ್ದಾರೆ ಎಂದು ತಾಲ್ಲೂಕು ವೈದ್ಯಾಧಿಕಾರಿ ಡಾ.ಸುಗುಣ ಪ್ರತಿಕ್ರಿಯಿಸಿದರು.

## ರಾಷ್ಟ್ರಧ್ವಜಕ್ಕೆ ಅವಮಾನ ಶಿಕ್ಷಕ ಅಮಾನತು

• ಉದಯವಾಹಿನಿ, ಮಳವಳ್ಳಿ

ತಾಲ್ಲೂಕಿನ ಉತ್ತೂರು ಗ್ರಾಮದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯಲ್ಲಿ ಸಮಯಕ್ಕೆ ಸರಿಯಾಗಿ ರಾಷ್ಟ್ರಧ್ವಜವನ್ನು ಇಳಿಸದ ಆರೋಪದ ಮೇರೆಗೆ ಶಿಕ್ಷಕ ಸೋಮಣ್ಣ ಅವರನ್ನು ಅಮಾನತುಗೊಳಿಸಲಾಗಿದೆ.

ಆ.15ರ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಹಾರಿಸಿದ್ದ ಧ್ವಜವನ್ನು ಆ.16ರವರೆಗೆ ಧ್ವಜಸ್ತಂಭದಿಂದ ಇಳಿಸಿಲ್ಲ ಎಂದು ವ್ಯಕ್ತಿಯೊಬ್ಬರು ಕ್ಷೇತ್ರ ಶಿಕ್ಷಣಾಧಿಕಾರಿಗಳ ಗಮನಕ್ಕೆ ತಂದಿದ್ದರು. 16ರ ರಾತ್ರಿ ಕ್ಷೇತ್ರ ಸಮನ್ವಯಾಧಿಕಾರಿ ಎಂ.ಕೆ. ಶ್ರೀನಿವಾಸ್, ಬಿ.ಆರ್.ಸಿ ಸೋಮಣ್ಣ ಸ್ಥಳಕ್ಕೆ ಭೇಟಿ ನೀಡಿದಾಗಲೂ ಧ್ವಜವು ಸ್ತಂಭದಲ್ಲೇ ಇತ್ತು. 'ಧ್ವಜ ಸಂಹಿತೆಯನ್ನು ಉಲ್ಲಂಘಿಸಲಾಗಿದೆ. ಕರ್ನಾಟಕ ನಾಗರಿಕ ಸೇವಾ ನಿಯಮಕ್ಕೆ ವಿರುದ್ಧವಾಗಿ ಶಿಕ್ಷಕರು ವರ್ತಿಸಿದ್ದಾರೆ ಎಂದು ಅವರು ವರದಿ ನೀಡಿದ್ದರು. ವರದಿ ಪರಿಶೀಲಿಸಿದ ಕ್ಷೇತ್ರ ಶಿಕ್ಷಣಾಧಿಕಾರಿ ಎಸ್. ಚಂದ್ರಪಾಟೀಲ್, ಶಿಕ್ಷಕ ಸೋಮಣ್ಣ ವಿರುದ್ಧ ಶಿಸ್ತುಕ್ರಮ ಹಾಗೂ ವಿಚಾರಣೆ ಕಾಯ್ದಿರಿಸಿ ಅಮಾನತುಗೊಳಿಸಿ ಆದೇಶ ಹೊರಡಿಸಿದ್ದಾರೆ.

## ಮಾಜಿ ಸೈನಿಕರಿಗೆ ಅವಮಾನ: ಆರೋಪ

• ಉದಯವಾಹಿನಿ, ವಿರಾಜಪೇಟೆ

ರಾಷ್ಟ್ರೀಯ ಹಬ್ಬಗಳ ಆಡಳಿತ ಸಮಿತಿ ಹಾಗೂ ತಾಲ್ಲೂಕು ಆಡಳಿತದ ಆಶ್ರಯದಲ್ಲಿ ನಡೆದ ಸ್ವಾತಂತ್ರ್ಯೋತ್ಸವ ಸಮಾರಂಭದಲ್ಲಿ ಮಾಜಿ ಸೈನಿಕರನ್ನು ಅವಮಾನಿಸಿದ್ದಾರೆ ಎಂದು ಆರೋಪಿಸಿರುವ ಕೊಡಗು ಜಿಲ್ಲಾ ಮಾಜಿ ಸೈನಿಕರ ಸಹಕಾರ ಸಂಘದ ಅಧ್ಯಕ್ಷ ಚಪ್ಪಂಡ ಹರೀಶ್ ಉತ್ತಯ್ಯ, ಸಂಘ ಖಂಡಿಸುತ್ತದೆ ಎಂದು ತಿಳಿಸಿದರು.

ಪಟ್ಟಣದ ತಾಲ್ಲೂಕು ಮೈದಾನದಲ್ಲಿ ನಡೆಯುವ ಸ್ವಾತಂತ್ರ್ಯೋತ್ಸವ ಕಾರ್ಯಕ್ರಮದಲ್ಲಿ ಸಾಧಕರನ್ನು, ದೇಶ ಸೇವೆ ಮಾಡಿದವರನ್ನು ಸನ್ಮಾನಿಸುವ ಪದ್ಧತಿ ಹಿಂದಿನಿಂದಲೂ ನಡೆದುಕೊಂಡು ಬಂದಿದೆ. ಅಂತೆಯೇ ಪ್ರತಿವರ್ಷ ಮಾಜಿ ಸೈನಿಕರ ಸಹಕಾರ ಸಂಘದಿಂದ ಸೇನೆಯಲ್ಲಿ ಸಾಧನೆ ಮಾಡಿದ, ಯುದ್ಧದಲ್ಲಿ ಪಾಲ್ಗೊಂಡಿದ್ದ ಮಾಜಿ ಯೋಧರನ್ನು ಸನ್ಮಾನಿಸಲಾಗುತ್ತದೆ. ಈ ಬಾರಿಯೂ ಮಾಜಿ ಯೋಧರಾದ ನಾಯಕಂಡ ಬೋಪಣ್ಣ, ಪುಗ್ಗೇರ ಪೊನ್ನಪ್ಪ, ಐನಂಡ ಮಂದಣ್ಣ, ಕಟ್ಟೆರ ವಿಶ್ವನಾಥ್ ಹಾಗೂ ಮಂಡ್ಯೋಳಂಡ ಬೋಪಯ್ಯ ಅವರನ್ನು ಸನ್ಮಾನಿಸಲಾಯಿತು. ಆದರೆ ಸನ್ಮಾನಿತರಿಗೆ ವೇದಿಕೆಯಲ್ಲಿ ಆಸನದ ವ್ಯವಸ್ಥೆ ಮಾಡಿರಲಿಲ್ಲ' ಎಂದು ಪಟ್ಟಣದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಅಸಮಾಧಾನ ವ್ಯಕ್ತಪಡಿಸಿದರು. ಶಿಷ್ಟಾಚಾರದ ಪ್ರಕಾರ ವೇದಿಕೆಯ ಮೊದಲ ಸಾಲಿನಲ್ಲಿ ಶಾಸಕರು, ತಹಶೀಲ್ದಾರ್, ಅಧಿಕಾರಿಗಳು ಸೇರಿದಂತೆ ಪ್ರಮುಖ ಅತಿಥಿಗಳಿಗೆ ಆಸನದ ವ್ಯವಸ್ಥೆ ಕಲ್ಪಿಸಲಾಗಿತ್ತು. ಎರಡನೇ ಸಾಲಿನ ಆಸನ ಸಂಪೂರ್ಣವಾಗಿ 22 ಮಂದಿ ಪುರಸಭೆ ಸದಸ್ಯರಿಗೆ ಮೀಸಲಾಗಿತ್ತು. ಮೂರನೇ ಸಾಲಿನಲ್ಲಿ ಕಂದಾಯ ಇಲಾಖೆಯ ಸಿಬ್ಬಂದಿ, ರಾಜಕೀಯ ಪಕ್ಷದಲ್ಲಿ ಗುರುತಿಸಿಕೊಂಡವರು, ಸೇರಿದಂತೆ ಇತರರಿಗೆ ಆಸನವನ್ನು ಮೀಸಲಾಗಿತ್ತು. ಮಾಜಿ ಸೈನಿಕರಿಗೆ ಆಸನದ ವ್ಯವಸ್ಥೆಯೇ ಇರಲಿಲ್ಲ' ಎಂದರು.

# ರಾಜ್ಯಪಾಲರ ವಿರುದ್ಧ ತೀವ್ರಗೊಂಡ ಪ್ರತಿಭಟನೆ

## • ಸಿಎಂ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿದ ಹಿನ್ನೆಲೆ

**• ಉದಯವಾಹಿನಿ ಚಿಕ್ಕಮಗಳೂರು**

ಮುಖ್ಯಮಂತ್ರಿ ಸಿದ್ದರಾಮಯ್ಯ ವಿರುದ್ದ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದಕ್ಕೆ ರಾಜ್ಯದೆಲ್ಲೆಡೆ ಕಾಂಗ್ರೆಸ್ ಕಾರ್ಯಕರ್ತರು ಪ್ರತಿ ಭಟನೆಗೆ ಮುಂದಾಗಿದ್ದಾರೆ. ಇಂದು ಹಾಸನ, ಶಿವಮೊಗ್ಗ, ಚಿಕ್ಕಮಗಳೂರಿನಲ್ಲಿ ಕಾಂಗ್ರೇಸ್ ಬೆಂಬಲಿಗರು ಪ್ರತಿಭಟನೆ ನಡೆಸಿ ರಾಜ್ಯಪಾಲರು ಹಾಗೂ ಬಿಜೆಪಿ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಹೌದು... ಸಿಎಂ ಸಿದ್ದರಾಮಯ್ಯ ವಿರುದ್ಧ ಮುಡಾ ತನಿಖೆಗೆ ಅನುಮತಿ ನೀಡಿದ ಹಿನ್ನಲೆ ರಾಜ್ಯಪಾಲರ ವಿರುದ್ಧ ಚಿಕ್ಕಮಗಳೂರಿನಲ್ಲಿ ಪ್ರತಿಭಟನೆ ನಡೆದಿದೆ.

**ಬಿಜೆಪಿ ವಿರುದ್ಧ ಆಕ್ರೋಶ**

ಅಜ್ಜಂಪುರ ಪಟ್ಟಣದ ಮುಖ್ಯ ವೃತ್ತದಲ್ಲಿ ರಾಜ್ಯಪಾಲರ ಪ್ರತಿಕೃತಿ ದಹಿಸಿ, ಹೆದ್ದಾರಿ ತಡೆದು ಟೈಯರ್ ಗೆ ಬೆಂಕಿ ಹಚ್ಚಿ ಕಾಂಗ್ರೆಸ್ ಕಾರ್ಯಕರ್ತರು ಧಿಕ್ಕಾರ ಕೂಗಿದರು.


ಉದಯವಾಹಿನಿ ಚಿತ್ರ

ತರೀಕೆರೆ ಶಾಸಕ ಜಿಎಸ್ ಶ್ರೀನಿವಾಸ್ ನೇತೃತ್ವದಲ್ಲಿ ಅಜ್ಜಂಪುರ ಪಟ್ಟಣದ ಪ್ರಮುಖ ರಸ್ತೆಗಳಲ್ಲಿ ಪ್ರತಿಭಟನಾ ಮೆರವಣಿಗೆ ಮಾಡಲಾಗುತ್ತಿದೆ. ರಾಜ್ಯ ಪಾಲರು ಕೇಂದ್ರದ ಕೈಗೊಂಬೆ ಆಗಿದ್ದಾರೆ ಎಂದು ಬಿಜೆಪಿ ಹಾಗೂ ಕೇಂದ್ರ ಸರ್ಕಾರದ ವಿರುದ್ಧ ಕಾರ್ಯಕರ್ತರು ಆಕ್ರೋಶಗೊಂಡರು.

ಸಿಎಂ ವಿರುದ್ಧ ಬಿಜೆಪಿ ಷಡ್ಯಂತ್ರ ನಡೆಸುತ್ತಿದೆ. ಇದೇ ವೇಳೆ ಕಾಂಗ್ರೆಸ್ ಕಾರ್ಯಕರ್ತರು ಕೇಂದ್ರ, ಕೂಡಲೇ ರಾಜ್ಯಪಾಲರನ್ನು ವಾಪಸ್ ಕರೆಸಿಕೊಳ್ಳಬೇಕೆಂದು ಆಗ್ರಹಿಸಿದರು.

**ಹಾಸನದಲ್ಲಿ ರಾಜ್ಯಪಾಲರ ವಿರುದ್ದ ತೀವ್ರಗೊಂಡ ಪ್ರತಿಭಟನೆ:** ಸಿಎಂ ಸಿದ್ದರಾಮಯ್ಯ ವಿರುದ್ದ ಪ್ರಾಸಿಕ್ಯೂಷನ್ ಅನುಮತಿ ನೀಡಿದ್ದನ್ನು ಖಂಡಿಸಿ ಕೇಂದ್ರ ಸರ್ಕಾರ ಹಾಗೂ ರಾಜ್ಯಪಾಲರ ವಿರುದ್ದ ಹಾಸನದಲ್ಲಿ ಕಾಂಗ್ರೇಸ್ ಕಾರ್ಯಕರ್ತರ ಪ್ರತಿಭಟನೆ ತೀವ್ರಗೊಂಡಿದೆ.

ಹಾಸನ ಜಿಲ್ಲೆ ಅರಕಲಗೂಡು ವಿಧಾನಸಭಾ ಕ್ಷೇತ್ರದ ಹಳ್ಳಿಮೈಸೂರಿನಲ್ಲಿ ಕಾಂಗ್ರೇಸ್ ನಾಯಕರ ನೇತೃತ್ವದಲ್ಲಿ ಪ್ರತಿಭಟನೆ ಬೃಹತ್ ಪ್ರತಿಭಟನೆ ನಡೆದಿದೆ. ಕೈ ಕಾರ್ಯಕರ್ತರು ರಾಜ್ಯಪಾಲರ ಪ್ರತಿಕೃತಿ ದಹಿಸಿ ಆಕ್ರೋಶ ವ್ಯಕ್ತಪಡಿಸಿದರು.

ಸಿದ್ದರಾಮಯ್ಯ ವಿರುದ್ದ ಶಡ್ಯಂತ್ರ ಮಾಡಲಾಗಿದೆ. ಸಿಎಂ ವಿರುದ್ಧ ಸುಳ್ಳು ಆರೋಪ ಮಾಡಿ ತನಿಖೆಗೆ ಆದೇಶ ನೀಡಲಾಗಿದೆ ಎಂದು ಹಳ್ಳಿ ಮೈಸೂರಿನಲ್ಲಿ ಮೆರವಣಿಗೆ ನಡೆಸಿ ರಾಜ್ಯಪಾಲರು, ಬಿಜೆಪಿ ನಾಯಕರ ವಿರುದ್ಧ ಕಾಂಗ್ರೆಸ್ ಕಾರ್ಯಕರ್ತರು ಘೋಷಣೆ ಕೂಗಿ ಆಕ್ರೋಶಗೊಂಡರು.

ಅಲ್ಲದೆ ರಾಜ್ಯಪಾಲರ ನಡೆ ಖಂಡಿಸಿ ಹೋರಾಟ ತೀವ್ರಗೊಳಿಸೋ ಎಚ್ಚರಿಕೆಯನ್ನೂ ನೀಡಿದ್ದಾರೆ.

### ಕಾಂಗ್ರೇಸ್ ಕಾರ್ಯಕರ್ತರ ಪಂಜಿನ ಮೆರವಣಿಗೆ

ಸಿಎಂ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್ ಗೆ ಅನುಮತಿ ನೀಡಿದ ಹಿನ್ನೆಲೆ ಚಾಮರಾಜನಗರದ ಗುಂಡ್ಲುಪೇಟೆಯಲ್ಲಿ ಕಳೆದ ದಿನ ಕಾಂಗ್ರೆಸ್ ಕಾರ್ಯಕರ್ತರು ಪಂಜಿನ ಮೆರವಣಿಗೆ ನಡೆಸಿ ಆಕ್ರೋಶ ಹೊರಹಾಕಿದರು. ಮೈಸೂರು- ಊಟಿ ಹೆದ್ದಾರಿ, ಚಾಮರಾಜನಗರದ ರಸ್ತೆಯಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪಂಜಿನ ಮೆರವಣಿಗೆ ನಡೆಸಿ ರಾಜ್ಯಪಾಲರ ವಿರುದ್ಧ ಧಿಕ್ಕಾರದ ಘೋಷಣೆ ಕೂಗಿ ಕಿಡಿಕಾರಿದರು. ಸಿಎಂ ಸಿದ್ದರಾಮಯ್ಯಗೆ ಜೈಕಾರ ಹಾಕುತ್ತಾ ರಾಜ್ಯಪಾಲರ ವಿರುದ್ಧ ಘೋಷಣೆ ಕೂಗಿ ಕೂಡಲೇ ರಾಜ್ಯಪಾಲರನ್ನು ವಜಾ ಮಾಡಬೇಕೆಂದು ಕಾಂಗ್ರೆಸ್ ಕಾರ್ಯಕರ್ತರು ಆಗ್ರಹಿಸಿದರು.

### ಶಿಕಾರಿಪುರ ಪಟ್ಟಣದಲ್ಲಿ ಕಾಂಗ್ರೆಸ್ ಪ್ರತಿಭಟನೆ

ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ದ ರಾಜ್ಯಪಾಲರು ಪ್ರಾಸಿಕ್ಯೂಷನ್‌ಗೆ ಅನುಮತಿ ನೀಡಿರುವುದನ್ನು ಖಂಡಿಸಿ, ಶಿವಮೊಗ್ಗದ ಶಿಕಾರಿಪುರ ಪಟ್ಟಣದಲ್ಲಿ ಕಾಂಗ್ರೆಸ್ ಕಾರ್ಯಕರ್ತರು ಪ್ರತಿಭಟನೆಗೆ ಮುಂದಾಗಿದ್ದಾರೆ. ಈ ವೇಳೆ ಶಿಕಾರಿಪುರ ಪಟ್ಟಣದಲ್ಲಿರುವ ಬಿಎಸ್ ಯಡಿಯೂರಪ್ಪ ಅವರ ಮನೆಗೆ ಮುತ್ತಿಗೆ ಹಾಕಲು ಯತ್ನಿಸಲಾಗಿದೆ. ಕಾಂಗ್ರೆಸ್ ನಾಯಕ ನಾಗರಾಜ್ ಗೌಡ ನೇತೃತ್ವದಲ್ಲಿ ಯಡಿಯೂರಪ್ಪ ಮನೆಗೆ ನುಗ್ಗಲು ಯತ್ನಿಸಿದ ಕಾರ್ಯಕರ್ತರನ್ನು ಪೊಲೀಸರು ವಶಕ್ಕೆ ಪಡೆದಿದ್ದಾರೆ. ರಸ್ತೆ ಮದ್ಯೆ ಪ್ರತಿಭಟನಾಕಾರರನ್ನ ತಡೆದು ನೂರಾರು ಕಾಂಗ್ರೆಸ್ ಕಾರ್ಯಕರ್ತರನ್ನು ಪೊಲೀಸರನ್ನು ವಶಕ್ಕೆ ಪಡೆದಿದ್ದಾರೆ.

---

## ಗೇಟ್ ಅಳವಡಿಸಿದ 20 ಕಾರ್ಮಿಕರಿಗೆ ತಲಾ 50 ಸಾವಿರ ನಗದು ನೀಡಿ ಸನ್ಮಾನ


ಉದಯವಾಹಿನಿ ಚಿತ್ರ

**• ಉದಯವಾಹಿನಿ, ಹೊಸಪೇಟೆ**

ತುಂಗಭದ್ರಾ ಡ್ಯಾಂನ 19ನೇ ಕ್ರಸ್ಟ್ ಗೇಟ್ ಕೊಚ್ಚಿ ಹೋಗಿದ್ದರಿಂದ ಅಪಾರ ಪ್ರಮಾಣದ ನೀರು ನದಿಗೆ ಹರಿದು ಹೋಗುವಂತೆ ಆಗಿತ್ತು. ಈ ಕ್ರಸ್ಟ್ ಗೇಟ್ ಅನ್ನು ಹಗಲು ರಾತ್ರಿ ಶ್ರಮವಹಿಸಿ, ಸ್ಟಾಪ್ ಗೇಟ್ ಅಳವಡಿಸಿದಂತ 20 ಪ್ರಮುಖ ಕಾರ್ಮಿಕರಿಗೆ ಸಚಿವ ಜಮೀರ್ ಅಹ್ಮದ್ ಖಾನ್ ತಲಾ 50 ಸಾವಿರ ನಗದು ನೀಡಿ, ಸನ್ಮಾನಿಸಿದ್ದಾರೆ.

ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹಮದ್ ಖಾನ್ ಅವರ ಸೂಚನೆ ಮೇರೆಗೆ ಕಂಪ್ಲಿ ಶಾಸಕ ಗಣೇಶ್, ವಖ್ಫ್ ಬೋರ್ಡ್ ಅಧ್ಯಕ್ಷ ಅನ್ವರ್ ಬಾಷಾ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಇಮಾಮಿ ನಿಯಾಜ್ ಹಾಗೂ ಮುಖಂಡ ವಿಜಯ ಕುಮಾರ್ ಸ್ವಾಮಿ ಅವರು ಜಿಲ್ಲಾಧಿಕಾರಿಗಳ ಉಪಸ್ಥಿತಿ ಯಲ್ಲಿ ತುಂಗಭದ್ರಾ ಅಣೆಕಟ್ಟೆಗೆ ಸ್ಟಾಪ್ ಗೇಟ್ ಅಳವಡಿಕೆ ಕೆಲಸದಲ್ಲಿ ಹಗಲಿರುಳು ಶ್ರಮಿಸಿದ 20 ಪ್ರಮುಖ ಕಾರ್ಮಿಕ ರಿಗೆ ತಲಾ 50 ಸಾವಿರ ರೂ. ನಗದು ನೀಡಿ ಸನ್ಮಾನ ಮಾಡಿದರು. ಸ್ಟಾಪ್ ಗೇಟ್ ಅಳವಡಿಕೆ ಕಾರ್ಯ ಯಶಸ್ವಿಗೊಳಿಸಿ ನಿಮಗೆಲ್ಲ ವೈಯಕ್ತಿಕವಾಗಿ ಬಹುಮಾನ ನೀಡುತ್ತೇನೆ ಎಂದು ಸಚಿವರು ಮಾತು ಕೊಟ್ಟಿದ್ದರು.

## ಸಿಎಂ ವಿರುದ್ಧ ಪ್ರಾಸಿಕ್ಯೂಷನ್ ನೀಡಿದ ರಾಜ್ಯಪಾಲರ ನಡೆ ಖಂಡನೀಯ

**• ಉದಯವಾಹಿನಿ, ಬಳ್ಳಾರಿ**

ವಿವಾದವೇ ಅಲ್ಲದ ಪ್ರಕರಣದಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರ ವಿರುದ್ಧ ಪ್ರಾಸಿಕ್ಯೂಷನ್ ಗೆ ಅನುಮತಿ ನೀಡಿರುವ ರಾಜ್ಯಪಾಲ ಥಾವ ರಚಂದ್ ಗೆಹ್ಲೋಟ್ ಅವರ ಪಕ್ಷಪಾತಿ ನಡೆ ಖಂಡನೀಯ ಎಂದು ಕರ್ನಾಟಕ ರಾಜ್ಯ ಶೋಷಿತ ಸಮುದಾಯಗಳ ಮಹಾ ಒಕ್ಕೂಟದ ಜಿಲ್ಲಾಧ್ಯಕ್ಷ ಡಾ.ಗಾದಿಲಿಂಗನಗೌಡ ಕಿಡಿ ಕಾರಿದರು.

ಅವರು ರಾಜ್ಯಪಾಲರ ನಡೆಯನ್ನು ಖಂಡಿಸಿ ನಗರದ ಗಡಿಗಿ ಚನ್ನಪ್ಪ (ರಾಯಲ್) ವೃತ್ತದಲ್ಲಿ ಶೋಷಿತ ಸಮುದಾಯಗಳ ಒಕ್ಕೂಟದಿಂದ ಹಮ್ಮಿಕೊಂಡಿದ್ದ ಪ್ರತಿಭಟನೆಯ ನೇತೃತ್ವ ವಹಿಸಿ ಮಾತನಾಡಿ, ರಾಜ್ಯಪಾಲರು ಈ ಹಿಂದಿನ ಎರಡು ಘಟನೆಗಳಲ್ಲಿ ಹತ್ತು ತಿಂಗಳಿಗೂ ಅಧಿಕ ಸಮಯವನ್ನು ತೆಗೆದುಕೊಂಡಿದ್ದಾರೆ, ಆದರೆ ಸಿದ್ದರಾಮಯ್ಯನವರ ವಿಷಯದಲ್ಲಿ ಪೂರ್ವಗ್ರಹ ಪೀಡಿತರಾಗಿ ಕೇಂದ್ರ ಸರ್ಕಾರದ ಕೈಗೊಂಬೆಯಂತೆ ವರ್ತಿಸುತ್ತಾ ರಾಜ್ಯದ ಮುಖ್ಯಮಂತ್ರಿಗಳ ವಿರುದ್ಧ ಪ್ರಾಸಿಕ್ಯೂಷನ್ ಗೆ ನೀಡಿರುವ ಅನುಮತಿಯನ್ನು ಬೇಷರತ್ತಾಗಿ ಹಿಂಪಡೆಯಬೇಕೆಂದು ಆಗ್ರಹಿಸಿದರು.


ಉದಯವಾಹಿನಿ ಚಿತ್ರ

ಪ್ರತಿಭಟನೆಯಲ್ಲಿ ಭಾಗವಹಿಸಿ ಮಾತನಾಡಿದ ಡಾ.ಬಾಬು ಜಗಜೀವನರಾಂ ಚರ್ಮ ಕೈಗಾರಿಕೆ ಅಭಿವೃದ್ಧಿ ನಿಗಮದ ಅಧ್ಯಕ್ಷ ಮುಂಡ್ರಿಗಿ ನಾಗರಾಜ್; ಸಿದ್ದರಾಮಯ್ಯ ಅವರು ಯಾವುದೇ ಕಳಂಕ ಇಲ್ಲದ ನಾಯಕ, ಅವರ ವಿರುದ್ಧ ಅನಗತ್ಯವಾಗಿ ತನಿಖೆಗೆ ಅನುಮತಿ ನೀಡಲಾಗಿದೆ, ರಾಜ್ಯಪಾಲರ ನಡೆಯ ವಿರುದ್ಧ ನಮ್ಮ ಪ್ರತಿಭಟನೆಯಾಗಿದೆ, ಮುಂದಿನ ದಿನಗಳಲ್ಲಿ ಇಡೀ ರಾಜ್ಯದಾದ್ಯಂತ ಪ್ರತಿಭಟನೆ ನಡೆಯಲಿವೆ. ಸಿಎಂ ಸಿದ್ದರಾಮಯ್ಯ ಅವರ ವಿರುದ್ಧ ಷಡ್ಯಂತ್ರ ನಡೆಸಿರುವ ಬಿಜೆಪಿಗೆ ರಾಜ್ಯದ ಜನರು ತಕ್ಕ ಪಾಠ ಕಲಿಸಲಿದ್ದಾರೆ ಎಂದರು.

ಹತ್ತು ತಿಂಗಳಿಂದ ಕೇಂದ್ರ ಸಚಿವ ಕುಮಾರ ಸ್ವಾಮಿ ಅವರ ವಿರುದ್ದದ ಪ್ರಾಸಿಕ್ಯೂಷನ್ ವಿಚಾರ ಬಾಕಿ ಇಟ್ಟಿರುವ ರಾಜ್ಯಪಾಲ ಗೆಹ್ಲೋಟ್ ಸಿಎಂ ಸಿದ್ದರಾಮಯ್ಯ ಅವರ ವಿಚಾರದಲ್ಲಿ ಬ್ಲಾಕಮೇಲರ್ ಒಬ್ಬನ ದೂರಿಗೆ ತಕ್ಷಣ ಕಾರ್ಯ ಪ್ರವೃತ್ತರಾಗರುವುದು ಅವರ ಪಕ್ಷಪಾತಿ ಧೋರಣೆಯ ಪ್ರತೀಕ ಎಂದು ಹೇಳಿದರು.

> **ಸಿದ್ದರಾಮಯ್ಯ ಅವರು ಬಡವರ ಪರ ಇರುವ ನಾಯಕ, ಅವರು ಹಾಗೂ ಕಾಂಗ್ರೆಸ್ ಸರ್ಕಾರ ನೀಡಿರುವ ಪಂಚ ಗ್ಯಾರಂಟಿಗಳಿಂದಾಗಿ ಜನರ ಬದುಕು ಹಸನಾಗಿದೆ. ಇದನ್ನು ಕಂಡು ಬಿಜೆಪಿ ನಾಯಕರಿಗೆ ಸಹನೆ ಆಗುತ್ತಿಲ್ಲ. ಹೀಗಾಗಿ ಸಿದ್ದರಾಮಯ್ಯ ಅವರ ವಿರುದ್ಧ ಷಡ್ಯಂತ್ರ ನಡೆಸಿದ್ದಾರೆ**
>
> **-ಚಿದಾನಂದಪ್ಪ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ**

ಪ್ರತಿಭಟನೆಯಲ್ಲಿ ಡಿಎಸ್ಸೆಸ್ ರಾಜ್ಯ ಸಂಚಾಲಕ ಎ.ಮಾನಯ್ಯ, ಜಿಲ್ಲಾ ವಕ್ಫ್ ಅಧ್ಯಕ್ಷ ಹುಮಾಯೂನ್ ಖಾನ್, ಕಾಂಗ್ರೆಸ್ ಹಿರಿಯ ಮುಖಂಡರಾದ ಕಲ್ಲುಕಂಭ ಪಂಪಾಪತಿ, ಅರುಣಕುಮಾರ್, ವೆಂಕಟೇಶ ಹೆಗಡೆ, ಕುಡಿತಿನಿ ರಾಮಾಂಜನಿ, ಪಿ.ಜಗನ್ನಾಥ, ಬಿಆರೆಲ್ ಸೀನಾ, ಹೊನ್ನಪ್ಪ, ಕೆರಕೋಡಪ್ಪ, ಪಾಲಿಕೆಯ ಸದಸ್ಯರಾದ ನೂರ್ ಮೊಹಮ್ಮದ್, ಮಿಂಚು ಶ್ರೀನಿವಾಸ್ ಹಾಗೂ ಸರಗು ನಾಗರಾಜು, ಸಂಗನಕಲ್ಲು ವಿಜಯಕುಮಾರ್, ಬೆಣಕಲ್ ಬಸವರಾಜಗೌಡ, ಬಿ.ಎಂ.ಪಾಟೀಲ್, ಜಾಸ್ವಾ, ಗೌಸಿಯಾಬೀ, ಕನಕ, ಇಮಾಮ್ ಗೋಡೆಕಾರ. ಲೋಕೇಶ ಕಪ್ಪಗಲ್ ಓಂಕಾರಪ್ಪ. ವಿಷ್ಣು, ಕಮ್ಮರಚೇಡು, ಶಿವಕುಮಾರ್, ಶಿವರಾಮರಾಜು, ಡಿಎಸ್‌ಎಸ್ ಗಂಗಾಧರ್ ಹುಸೇನಪ್ಪ, ಗೋವರ್ಧನ, ಶಂಕರ್, ಕೆಎಂಎಫ್ ಧನಂಜಯ, ಕುಡುತಿನಿ ರಾಮಾಂಜನಿ, ರಫೀಕ್, ಎಲ್ ಮಾರಣ್ಣ, ಎರಕುಲ ಸ್ವಾಮಿ, ವಿ ಎಸ್ ಶಿವಶಂಕರ್, ಸಂಗನಕಲ್ಲು ಗ್ರಾಮ ಪಂಚಾಯತಿ ಸದಸ್ಯರುಗಳಾದ ಸಣ್ಣ ಭೀಮಪ್ಪ ರಂಜಾನ್ ಭಾಷಾ ಪುನೀತ್, ದಿವಾಕರ್ ಬಾಬು, ಜೋಗಿನಾ ವಿಜಯ್ ಕುಮಾರ್, ನಾಗರೆಡ್ಡಿ ಕಪ್ಪಗಲ್ಲು ಹೊನ್ನೂರು ಸಾಬು, ಚಲವಾದಿ ನರಸಪ್ಪ, ನರೇಂದ್ರ, ಶ್ರೀಶೈಲ, ಟಿ ಗಂಗಾಧರ್, ಕಕ್ಕಬೇವಿನ ಹಾಳು ಲಕ್ಷ್ಮಿ ರೆಡ್ಡಿ, ಜೋಗಿನಾ ಚಂದ್ರಪ್ಪ, ಸಿ ಕೆ ಲಕ್ಷ್ಮಿಪತಿ, ಜಡಪ್ಪ, ಸೇರಿದಂತೆ ನೂರಾರು ಜನರು ಭಾಗವಹಿಸಿದ್ದರು.

---

## ಸಮಾಜ ಸಂಘಟನೆಯಲ್ಲಿ ಜಿಲ್ಲೆಯಲ್ಲಿಯೇ ಮುಂಚೂಣಿ ಇರಲಿದೆ

**• ಉದಯವಾಹಿನಿ, ಚಿಂಚೋಳಿ**

ನೂತನವಾಗಿ ನೇಮಕವಾದ ಸರ್ವ ಪದಾಧಿಕಾರಿಗಳ ಬೆಂಬಲದಿಂದ ಅಖಿಲ ಭಾರತ ವೀರಶೈವ ಲಿಂಗಾಯತ ಸಮಾಜದ ಸಂಘಟನೆಯು ಜಿಲ್ಲೆಯಲ್ಲಿಯೇ ಮುಂಚೂಣಿಯಲ್ಲಿರಲಿದೆ ಎಂದು ಅಖಿಲ ಭಾರತ ವೀರಶೈವ ಲಿಂಗಾಯತ ಸಮಾಜ ಅಧ್ಯಕ್ಷ ಶರಣುಪಾಟೀಲ ಮೋತಕಪಳ್ಳಿ ಭರವಸೆ ನೀಡಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ನರಗ ಘಟಕದ ಅಖಿಲ ಭಾರತ ವೀರಶೈವ ಸಮಾಜದ ನೂತನ ಪದಾಧಿಕಾರಿಗಳ ನೇಮಕಾತಿ ಪಟ್ಟಿ ಬಿಡುಗಡೆಗೊಳಿಸಿ ಮಾತನಾಡಿದ ಅವರು,ಸಮಾಜಕ್ಕಾಗಿ ಸಮಯ ಕೊಡುವವರಿಗೆ ಪದಾಧಿಕಾರಿಗಳು ನೇಮಕ ಮಾಡಲಾಗಿದ್ದು ಇನ್ನುಳಿದವರಿಗೂ ಸಹ ಜವಾಬ್ದಾರಿ ನೀಡಲಾಗುವುದು ಯಾರು ಬೇಸರ ಪಡಬಾರದು. ಕೆಲವೆ ಕೆಲದಿನಗಳಲ್ಲಿ 100ಜನ ಮಹಿಳಾ ಪದಾಧಿಕಾರಿಗಳಿಗೂ ನೇಮಕ ಮಾಡಿ ಸಂಘಟನೆ ಬಲಿಷ್ಠಗೊಳಿಸಲಾಗುವುದು ಎಂದರು.

**ನಗರ ಘಟಕದ ಪದಾಧಿಕಾರಿಗಳು:-** ಅಧ್ಯಕ್ಷ ಶಂಕರ ಶಿವಪೂರಿ,ಗೌರವಾಧ್ಯಕ್ಷ ಶಿವರಾಜ ವಾಲಿ,ಉಪಾಧ್ಯಕ್ಷರಾಗಿ ಗುಂಡಯ್ಯಸ್ವಾಮಿ,ಸುರೇಶ ಸುಂಕದ,ಜಗನ್ನಾಥ ಬೀರನಳ್ಳಿ,ಮಹಾಂತಯ್ಯಸ್ವಾಮಿ,ಸೋಮಶೇಖರ ಮುಸ್ತಾರಿ,ರಮೇಶ ಜೋನಲ್,


ಉದಯವಾಹಿನಿ ಚಿತ್ರ

ಪ್ರಧಾನ ಕಾರ್ಯದರ್ಶಿ, ಸಂಜುಕುಮಾರ ಪಾಟೀಲ ಯಂಪಳ್ಳಿ,ಕಾರ್ಯದರ್ಶಿಯಾಗಿ ಸಂಗಮೇಶ ಮೂಲಿಮನಿ,ಸಂತೋಷಕುಮಾರ ಕಶೆಟ್ಟಿ,ರವಿ ಐನೋಳ್ಳಿ, ಮಂಜುನಾಥ ಸುನಗಮಠ, ಸಂತೋಷ ಕಡಗದ. ಸಹ ಕಾರ್ಯದರ್ಶಿ ಮಹೇಶ ದಾದಾಪುರ, ಶಾಂಚವೀರ, ಸಂತೋಷ ಮೋಘಾ,ಬಸವರಾಜ ಹೂಡದಳ್ಳಿ, ಸಂತೋಷ ಸುಕಂದ, ರಾಜಶೇಖರ ಹಿತ್ತಲ, ಜಗನ್ನಾಥ ಮುನ್ಸಿ, ಚನ್ನಪ್ಪಾ. ಸಂಘಟನಾ ಕಾರ್ಯದರ್ಶಿಯಾಗಿ ವಸಂತ ಇಟಗಿ, ಸತೀಶ ಪಲ್ಯಾದ್, ಸಚೇಂದ್ರ ಹದನೂರ,ಶಾಂತು ಯಂಪಳ್ಳಿ,ಬಸಯ್ಯ ದೇಗಲಡಿ,ಮಹಾಂತೇಶ ಯಂಪಳ್ಳಿ, ಬಸವರಾಜ, ಜೈ ಪ್ರಕಾಶ ತೋಟದ, ಗಣಪತಿ ಹೂಗಾರ. ಖಜಾಂಚಿ ರಾಜಶೇಖರ ಪೌಡಶೆಟ್ಟಿ, ಕಾರ್ಯಾಲಯ ಕಾರ್ಯದರ್ಶಿ ಹಣಮಂತ ಕೋರಿ ಅವರನ್ನು ನೇಮಕ ಮಾಡಲಾಗಿದೆ.

**ಗೌರವ ಸಲಹೆಗಾರರಾಗಿ:-** ಬಸವರಾಜ ಮಾಸ್ಟರ್ ಚಿಮ್ಮಾಯಿದ್ಲಾಯಿ ಒಳಗೊಂಡತೆ ನೂತನ ಪದಾಧಿಕಾರಿಗಳು ನೇಮಕ ಮಾಡಲಾಗಿದೆ ಎಂದರು.

### ತಾಲ್ಲೂಕಾ ಘಟಕಕ್ಕೆ ಹೆಚ್ಚುವರಿ ಪದಾಧಿಕಾರಿಗಳ ನೇಮಕ

**ಚಿಂಚೋಳಿ ತಾಲ್ಲೂಕಿನ ಅಖಿಲ ಭಾರತ ವೀರಶೈವ ಲಿಂಗಾಯತ ಮಹಾಸಭೆಯ ಹೆಚ್ಚುವರಿ ನೂತನ ಪದಾಧಿಕಾರಿಗಳ ಪಟ್ಟಿಯನ್ನು ಸಂಘಟನಾ ಕಾರ್ಯದರ್ಶಿಯಾಗಿ ಶಿವಶರಣಪ್ಪಾ ಜಾಬಶೆಟ್ಟಿ,ಬಸವರಾಜ ಹೊಸಮನಿ,ಶಿವಬಸಯ್ಯಸ್ವಾಮಿ,ಬಸವರಾಜ ಪುಣಶೆಟ್ಟಿ,ರವೀಂದ್ರ ಪಾಟೀಲ ಕನಕಪುರ,ಸಂಗಮೇಶ ಭೈರ್ ದೇಗಲಮಡಿ ಅವರನ್ನು ನೇಮಕ ಮಾಡಲಾಗಿದೆ ಎಂದು ಅವರು ಅಧ್ಯಕ್ಷ ಶರಣುಪಾಟೀಲ ಮೋತಕಪಳ್ಳಿ ತಿಳಿಸಿದ್ದಾರೆ.**

## ಭದ್ರಾ ಡ್ಯಾಂಗೆ ಎಸ್.ಎಸ್ ಮಲ್ಲಿಕಾರ್ಜುನ ಬಾಗಿನ

**• ಉದಯವಾಹಿನಿ, ಶಿವಮೊಗ್ಗ**

ಪ್ರಸಕ್ತ ಸಾಲಿನಲ್ಲಿ ನಿರೀಕ್ಷೆಯಂತೆ ಸಕಾಲಿಕವಾಗಿ ಬಂದ ಮುಂಗಾರು ಮಳೆಯಿಂದ ಭದ್ರಾ ಜಲಾಶಯ ಭರ್ತಿಯಾಗಿದ್ದು ಭದ್ರ ಅಚ್ಚುಕಟ್ಟೆ ಅಚ್ಚುಕಟ್ಟು ಪ್ರದೇಶದ ವ್ಯಾಪ್ತಿಗಳು ಪಡುವ ಶಿವಮೊಗ್ಗ ಸೇರಿದಂತೆ ಚಿತ್ರದುರ್ಗ ದಾವಣಗೆರೆ ಬಳ್ಳಾರಿ ಮತ್ತಿತರ ಜಿಲ್ಲೆಗಳ ರೈತರ ಮೊಗದಲ್ಲಿ ಮಂದಹಾಸ ಮೂಡಿದೆ ಎಂದು ರಾಜ್ಯ ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕಾ ಇಲಾಖೆ ಸಚಿವ ಎಸ್‌ಎಸ್ ಮಲ್ಲಿಕಾರ್ಜುನ್ ಅವರು ಹೇಳಿದರು.

ಅವರು ಇಂದು ಬಿ ಆರ್ ಪಿ ಯಲ್ಲಿ ಭದ್ರಾ ಜಲಾಶಯಕ್ಕೆ ಬಾಗಿನ ಸಮರ್ಪಿಸಿದ ನಂತರ ಮಾಧ್ಯಮ ಪ್ರತಿನಿಧಿಗಳೊಂದಿಗೆ ಮಾತನಾಡುತ್ತಿದ್ದರು. ಕಳೆದ ಸಾಲಿನಲ್ಲಿ ಸಕಾಲದಲ್ಲಿ ಮಳೆ ಆಗದಿದ್ದ ಪರಿಣಾಮವಾಗಿ ರೈತರ ಆತಂಕದ ಛಾಯೆ ಉಂಟಾಗಿತ್ತು ಪ್ರಸಕ್ತ ಸಾಲಿನಲ್ಲಿ ಬಿದ್ದ ಮಳೆಯಿಂದಾಗಿ ಕೃಷಿ, ಅದರಲ್ಲೂ ವಿಶೇಷವಾಗಿ ತೋಟಗಾರಿಕೆಯ ಎರಡು ಬೆಳೆಗಳಿಗೆ ಅನುಕೂಲವಾಗಲಿದೆ. ಅಲ್ಲದೆ ಈ ಭಾಗದ ಜನರಿಗೆ ಶುದ್ಧ ಕುಡಿಯುವ ನೀರು ಪೂರೈಸಲು ಸಹಾಯವಾಗಿದೆ ಎಂದವರು ನುಡಿದರು.


ಉದಯವಾಹಿನಿ ಚಿತ್ರ

ಈ ಜಲಾಶಯದ ವ್ಯಾಪ್ತಿಗಳು ಕೊಡುವ ಅಚ್ಚು ಪಟ್ಟು ಪ್ರದೇಶದ ರೈತರು ಇರುವ ನೀರನ್ನು ಮಿತ ಬಳಕೆ ಹಾಗೂ ಸದ್ಬಳಕೆ ಮಾಡಿಕೊಂಡು ತಮ್ಮ ಕೃಷಿ ಚಟುವಟಿಕೆಗಳಿಗೆ ಬಳಸಿಕೊಳ್ಳುವಂತೆ ಅವರು ಮನವಿ ಮಾಡಿದರು. ದಾವಣಗೆರೆ ಸಂಸದೆ ಶ್ರೀಮತಿ ಪ್ರಭಾ ಮಲ್ಲಿಕಾರ್ಜುನ್, ಮಾಯಕೊಂಡ ಶಾಸಕ ಬಸವಂತಪ್ಪ ಚನ್ನಗಿರಿ ಶಾಸಕ ಶಿವಗಂಗಾ ಬಸವರಾಜು, ಹೊನ್ನಾಳಿ ಶಾಸಕ ಶಾಂತನಗೌಡ ಹಾಗೂ ಹರಿಹರದ ಮಾಜಿ ಶಾಸಕ ರಾಮಪ್ಪ ಸೇರಿದಂತೆ ದಾವಣಗೆರೆ ಜಿಲ್ಲೆಯ ವಿವಿಧ ತಾಲ್ಲೂಕು ಗಳಿಂದ ಆಗಮಿಸಿದ್ದ ಅಧಿಕಾರಿಗಳು ಮತ್ತಿತರ ಮುಖಂಡರು ಉಪಸ್ಥಿತರಿದ್ದರು.

---


## ರೈತರ ನೀರಿನ ವಿಚಾರದಲ್ಲಿ ರಾಜಕೀಯ, ಮೈತ್ರಿ ಪಕ್ಷದ ನಾಯಕರಿಗೆ ಸಲ್ಲದು

**• ಉದಯವಾಹಿನಿ, ಸಿಂಧನೂರು**

ತುಂಗಭದ್ರಾ ಜಲಾಶಯ ಗೇಟ್ ಅಳವಡಿಕೆ ಕಾರ್ಯ ಸಕ್ಸಸ್ ಯಾಗಿದ್ದು ರೈತರು ಯಾವುದೇ ಕಾರಣಕ್ಕೂ ಆತಂಕಕ್ಕೆ ಒಳಗಾದೆ ಭತ್ತ ನಾಟಿ ಮಾಡುವುದಕ್ಕೆ ಯಾವುದೇ ತೊಂದರೆ ಇಲ್ಲ ಎಂದು ಶಾಸಕ ಹಂಪನಗೌಡ ಬಾದರ್ಲಿ ಹೇಳಿದರು.

ನಿನ್ನೆ ತುಂಗಭದ್ರಾ ಡ್ಯಾಂ ಭೇಟಿ ನೀಡಿದರು. ಹೈದರಾಬಾದ್ ತಜ್ಞೆ ಕನ್ನಯ್ಯ ಅವರ ಜೊತೆಗೆ ಸಾಫ್ಟ್ ಗೇಟ್ ಬಗ್ಗೆ ಮಾಹಿತಿ ಪಡೆದು ಕೊಂಡರು. ಆದರೆ ಬಿಜೆಪಿ ಹಾಗೂ ಜೆಡಿಎಸ್ ಪಕ್ಷದ ನಾಯಕರು ಕಾಂಗ್ರೇಸ್ ತುಂಗಭದ್ರಾ ಜಲಾಶಯ ಗೇಟ್ ಅಳವಡಿಕೆಯಲ್ಲಿ ಸಂಪೂರ್ಣ ವಿಫಲವಾಗಿದೆ ಎಂದು ಆಪಾದಿಸಿದರು. ಈಗಾಗಲೇ ಮಾನ್ಯ ಮುಖ್ಯಮಂತ್ರಿ ಡ್ಯಾಂ ಭೇಟಿ ನೀಡಿ ವೀಕ್ಷಣೆ ಮಾಡಿ ಪರಿಶೀಲನೆ ನಡೆಸಿದರು.

ಸಾಫ್ಟ್ ಗೇಟ್ ಅಳವಡಿಕೆ ಹಣ ಕಾಸಿನ ಎಲ್ಲಾ ರೀತಿಯ ಸಹಕಾರ ನೀಡಿದ್ದಾರೆ.


ಉದಯವಾಹಿನಿ ಚಿತ್ರ

ಈ ಹಿನ್ನೆಲೆಯಲ್ಲಿ ಸಚಿವ ತಂಗಡಗಿ ಅವರು ವಿಜಯನಗರ ಜಿಲ್ಲಾ ಉಸ್ತುವಾರಿ ಸಚಿವ ಜಮೀರ್ ಅಹಮ್ಮದ್ ಕೊಪ್ಪಳ ಶಾಸಕ ರಾಘವೇಂದ್ರ, ಹಿಟ್ನಾಳ್ ಸಂಸದರು ರಾಜಶೇಖರ್ ಹಿಟ್ನಾಳ್ ಆರ್ ಬಸನಗೌಡ ಪಾಟೀಲ್ ತುರ್ವಿಹಾಳ ಅವರು ನೀರಾವರಿ ಇಲಾಖೆ ಕಾರ್ಯದರ್ಶಿ ಕುಲಕರ್ಣಿ. ವ್ಯವಸ್ಥಾಪಕ ನಿರ್ದೇಶಕರು ವಿಶೇಷ ತಜ್ಞರ ಕನ್ನಯ್ಯ ಅವರು ಜೊತೆಗೆ ನಿರಂತರ ಸಂಪರ್ಕ ಹೊಂದಿದ್ದರು.

> **ರೈತರ ಬಗ್ಗೆ ಹಾಗೂ ನೀರಿನ ಬಗ್ಗೆ ಬಿಜೆಪಿ ಜೆಡಿಎಸ್ ಪಕ್ಷದ ನಾಯಕರು ರಾಜಕೀಯ ಮಾಡುವುದು ಸರಿಯಲ್ಲ. ಕೊಪ್ಪಳ ಉಸ್ತುವಾರಿ ಸಚಿವ ಶಿವರಾಜ ತಂಗಡಗಿ ವಿರುದ್ಧ ಯಾವ ಪುರುಷಾರ್ಥಕ್ಕಾಗಿ ಪ್ರತಿಭಟನೆಗೆ ಮುಂದಾಗಿದ್ದು ಎಂದು ಬಿಜೆಪಿ ಜೆಡಿಎಸ್ ನಾಯಕರಿಗೆ ಟಾಂಗ್ ಕೊಟ್ಟರು -ಹಂಪನಗೌಡ ಬಾದರ್ಲಿ, ಶಾಸಕ**

**ತುಂಗಭದ್ರಾ ಡ್ಯಾಂಗೆ ಭೇಟಿ**

ಈಗಾಗಲೇ ನೀರಿನ ಮಟ್ಟ ಉಳಿಸುವುದಕ್ಕಾಗಿ ಮೂರು ಗೇಟ್ ಕುರ್ಸಲಾಗಿದ್ದು. ಬಿಜೆಪಿ ಜೆಡಿಎಸ್ ಮೈತ್ರಿ ಪಕ್ಷಗಳು ನಾಯಕರು ಕೇಂದ್ರ ಸರ್ಕಾರದ ಒತ್ತಡ ಹಾಕಿ ಕೆಲಸ ಮಾಡುವುದಕ್ಕೆ ಮುನ್ನ ಪ್ರತಿಭಟನೆಗೆ ಮುಂದಾಗಿದ್ದಾರೆ ಈಗ ಮೈತ್ರಿ ಪಕ್ಷದ ನಾಯಕರು ಎಲ್ಲಿ ನಾಪತ್ತೆಯಾಗಿದ್ದಾರೆ ಎಂದು ಶಾಸಕ ಹಂಪನಗೌಡ ಬಾದರ್ಲಿ ಅವರು ವ್ಯಂಗ್ಯ ಮಾಡಿದರು. ಇಂತಹಾ ಮುಂದೆ ದಿನಮಾನದಲ್ಲಿ ರೈತರು ತಕ್ಕ ಪಾಠ ಕಲಿಸುತ್ತಾರೆ ಎಂದು ಭವಿಷ್ಯ ನುಡಿದರು.

---

# ನಾರಾಯಣ ಗುರು ಪರಂಪರೆ ಮುಂದುವರಿಸೋಣ: ಸ್ವಾಮೀಜಿ

## • ಪೂಜೆ, ಧಾರ್ಮಿಕ ಆಚರಣೆಗಳು ನಮ್ಮ ಸಂಸ್ಕೃತಿಯ ಭಾಗ, ಇವನ್ನು ಎಲ್ಲರೂ ಪಾಲಿಸುವ ಅಗತ್ಯ

**• ಉದಯವಾಹಿನಿ ದಾವಣಗೆರೆ**

ಶಿಕ್ಷಣ, ಸ್ವಚ್ಛತೆ, ದೇಗುಲ ಸ್ಥಾಪನೆ ವಿಚಾರದಲ್ಲಿ ನಾರಾಯಣ ಗುರು ಸಿದ್ಧಾಂತಕ್ಕೆ ವಿರುದ್ಧವಾದ ಜೀವನ ಕ್ರಮವನ್ನು ಮೈಗೂಡಿಸಿಕೊಂಡಿದ್ದೇವೆ. ಈ ತಪ್ಪು ತಿದ್ದಿಕೊಂಡು ನಾರಾಯಣ ಗುರು ಪರಂಪರೆಯನ್ನು ಮುಂದುವರೆಸಿಕೊಂಡು ಹೋಗೋಣ ಎಂದು ಸೋಲೂರಿನ ನಾರಾಯಣಗುರು ಮಹಾಸಂಸ್ಥಾನದ ವಿಖ್ಯಾತಾನಂದ ಸ್ವಾಮೀಜಿ ಸಲಹೆ ನೀಡಿದರು.ಇಲ್ಲಿನ ವಿನೋಬನಗರದ ಪಿ.ಬಿ ರಸ್ತೆಯಲ್ಲಿ ಜಿಲ್ಲಾ ಆರ್ಯ ಈಡಿಗರ ಸಂಘ ನೂತನವಾಗಿ ನಿರ್ಮಿಸಿದ ಬಾಲಕರ ವಿದ್ಯಾರ್ಥಿ ನಿಲಯ ಉದ್ಘಾಟನಾ ಸಮಾರಂಭದಲ್ಲಿ ಅವರು ಮಾತನಾಡಿದರು.

'ಪೂಜೆ, ಧಾರ್ಮಿಕ ಆಚರಣೆಗಳು ನಮ್ಮ ಸಂಸ್ಕೃತಿಯ ಭಾಗ. ಇವನ್ನು ಎಲ್ಲರೂ ಪಾಲಿಸುವ ಅಗತ್ಯ ಇದೆ. ಆದರೆ, ಧಾರ್ಮಿಕ ಕೈಂಕರ್ಯಗಳಿಗೆ ಬದುಕು ಸೀಮಿತ ಆಗಬಾರದು. ಶಿಕ್ಷಣದ ಮೂಲಕ ಸಂಸ್ಕೃತಿಯ ಪಥವನ್ನು ಹಿಡಿಯಬೇಕು' ಎಂದು ಕಿವಿಮಾತು ಹೇಳಿದರು.'ಆಂಗ್ಲ ಮಾಧ್ಯಮ ಶಿಕ್ಷಣ ಪಡೆಯುವಂತೆ ನಾರಾಯಣ ಗುರು ಅವರು ಆಗಲೇ ಸಲಹೆ ನೀಡಿದ್ದರು. ಕೇರಳದಲ್ಲಿ ಇದು ಸಾಧ್ಯವಾಗಿದ್ದು, ಅಲ್ಲಿ ಶೈಕ್ಷಣಿಕವಾಗಿ ಸಮುದಾಯ ಮುಂದುವರಿದಿದೆ. ಕೇವಲ ನಾಲ್ವರು ಶ್ರೀಮಂತರಾದರೆ ಸಾಲದು. ಸಮುದಾಯವನ್ನು ಶೈಕ್ಷಣಿಕವಾಗಿ ಮೇಲೆತ್ತುವ ಕೆಲಸ ಕರ್ನಾಟಕದಲ್ಲಿಯೂ ಆಗಬೇಕು. ಆದರೆ, ಮಕ್ಕಳು ಅಂಕ ಗಳಿಸುವ ಯಂತ್ರಗಳಾಗಬಾರದು' ಎಂದು ಅಭಿಪ್ರಾಯಪಟ್ಟರು.

### ರೇಣುಕಾನಂದ ಸ್ವಾಮೀಜಿ ಸಾನ್ನಿಧ್ಯ

**ತೀರ್ಥಹಳ್ಳಿ ತಾಲ್ಲೂಕಿನ ಗರ್ತಿಕೆರೆಯ ನಾರಾಯಣ ಗುರು ಮಹಾಸಂಸ್ಥಾನದ ರೇಣುಕಾನಂದ ಸ್ವಾಮೀಜಿ ಸಾನ್ನಿಧ್ಯ ವಹಿಸಿದ್ದರು. ದಾವಣಗೆರೆ ಹರಿಹರ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ದಿನೇಶ್ ಕೆ.ಶೆಟ್ಟಿ, ಜಿಲ್ಲಾ ಆರ್ಯ ಈಡಿಗರ ಸಂಘದ ಕಾರ್ಯದರ್ಶಿ ಎ.ನಾಗರಾಜ್, ಉಪಾಧ್ಯಕ್ಷ ಶಾಂತಾರಾಮ್, ಚಿತ್ರದುರ್ಗ ಜಿಲ್ಲಾ ಆರ್ಯ ಈಡಿಗರ ಸಂಘದ ಅಧ್ಯಕ್ಷ ಎಚ್. ಜೀವನ್, ಗರ್ತಿಕೆರೆ ಗುರುಪೀಠದ ಅಂಬರೀಶ್, ಮಹಿಳಾ ಘಟಕದ ಅಧ್ಯಕ್ಷ ಲಕ್ಷ್ಮಿ ತಿಮ್ಮಪ್ಪ, ರೇಣುಕಾಂಬಾ ಸಹಕಾರ ಸಂಘದ ಸುಮಾ ಭರಮಪ್ಪ ಇದ್ದರು.**


ಉದಯವಾಹಿನಿ ಚಿತ್ರ

> **ಈಡಿಗ ಸಮುದಾಯ ಜನಸಂಖ್ಯೆಯಲ್ಲಿ ರಾಜ್ಯದಲ್ಲಿ ಆರನೇ ಸ್ಥಾನದಲ್ಲಿದೆ. ಸಮುದಾಯದ ಏಳಿಗೆಗೆ ಸರ್ಕಾರದ ಮೇಲಷ್ಟೇ ಅವಲಂಬನೆ ಆಗುವುದು ಬೇಡ. ಎಲ್ಲರೂ ಕೈಜೋಡಿಸಿದರೆ ಸಮುದಾಯ ಇನ್ನಷ್ಟು ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ**
>
> **-ಪಿ.ಶಿವಕುಮಾರ್, ಉಪಾಧ್ಯಕ್ಷ ಕರ್ನಾಟಕ ಪ್ರದೇಶ ಆರ್ಯ ಈಡಿಗರ ಸಂಘ**

ಜೆ.ಪಿ.ಫೌಂಡೇಶನ್ ಅಧ್ಯಕ್ಷ ಜೆ.ಪಿ.ಸುಧಾಕರ, 'ಒಂದು ಕಾಲದಲ್ಲಿ ಸಮುದಾಯಕ್ಕೆ ಮದ್ಯ ಕುಲಕಸುಬಾಗಿತ್ತು. ಆಗ ಮಕ್ಕಳಿಗೆ ಶಿಕ್ಷಣ ನೀಡಲು ಸಾಧ್ಯವಾಗುತ್ತಿರಲಿಲ್ಲ. ಸಾರಾಯಿ ನಿಷೇಧವಾದ ಬಳಿಕ ಜನಾಂಗಕ್ಕೆ ಮುಖ್ಯವಾಗಿ ಬೇಕಾಗಿರುವುದು ಶಿಕ್ಷಣ ಮಾತ್ರ. ನಾರಾಯಣಗುರು ಅವರ ಆಶಯದಂತೆ ಎಲ್ಲರೂ ಶಿಕ್ಷಣ ಪಡೆಯಬೇಕು. ಬಡವರು ವಿದ್ಯೆಪಡೆದು ಏಳಿಗೆ ಹೊಂದಬೇಕು' ಎಂದು ಹೇಳಿದರು.

**ವಿದ್ಯಾರ್ಥಿ ನಿಲಯ ಉದ್ಘಾಟನಾ ಸಮಾರಂಭ**

'ಸಮುದಾಯದ ಹಾಸ್ಟೆಲ್‌ನಲ್ಲಿ ವ್ಯಾಸಂಗ ಮಾಡಿದ ಅನೇಕರು ಉನ್ನತ ಹುದ್ದೆಗೆ ಏರಿದರೂ ನೆರವು ನೀಡಲು ಆಸಕ್ತಿ ತೋರುತ್ತಿಲ್ಲ. ಸಮುದಾಯದ ವಿದ್ಯಾರ್ಥಿಗಳ ವಿದ್ಯಾಭ್ಯಾಸಕ್ಕೆ ವಸತಿ ಹಾಗೂ ಊಟ ಅಗತ್ಯವಾಗಿ ಬೇಕಾಗುತ್ತದೆ. ಸಮುದಾಯದ ಏಳಿಗೆಗೆ ಎಲ್ಲರೂ ದಾನ ನೀಡುವ ಮನಸ್ಥಿತಿ ಬೆಳೆಸಿಕೊಳ್ಳಿ' ಎಂದು ಸಲಹೆ ನೀಡಿದರು.

ಕರ್ನಾಟಕ ಪ್ರದೇಶ ಆರ್ಯ ಈಡಿಗರ ಸಂಘದ ಅಧ್ಯಕ್ಷ ತಿಮ್ಮೇಗೌಡ, 'ರಾಜ್ಯದಲ್ಲಿ 79 ವರ್ಷಗಳ ಹಿಂದೆ ಆರ್ಯ ಈಡಿಗರ ಸಂಘ ಸ್ಥಾಪನೆಯಾಯಿತು. ಗ್ರಾಮೀಣ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿದ ವಿದ್ಯಾರ್ಥಿಗಳು ಉನ್ನತ ಶಿಕ್ಷಣ ಪಡೆಯಲು ನೆರವಾಗಬೇಕು ಎಂಬ ಉದ್ದೇಶದಿಂದ ಹಾಸ್ಟೆಲ್ ಶುರು ಮಾಡಲಾಯಿತು. ಸಾವಿರಾರು ವಿದ್ಯಾರ್ಥಿಗಳ ಶಿಕ್ಷಣಕ್ಕೆ ಹಾಸ್ಟೆಲ್ ನೆರವಾಗಿದೆ' ಎಂದರು.

ದಾವಣಗೆರೆ ಜಿಲ್ಲಾ ಆರ್ಯ ಈಡಿಗರ ಸಂಘದ ಅಧ್ಯಕ್ಷ ಎಚ್. ಶಂಕರ್, 'ವಿದ್ಯಾರ್ಥಿಗಳಿಗೆ ನೆರವಾಗುವ ಉದ್ದೇಶದಿಂದ 1963ರಲ್ಲಿ ಊಟದ ಮನೆ ಶುರು ಮಾಡಲಾಯಿತು. ಅನೇಕರ ಸಹಕಾರದಿಂದ ಇದು ಹಾಸ್ಟೆಲ್ ಸ್ವರೂಪ ಪಡೆಯಿತು. ಸಂಘದ ವತಿಯಿಂದ 25 ವರ್ಷಗಳಿಂದ ಪ್ರತಿಭಾ ಪುರಸ್ಕಾರ ಮಾಡಲಾಗುತ್ತಿದೆ. ಆಲ್.ಎಲ್.ಜಾಲಪ್ಪ ಮತ್ತು ಜೆ.ಪಿ.ಫೌಂಡೇಶನ್ ವತಿಯಿಂದ ಇದು ಮುಂದುವರಿಯುತ್ತಿದೆ' ಎಂದು ಹೇಳಿದರು.

---



## ಮಿನಿ ನ್ಯೂಸ್

### ಬೆಳಗಾವಿ ಕಪಿಲೇಶ್ವರ ದೇವಸ್ಥಾನಕ್ಕೆ ಬಾಂಬ್ ಬೆದರಿಕೆ : ಎಫ್‌ಐಆರ್

**• ಉದಯವಾಹಿನಿ ಬೆಳಗಾವಿ**

ಬೆಳಗಾವಿ ನಗರದ ಸುಪ್ರಸಿದ್ಧ ಕಪಿಲೇಶ್ವರ್ ದೇವಸ್ಥಾನದಲ್ಲಿ ಬಾಂಬ್ ಬೆದರಿಕೆ ಕರೆ ಬಂದಿದ್ದು, ಪೊಲೀಸರು ಪ್ರಕರಣ ದಾಖಲಿಸಿಕೊಂಡು ತನಿಖೆ ನಡೆಸುತ್ತಿದ್ದಾರೆ. ಸಾಮಾಜಿಕ'ಜಾಲತಾಣದ ಮೂಲಕ ಕಪಿಲೇಶ್ವರ ದೇವಸ್ಥಾನಕ್ಕೆ ಬೆದರಿಕೆ ಸಂದೇಶ ಕಳುಹಿಸಲಾಗಿದೆ. Marvelous belgaum ಎಂಬ ಹೆಸರಿನ ಇನ್ ಸ್ಟಾಗ್ರಾಮ್ ಖಾತೆದಾರ ರಾಕೇಶ್ ನಂದಗಡಕರ ಅವರು ಆಗಸ್ಟ್ 12 ರಂದು ಕಪಿಲೇಶ್ವರ ದೇವಸ್ಥಾನದ ಪಲ್ಲಕ್ಕಿ ಉತ್ಸವದ ಸ್ಟೋರಿ ಹಾಕಿದ್ದರು. ಈ ಸ್ಟೋರಿಗೆ ಇಲಾಯಿತ್ ಎಂಬಾತ ರಿಪ್ಲೈ ಮಾಡಿದ್ದು , ಮಾಷಾ ಅಲ್ಲಾ ಇದರ್ ಬಾಂಬ್ ಪೋಡುಂಗಾ ಏಕ್ ದಿನ್ ಅಂತಾ ಮೆಸೇಜ್ ಹಾಕಿದ್ದಾನೆ . ರಾಕೇಶ್ನಂದ ಗಡಕರ ಬೆಳಗಾವಿಸಿ ಇಎನ್ಪೊ ಪೊಲೀಸ್‌ಠಾಣೆಯಲ್ಲಿದೂರು ದಾಖಲಿಸಿದ್ದು, ಬೆಳಗಾವಿ ಸೈಬರ್‌ಕ್ರೈಂ ಠಾಣೆ ಪೊಲೀಸರು ಪ್ರಕರಣ ದಾಖಲಿಸಿ ಕೊಂಡು ತನಿಖೆ ಕೈಗೊಂಡಿದ್ದಾರೆ.

### ಸಿಎಂ ಸಿದ್ದರಾಮಯ್ಯ ಬೆಂಕಿ ಇದ್ದಹಾಗೆ, ಅವರ ತಂಟೆಗೆ ಬರಬೇಡಿ: ಕೋನರೆಡ್ಡಿ ಆಕ್ರೋಶ

**• ಉದಯವಾಹಿನಿ ಹುಬ್ಬಳ್ಳಿ**



ಮುಡಾ ಹಗರಣ ಸಂಬಂಧ ಸಿಎಂ ಸಿದ್ದರಾಮಯ್ಯ ವಿರುದ್ಧ ರಾಜ್ಯಪಾಲರು ಪ್ರಾಸಿಕ್ಯೂಷನ್ ಗೆ ಅನುಮತಿ ನೀಡಿದ್ದಾರೆ. ಈ ಹಿನ್ನೆಲೆಯಲ್ಲಿ ಬಿಜೆಪಿ ವಿರುದ್ಧ ಕಾಂಗ್ರೆಸ್ ಶಾಸಕ ಕೊನರೆಡ್ಡಿ ಆಕ್ರೋಶ ಹೊರಹಾಕಿದ್ದಾರೆ. ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಸಿದ್ದರಾಮಯ್ಯ ಬೆಂಕಿ ಇದ್ದಹಾಗೆ, ಅವರ ತಂಟೆಗೆ ಬರಬೇಡಿ. ಅವರ ತಂಟೆಗೆ ಬಂದ್ರೆ ಹೆಸರಿಲ್ಲದಂತೆ ಹೋಗ್ತೀರಾ ಎಂದು ಬಿಜೆಪಿ ವಿರುದ್ಧ ವಾಗ್ದಾಳಿ ನಡೆಸಿದ್ದಾರೆ. ಸಿಎಂ ಸಿದ್ದರಾಮಯ್ಯ ಯಾವುದೇ ಕಾರಣಕ್ಕೂ ರಾಜೀನಾಮೆ ನೀಡಲ್ಲ. ಸಿಎಂ ಸಿದ್ದರಾಮಯ್ಯ ಜೊತೆಗೆ ಕಾಂಗ್ರೆಸ್‌ನ ಎಲ್ಲಾ ಶಾಸಕರು, ಸಚಿವರು ಜೊತೆಗಿದ್ದಾರೆ. ಕಾನೂನು ಹೋರಾಟ ಮಾಡುತ್ತೇವೆ ಎಂದು ತಿಳಿಸಿದ್ದಾರೆ.

### ದಲಿತನಿಗೆ ಹೇರ್ ಕಟ್ ಮಾಡಲು ಒಪ್ಪದೆ ಇರಿದು ಕೊಂದ ಕ್ಷೌರಿಕ

**• ಉದಯವಾಹಿನಿ ಕಲಬುರಗಿ**

ಯುವಕ ದಲಿತ ಎಂಬ ಕಾರಣಕ್ಕಾಗಿ ಸಲೂನಿಗೆ ತೆರಳಿದ್ದ ಯುವಕನಿಗೆ ಕ್ಷೌರ ಮಾಡಲು ನಿರಾಕರಿಸಿದ್ದಲ್ಲದೆ ಆತನನ್ನು ಕತ್ತರಿಯಿಂದ ಇರಿದು ಭೀಕರವಾಗಿ ಕೊಲೆ ಮಾಡಿರುವ ಘಟನೆ ಕೊಪ್ಪಳ ಜಿಲ್ಲೆಯ ಯಲಬುರ್ಗಾ ತಾಲ್ಲೂಕಿನ ಸಂಗನಾಳ ಗ್ರಾಮದಲ್ಲಿ ನಡೆದಿದೆ.

ಈರಪ್ಪ ಬಂಡಿಹಾಳ (23) ಮೃತ ಯುವಕ. ಇದೇ ಗ್ರಾಮದ ಮುದುಕಪ್ಪ ಅಂದಪ್ಪ ಹಡಪದ ಹತ್ಯೆ ಮಾಡಿದ ಆರೋಪಿಯಾಗಿದ್ದಾನೆ. ಬೆಳಗ್ಗೆ ಮುದುಕಪ್ಪನ ಕ್ಷೌರದಂಗಡಿಗೆ ಹೇರ್ ಕಟಿಂಗ್ ಮಾಡಿಸಿಕೊಳ್ಳಲು ಹೋಗಿದ್ದ. ಈ ವೇಳೆ ನೀನು ಹರಿಜನ (ದಲಿತ) ನಿನಗೆ ಕ್ಷೌರ ಮಾಡುವುದಿಲ್ಲ' ಎಂದು ಮುದುಕಪ್ಪ ಹೇಳಿದ್ದಾನೆ. ಆಗ ಮಾತಿಗೆ ಮಾತು ಬೆಳೆದು, ಮುದಕಪ್ಪ ಕತ್ತರಿಯಿಂದ ಯಮನೂರಪ್ಪನ ಹೊಟ್ಟೆಗೆ ಇರಿದು ಕೊಲೆ ಮಾಡಿದ್ದಾನೆ ಎನ್ನಲಾಗಿದೆ.

### ಮನೆ ಗೋಡೆ ಕುಸಿದು ಯುವತಿ ಸಾವು

**• ಉದಯವಾಹಿನಿ ಕಲಬುರಗಿ**

ರಾಜ್ಯದಲ್ಲಿ ನಿನ್ನೆ ಸುರಿದ ಭಾರೀ ಮಳೆಗೆ ಮತ್ತೊಂದು ಬಲಿಯಾಗಿದ್ದು, ಮನೆಗೋಡೆ ಕುಸಿದು ಯುವತಿ ಸಾವನ್ನಪ್ಪಿರುವ ಘಟನೆ ಕಲಬುರಗಿ ಜಿಲ್ಲೆಯಲ್ಲಿ ನಡೆದಿದೆ. ಕಲಬುರಗಿ ಜಿಲ್ಲೆಯ ಯಡ್ರಾಮಿ ತಾಲ್ಲೂಕಿನ ಕೊಂಡಗುಳಿ ಗ್ರಾಮದಲ್ಲಿ ನಿನ್ನೆ ಸುರಿದ ಭಾರೀ ಮಳೆಗೆ ಮನೆ ಗೋಡೆ ಕುಸಿದು ಬಿದ್ದ ಪರಿಣಾಮ ಯುವತಿ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಮೃತ ಯುವತಿಯನ್ನು ಜಗದೇವಿ ಬಿರಾದಾರ(23) ಎಂದು ಗುರುತಿಸಲಾಗಿದೆ. ಘಟನೆ ಸಂಬಂಧ ಸ್ಥಳಕ್ಕೆ ಪೊಲೀಸರು ಭೇಟಿ ನೀಡಿದ್ದು, ಯಡ್ರಾಮಿ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### ಕಾಮಗಾರಿಗಳನ್ನು ನೀಡಲು ಒತ್ತಾಯ

**• ಉದಯವಾಹಿನಿ ಯಾದಗಿರಿ**

ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅನುದಾನವನ್ನು ನಿಯಮನುಸಾರ ಟೆಂಡರ್ ಕರೆಯದೆ ನೇರವಾಗಿ ಕೆಆರ್ ಐಡಿಎಲ್ ಮತ್ತು ನಿರ್ಮಿತ ಕೇಂದ್ರಕ್ಕೆ ನೀಡುತ್ತಿರುವುದನ್ನು ತಡೆ ಹಿಡಿದು ಟೆಂಡರ್ ಮೂಲಕ ಗುತ್ತಿಗೆದಾರರಿಗೆ ಅವಕಾಶ ಮಾಡಿ ಕೊಡಬೇಕು ಎಂದು ಜಿಲ್ಲಾ ನೋಂದಾಯಿತ ಗುತ್ತಿಗೆದಾರರ ಸಂಘದ ಜಿಲ್ಲಾಧ್ಯಕ್ಷ ಸುದರ್ಶನ ನಾಯಕ ಅವರ ನೇತೃತ್ವದಲ್ಲಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಸಲಾಯಿತು. ಮನವಿ ಪತ್ರ ಸಲ್ಲಿಸಿ ಮಾತನಾಡಿದ ಸುದರ್ಶನ ನಾಯಕ, ಜಿಲ್ಲೆಯ ಶಾಸಕರು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯ ಅನುದಾನವನ್ನು ನೇರವಾಗಿ ಕೆಆರ್‌ಐಡಿಎಲ್ ಮತ್ತು ನಿರ್ಮಿತಿ ಕೇಂದ್ರಕ್ಕೆ ನೀಡುತ್ತಿದ್ದು, ಈಗಾಗಲೇ 2024-25 ನೇ ಸಾಲಿನ ಅನುದಾನ ಕೂಡ ಈ ನಿಗಮಗಳಿಗೆ ನೀಡಲಾಗಿದೆ ಎಂದು ಹೇಳಿದರು. ಕೆಆರ್‌ಐಡಿಎಲ್ ಮತ್ತು ನಿರ್ಮಿತ ಕೇಂದ್ರ ಇಲಾಖೆಯಲ್ಲಿ ಡಾಂಬರ್ ಪ್ಲಾಂಟ್ ಮತ್ತು ಮಷಿನರಿ ಇಲ್ಲ. ಈ ಹಿಂದೆ ಕೊಟ್ಟಿರುವ ಕಾಮಗಾರಿಗಳು ಇಲ್ಲಿಯವರೆಗೆ ಪೂರ್ಣಗೊಂಡಿಲ್ಲ ಎಂದು ಆರೋಪಿಸಿದರು.

### ರಸ್ತೆಯಲ್ಲಿ ಉರುಳಾಡಿ ಪ್ರತಿಭಟನೆ

**• ಉದಯವಾಹಿನಿ ಉಡುಪಿ**

ನಗರದ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿ (ಎಪಿಎಂಸಿ) ಆವರಣದ ನಿವೇಶನಗಳನ್ನು ಮಾರಾಟ ಮಾಡುವುದನ್ನು ವಿರೋಧಿಸಿ ವರ್ತಕರು ರಸ್ತೆಯಲ್ಲಿ ಉರುಳಾಡಿ ಪ್ರತಿಭಟನೆ ನಡೆಸಿದರು.

ಎಪಿಎಂಸಿ ಆವರಣದ ನಿವೇಶನವನ್ನು ಅನರ್ಹರಿಗೆ ಲೀಸ್ ಕಂ ಸೇಲ್‌ಗೆ ನೀಡಲಾಗಿದೆ ಎಂದು ಆರೋಪಿಸಿ ವರ್ತಕರು ಹಲವು ದಿನಗಳಿಂದ ವ್ಯಾಪಾರ ನಡೆಸುವ ಸ್ಥಳದಲ್ಲಿ ಕಪ್ಪು ಬಾವುಟ ಕಟ್ಟಿ ವ್ಯಾಪಾರ ನಡೆಸುತ್ತಿದ್ದರು. ನಿವೇಶನ ಮಾರಾಟಕ್ಕೆ ಸಂಬಂಧಿಸಿ ಅಧಿಕಾರಿಗಳು ಸಮೀಕ್ಷೆ ನಡೆಸಲು ಮುಂದಾದಾಗ ವರ್ತಕರು ಕಪ್ಪು ಬಾವುಟ ಪ್ರದರ್ಶಿಸಿ, ರಸ್ತೆಯಲ್ಲಿ ಹೊರಳಾಡಿ ಪ್ರತಿಭಟಿಸಿದರು. ಈ ವೇಳೆ ಅಸ್ವಸ್ಥಗೊಂಡ ಮೂವರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. 11 ನಿವೇಶನಗಳ ಮಾರಾಟಕ್ಕೆ ಸಂಬಂಧಿಸಿ ಆ ನಿವೇಶನಗಳಲ್ಲಿರುವ ಶೆಡ್‌ಗಳನ್ನು ತೆರವುಗೊಳಿಸುವ ನಿಟ್ಟಿನಲ್ಲಿ ಅಧಿಕಾರಿಗಳು ಸಮೀಕ್ಷೆ ನಡೆಸಲು ಬಂದಿದ್ದರು. ವರ್ತಕರಿಗೆ ಬೆಂಬಲ ಸೂಚಿಸಿ ಮಾತನಾಡಿದ ನಗರಸಭಾ ಸದಸ್ಯ ವಿಜಯ್ ಕೊಡವೂರು, ಇಲ್ಲಿನ ನಿವೇಶನಗಳನ್ನು ಲೀಸ್ ಕಂ ಸೇಲ್‌ಗೆ ಯಾವುದೇ ಸಮಿತಿ ಮಾರಾಟ ಮಾಡಿಲ್ಲ. ಬದಲಾಗಿ ಭ್ರಷ್ಟ ಅಧಿಕಾರಿ ಮಾರಾಟ ಮಾಡಿದ್ದಾರೆ. ಇಲ್ಲಿ ಜಾಗಕ್ಕೆ ಸೆಂಟ್ಸ್‌ಗೆ 8 ಲಕ್ಷದಿಂದ 10 ಲಕ್ಷದಷ್ಟಿದೆ. ಆದರೆ ಎಪಿಎಂಸಿ ನಿವೇಶನಗಳನ್ನು ಕೇವಲ 1.62 ಲಕ್ಷಕ್ಕೆ ಮಾರಾಟ ಮಾಡಲಾಗಿದೆ ಎಂದು ಆರೋಪಿಸಿದರು.

# ಮೋದಿ ಸರ್ಕಾರ ಉರುಳಿಸಲು ಅಮೆರಿಕ ಸಂಚು?

## ● ಮೋದಿ ಸರ್ಕಾರಕ್ಕೆ ಟಿಡಿಪಿ ಬೆಂಬಲ ಹಿಂತೆಗೆದುಕೊಳ್ಳುವಂತೆ ನಾಯ್ಡು ಅವರಿಗೆ ಅಮೆರಿಕ ಪ್ರಚೋದನೆ

**ಹೊಸ ದಿಲ್ಲಿ:** ಪ್ರಧಾನ ಮಂತ್ರಿ ನರೇಂದ್ರ ಮೋದಿ ಸಾರಥ್ಯದ ಎನ್‌ಡಿಎ 3.0 ಸರ್ಕಾರವನ್ನು ಅಸ್ಥಿರಗೊಳಿಸಲು ಅಮೆರಿಕ ಸಂಚು ನಡೆಸಿದೆ ಎಂದು ರಷ್ಯಾದ ಸರ್ಕಾರಿ ಮಾಧ್ಯಮ ಸ್ಪುಟ್ನಿಕ್ ಆಪಾದನೆ ಮಾಡಿದೆ. ಅಮೆರಿಕದ ಗೂಢಚರ ಸಂಸ್ಥೆ ಸಿಐಎ ಆಂಧ್ರ ಪ್ರದೇಶದ ಬ್ಯಾಪ್ಟಿಸ್ಟ್ ಚರ್ಚ್ ನೆರವಿನಿಂದ ಆಂಧ್ರ ಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರನ್ನು ಸಂಪರ್ಕಿಸಲು ಯತ್ನಿಸುತ್ತಿದೆ. ಮೋದಿ ಸರ್ಕಾರಕ್ಕೆ ಟಿಡಿಪಿ ಬೆಂಬಲ ಹಿಂತೆಗೆದುಕೊಳ್ಳುವಂತೆ ನಾಯ್ಡು ಅವರಿಗೆ ಪುಸಲಾಯಿಸುತ್ತಿದೆ ಎಂದು ಸ್ಪುಟ್ನಿಕ್ ಆರೋಪ ಮಾಡಿದೆ.

ಚರ್ಚ್-ನಾಯ್ಡು ಲಿಂಕ್

ಜೊತೆಯಲ್ಲೇ ಭಾರತದ ವಿರೋಧ ಪಕ್ಷದ ನಾಯಕರನ್ನೂ ಅಮೆರಿಕ ಸಂಪರ್ಕ ಮಾಡುತ್ತಿದ್ದು, ಮೋದಿ ಸರ್ಕಾರದ ವಿರುದ್ಧ ಅವಿಶ್ವಾಸ ನಿರ್ಣಯ ಮಂಡಿಸುವಂತೆ ಪ್ರಚೋದಿಸುತ್ತಿದೆ. ಈ ಮೂಲಕ ಸರ್ಕಾರ ಉರುಳಿಸಿ ಭಾರತದಲ್ಲಿ ರಾಜಕೀಯ ಅಸ್ಥಿರತೆಯ ವಾತಾವರಣ ಸೃಷ್ಟಿಸಲು ಅಮೆರಿಕ ಸಂಚು ರೂಪಿಸುತ್ತಿದೆ ಎಂದು ಸ್ಪುಟ್ನಿಕ್ ಪ್ರಕಟಿಸಿರುವ ವರದಿಯಲ್ಲಿ ಉಲ್ಲೇಖಿಸಲಾಗಿದೆ.

ಇದಕ್ಕೆ ಪೂರಕವೆಂಬಂತೆ ಹಲವು ಉದಾಹರಣೆಗಳನ್ನೂ ಸ್ಪುಟ್ನಿಕ್ ನೀಡಿದೆ. ಭಾರತದಲ್ಲಿರುವ ಅಮೆರಿಕ ಕಾನ್ಸುಲೇಟ್ ಜನರಲ್ ಜೆನ್ನಿಫರ್ ಲಾರ್ಸನ್ ಅವರು ಹೈದರಾಬಾದ್‌ನಲ್ಲಿ ಅಮೆರಿಕನ್ ಮಿಷನ್ ಮುನ್ನಡೆಸುತ್ತಿದ್ದಾರೆ.

ಆಗಸ್ಟ್ 12 ರಂದು ಲಾರ್ಸನ್ ಅವರು ಎಐಎಂಐಎಂ ಪಕ್ಷದ ನಾಯಕ ಅಸಾದುದ್ದೀನ್ ಓವೈಸಿ ಅವರ ಜೊತೆ ಮಾತುಕತೆ ನಡೆಸಿದ್ದರು. ಈ ವಿಚಾರ ಸಾಮಾಜಿಕ ಜಾಲತಾಣಗಳಲ್ಲಿ ಭಾರೀ ಸದ್ದು ಮಾಡಿತ್ತು. ಅಮೆರಿಕದ ಈ ಭೇಟಿಯ ಉದ್ದೇಶವೇನು ಎಂದು ಜನರು ಕೇಳಿದ್ದರು.

ಇದಲ್ಲದೆ ಲಾರ್ಸನ್ ಅವರು ತೆಲಂಗಾಣ ಮುಖ್ಯಮಂತ್ರಿ ರೇವಂತ್ ರೆಡ್ಡಿ ಹಾಗೂ ಆಂಧ್ರ ಪ್ರದೇಶ ಮುಖ್ಯಮಂತ್ರಿ ಚಂದ್ರಬಾಬು ನಾಯ್ಡು ಅವರನ್ನೂ ಭೇಟಿ ಮಾಡಿದ್ದರು. ಕೇಂದ್ರ ಸರ್ಕಾರಕ್ಕೆ ಟಿಡಿಪಿ ಬೆಂಬಲ ಅತ್ಯಗತ್ಯವಾಗಿದೆ. 16 ಸಂಸದರನ್ನು ಹೊಂದಿರುವ ಟಿಡಿಪಿ, ಮೋದಿ ಸರ್ಕಾರದ ಕಿಂಗ್ ಮೇಕರ್ ಆಗಿದೆ.



- ಅಮೆರಿಕ ವಿರುದ್ಧ ರಷ್ಯಾದ ಸರ್ಕಾರಿ ಮಾಧ್ಯಮ ಸ್ಪುಟ್ನಿಕ್ ಆಪಾದನೆ
- ಆಂಧ್ರ ಪ್ರದೇಶದ ಬ್ಯಾಪ್ಟಿಸ್ಟ್ ಚರ್ಚ್ ನೆರವಿನಿಂದ ನಾಯ್ಡು ಅವರನ್ನು ಸಂಪರ್ಕಿಸಲು ಸಿಐಎ ಯತ್ನ
- ಮೋದಿ ಸರ್ಕಾರಕ್ಕೆ ಟಿಡಿಪಿ ಬೆಂಬಲ ಹಿಂತೆಗೆದುಕೊಳ್ಳುವಂತೆ ನಾಯ್ಡು ಅವರಿಗೆ ಅಮೆರಿಕ ಪ್ರಚೋದನೆ

### ರಾಜಕೀಯ ಸ್ಥಿರತೆಗೆ ಧಕ್ಕೆ ತರಲು ಅಮೆರಿಕ ಯತ್ನ

**ರಷ್ಯಾ ರಾಜಧಾನಿ ಮಾಸ್ಕೋ ಮೂಲದ ಸ್ಪುಟ್ನಿಕ್ ಇಂಡಿಯಾ ಸುದ್ದಿ ಸಂಸ್ಥೆ ಇತ್ತೀಚೆಗಷ್ಟೇ ಅಮೆರಿಕದ ವಿದೇಶಾಂಗ ಇಲಾಖೆ ಸಿಬ್ಬಂದಿ ಭಾರತದ ವಿರೋಧ ಪಕ್ಷಗಳ ನಾಯಕರನ್ನು ಭೇಟಿ ಮಾಡುತ್ತಿರುವ ಕುರಿತಾಗಿ ತನ್ನ ಕಳವಳ ವ್ಯಕ್ತಪಡಿಸಿತ್ತು. ಭಾರತದ ಆಂತರಿಕ ಸ್ಥಿರತೆ ಹಾಗೂ ರಾಜಕೀಯ ಸ್ಥಿರತೆಗೆ ಧಕ್ಕೆ ತರಲು ಅಮೆರಿಕ ಯತ್ನಿಸುತ್ತಿದೆ ಎಂದು ಆಪಾದಿಸಿತ್ತು. ಮೋದಿ ಸರಕಾರ ಮೂರನೇ ಅವಧಿಗೆ ಅಧಿಕಾರ ಹಿಡಿದಿದೆ. ದೇಶದ ಪ್ರಗತಿ ಕಾಣುತ್ತಿದೆ. ಪ್ರಧಾನಿ ಮೋದಿ ಅವರು ತಮ್ಮ 'ಸಾಫ್ಟ್ ಪವರ್' ಬಳಸಿಕೊಂಡು ಜಾಗತಿಕ ಮಟ್ಟದಲ್ಲಿ ಭಾರತದ ವರ್ಚಸ್ಸು ವೃದ್ಧಿಗೆ ಕಾರಣರಾಗಿದ್ದಾರೆ. ಆದರೆ, ಈ ಸನ್ನಿವೇಶವನ್ನು ಬದಲಿಸಲು ಅಮೆರಿಕ ಸಂಚು ರೂಪಿಸಿದೆ ಎಂದು ಸ್ಪುಟ್ನಿಕ್ ಆಪಾದಿಸಿತ್ತು.**

ಈ ನಡುವೆ ವಕ್ಫ್ ತಿದ್ದುಪಡಿ ಕಾಯ್ದೆಗೆ ಚಂದ್ರಬಾಬು ನಾಯ್ಡು ಅವರು ವಿರೋಧ ವ್ಯಕ್ತಪಡಿಸಿರೋದು ಬಿಜೆಪಿ ವಲಯದಲ್ಲಿ ತಳಮಳಕ್ಕೆ ಕಾರಣವಾಗಿದೆ.

ಇದಕ್ಕೆ ಪೂರಕ ಎಂಬಂತೆ ಆಂಧ್ರ ಬ್ಯಾಪ್ಟಿಸ್ಟ್ ಚರ್ಚ್‌ಗೆ ಸಿಐಎ ನಂಟು ಇದೆ ಎಂದು ಆಪಾದನೆ ಮಾಡಿರುವ ಸ್ಪುಟ್ನಿಕ್, ಈ ಚರ್ಚ್‌ಗೆ ಅಮೆರಿಕನ್ ಬ್ಯಾಪ್ಟಿಸ್ಟ್ ಚರ್ಚ್‌ನಿಂದ ಹಣ ಬರುತ್ತಿದೆ. ಇದೀಗ ಈ ಚರ್ಚ್ ಚಂದ್ರಬಾಬು ನಾಯ್ಡು ಅವರಿಗೆ ಒತ್ತಡ ಹೇರುವ ಕೆಲಸ ಮಾಡಬಹುದಾಗಿದೆ ಎಂದು ಸ್ಪುಟ್ನಿಕ್ ಹೇಳಿದೆ.

## ಏರ್ ಇಂಡಿಯಾ ಮಹಿಳಾ ಸಿಬ್ಬಂದಿ ಮೇಲೆ ಹಲ್ಲೆ

**ನವದೆಹಲಿ:** ಲಂಡನ್‌ನ ಹೋಟೆಲ್‌ನಲ್ಲಿ ಏರ್ ಇಂಡಿಯಾದ ವಿಮಾನಯಾನ ಸಂಸ್ಥೆಯ ಮಹಿಳಾ ಸಿಬ್ಬಂದಿಯ ಮೇಲೆ ವ್ಯಕ್ತಿಯೊಬ್ಬ ಹಲ್ಲೆ ನಡೆಸಿದ್ದಾನೆ ಎಂದು ಮೂಲಗಳು ತಿಳಿಸಿವೆ.

ಅಂತಾರಾಷ್ಟ್ರೀಯ ಮಟ್ಟದಲ್ಲಿ ನಿರ್ವಹಿಸಲ್ಪಡುವ ಹೋಟೆಲ್‌ನಲ್ಲಿನ ತಂಗಿದ್ದ ಮಹಿಳಾ ಸಿಬ್ಬಂದಿ ಮೇಲೆ ಅಕ್ರಮವಾಗಿ ಒಳನುಗಿದ ಯುವಕ ಹಲ್ಲೆ ನಡೆಸಿದ್ದಾನೆ ಘಟನೆಯಿಂದ ತೀವ್ರ ದುಃಖವಾಗಿದೆ, ಇದು ನಮ್ಮ ಸಿಬ್ಬಂದಿಯೊಬ್ಬರ ಮೇಲೆ ಪರಿಣಾಮ ಬೀರಿದೆ ಎಂದು ಏರ್ ಇಂಡಿಯಾ ವಕ್ತಾರರು ಹೇಳಿದರು. ವಿಮಾನ ಯಾನ ಸಂಸ್ಥೆಯು ಸ್ಥಳೀಯ ಪೊ ಲೀಸರೊಂದಿಗೆ ದೂರು ನೀಡಿದೆ ಮೂಲಗಳ ಪ್ರಕಾರ ಮಹಿಳಾ ಕ್ಯಾಬಿನ್ ಸಿಬ್ಬಂದಿ ಉಳಿದುಕೊಂಡಿದ್ದ ಹೋಟೆಲ್‌ನ ಕೋಣೆಗೆ ಮನೆಯಿಲ್ಲದ ವ್ಯಕ್ತಿಯೊಬ್ಬ ನುಗ್ಗಿ ಆಕೆಯ ಮೇಲೆ ಹಲ್ಲೆ ನಡೆಸಿದ್ದಾನೆ ಎಂದು ತಿಳಿಸಿವೆ. ಆಕೆ ಕೂಗುತ್ತಿದ್ದಂತೆಯೇ ಅಕ್ಕಪಕ್ಕದಲ್ಲಿದ್ದ ಇತರರು ಬಂದು ಆಕೆಯನ್ನು ರಕ್ಷಿಸಿದರು ಮತ್ತು ಆತ ಸಿಕ್ಕಿಬಿದ್ದಿದ್ದಾನೆ



ಆದರೆ ಲೈಂಗಿಕ ದೌರ್ಜನ್ಯ ಎಸಗಲಾಗಿದೆ ಎಂದು ಮೂಲವೊಂದು ಹೇಳಿದರೆ, ಆದರೆ ಕೆಲವರು ಇದು ದೈಹಿಕ ಹಲ್ಲೆ ಎಂದು ಹೇಳಿದ್ದಾರೆ. ಲಂಡನ್ ಹೀಥ್ರೂ ವಿಮಾನ ನಿಲ್ದಾಣದ ಸಮೀಪವಿರುವ ಸ್ಟಾರ್ ಹೋಟೆಲ್‌ನಲ್ಲಿ ಈ ಘಟನೆ ನಡೆದಿದೆ.ವೃತ್ತಿಪರ ಸಮಾಲೋಚನೆ ಸೇರಿದಂತೆ ಸಹೋದ್ಯೋಗಿ ಮತ್ತು ಅವರ ತಂಡಕ್ಕೆ ಸಾಧ್ಯವಿರುವ ಎಲ್ಲಾ ಬೆಂಬಲವನ್ನು ಒದಗಿಸುತ್ತಿದೆ ಎಂದು ಏರ್‌ಲೈನ್ ಹೇಳಿಕೆಯಲ್ಲಿ ತಿಳಿಸಿದೆ. ಏರ್ ಇಂಡಿಯಾ ಸ್ಥಳೀಯ ಪೊಲೀಸರೊಂದಿಗೆ ಸಂಪರ್ಕದಲ್ಲಿದೆ ಮತ್ತು ಇಂತಹ ಘಟನೆಗಳು ಪುನರಾವರ್ತನೆಯಾಗದಂತೆ ನೋಡಿಕೊಳ್ಳಲು ಹೋಟೆಲ್ ಆಡಳಿತ ದೊಂದಿಗೆ ಮಾತುಕತೆ ನಡೆಸಿದೆ.

## ಡೆಡ್ಲಿ ರೇಬಿಸ್ ನಾಯಿ ಅಟ್ಯಾಕ್: 1 ಗಂಟೆಯೊಳಗೆ 17 ಜನರಿಗೆ ಕಡಿತ

**ಲಖನೌ:** ರೇಬಿಸ್ ಸೋಂಕಿಗೆ ತುತ್ತಾದ ನಾಯಿಯೊಂದು ಕಂಡಕಂಡ ಜನರ ಮೇಲೆ ಎರಗಿ ಭೀತಿ ಸೃಷ್ಟಿಸಿದೆ. ಕೇವಲ ಒಂದು ಗಂಟೆಯೊಳಗೆ ಮಕ್ಕಳು ಸೇರಿದಂತೆ 17 ಜನರನ್ನು ಕಡಿದಿದ ಘಟನೆ ಉತ್ತರ ಪ್ರದೇಶದ ಗೋರಖ್‌ಪುರದಲ್ಲಿ ನಡೆದಿದೆ.

ಗೋರಖ್‌ಪುರದ ಶಾಹಪುರದಲ್ಲಿ ತನ್ನ ಮನೆಯ ಹೊರಗೆ ಫೋನ್‌ನಲ್ಲಿ ಮಾತನಾಡುತ್ತಿದ್ದ 22 ವರ್ಷದ ವಿದ್ಯಾರ್ಥಿ ಮೇಲೆ ನಾಯಿ ಭಯಾನಕವಾಗಿ ದಾಳಿ ನಡೆಸಿರುವುದು ಸಿಸಿಟಿವಿ ವಿಡಿಯೋದಲ್ಲಿ ಕಾಣಿಸಿದೆ.

ಅವಾಸ್ ವಿಕಾಸ್ ಕಾಲೋನಿಯಲ್ಲಿ ಬಿಬಿಎ ವಿದ್ಯಾರ್ಥಿ ಆಶೀಶ್ ಯಾದವ್ ತನ್ನ ಮನೆಯ ಹೊರಗೆ ರಾತ್ರಿ 9.45ರ ಸುಮಾರಿಗೆ ಫೋನ್‌ನಲ್ಲಿ ಮಾತನಾಡುತ್ತಾ ಅಡ್ಡಾಡುತ್ತಿದ್ದ. ಆಗ ಇದ್ದಕ್ಕಿದ್ದಂತೆ ಆತನ ಕಡೆ ನುಗ್ಗಿದ ಬೀದಿ ನಾಯಿ, ಮೈ ಮೇಲೆ ಹಾರಿ ದಾಳಿ ನಡೆಸಿದೆ.

ಅದನ್ನು ತಳ್ಳಲು ಪ್ರಯತ್ನಿಸಿದ ಆಶೀಶ್, ಒದ್ದು ಪಾರಾಗಲು ಪ್ರಯತ್ನಿಸಿದ್ದಾನೆ. ಆದರೆ ಬೊಗಳುವುದನ್ನು ನಿಲ್ಲಿಸದ ನಾಯಿ, ಆತನ ಮೇಲೆ ಎಗರಿದೆ. ಮುಖದ ಮೇಲೆಯೇ ಕಚ್ಚಿದ ನಾಯಿ, ಬಳಿಕ ಅಲ್ಲಿಂದ ಓಡಿ ಹೋಗಿದೆ. ಆಶೀಶ್‌ನ ಬಾಯಿ, ಕಣ್ಣು ಹಾಗೂ ತುಟಿಗಳಿಂದ ರಕ್ತ ಸುರಿಯುವುದು ವಿಡಿಯೋದಲ್ಲಿ ಕಾಣಿಸಿದೆ.



### ಆಸ್ಪತ್ರೆಯಲ್ಲಿ ಲಸಿಕೆಯೇ ಇಲ್ಲ

**ರೇಬೀಸ್ ಲಸಿಕೆಗಾಗಿ ಜಿಲ್ಲಾ ಆಸ್ಪತ್ರೆಗೆ ಹೋದರೆ, ಅಲ್ಲಿ ಲಸಿಕೆ ಖಾಲಿಯಾಗಿದೆ ಎಂದು ಹೇಳಿದ್ದಾರೆ ಎಂದು ಆಶೀಶ್‌ನ ತಂದೆ ವಿಜಯ್ ಯಾದವ್ ತಿಳಿಸಿದ್ದಾರೆ.**


ಈ ದಾಳಿ ಬಳಿಕ ಮಹಿಳೆಯೊಬ್ಬರನ್ನು ನಾಯಿ ಟಾರ್ಗೆಟ್ ಮಾಡಿದೆ. ಮನೆಗೆ ವಾಪಸಾಗುತ್ತಾ ಗೇಟ್ ಬಳಿ ನಿಂತಿದ್ದ ಆಕೆ ಮೇಲೆ ದಾಳಿ ನಡೆಸಿದೆ. ಮೊಣಕಾಲಿನ ಬಳಿ ಬಲವಾಗಿ ಕಚ್ಚಿ ಅಲ್ಲಿಂದ ಓಡಿ ಹೋಗಿದೆ. ಮಹಿಳೆಯ ಮೊಣಗಾಲಿನ ಬಳಿ ಹಲವಾರು ಹೊಲಿಗೆಗಳನ್ನು ಹಾಕುವಷ್ಟು ಆಳವಾದ ಗಾಯಗಳಾಗಿವೆ.

ನಾಯಿಗಳ ಹಾವಳಿ ಬಗ್ಗೆ ಪಾಲಿಕೆಗೆ ಈ ಹಿಂದೆಯೇ ದೂರು ನೀಡಲಾಗಿತ್ತು. ಆದರೆ ಬೀದಿ ನಾಯಿಗಳ ಕಾಟ ತಡೆಯಲು ಯಾವುದೇ ಕ್ರಮ ಕೈಗೊಂಡಿರಲಿಲ್ಲ ಎಂದು ಸಂತ್ರಸ್ತರು ಆರೋಪಿಸಿದ್ದಾರೆ. ತಮಗೆ ಘಟನೆ ಬಗ್ಗೆ ಯಾವುದೇ ಮಾಹಿತಿ ಇಲ್ಲ. ಅಲ್ಲದೆ ನಾಯಿ ದಾಳಿಯ ಕುರಿತು ಯಾವುದೇ ದೂರು ಬಂದಿಲ್ಲ ಎಂದು ಗೋರಖ್‌ಪುರದ ಹೆಚ್ಚುವರಿ ಪಾಲಿಕೆ ಆಯುಕ್ತ ದುರ್ಗೇಶ್ ಮಿಶ್ರಾ ಹೇಳಿದ್ದಾರೆ. ನಾವು ನಿರಂತರವಾಗಿ ಬೀದಿ ನಾಯಿಗಳ ಸಂತಾನಶಕ್ತಿ ಹರಣ ಆಂದೋಲನ ನಡೆಸುತ್ತಿರುತ್ತೇವೆ.

## ಮಹಿಳೆಯರಿಗೆ ನೈಟ್ ಶಿಫ್ಟ್ ಹಾಕುವಂತಿಲ್ಲ

**ಕೋಲ್ಕತಾ:** ವೈದ್ಯ ವಿದ್ಯಾರ್ಥಿನಿಯ ಅತ್ಯಾಚಾರ, ಕೊಲೆ ಪ್ರಕರಣ ಸಂಬಂಧ ಹೈಕೋರ್ಟ್‌ನಿಂದ ತೀವ್ರ ತರಾಟೆಗೆ ಗುರಿಯಾಗಿ ದೇಶಾದ್ಯಂತ ವೈದ್ಯರ ಮುಷ್ಕರದ ಒತ್ತಡ ಎದುರಿಸುತ್ತಿರುವ ಮಮತಾ ಬ್ಯಾನರ್ಜಿ ನೇತೃತ್ವ ಪಶ್ಚಿಮ ಬಂಗಾಳ ಸರ್ಕಾರ ಹೊಸ ಯೋಜನೆಯನ್ನು ಘೋಷಿಸಿದೆ.

'ರತ್ತಿರಿರ್ ಶಾಥಿ' (ರಾತ್ರಿ ವೇಳೆಯ ರಕ್ಷಕರು) ಎಂದು ಹೆಸರಿಸಲಾಗಿರುವ ಕಾರ್ಯಕ್ರಮದ ಬಗ್ಗೆ ಶನಿವಾರ ಪಶ್ಚಿಮ ಬಂಗಾಳ ಸರಕಾರ ಘೋಷಣೆ ಮಾಡಿದೆ. ಇದರ ಅಡಿಯಲ್ಲಿ ರಾಜ್ಯಾದ್ಯಂತ ರಾತ್ರಿ ಪಾಳಿಯಲ್ಲಿ ಕೆಲಸ ಮಾಡುವ ಆಸ್ಪತ್ರೆಯ ಸಿಬ್ಬಂದಿ, ಹಾಸ್ಟೆಲ್‌ಗಳು, ವೈದ್ಯಕೀಯ ಸಿಬ್ಬಂದಿ ಹಾಗೂ ಇತರ ಕಾರ್ಮಿಕರ ರಕ್ಷಣೆಗೆ ಆದ್ಯತೆ ನೀಡಲಾಗಿದೆ. ಇಂಥವರ ಜತೆಗೆ ಮಹಿಳಾ ಸ್ವಯಂಸೇವಕರನ್ನು ಸರ್ಕಾರ ನೀಡಲಿದೆ. ಜತೆಗಾರರಿಗೆ ರಕ್ಷಣೆ ನೀಡಲು ಅಗತ್ಯ ತರಬೇತಿಯನ್ನು ಸ್ವಯಂಸೇವಕರಿಗೆ ನೀಡಲಾಗುವುದು. ರಾತ್ರಿ ಪಾಳಿಯಲ್ಲಿ ಮಹಿಳೆಯರನ್ನು ದುಡಿಸುವುದಾದರೆ ಯಾವುದೇ ಸಂಸ್ಥೆಯು ಅಂಥ ಸಂದರ್ಭ ಉಂಟಾಗದಂತೆ ನಿಗಾ ವಹಿಸಬೇಕು. ಒಂದು ವೇಳೆ ಮಹಿಳೆಯು ರಾತ್ರಿ ಪಾಳಿಯಲ್ಲಿ ಕೆಲಸ ಮಾಡಬೇಕಾದ ಅನಿವಾರ್ಯತೆ ಎದುರಾದಲ್ಲಿ ಅವರ ಕಾರ್ಯಾವಧಿಯು ಗರಿಷ್ಠ 12 ಗಂಟೆ ಮೀರುವಂತಿಲ್ಲ ಎಂದು ರಾಜ್ಯ ಸರಕಾರ ಆದೇಶಿಸಿದೆ.



**ಅಲರಾಂ ಆ್ಯಪ್, ಐಟಿ ಟ್ಯಾಗ್:** ರಾತ್ರಿ ಪಾಳಿಯಲ್ಲಿ ಕೆಲಸ ನಿರ್ವಹಿಸುವ ಮಹಿಳೆಯರಿಗಾಗಿಯೇ ವಿಶಿಷ್ಟ ಗುರುತಿನ ಟ್ಯಾಗ್‌ಗಳನ್ನು ರಾಜ್ಯ ಪೊಲೀಸ್ ಇಲಾಖೆ ಒದಗಿಸಲಿದೆ. ಮುಖ್ಯವಾಗಿ, ರಾತ್ರಿ ಪಾಳಿಯಲ್ಲಿ ಮಹಿಳಾ ವೈದ್ಯರು ಇರುವ ಆಸ್ಪತ್ರೆಗಳ ಸುತ್ತ ಹೆಚ್ಚುವರಿ ಪೊಲೀಸರನ್ನು ನೇಮಿಸಲಾಗುವುದು. ಅಲ್ಲದೇ, ಕಡ್ಡಾಯ ಮೊಬೈಲ್ ಆ್ಯಪ್‌ವೊಂದನ್ನು ಅಭಿವೃದ್ಧಿಪಡಿಸಲಾಗುತ್ತಿದೆ ಇದನ್ನು ನೈಟ್ ಶಿಫ್ಟ್‌ನ ಮಹಿಳೆಯರು ಕಡ್ಡಾಯವಾಗಿ ಮೊಬೈಲ್‌ಗಳಲ್ಲಿ ಬಳಸಬೇಕು, ಸಿಎಂ ಮಮತಾ ಅವರ ಪ್ರಧಾನ ಸಲಹೆಗಾರ ಆಲಾಪನ್ ಬಂಡೋಪಾಧ್ಯಾಯ ಸುದ್ದಿಗಾರರಿಗೆ ತಿಳಿಸಿದ್ದಾರೆ.

- ಮಹಿಳೆಯರಿಗೆ ನೈಟ್ ಶಿಫ್ಟ್ ಹಾಕುವಂತಿಲ್ಲ, ಅನಿವಾರ್ಯವಾದರೆ ಗರಿಷ್ಠ 12 ಗಂಟೆ ಮಾತ್ರ.
- ಪಶ್ಚಿಮ ಬಂಗಾಳ ಸರಕಾರದಿಂದ 'ರತ್ತಿರಿರ್ ಶಾಥಿ' ಮಹಿಳಾ ಸ್ವಯಂಸೇವಕರ ನೇಮಕ, ನೈಟ್ ಶಿಫ್ಟ್‌ನಲ್ಲಿ ಇವರೇ ಜತೆಗಾರರು
- ಪ್ರಧಾನಿ ಮೋದಿಗೆ ಪತ್ರ ಬರೆದ ಐಎಂಎ, ವೈದ್ಯರ ರಕ್ಷಣೆಗೆ ಮನವಿ.

**ಕೇಂದ್ರದಿಂದ ಸಮಿತಿ ರಚನೆ, ಕರ್ತವ್ಯಕ್ಕೆ ಮರಳಲು ಸೂಚನೆ:** ಆರೋಗ್ಯ ಸೇವಾ ನಿರತ ವೃತ್ತಿಪರರ ರಕ್ಷಣೆಗಾಗಿ ಶೀಘ್ರವೇ ಕೇಂದ್ರ ಆರೋಗ್ಯ ಸಚಿವಾಲಯವು ಸಮಿತಿಯೊಂದನ್ನು ರಚಿಸಿ ಸುಧಾರಣಾ ಕ್ರಮಗಳ ಕುರಿತು ಮಾಹಿತಿ ಸಂಗ್ರಹಿಸಲಿದೆ ಎಂದು ಕೇಂದ್ರ ಆರೋಗ್ಯ ಸಚಿವ ಜೆ.ಪಿ. ನಡ್ಡಾ ತಿಳಿಸಿದ್ದಾರೆ.

## ಬಿಜೆಪಿ ಸೇರ್ಪಡೆ ವದಂತಿ ನಡುವೆ ದೆಹಲಿಗೆ ತೆರಳಿದ ಮಾಜಿ ಮುಖ್ಯಮಂತ್ರಿ ಚಂಪೈ ಸೊರೇನ್

**ರಾಂಚಿ:** ಜಾರ್ಖಂಡ್ ಮುಕ್ತಿ ಮೋರ್ಚಾ ನಾಯಕ ಮತ್ತು ಮಾಜಿ ಮುಖ್ಯಮಂತ್ರಿ ಚಂಪೈ ಸೊರೇನ್ ಬಿಜೆಪಿಗೆ ಸೇರ್ಪಡೆಯಾಗಲಿದ್ದಾರೆ ಎಂಬ ವದಂತಿಗಳ ನಡುವೆ ಭಾನುವಾರ ದೆಹಲಿಗೆ ತೆರಳಿದ್ದಾರೆ. ಅವರು ಕೋಲ್ಕತ್ತಾದಿಂದ ರಾಷ್ಟ್ರ ರಾಜಧಾನಿಗೆ ತೆರಳಿದ್ದಾರೆ ಎಂದು ಸೊರೆನ್ ಅವರ ಆಪ್ತರು ಹೇಳಿದ್ದಾರೆ.

ದೆಹಲಿಗೆ ಬಂದಿಳಿದ ಕೂಡಲೇ ಸುದ್ದಿಗಾರರೊಂದಿಗೆ ಮಾತನಾಡಿದ ಸೋರೆನ್ , ಯಾವುದೇ ಬಿಜೆಪಿ ನಾಯಕರನ್ನು ಭೇಟಿ ಮಾಡುತ್ತಿಲ್ಲ. ವೈಯಕ್ತಿಕ ಭೇಟಿಗಾಗಿ ನವದೆಹಲಿಗೆ ಆಗಮಿಸಿರುವುದಾಗಿ ತಿಳಿಸಿದರು.

ಜಾರ್ಖಂಡ್ ವಿಧಾನಸಭಾ ಚುನಾವಣೆಗೆ ಮುನ್ನ ಸೊರೇನ್ ಬಿಜೆಪಿ ಸೇರಬಹುದು ಎಂದು ಕೆಲವು ಮಾಧ್ಯಮ ವರದಿಗಳು ಹೇಳಿದ್ದವು. ಆದರೆ, ಅಂತಹ ವದಂತಿಗಳ ಬಗ್ಗೆ ತನಗೆ ತಿಳಿದಿಲ್ಲ ಎಂದು ಸೊರೆನ್ ಹೇಳಿದ್ದರು.

ಭೂ ಹಗರಣಕ್ಕೆ ಸಂಬಂಧಿಸಿದ ಹಣ ಕ್ರಮ ವರ್ಗಾವಣೆ ಪ್ರಕರಣದಲ್ಲಿ ಹೇಮಂತ್ ಸೊರೇನ್ ಅವರು ಜನವರಿ 31 ರಂದು ಇಡಿಯಿಂದ ಬಂಧಿತರಾಗಿದ್ದರು. ಅದಕ್ಕೂ ಮುನ್ನಾ ಅವರು ಮುಖ್ಯಮಂತ್ರಿ ಸ್ಥಾನಕ್ಕೆ ರಾಜೀನಾಮೆ ನೀಡಿದ್ದರು. ಬಳಿಕ ಚಂಪ ಸೊರೇನ್ ಅವರನ್ನು ಶಾಸಕಾಂಗ ಪಕ್ಷದ ನಾಯಕನ್ನಾಗಿ ಆಯ್ಕೆ ಮಾಡಲಾಗಿತ್ತು. ಫೆ. 2 ರಂದು ಅವರು ಮುಖ್ಯಮಂತ್ರಿಯಾಗಿ ಪ್ರಮಾಣ ವಚನ ಸ್ವೀಕರಿಸಿದ್ದರು. ಐದು ತಿಂಗಳ ಬಳಿಕ ಜೈಲಿನಿಂದ ಬಿಡುಗಡೆಯಾದ ನಂತರ ಹೇಮಂತ್ ಸೊರೇನ್ ಮತ್ತೆ ಜಾರ್ಖಂಡ್ ಮುಖ್ಯಮಂತ್ರಿಯಾಗಿ ಅಧಿಕಾರಿ ಸ್ವೀಕರಿಸಿದ್ದರು. ಇದರಿಂದಾಗಿ ಚಂಪೈ ಸೊರೇನ್ ಅಸಮಾಧಾನಗೊಂಡಿದ್ದಾರೆ ಎಂದು ತಿಳಿದುಬಂದಿದೆ.



## ಮಹಾ ಸರ್ಕಾರದ 'ಲಡ್ಕಿ ಬಹಿನ್' ಯೋಜನೆಗೆ ಅಧಿಕೃತ ಚಾಲನೆ

**ಮುಂಬೈ:** ಮಹಾರಾಷ್ಟ್ರದ ಮಹಾಯುತಿ ಸರ್ಕಾರ ರಕ್ಷಾ ಬಂಧನಕ್ಕು ಮುನ್ನ ರಾಜ್ಯದ ಮಹಿಳೆಯರಿಗೆ ಭರ್ಜರಿ ಗಿಫ್ಟ್ ನೀಡಿದ್ದು, ಮಹಿಳೆಯರಿಗೆ ಪ್ರತಿ ತಿಂಗಳು 1500 ರೂಪಾಯಿ ನೀಡುವ ಮಹತ್ವಾಕಾಂಕ್ಷೆಯ 'ಮಝಿ ಲಡ್ಕಿ ಬಹಿನ್' ಯೋಜನೆಗೆ ಶನಿವಾರ ಅಧಿಕೃತವಾಗಿ ಚಾಲನೆ ನೀಡಿದೆ.

ಈ ವರ್ಷಾಂತ್ಯದಲ್ಲಿ ನಡೆಯುವ ವಿಧಾನಸಭೆ ಚುನಾವಣೆಯಲ್ಲಿ ಮೈತ್ರಿಕೂಟ ಮತ್ತೆ ಅಧಿಕಾರಕ್ಕೆ ಬಂದರೆ ಈ ಮಾಸಿಕ ಸ್ಟೈಫಂಡ್ ಅನ್ನು 1,500 ರಿಂದ 3,000 ಕ್ಕೆ ದ್ವಿಗುಣಗೊಳಿಸುವ ಬಗ್ಗೆ ಮುಖ್ಯಮಂತ್ರಿ ಏಕನಾಥ್ ಶಿಂಧೆ ಅವರು ಸುಳಿವು ನೀಡಿದ್ದಾರೆ.

ಈ ಯೋಜನೆಯಿಂದ 1 ಕೋಟಿಗೂ ಹೆಚ್ಚು ಮಹಿಳೆಯರು ಪ್ರಯೋಜನ ಪಡೆಯುವ ನಿರೀಕ್ಷೆಯಿದ್ದು, ಈ ಯೋಜನೆ ತಾತ್ಕಾಲಿಕವಾಗಿರುವುದಿಲ್ಲ. ಇದು ಅನಿರ್ದಿಷ್ಟಾವಧಿಗೆ ಮುಂದುವರೆಯುತ್ತದೆ ಎಂದು ಶಿಂಧೆ ಭರವಸೆ ನೀಡಿದ್ದಾರೆ. ಶಿವಸೇನೆ, ಭಾರತೀಯ ಜನತಾ ಪಕ್ಷ ಮತ್ತು ರಾಷ್ಟ್ರೀಯ ಕಾಂಗ್ರೆಸ್ ಪಕ್ಷ ಒಳಗೊಂಡ ಮಹಾಯುತಿ ಸರ್ಕಾರ, ಲೋಕಸಭೆ ಚುನಾವಣೆಯ ಸೋಲಿನ ನಂತರ 'ಮುಖ್ಯಮಂತ್ರಿ ಮಾಝಿ ಲಡ್ಕಿ ಬಹಿನ್' ಯೋಜನೆಯನ್ನು ಘೋಷಿಸಿತ್ತು. ಈ ಯೋಜನೆಯು 21 ರಿಂದ 60 ವರ್ಷ ವಯಸ್ಸಿನ ವಿವಾಹಿತ, ವಿಚ್ಛೇದಿತ ಮತ್ತು ನಿರ್ಗತಿಕ ಮಹಿಳೆಯರಿಗೆ ಮಾಸಿಕ 1,500 ರೂ. ಸಹಾಯವನ್ನು ನೀಡುತ್ತದೆ ಮತ್ತು ವಾರ್ಷಿಕ 2.5 ಲಕ್ಷ ರೂ. ಗಿಂತ ಕಡಿಮೆ ಆದಾಯ ಇರುವ ಮಹಿಳೆಯರು ಈ ಯೋಜನೆಗೆ ಅರ್ಹರಾಗಿರುತ್ತಾರೆ.

ನಾವು ನಿಮ್ಮ ಬೆಂಬಲದಿಂದ ಮತ್ತೆ ಅಧಿಕಾರಕ್ಕೆ ಬಂದರೆ ನಿಮಗೆ ಪ್ರತಿ ತಿಂಗಳು 3,000 ರೂ.ಗಿಂತ ಹೆಚ್ಚಿನ ಹಣವನ್ನು ನೀಡಬಹುದು ಎಂದು ಶಿಂಧೆ ಅವರು ಹೇಳಿದ್ದಾರೆ.



**ಪ್ರತಿ ತಿಂಗಳು ಮಹಿಳೆಯರ ಖಾತೆಗೆ 1500 ರೂ. ಜಮೆ**

## ಪಿಸ್ತೂಲ್ ಪ್ರದರ್ಶಿಸಿದ ಗುಜರಾತ್ ವೈದ್ಯನ ವಿರುದ್ಧ ಕೇಸ್ ದಾಖಲು

**ಅಹಮದಾಬಾದ್:** ಕೋಲ್ಕತ್ತಾದಲ್ಲಿ ವೈದ್ಯೆ ಅತ್ಯಾಚಾರ-ಹತ್ಯೆಯನ್ನು ಖಂಡಿಸಿ ನಡೆದ ಪ್ರತಿಭಟನೆ ವೇಳೆ ಪಿಸ್ತೂಲ್ ಪ್ರದರ್ಶಿಸಿದ ಗೋವಿಂದ್ ಗಜೇರಾ ಎಂಬ ವೈದ್ಯನು ವಿರುದ್ಧ ಪೊಲೀಸರು ಕೇಸ್ ದಾಖಲಿಸಿದ್ದಾರೆ.

ಪ್ರತಿಭಟನೆ ವೇಳೆ ವೈದ್ಯರು ಮತ್ತು ವೈದ್ಯಕೀಯ ವಿದ್ಯಾರ್ಥಿಗಳನ್ನುದ್ದೇಶಿಸಿ ಮಾತನಾಡುವಾಗ ಗೋವಿಂದ್ ಗಜೇರಾ ಅವರು ತಮ್ಮ ಪರವಾನಗಿ ಪಡೆದ ಪಿಸ್ತೂಲ್ ಅನ್ನು ಪ್ರದರ್ಶಿಸಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ.

ಪೊಲೀಸರ ಪ್ರಕಾರ, ಅಮ್ರೇಲಿಯ ಶಾಂತಾಬಾ ವೈದ್ಯಕೀಯ ಕಾಲೇಜಿನ ಇಂಟರ್ನ್ ವೈದ್ಯರು ಅಹಮದಾಬಾದ್‌ನ ರಾಜಕಮಲ್ ಚೌಕ್‌ನಲ್ಲಿ ಕ್ಯಾಂಡಲ್‌ಲೈಟ್ ಮೆರವಣಿಗೆ ನಡೆಸುತ್ತಿದ್ದಾಗ ಈ ಘಟನೆ ನಡೆದಿದೆ. ಪ್ರತಿಭಟನೆ ವೇಳೆ ಪಿಸ್ತೂಲ್ ಪ್ರದರ್ಶಿಸಿದ ಗೋವಿಂದ್ ಗಜೇರಾ .



ಡಾ. ಗಜೇರಾ ಅವರು ತಮ್ಮ ಪರವಾನಿಗೆ ಪಡೆದಿರುವ ರಿವಾಲ್ವರ್ ಅನ್ನು ಸಾರ್ವಜನಿಕವಾಗಿ ಪ್ರದರ್ಶಿಸಿದ್ದಾರೆ ಮತ್ತು ನಮ್ಮ ರಕ್ಷಣೆಗಾಗಿ ಶಸ್ತ್ರಸಜ್ಜಿತರಾಗುವಂತೆ ವೈದ್ಯರಿಗೆ ಕರೆ ನೀಡಿದ್ದಾರೆ ಎಂದು ಮೂಲಗಳು ತಿಳಿಸಿವೆ.

ಸಭೆಯನ್ನು ಉದ್ದೇಶಿಸಿ ಮಾತನಾಡುವಾಗ ಅವರು ಪಿಸ್ತೂಲ್ ಹಿಡಿದಿರುವುದು ಕಂಡುಬಂದಿದ್ದು, ಡಾ.ಗಜೇರಾ ಅವರು ತಮ್ಮ ಭಾಷಣದಲ್ಲಿ, ಪ್ರತಿಯೊಬ್ಬರೂ ತಮ್ಮ ಸುರಕ್ಷತೆಗಾಗಿ ಶಸ್ತ್ರಾಸ್ತ್ರಗಳನ್ನು ಹೊಂದಿರಬೇಕು.

**ಪರವಾನಗಿ ಪಡೆದ ಪಿಸ್ತೂಲ್ ಅನ್ನು ದುರ್ಬಳಕೆ ಮಾಡಿಕೊಂಡ ಆರೋಪದ ಮೇಲೆ ಡಾ. ಗಜೇರಾ ಅವರ ವಿರುದ್ಧ ಭಾರತೀಯ ನ್ಯಾಯ ಸಂಹಿತಾಯ ಸೆಕ್ಷನ್ 353(1) ಅಡಿಯಲ್ಲಿ ಕೇಸ್ ದಾಖಲಿಸಲಾಗಿದೆ ಎಂದು ಅಮ್ರೇಲಿ ಪೊಲೀಸ್ ಉಪಾಧೀಕ್ಷಕ(ಡಿವೈಎಸ್ಪಿ) ಚಿರಾಗ್ ದೇಸಾಯಿ ಅವರು ತಿಳಿಸಿದ್ದಾರೆ.**


ಮುಂದಿನ ಐದು ವರ್ಷಗಳಲ್ಲಿ, ಇಂತಹ ಘಟನೆಗಳು ಗಣನೀಯವಾಗಿ ಹೆಚ್ಚಾಗುತ್ತವೆ ಎಂದು ಹೇಳಿದ್ದಾರೆ.

# ಭಾರತದ ಪರಮಾಣು ಶಸ್ತ್ರಾಸ್ತ್ರಗಳ ರಹಸ್ಯ ಮಾಹಿತಿಗಳು ಸೋರಿಕೆಯಾಗಿದೆಯೇ?

## ಭಾರತವು ಜಲಾಂತರ್ಗಾಮಿ ಆಧಾರಿತ ಪರಮಾಣು ಕ್ಷಿಪಣಿಗಳನ್ನು ಸಮುದ್ರದಲ್ಲಿ ಅಡಗಿಸಿದೆ: ಅಮೆರಿಕದ ಪರಮಾಣು ವಿಜ್ಞಾನಿಗಳು

**ನವದೆಹಲಿ:** ಭಾರತದ ಪರಮಾಣು ಶಸ್ತ್ರಾಸ್ತ್ರಗಳ ರಹಸ್ಯ ಮಾಹಿತಿಗಳು ಸೋರಿಕೆಯಾಗಿದೆ ಎಂದು ತಿಳಿದು ಬಂದಿದೆ. ಈ ವಿಷಯವನ್ನು ಅಮೆರಿಕ ಬಹಿರಂಗಪಡಿಸಿದೆ. ಭಾರತವು ಜಲಾಂತರ್ಗಾಮಿ ಆಧಾರಿತ ಪರಮಾಣು ಕ್ಷಿಪಣಿಗಳನ್ನು ಸಮುದ್ರದಲ್ಲಿ ಅಡಗಿಸಿದೆ ಎಂದು ಅಮೆರಿಕದ ಪರಮಾಣು ವಿಜ್ಞಾನಿಗಳು ಪ್ರತಿಪಾದಿಸಿದ್ದಾರೆ. ಅಲ್ಲದೆ, ಭಾರತವು ತನ್ನ ಹಳೆಯ ನೌಕಾ ಪರಮಾಣು ಕ್ಷಿಪಣಿ ಸಾಮರ್ಥ್ಯವನ್ನು ನಿವೃತ್ತಿಗೊಳಿಸಿದೆ ಎಂದು ಹೇಳಿದ್ದಾರೆ.

ಯುರೇಷಿಯನ್ ಟೈಮ್ಸ್ ವರದಿಯ ಪ್ರಕಾರ, ಭಾರತೀಯ ನೌಕಾಪಡೆಯ ಯುದ್ಧನೌಕೆಗಳಲ್ಲಿನ ಯೋಗದ ಛಾಯಾಚಿತ್ರಗಳಿಂದ ಪಡೆದ ಮಾಹಿತಿಯು ಪರಮಾಣು ನಿಲುವಿನಲ್ಲಿ ಬದಲಾವಣೆಯನ್ನು ಸೂಚಿಸುತ್ತದೆ. ಜಲಾಂತರ್ಗಾಮಿ-ಉಡಾವಣಾ ಪರಮಾಣು-ಸಾಮರ್ಥ್ಯದ ಕ್ಷಿಪಣಿಗಳ ಸಾಮರ್ಥ್ಯವನ್ನು ಸ್ವಾಧೀನಪಡಿಸಿಕೊಳ್ಳುವ ಮೂಲಕ ಭಾರತವು ತನ್ನ ಪರಮಾಣು ನಿರೋಧಕದ ಸಮುದ್ರದ ಹಂತಕ್ಕೆ ಹತ್ತಿರವಾಗುತ್ತಿದ್ದಂತೆ, ಅದು ತನ್ನ ಹಳೆಯ ನೌಕಾ ಪರಮಾಣು ಸಾಮರ್ಥ್ಯದ ಕ್ಷಿಪಣಿಗಳನ್ನು ಸದ್ದಿಲ್ಲದೆ ನಿವೃತ್ತಿಗೊಳಿಸಿದೆ.




**ಅಂದಹಾಗೆ, ಭಾರತವು ಇತ್ತೀಚೆಗೆ ಪರಮಾಣು ಚಾಲಿತ ಜಲಾಂತರ್ಗಾಮಿ ನೌಕೆಗಳ ಕೆಲಸವನ್ನು ಬಹಳ ವೇಗವಾಗಿ ಮುಂದುವರೆಸಿದೆ. ತನ್ನ ನೀರೊಳಗಿನ ಪರಮಾಣು ನಿರೋಧಕತೆಯನ್ನು ಸಾಧಿಸಲು, ಭಾರತವು ಧನುಷ್ ಪರಮಾಣು ಕ್ಷಿಪಣಿಗಳನ್ನು ಉಡಾವಣೆ ಮಾಡುವ ಸಾಮರ್ಥ್ಯವನ್ನು ಹೊಂದಿರುವ ತನ್ನ ಎರಡು ಕಡಲಾಚೆಯ ಗಸ್ತು ಹಡಗುಗಳನ್ನು ಸಜ್ಜುಗೊಳಿಸಿದೆ.**

ಇತ್ತೀಚಿನ ವರ್ಷಗಳಲ್ಲಿ ಸಾಮಾಜಿಕ ಮಾಧ್ಯಮ ಪೋಸ್ಟ್‌ಗಳು ಮತ್ತು ಉಪಗ್ರಹ ಚಿತ್ರಣವನ್ನು ವಿಶ್ಲೇಷಿಸಿದ ನಂತರ ಈ ತೀರ್ಮಾನಕ್ಕೆ ಬರಲಾಗಿದೆ.

### ಅಮೆರಿಕಕ್ಕೆ ಹೇಗೆ ಗೊತ್ತಾಯಿತು?

**ಈ ವಿಶ್ಲೇಷಣೆಯ ತೀರ್ಮಾನದ ಪ್ರಕಾರ, ವಿಚಿತ್ರ ವಿಧಾನಗಳ ಮೂಲಕ ಸ್ಪಷ್ಟೀಕರಣವು ಬಂದಿದೆ: ಅಕ್ಟೋಬರ್ 2022 ರಲ್ಲಿ ಸೀಶೆಲ್‌ಸಗೆ ಬಂದರು ಭೇಟಿಯ ಸಮಯದಲ್ಲಿ ಭಾರತದ ಸೇರ್ಪಡೆಗೆ ಸಂಬಂಧಿಸಿದ ಐಎಎಸ್ ಪೋಸ್ಟ್‌ಗಳ ಸರಣಿಯು ಹೊಸ ಡೆಕ್ ಗುರುತುಗಳನ್ನು ಹೊಂದಿರುವ ಹಡಗು ಐಎಎಸ್ ಸುವರ್ಣ ಎಂದು ತೋರಿಸಿದೆ. ಅಂದರೆ ಡಿಸೆಂಬರ್ 2021ರ ಹೊತ್ತಿಗೆ, ಐಎಎಸ್ ಸುವರ್ಣದಲ್ಲಿರುವ ಕ್ಷಿಪಣಿ ಸ್ಥಿರಕಾರಿಗಳನ್ನು ತೆಗೆದುಹಾಕಲಾಗಿದೆ, ಅಂದರೆ ಹಡಗಿನಿಂದ ಪರಮಾಣು ಸಾಮರ್ಥ್ಯದ ಧನುಷ್ ಬ್ಯಾಲಿಸ್ಟಿಕ್ ಕ್ಷಿಪಣಿಗಳನ್ನು ಉಡಾಯಿಸಲು ಸಾಧ್ಯವಾಗುವುದಿಲ್ಲ.**

ಪರಮಾಣು-ಚಾಲಿತ ಬ್ಯಾಲಿಸ್ಟಿಕ್ ಜಲಾಂತರ್ಗಾಮಿ ಮತ್ತು ಜಲಾಂತರ್ಗಾಮಿ-ಉಡಾವಣಾ ಬ್ಯಾಲಿಸ್ಟಿಕ್ ಕ್ಷಿಪಣಿಗಳು ಇಲ್ಲದೆ, ಭಾರತದ ನೌಕಾ ಪರಮಾಣು ಪ್ರತಿಬಂಧಕವು ಪರಮಾಣು ಸಾಮಥ್ಯದ ಧನುಷ್ ಕ್ಷಿಪಣಿಗಳನ್ನು ಉಡಾಯಿಸಲು ಕಾನ್ಫಿಗರ್ ಮಾಡಲಾದ ಎರಡು ಕಡಲಾಚೆಯ ಗಸ್ತು ನೌಕೆಗಳನ್ನು ಒಳಗೊಂಡಿತ್ತು.

**ಎರಡು ಕಡಲಾಚೆಗೂ ಗಸ್ತು ಹಡಗು**

ಧನುಷ್ ಕ್ಷಿಪಣಿಯು ಭಾರತೀಯ ಅಲ್ಪ-ಶ್ರೇಣಿಯ, ಹಡಗು-ಉಡಾವಣಾ ಬ್ಯಾಲಿಸ್ಟಿಕ್ ಕ್ಷಿಪಣಿಯಾಗಿದೆ ಇದು ಪೃಥ್ವಿ ಕ್ಷಿಪಣಿ ಗುಂಪಿನ ಮೂರನೇ ರೂಪಾಂತರವಾಗಿದೆ, ಇದರಲ್ಲಿ ಪೃಥ್ವಿ - ಪೃಥ್ವಿ-ಐಐ ಮತ್ತು ಪೃಥ್ವಿ ಏರ್ ಡಿಫೆನ್ಸ್ ಇಂಟರ್‌ಸೆಪ್ಟರ್ ಸೇರಿವೆ. ಧನುಷ್ ಕ್ಷಿಪಣಿ ಏಕ-ಹಂತ ಮತ್ತು ದ್ರವ-ಚಾಲಿತವಾಗಿದೆ ಮತ್ತು ಪರಮಾಣು ಮತ್ತು ಸಾಂಪ್ರದಾಯಿಕ ಪೇಲೋಡ್‌ಗಳನ್ನು ಸಾಗಿಸಬಲ್ಲದು.

2013 ರಲ್ಲಿ, ದೇಶೀಯವಾಗಿ ನಿರ್ಮಿಸಲಾದ ಮೇಲ್ಮೈಯಿಂದ ಮೇಲ್ಮೈಗೆ ಕ್ಷಿಪಣಿಯನ್ನು ಬಂಗಾಳ ಕೊಲ್ಲಿಯಿಂದ ಯಶಸ್ವಿಯಾಗಿ ಪರೀಕ್ಷಿಸಲಾಗಿತ್ತು. ಧನುಷ್ ಹೊಂದಿದ ಯುದ್ಧನೌಕೆಗಳನ್ನು ಎರಡು ಸುಕನ್ಯಾ ವರ್ಗದ ಕಡಲಾಚೆಯ ಗಸ್ತು ನೌಕೆಗಳಾದ ಐಎನ್‌ಎಸ್ ಸುಭದ್ರ (ಹಲ್ ಸಂಖ್ಯೆ ಪಿ 51) ಮತ್ತು ಐಎನ್‌ಎಸ್ ಸುವರ್ಣ (ಪಿ 52) ನಲ್ಲಿ ನಿಯೋಜಿಸಲಾಗಿದೆ.

ಇತ್ತೀಚಿನ ವರ್ಷಗಳಲ್ಲಿ ಸಾಮಾಜಿಕ ಮಾಧ್ಯಮ ಪೋಸ್ಟ್‌ಗಳು ಮತ್ತು ಉಪಗ್ರಹ ಚಿತ್ರಣವನ್ನು ವಿಶ್ಲೇಷಿಸಿದ ನಂತರ ಈ ಫಲಿತಾಂಶವನ್ನು ತಲುಪಲಾಗಿದೆ. ಪರಮಾಣು-ಚಾಲಿತ ಬ್ಯಾಲಿಸ್ಟಿಕ್ ಜಲಾಂತರ್ಗಾಮಿ ನೌಕೆಗಳು ಮತ್ತು ಜಲಾಂತರ್ಗಾಮಿ-ಉಡಾವಣಾ ಬ್ಯಾಲಿಸ್ಟಿಕ್ ಕ್ಷಿಪಣಿಗಳು ಇಲ್ಲದೆ, ಪರಮಾಣು ಸಾಮರ್ಥ್ಯದ ಧನುಷ್ ಕ್ಷಿಪಣಿಗಳನ್ನು ಉಡಾಯಿಸಲು ಕಾನ್ಫಿಗರ್ ಮಾಡಲಾದ ಎರಡು ಕಡಲಾಚೆಯ ಗಸ್ತು ನೌಕೆಗಳನ್ನು ಒಳಗೊಂಡಿತ್ತು.

## ಮಿನಿ ನ್ಯೂಸ್

### ಆಸ್ಪತ್ರೆಯಲ್ಲಿ ಮಹಿಳಾ ಡಾಕ್ಟರ್ ಮೇಲೆ ಹಲ್ಲೆ, ಇಬ್ಬರ ಬಂಧನ

**ಮುಂಬೈ:** ನಗರದ ಸಾರ್ವಜನಿಕ ಆಸ್ಪತ್ರೆಯಲ್ಲಿ ಭಾನುವಾರ ಮುಂಜಾನೆ ಮಹಿಳಾ ವೈದ್ಯೆಯೊಬ್ಬರ ಮೇಲೆ ಹಲ್ಲೆ ನಡೆಸಿದ ಆರೋಪದ ಮೇಲೆ ಇಬ್ಬರು ಮಹಿಳೆಯರು ಸೇರಿದಂತೆ ಮೂವರ ವಿರುದ್ಧ ಪೊಲೀಸರು ಪ್ರಕರಣ ದಾಖಲಿಸಿದ್ದು, ಇಬ್ಬರನ್ನು ವಶಕ್ಕೆ ಪಡೆದಿದ್ದಾರೆ ಎಂದು ಅಧಿಕಾರಿಯೊಬ್ಬರು ತಿಳಿಸಿದ್ದಾರೆ.

ಲೋಕಮಾನ್ಯ ತಿಲಕ್ ಮುನ್ಸಿಪಲ್ ಜನರಲ್ ಆಸ್ಪತ್ರೆಯಲ್ಲಿನ ಕ್ಯಾಶುಲಿಟಿ ವಾರ್ಡ್ ನಲ್ಲಿ ವ್ಯಕ್ತಿಯೊಬ್ಬರ ಕಿವಿಯಿಂದ ಸುರಿಯುತ್ತಿದ್ದ ರಕ್ತವನ್ನು ಸ್ವಚ್ಛಗೊಳಿಸುತ್ತಿದ್ದ ಡಾಕ್ಟರ್ ಮೇಲೆ ಆರೋಪಿಗಳು ಹಲ್ಲೆ ನಡೆಸಿದ್ದಾರೆ. ವ್ಯಕ್ತಿ ಕಿರುಚಿದ್ದು ವಾಗ್ವಾದಕ್ಕೆ ಕಾರಣವಾಗಿದೆ. ರೋಗಿಯೊಂದಿಗೆ ಬಂದಿದ್ದವರಲ್ಲಿ ಇಬ್ಬರು ಮಹಿಳೆಯರು ಮತ್ತು ಒಬ್ಬ ಪುರುಷ ಮಹಿಳಾ ವೈದ್ಯರ ಮೇಲೆ ಹಲ್ಲೆ ನಡೆಸಿರುವುದಾಗಿ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಪೊಲೀಸರು ಭಾರತೀಯ ನ್ಯಾಯ ಸಂಹಿತಾ (ಬಿಎನ್‌ಎಸ್) ಮತ್ತು ಮಹಾರಾಷ್ಟ್ರ ಆರೋಗ್ಯ ಸೇವಾ ವ್ಯಕ್ತಿಗಳು ಸೇವಾ ಸಂಸ್ಥೆಗಳಲ್ಲಿ ಹಿಂಸಾಚಾರ ಮತ್ತು ಹಾನಿ ಅಥವಾ ಆಸ್ತಿ ನಷ್ಟ ತಡೆಗಟ್ಟುವಿಕೆ ಕಾಯ್ದೆಯಡಿಯಲ್ಲಿ ಮೂವರು ಆರೋಪಿಗಳ ವಿರುದ್ಧ ಪ್ರಕರಣ ದಾಖಲಿಸಿದ್ದಾರೆ. ಮೂವರು ಆರೋಪಿಗಳ ಪೈಕಿ ಇಬ್ಬರನ್ನು ಬಂಧಿಸಲಾಗಿದೆ ಎಂದು ಅಧಿಕಾರಿ ತಿಳಿಸಿದ್ದಾರೆ. ಕುಡಿದ ಅಮಲಿನಲ್ಲಿದ್ದ 5-6 ಜನರ ಗುಂಪು ಬೆದರಿಸಿ ದೈಹಿಕವಾಗಿ ಹಲ್ಲೆಗೆ ಯತ್ನಿಸಿದೆ. ತನ್ನನ್ನು ತಾನು ರಕ್ಷಿಸಿಕೊಳ್ಳುವಾಗ ಆಕೆಗೂ ಗಾಯಗಳಾಗಿವೆ ಎಂದು ಸಿಯೋನ್ ಆಸ್ಪತ್ರೆ ತಿಳಿಸಿದೆ.

### ಸಿಡಿಲು ಬಡಿದು 9 ಮಂದಿ ಸಾವು

**ಒಡಿಶಾ:** ಒಡಿಶಾದಲ್ಲಿ ಎಡಬಿಡದೆ ಮಳೆ ಸುರಿದು ಜನ ಜೀವನ ಅಸ್ತವ್ಯಸ್ತವಾಗಿತ್ತು. ಇದೀಗ ಸಿಡಿಲು ಬಡಿದು ಘೋರ ಘಟನೆಗಳು ಬೆಳಕಿಗೆ ಬಂದಿವೆ. ರಾಜ್ಯದ 6 ಜಿಲ್ಲೆಗಳಲ್ಲಿ ಸಿಡಿಲು ಬಡಿದು 9 ಮಂದಿ ಸಾವನ್ನಪ್ಪಿದ್ದು 12ಕ್ಕೂ ಹೆಚ್ಚು ಮಂದಿ ಗಾಯಗೊಂಡಿದ್ದಾರೆ.

ಈ ಘಟನೆಯು ಮಯೂರ್‌ಭಂಜ್, ಭದ್ರಕ್, ಕೇಂದ್ರಪಾರ, ಗಂಜಾಂ, ಕಿಯೋಂಜಾರ್ ಮತ್ತು ಧೆಂಕನಲ್ ಜಿಲ್ಲೆಗಳಲ್ಲಿ ನಡೆದಿದೆ. ಘಟನೆಗೆ ರಾಜ್ಯ ಸಿಎಂ ಮೋಹನ್ ಚರಣ್ ಮಾಝಿ ತೀವ್ರ ಸಂತಾಪ ವ್ಯಕ್ತಪಡಿಸಿದ್ದಾರೆ. ಮೃತರ ಕುಟುಂಬಗಳಿಗೆ 4 ಲಕ್ಷ ರೂಪಾಯಿ ಪರಿಹಾರ ಘೋಷಿಸಿದ್ದಾರೆ. ರಾಜ್ಯ ಸರ್ಕಾರ ಗಾಯಾಳುಗಳಿಗೆ ಉಚಿತ ಚಿಕಿತ್ಸೆ ಘೋಷಿಸಿದೆ. ಮುಖ್ಯಮಂತ್ರಿ ಕಚೇರಿ ಹೊರಡಿಸಿದ ಹೇಳಿಕೆಯ ಪ್ರಕಾರ, ಮಯೂರ್‌ಭಂಜ್, ಬಾಲಸೋರ್ ಮತ್ತು ಭದ್ರಕ್ ಜಿಲ್ಲೆಗಳಲ್ಲಿ ತಲಾ ಎರಡು ಸಾವು ವರದಿಯಾಗಿವೆ. ಅದೇ ಸಮಯದಲ್ಲಿ, ಕಿಯೋಂಜಾರ್, ಧೆಂಕನಲ್ ಮತ್ತು ಗಂಜಾಂ ಜಿಲ್ಲೆಗಳಲ್ಲಿ ತಲಾ ಒಬ್ಬರು ಮೃತಪಟ್ಟಿರುವ ಮಾಹಿತಿ ಬೆಳಕಿಗೆ ಬಂದಿದೆ.

### ಭೀಕರ ಅಪಘಾತ: 10 ಮಂದಿ ಸಾವು

**ಬುಲಂದ್‌ಶಹರ್:** ಭಾನುವಾರ ಉತ್ತರ ಪ್ರದೇಶದ ಬುಲಂದ್‌ಶಹರ್‌ನಲ್ಲಿ ಬಸ್ ಮತ್ತು ಟೆಂಪೋ ಡಿಕ್ಕಿ ಹೊಡೆದು ಹತ್ತು ಜನರು ಮೃತಪಟ್ಟು 20 ಕ್ಕೂ ಹೆಚ್ಚು ಜನರು ಗಾಯಗೊಂಡಿದ್ದಾರೆ.

ಟೆಂಪೋದಲ್ಲಿ 25 ಜನರು ಪ್ರಯಾಣಿಸುತ್ತಿದ್ದರು. ಅವರಲ್ಲಿ ಹತ್ತು ಮಂದಿ ಸೇಲಂಪುರ ಪ್ರದೇಶದಲ್ಲಿ ಸಂಭವಿಸಿದ ಅಪಘಾತದಲ್ಲಿ ಮೃತಪಟ್ಟಿದ್ದಾರೆ. ಖಾಸಗಿ ಬಸ್ ಮತ್ತೊಂದು ವಾಹನವನ್ನು ಹಿಂದಿಕ್ಕಲು ಪ್ರಯತ್ನಿಸುವಾಗ ಟೆಂಪೋಗೆ ಡಿಕ್ಕಿ ಹೊಡೆದು ಟೆಂಪೋ ಪಲ್ಟಿಯಾಗಿದೆ.

ಸ್ಥಳೀಯರ ನೆರವಿನಿಂದ ಗಾಯಾಳುಗಳನ್ನು ಸಮೀಪದ ಆಸ್ಪತ್ರೆಗಳಿಗೆ ರವಾನಿಸಲಾಗಿದೆ. ಅಪಘಾತದಲ್ಲಿ ಟೆಂಪೋ ಸಂಪೂರ್ಣ ನಜ್ಜುಗುಜ್ಜಾಗಿದ್ದು, ಬಸ್‌ನ ಮುಂಭಾಗವೂ ಜಖಂಗೊಂಡಿದೆ. ಈ ಘಟನೆ ಸ್ಥಳೀಯರ ಆಕ್ರೋಶಕ್ಕೆ ಕಾರಣವಾಗಿದ್ದು, ರಸ್ತೆ ತಡೆ ನಡೆಸಿದರು.

### ಟೆಕ್ಸಾಸ್‌ನಲ್ಲಿ ಭೀಕರ ಅಪಘಾತದಲ್ಲಿ ಭಾರತೀಯ ಮೂಲದ ಮೂವರ ದುರ್ಮರಣ

**ಟೆಕ್ಸಾಸ್ :** ಟೆಕ್ಸಾಸ್‌ನಲ್ಲಿ ಸಂಭವಿಸಿದ ಭೀಕರ ಕಾರು ಅಪಘಾತದಲ್ಲಿ ಭಾರತೀಯ ಮೂಲದ ಕುಟುಂಬದ ಮೂವರು ಸೇರಿದಂತೆ ಐವರು ಸಾವನ್ನಪ್ಪಿದ್ದಾರೆ. ಹೃದಯ ವಿದ್ರಾವಕ ದುರಂತ ಬೆಳಗ್ಗೆ 5:45 ಕ್ಕೆ (ಸ್ಥಳೀಯ ಕಾಲಮಾನ) ಲಂಪಾಸಾಸ್ ಕೌಂಟಿಯಲ್ಲಿ ನಡೆದಿದೆ ಎಂದು ಆಸ್ಟಿನ್ ಅಮೆರಿಕನ್-ಸ್ಟೇಟ್ಸ್‌ಮನ್ ವರದಿ ಮಾಡಿದೆ. ದುರಂತದಲ್ಲಿ ಪ್ರಾಣ ಕಳೆದುಕೊಂಡ ಎಲ್ಲಾ ಐವರನ್ನು ಗುರುತಿಸಲಾಗಿದೆ ಎಂದು ಸಾರ್ವಜನಿಕ ಸುರಕ್ಷತಾ ವಿಭಾಗದ ಅಧಿಕಾರಿಗಳು ತಿಳಿಸಿದ್ದಾರೆ. ಅಪಘಾತದ ತೀವ್ರತೆಗೆ ಕಾರು ಸುಟ್ಟು ಕರಕಲಾಗಿರುವ ಚಿತ್ರಗಳು ಭೀಕರತೆಯನ್ನು ಸಾರುತ್ತಿದೆ.

ಅಪಘಾತದ ಬಳಿಕ ಬೆಂಕಿ ಹೊತ್ತಿ ಉರಿದಿದ್ದು, ಅರವಿಂದ್ ಮಣಿ(45),ಪತ್ನಿ ಪ್ರದೀಪಾ ಅರವಿಂದ್(40) ಮತ್ತು ಪುತ್ರಿ ಆಂಡ್ರಿಲ್ ಅರವಿಂದ್ (17) ಮೃತ ದುರ್ದೈವಿಗಳು. ಡಿಪಿಎಸ್ ವರದಿಯ ಪ್ರಕಾರ, ಮೂವರ ಕುಟುಂಬವು ಟೆಕ್ಸಾಸ್‌ನ ಲಿಯಾಂಡರ್ ನಗರದಲ್ಲಿ ನೆಲೆಸಿತ್ತು. ಅಪಘಾತದ ಸಮಯದಲ್ಲಿ ಅವರೊಂದಿಗೆ ಕಾರಿನಲ್ಲಿ ಇಲ್ಲದ ಆದಿರ್ಯಾನ್(14) ಬದುಕುಳಿದಿದ್ದು, ಏಕಾಂಗಿಯಾಗಿದ್ದಾನೆ. ಸಂಕಷ್ಟದ ಸಮಯದಲ್ಲಿ ಬಾಲಕನಿಗೆ ಎಲ್ಲ ರೀತಿಯಲ್ಲಿ ನೆರವು ನೀಡುತ್ತೇವೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

### ನಿವೃತ್ತ ಮುಖ್ಯ ನ್ಯಾಯಮೂರ್ತಿ ಹೆಸರಿನಲ್ಲಿ ನಕಲಿ ಇನ್‌ಸ್ಟಾಗ್ರಾಮ್ ಖಾತೆ, ವಂಚನೆ


**ಕೊಚ್ಚಿ:** ಕೇರಳ ಹೈಕೋರ್ಟ್‌ನ ನಿವೃತ್ತ ಮುಖ್ಯ ನ್ಯಾಯಮೂರ್ತಿ ಎ.ಜೆ ದೇಸಾಯಿ ಅವರ ಹೆಸರಿನಲ್ಲಿ ನಕಲಿ ಇನ್‌ಸ್ಟಾಗ್ರಾಮ್ ಖಾತೆ ಸೃಷ್ಟಿಸಿ, ಹಣ ವಸೂಲಿ ಮಾಡಿದ ಆರೋಪದಡಿ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ಎಫ್‌ಐಆರ್ ಪ್ರಕಾರ, ಈ ವರ್ಷದ ಜುಲೈನಲ್ಲಿ ಕೇರಳ ಹೈಕೋರ್ಟ್‌ನ ಮುಖ್ಯ ನ್ಯಾಯಮೂರ್ತಿ ಸ್ಥಾನದಿಂದ ನಿವೃತ್ತರಾದ ದೇಸಾಯಿ ಅವರ ಹೆಸರಿನಲ್ಲಿ ಅಪರಿಚಿತರು ಇನ್‌ಸ್ಟಾಗ್ರಾಮ್ ಖಾತೆಯನ್ನು ತೆರೆದಿದ್ದಾರೆ ಎಂದು ತಿಳಿದು ಬಂದಿದೆ.

ದೇಸಾಯಿ ಅವರ ಆಪ್ತ ಕಾರ್ಯದರ್ಶಿಯಾಗಿದ್ದ ವ್ಯಕ್ತಿಯೊಬ್ಬರು ಆಗಸ್ಟ್ 17ರಂದು ನೀಡಿದ ದೂರಿನ ಆಧಾರದ ಮೇಲೆ ಸೈಬರ್ ಕ್ರೈಮ್ ಠಾಣೆಯ ಪೊಲೀಸರು ಪ್ರಕರಣ ದಾಖಲಿಸಿಕೊಂಡಿದ್ದಾರೆ.

ದೇಸಾಯಿ ಅವರ ಆಪ್ತರಿಗೆ ನಕಲಿ ಇನ್‌ಸ್ಟಾಗ್ರಾಮ್ ಖಾತೆಯ ಮೂಲಕ ಆರೋಪಿಗಳು ಹಣಕ್ಕಾಗಿ ಸಂದೇಶ (ಮೆಸೇಜ್) ಕಳುಹಿಸಿದ್ದಾರೆ ಎಂದು ದೂರಿನಲ್ಲಿ ಉಲ್ಲೇಖಿಸಲಾಗಿದೆ.

ಈ ಪ್ರಕರಣ ಸಂಬಂಧ ಪೊಲೀಸರು ಭಾರತೀಯ ನ್ಯಾಯ ಸಂಹಿತೆ(ಬಿಎನ್‌ಎಸ್) ಮತ್ತು ಐಟಿ ಕಾಯ್ದೆಯ ವಿವಿಧ ಸೆಕ್ಷನ್‌ಗಳ ಅಡಿಯಲ್ಲಿ ಪ್ರಕರಣ ದಾಖಲಿಸಿಕೊಂಡಿದ್ದಾರೆ.



# ಮೋಹನ್ ಲಾಲ್ ಆಸ್ಪತ್ರೆಗೆ ದಾಖಲು

ಕನ್ನಡದ 'ಪೃಥ್ವಿ' ಸಿನಿಮಾದಲ್ಲಿ ನಟಿಸಿದ್ದ ಮಲಯಾಳಂ ನಟ ಮೋಹನ್‌ಲಾಲ್‌ರನ್ನು ಆಸ್ಪತ್ರೆಗೆ ದಾಖಲಿಸಲಾಗಿದೆ. ತೀವ್ರ ಜ್ವರ, ಉಸಿರಾಟದ ತೊಂದರೆ ಮತ್ತು ಸ್ನಾಯು ನೋವಿನ ತೊಂದರೆಯಿಂದ ಕೊಚ್ಚಿಯ ಖಾಸಗಿ ಆಸ್ಪತ್ರೆಗೆ ನಟನನ್ನು ದಾಖಲಿಸಿದ್ದಾರೆ.
64 ವರ್ಷ ವಯಸ್ಸಿನ ಮೋಹನ್ ಲಾಲ್ ಅವರು ಚಿಕಿತ್ಸೆಯ ಬಳಿಕ ಚೇತರಿಸಿಕೊಳ್ತಿದ್ದಾರೆ. 5 ದಿನಗಳವರೆಗೆ ವಿಶ್ರಾಂತಿಗೆ ಸೂಚಿಸಲಾಗಿದೆ.
ಸಾರ್ವಜನಿಕರ ಭೇಟಿ ತಪ್ಪಿಸಲು ಮತ್ತು ಸೂಚಿಸಲಾದ ಔಷಧಿ ಅನುಸರಿಸಲು ವೈದರು ಸಲಹೆ ನೀಡಿದ್ದಾರೆ.
ಆಸ್ಪತ್ರೆಯ ಅಧಿಕೃತ ಹೇಳಿಕೆಯನ್ನು ಶ್ರೀಧರ್ ಪಿಳ್ಳೈ ಎಂಬುವವರು ಹಂಚಿಕೊಂಡಿದ್ದಾರೆ. ಇನ್ನೂ ನೆಚ್ಚಿನ ನಟ ಆಸ್ಪತ್ರೆಗೆ ದಾಖ ಲಾಗಿರುವ ವಿಚಾರ ತಿಳಿದು ಫ್ಯಾನ್ಸ್ ಆತಂಕದಲ್ಲಿದ್ದರು. ಪ್ರಸ್ತುತ ಅವರ ಹೆಲ್ತ್ ಅಪ್‌ಡೇಟ್ ತಿಳಿದು ನಿರಾಳವಾಗಿದ್ದಾರೆ.

ಅಂದಹಾಗೆ, ಮಲಯಾಳಂ ಸಿನಿಮಾಗಳ ಜೊತೆಗೆ ಕನ್ನಡದ ಸಿನಿಮಾದಲ್ಲಿ ಕೂಡ ಮೋಹನ್‌ಲಾಲ್ ನಟಿಸುತ್ತಿದ್ದಾರೆ. 'ಪೊಗರು' ಖ್ಯಾತಿಯ ನಂದಕಿಶೋರ್ ನಿರ್ದೇಶನದ 'ವೃಷಭ' ಸಿನಿಮಾದಲ್ಲಿ ಮೋಹನ್‌ಲಾಲ್ ಮತ್ತು ರಾಗಿಣಿ ನಟಿಸುತ್ತಿದ್ದಾರೆ.



# ದೊಡ್ಮನೆಗೆ ಬರಲಿದ್ದಾರೆ 'ಸೂರ್ಯವಂಶ' ನಟಿ

ಕನ್ನಡದ 'ಸೂರ್ಯವಂಶ', 'ಓ ನನ್ನ ನಲ್ಲೆ' ಖ್ಯಾತಿಯ ನಟಿ ಇಶಾ ಕೊಪ್ಪಿಕರ್ ಅವರು ಸಲ್ಮಾನ್ ಖಾನ್ ನಿರೂಪಣೆಯ ಬಿಗ್ ಬಾಸ್ ಶೋಗೆ ಎಂಟ್ರಿ ಕೊಡಲಿದ್ದಾರೆ ಎಂದು ಇದೀಗ ಸೋಷಿಯಲ್ ಮೀಡಿಯಾದಲ್ಲಿ ಚರ್ಚೆ ಶುರುವಾಗಿದೆ.

ಸಲ್ಮಾನ್ ಖಾನ್ ನಿರೂಪಣೆಯ 'ಬಿಗ್ ಬಾಸ್ ಹಿಂದಿ ಸೀಸನ್ 18'ಕ್ಕೆ ತೆರೆಮರೆಯಲ್ಲಿ ಭಾರೀ ತಯಾರಿ ನಡೆಯುತ್ತಿದೆ. ಸ್ಪರ್ಧಿಗಳ ಲಿಸ್ಟ್ ಕೂಡ ರೆಡಿಯಾಗ್ತಿದೆ. ಅದರಲ್ಲಿ ಈ ಬಾರಿಯ ಬಿಗ್ ಬಾಸ್ ಶೋಗೆ ಮೊದಲ ಸ್ಪರ್ಧಿಯಾಗಿ ಇಶಾ ಕೊಪ್ಪಿಕರ್ ಎಂಟ್ರಿ ಕೊಡಲಿದ್ದಾರೆ ಎನ್ನಲಾಗಿದೆ. ಇದರ ಬಗ್ಗೆ ವಾಹಿನಿ ಆಗಲಿ, ಸ್ಪರ್ಧಿಯಾಗಲಿ ಯಾವುದೇ ಪ್ರತಿಕ್ರಿಯೆ ನೀಡಿಲ್ಲ. ಅಧಿಕೃತ ಮಾಹಿತಿಗಾಗಿ ಕಾಯಬೇಕಿದೆ. ಅಂದಹಾಗೆ, ಇತ್ತೀಚೆಗೆ ತಮಗಾದ ಕ್ಯಾಸ್ಟಿಂಗ್ ಕೌಚ್ ಅನುಭವ ಬಗ್ಗೆ ಕರಾಳ ಸತ್ಯ ಹೇಳುವ ಮೂಲಕ ನಟಿ ಭಾರೀ ಸುದ್ದಿಯಾಗಿದ್ದರು. ನನಗೆ ಆಗ 18 ವರ್ಷ. ಓರ್ವ ಸೆಕ್ರೆಟರಿ ನನಗೆ ಕರೆ ಮಾಡಿದರು. ಹೀರೋಗೆ ನೀವು ಒಂಟಿಯಾಗಿ ಸಿಗಬೇಕು ಎಂಬ ಬೇಡಿಕೆ ಇದೆ ಎಂದು ಹೇಳಿದ್ದರು. ಹೀರೋ ಜೊತೆ ನೀವು ಫ್ರೆಂಡ್ಲಿ ಆಗಿರಬೇಕು ಎಂದು ಸೂಚಿಸಿದರು. ನಾನು ಎಲ್ಲಾರ ಜೊತೆ ಫ್ರೆಂಡ್ಲಿ ಆಗಿದ್ದೇನೆ. ಆದರೆ ನೀವು ಹೇಳುವ ಫ್ರೆಂಡ್ಲಿ ಎಂದರೆ ಏನು ನನಗೆ ಅರ್ಥವಾಗಿಲ್ಲ ಎಂದು ಫೋನ್ ಇಟ್ಟಿದ್ದೆ. 23ನೇ ವಯಸ್ಸಿನಲ್ಲೂ ಹಾಗೆಯೇ ಆಗಿತ್ತು. ಒಂಟಿಯಾಗಿ ಸಿಗುವಂತೆ ಹಿಂದಿ ಸ್ಟಾರ್ ನಟನೊಬ್ಬ ಕೇಳಿದ್ದ. ಒಬ್ಬಂಟಿಯಾಗಿ ಕಾರು ಚಲಾಯಿಸಿಕೊಂಡು ಬರುವಂತೆ ಆತ ಹೇಳಿದ್ದ. ಆತನ ಹೆಸರು ಈಗಾಗಲೇ ಹಲವು ನಾಯಕಿಯರ ಜೊತೆ ತಳುಕು ಹಾಕಿಕೊಂಡಿತ್ತು.




# ಪಡ್ಡೆ ಹುಡುಗರ ಟೆಂಪ್ರೆಚರ್ ಹೆಚ್ಚಿಸಿದ ಶ್ರಿಯಾ ಶರಣ್

ಸೌತ್ ಸಿನಿಮಾಗಳಲ್ಲಿ ಬ್ಯುಸಿ

'ಕಬ್ಜ' ಸಿನಿಮಾದ ಬ್ಯೂಟಿ ಶ್ರಿಯಾ ಶರಣ್ ಮಳೆಗಾಲದ ಚಳಿಯಲ್ಲೂ ಬಿಸಿ ಹೆಚ್ಚಿಸಿದ್ದಾರೆ. ತಮ್ಮ ಸೋಶಿಯಲ್ ಮೀಡಿಯಾದಲ್ಲಿ ನಟಿ ಶೇರ್ ಮಾಡಿದ ಫೋಟೋ ನೋಡಿದ ನೆಟ್ಟಿಗರ ಕಣ್ಣು ತಂಪಾಗಿದೆ. ಚಳಿಯಲ್ಲೂ ಬಿಕಿನಿ ಧರಿಸಿ ಪಡ್ಡೆಹುಡುಗರ ಟೆಂಪ್ರೆಚರ್ ಹೆಚ್ಚಿಸಿದ್ದಾರೆ.

41ರ ಹರೆಯದಲ್ಲೂ 18ರ ಯುವತಿಯರನ್ನ ನಾಚಿಸುವಂತ ಫಿಟ್‌ನೆಸ್ ಹೊಂದಿದ್ದಾರೆ ಶ್ರೀಯಾ. ಬೀಚ್‌ನಲ್ಲಿ ಬಿಕಿನಿ ಹಾಕಿ ಕೊಟ್ಟ ಪೋಸ್‌ಗೆ ಪಡ್ಡೆಹುಡುಗರು ಫಿದಾ ಆಗಿದ್ದಾರೆ. ಕಡಲ ತೀರದಲ್ಲಿ ವಿವಿಧ ಭಂಗಿಯಲ್ಲಿ ನಟಿ ಫೋಟೋಶೂಟ್ ಮಾಡಿಸಿದ್ದಾರೆ. ನಟಿಯ ಮಾದಕ ನೋಟಕ್ಕೆ ಗಂಡ್ ಹೈಕ್ಳು ಕಳೆದೋಗಿದ್ದಾರೆ. 'ಕಬ್ಜ' ನಟಿ ಶ್ರೀಯಾ ಸದ್ಯ ಸೌತ್ ಸಿನಿಮಾಗಳಲ್ಲಿ ಬ್ಯುಸಿಯಾಗಿದ್ದಾರೆ. ಸಿನಿಮಾದಿಂದ ಸಿನಿಮಾಗೆ ಬಗೆ ಬಗೆಯ ಪಾತ್ರಗಳನ್ನು ಮಾಡುವ ಮೂಲಕ ಸಿನಿಪ್ರೇಕ್ಷಕರ ಮನಗೆಲ್ಲುತ್ತಿದ್ದಾರೆ. ತೆಲುಗಿನ 'ಸಂತೋಷಂ' ಸಿನಿಮಾ ಮೂಲಕ ಸಿನಿಮಾರಂಗಕ್ಕೆ ಪಾದಾರ್ಪಣೆ ಮಾಡಿದ ಶ್ರೀಯಾ ಶರಣ್ ಇದೀಗ ಬಹುಭಾಷಾ ನಟಿಯಾಗಿ ಬೇಡಿಕೆ ಹೆಚ್ಚಿಕೊಂಡಿದ್ದಾರೆ. ಈ ಹಿಂದೆ 'ಚಂದ್ರ' ಎಂಬ ಕನ್ನಡ ಸಿನಿಮಾದಲ್ಲಿ ಲವ್ಲಿ ಸ್ಟಾರ್ ಪ್ರೇಮ್‌ಗೆ ನಾಯಕಿಯಾಗಿ ನಟಿಸಿದ್ದರು. ಈ ಸಿನಿಮಾಗೆ ರೂಪಾ ಅಯ್ಯರ್ ನಿರ್ದೇಶನ ಮಾಡಿದ್ದರು. ಅಂದಹಾಗೆ, ಉಪೇಂದ್ರ ನಟನೆಯ ಕಬ್ಜ ಸಿನಿಮಾದಲ್ಲೂ ನಟಿಸಿ ಸೈ ಎನಿಸಿಕೊಂಡಿದ್ದರು. ಈ ಚಿತ್ರವನ್ನು ಆರ್. ಚಂದ್ರು ನಿರ್ದೇಶನ ಮಾಡಿದ್ರು. 'ಕಬ್ಜ ಪಾರ್ಟ್ 2' ಕೂಡ ಬರಲಿದೆ.

# ತಂಗಲಾನ್ ಸೀಕ್ವೆಲ್ ಸಿಹಿಸುದ್ದಿ



ಪಾ ರಂಜಿತ್ ನಿರ್ದೇಶನದಲ್ಲಿ ಮೂಡಿ ಬಂದ ಚಿಯಾನ್ ವಿಕ್ರಮ್ ನಟನೆಯ 'ತಂಗಲಾನ್' ಸಿನಿಮಾವು ಆ.15ರಂದು ಬಹುಭಾಷೆಗಳಲ್ಲಿ ರಿಲೀಸ್ ಆಗಿ ಉತ್ತಮ ರೆಸ್ಪಾನ್ಸ್ ಪಡೆಯುತ್ತಿದೆ. ಇದರ ನಡುವೆ ಸಿನಿಮಾ ಸಮಾರಂಭವೊಂದರಲ್ಲಿ, 'ತಂಗಲಾನ್ 2' ಬರೋದಾಗಿ ಖುದ್ದು ಚಿಯಾನ್ ವಿಕ್ರಮ್ ತಿಳಿಸಿದ್ದಾರೆ. ಪಾ ರಂಜಿತ್‌ಗೆ ನನ್ನ ಮೇಲೆ ಅಪಾರ ನಂಬಿಕೆ ಇತ್ತು, ಇದರಿಂದಾಗಿ ಈ ಚಿತ್ರ ಸಾಧ್ಯವಾಯಿತು. 'ತಂಗಲಾನ್' ಮುಂದಿನ ಭಾಗಕ್ಕೆ ಅರ್ಹವಾಗಿದೆ ಎಂದು ಸೀಕ್ವೆಲ್ ಬರೋದಾಗಿ ತಿಳಿಸಿದ್ದಾರೆ. ನೀವೆಲ್ಲರೂ ತುಂಬಾ ಇಷ್ಟಪಟ್ಟಿದ್ದೀರಿ. 'ತಂಗಲಾನ್' ಬಾಕ್ಸ್ ಆಫೀಸ್‌ನಲ್ಲಿ ಉತ್ತಮವಾಗಿ ಗಳಿಕೆ ಮಾಡುತ್ತಿದೆ ಎಂದಿದ್ದಾರೆ. ಈ ವೇಳೆ, 'ಪೊನ್ನಿಯಿನ್ ಸೆಲ್ವನ್' ನಾಲ್ಕು ರಾಷ್ಟ್ರೀಯ ಪ್ರಶಸ್ತಿ ಗೆದ್ದಿದ್ದಕ್ಕೆ ಖುಷಿ ಇದೆ ಎಂದು ಕೂಡ ಸಂತಸ ವ್ಯಕ್ತಪಡಿಸಿದ್ದಾರೆ.



# ಗೋಲ್ಡನ್ ಆಫರ್ ಕೈಚೆಲ್ಲಿದ ರಶ್ಮಿಕಾ ಮಂದಣ್ಣ

ಕೊಡಗಿನ ಬೆಡಗಿ ರಶ್ಮಿಕಾ ಮಂದಣ್ಣ ಪ್ಯಾನ್ ಇಂಡಿಯಾ ಸ್ಟಾರ್ ಆಗಿ ಮಿಂಚುತ್ತಿದ್ದಾರೆ. ಕೈತುಂಬಾ ಸಿನಿಮಾಗಳಿರುವ ನಟಿ, ತಮಗೆ ಸಿಕ್ಕ ಗೋಲ್ಡನ್ ಚಾನ್ಸ್ ಅನ್ನು ರಿಜೆಕ್ಟ್ ಮಾಡಿರೋದನ್ನು ತಿಳಿದು ಫ್ಯಾನ್ಸ್ ಅಚ್ಚರಿಗೊಂಡಿದ್ದಾರೆ. ತಮಿಳಿನ ಸೂಪರ್ ಹಿಟ್ ಚಿತ್ರವನ್ನು ರಶ್ಮಿಕಾ ಕೈಬಿಟ್ಟಿದಕ್ಕೆ ಫ್ಯಾನ್ಸ್ ದಂಗಾಗಿದ್ದಾರೆ. ಸದ್ಯ ಗಲ್ಲಾಪೆಟ್ಟಿಗೆಯಲ್ಲಿ ಕೋಟಿಗಟ್ಟಲೇ ಕಮಾಯಿ ಮಾಡುತ್ತಿರುವ ವಿಕ್ರಮ್ ನಟನೆಯ 'ತಂಗಲಾನ್' ಸಿನಿಮಾವನ್ನು ಪುಷ್ಪ ನಟಿ ಕೈಬಿಟ್ಟಿರುವ ವಿಚಾರ ಈಗ ಚರ್ಚೆಗೆ ಗ್ರಾಸವಾಗಿದೆ. ನಿರ್ದೇಶಕ ಪಾ ರಂಜಿತ್ ಅವರು ಮಾಳವಿಕಾ ಮೋಹನನ್ ನಟಿಸಿರುವ ನಾಯಕಿ ಪಾತ್ರಕ್ಕೆ ಮೊದಲು ರಶ್ಮಿಕಾರನ್ನು ಸಂಪರ್ಕಿಸಿದ್ದರಂತೆ. ಆದರೆ ಡೇಟ್ಸ್ ಹೊಂದಾಣಿಕೆ ಆಗದ ಕಾರಣ ಈ ಚಿತ್ರವನ್ನು ನಟಿ ಕೈಚೆಲ್ಲಿದ್ದರು. ಈಗ 'ತಂಗಲಾನ್' ಸಿನಿಮಾ 100 ಕೋಟಿ ರೂ. ಗೂ ಅಧಿಕ ಕಲೆಕ್ಷನ್ ಮಾಡಿ ಮುನ್ನುಗ್ಗುತ್ತಿದೆ. ಸಿನಿಮಾ ಸಕ್ಸಸ್ ರೇಸ್ ನೋಡಿ ಅಯ್ಯೋ ಶ್ರೀವಲ್ಲಿ ಎಂತಹ ಗೋಲ್ಡನ್ ಚಾನ್ಸ್ ಮಿಸ್ ಮಾಡಿಕೊಂಡರು ಎಂದು ಫ್ಯಾನ್ಸ್ ಬೇಸರ ವ್ಯಕ್ತಪಡಿಸಿದ್ದಾರೆ.

ಅಂದಹಾಗೆ, ಪುಷ್ಪ 2, ಛಾವಾ, ಅನಿಮಲ್ ಪಾರ್ಕ್, ಕುಬೇರ, ರೈನ್‌ಬೋ ಸಿನಿಮಾ ಸೇರಿದಂತೆ ಅನೇಕ ಪ್ರಾಜೆಕ್ಟ್‌ಗಳಿವೆ.

# ಮೆಗಾಸ್ಟಾರ್ ಚಿರಂಜೀವಿ ಚಿತ್ರ ರಿಜೆಕ್ಟ್ ಮಾಡಿದ ಶ್ರೀಲೀಲಾ

ಕನ್ನಡದ ನಟಿ ಶ್ರೀಲೀಲಾ ಸದ್ಯ ತೆಲುಗಿನಲ್ಲಿ ಬೇಡಿಕೆಯ ನಾಯಕಿಯಾಗಿದ್ದಾರೆ. ನಟನೆ ಮತ್ತು ಡ್ಯಾನ್ಸ್‌ನಲ್ಲಿ ಸೈ ಎನಿಸಿಕೊಂಡಿರುವ ನಟಿ ಈಗ ಬಾಲಿವುಡ್‌ನತ್ತ ಮುಖ ಮಾಡಿದ್ದಾರೆ. ಇದರ ನಡುವೆ ಮೆಗಾಸ್ಟಾರ್ ಚಿರಂಜೀವಿ ನಟನೆಯ ಸಿನಿಮಾವನ್ನು 'ಕಿಸ್' ಬೆಡಗಿ ರಿಜೆಕ್ಟ್ ಮಾಡಿರೋದು ಎಲ್ಲಾರ ಅಚ್ಚರಿಗೆ ಕಾರಣವಾಗಿದೆ.



'ವಿಶ್ವಾಂಭರ' ಸಿನಿಮಾದಲ್ಲಿ ಚಿರಂಜೀವಿ ಜೊತೆ ತ್ರಿಷಾ, ಆಶಿಕಾ ರಂಗನಾಥ್ ಸೇರಿದಂತೆ ಅನೇಕರು ನಟಿಸುತ್ತಿದ್ದಾರೆ. ಬಿಗ್ ಬಜೆಟ್‌ನಲ್ಲಿ ತಯಾರಾಗುತ್ತಿರುವ ಈ ಸಿನಿಮಾದಲ್ಲಿ ಸ್ಪೆಷಲ್ ಹಾಡಿಗೆ ಹೆಜ್ಜೆ ಹಾಕಲು ಶ್ರೀಲೀಲಾರನ್ನು ಕೇಳಿದ್ರಂತೆ ಚಿತ್ರತಂಡ. ಆದರೆ ನಟಿ ನೋ ಎಂದಿದ್ದಾರೆ. ದುಬಾರಿ ಸಂಭಾವನೆ ಕೊಡುತ್ತೇವೆ ಎಂದರು ಶ್ರೀಲೀಲಾ, ಈ ಪಾಜೆಕ್ಟ್ ಅನ್ನು ತಾನು ಮಾಡಲ್ಲ ಅಂತ ರಿಜೆಕ್ಟ್ ಮಾಡಿದ್ದಾರೆ ಎನ್ನಲಾಗಿದೆ. ಹೀಗೊಂದು ಸುದ್ದಿ ಈಗ ಸೋಷಿಯಲ್ ಮೀಡಿಯಾದಲ್ಲಿ ಚರ್ಚೆಗೆ ಗ್ರಾಸವಾಗಿದೆ. ಶ್ರೀಲೀಲಾರ ನಟನೆ ಮತ್ತು ಡ್ಯಾನ್ಸ್‌ಗೆ ಅಪಾರ ಅಭಿಮಾನಿಗಳನ್ನು ಹೊಂದಿದ್ದಾರೆ. ಯಾವುದೇ ಪಾತ್ರ ಮತ್ತು ಡ್ಯಾನ್ಸ್ ಸ್ಟೆಪ್ಸ್ ಕೊಟ್ರು, ಹೀರೋಗೆ ಠಕ್ಕರ್ ಕೊಟ್ಟು ನಟಿ ಕುಣಿಯುತ್ತಾರೆ. ಹಾಗಾಗಿ ಸಿನಿಮಾಗಳ ಜೊತೆ ಅವರಿಗೆ ಐಟಂ ಡ್ಯಾನ್ಸ್ ಗೆ ಹೆಜ್ಜೆ ಹಾಕಲು ಕೂಡ ಅವಕಾಶಗಳು ಅರಸಿ ಬರುತ್ತಿವೆ. ಅಂದಹಾಗೆ, ಬಾಲಿವುಡ್‌ನಲ್ಲಿ ಕಿಯಾರಾ ಪತಿ ಸಿದ್ಧಾರ್ಥ್ ಮಲ್ಹೋತ್ರಾಗೆ ಹೀರೋಯಿನ್ ಆಗಿ ಶ್ರೀಲೀಲಾ ಆಯ್ಕೆಯಾಗಿದ್ದಾರೆ.

# ಗುಲ್ಬರ್ಗಕ್ಕೆ ಚೊಚ್ಚಲ ಗೆಲುವು

ಬೆಂಗಳೂರಿನಲ್ಲಿ ನಡೆದ ಮಹಾರಾಜ ಟ್ರೋಫಿ 7 ನೇ ಪಂದ್ಯದಲ್ಲಿ ಮೈಸೂರು ವಾರಿಯರ್ಸ್ ತಂಡವನ್ನು ಗುಲ್ಬರ್ಗ ಮಿಸ್ಟಿಕ್ಸ್ ತಂಡ 3 ವಿಕೆಟ್‌ಗಳಿಂದ ಮಣಿಸಿತು. ಇದರೊಂದಿಗೆ ಈ ಲೀಗ್‌ನಲ್ಲಿ ಗುಲ್ಬರ್ಗ ತಂಡ ತನ್ನ ಗೆಲುವಿನ ಖಾತೆಯನ್ನು ತೆರೆಯಿತು. ಈ ಪಂದ್ಯಕ್ಕೂ ಮುನ್ನ ಎರಡು ಪಂದ್ಯಗಳನ್ನಾಡಿದ್ದ ಗುಲ್ಬರ್ಗ ತಂಡ ಆಡಿದ ಎರಡು ಪಂದ್ಯಗಳಲ್ಲೂ ಸೋತಿತ್ತು. ಬೆಂಗಳೂರಿನಲ್ಲಿ ನಡೆದ ಮಹಾರಾಜ ಟ್ರೋಫಿ 7 ನೇ ಪಂದ್ಯದಲ್ಲಿ ಮೈಸೂರು ವಾರಿಯರ್ಸ್ ತಂಡವನ್ನು ಗುಲ್ಬರ್ಗ ಮಿಸ್ಟಿಕ್ಸ್ ತಂಡ 3 ವಿಕೆಟ್‌ಗಳಿಂದ ಮಣಿಸಿತು. ಇದರೊಂದಿಗೆ ಈ ಲೀಗ್‌ನಲ್ಲಿ ಗುಲ್ಬರ್ಗ ತಂಡ ತನ್ನ ಗೆಲುವಿನ ಖಾತೆಯನ್ನು ತೆರೆಯಿತು. ಈ ಪಂದ್ಯಕ್ಕೂ ಮುನ್ನ ಎರಡು ಪಂದ್ಯಗಳನ್ನಾಡಿದ್ದ ಗುಲ್ಬರ್ಗ ತಂಡ ಆಡಿದ ಎರಡು ಪಂದ್ಯಗಳಲ್ಲೂ ಸೋತಿತ್ತು. ಒಂದು ಹಂತದಲ್ಲಿ ಈ ಪಂದ್ಯವೂ ಗುಲ್ಬರ್ಗ ಕೈಯಿಂದ ಜಾರಿತ್ತು. ಆದರೆ ತಂಡದ ಪರ ಏಕಾಂಗಿ ಹೋರಾಟ ನಡೆಸಿದ ಸ್ಮರಣ್ ರವಿಚಂದ್ರನ್ ಅಜೇಯ ಶತಕ ಸಿಡಿಸಿ ತಂಡವನ್ನು ಗೆಲುವಿನ ದಡ ಸೇರಿಸಿದರು. ಇತ್ತ 196 ರನ್‌ಗಳ ಬೃಹತ್ ಮೊತ್ತ ಕಲೆಹಾಕಿಯೂ ಮೈಸೂರು ವಾರಿಯರ್ಸ್ ತಂಡ ಸತತ ಎರಡನೇ ಸೋಲು ಅನುಭವಿಸಬೇಕಾಯಿತು.

**ಕರುಣ್ ಸ್ಫೋಟಕ ಅರ್ಧಶತಕ**

ಪಂದ್ಯದಲ್ಲಿ ಟಾಸ್ ಗೆದ್ದ ಗುಲ್ಬರ್ಗ ಮಿಸ್ಟಿಕ್ಸ್ ತಂಡ ಮೊದಲು ಬೌಲಿಂಗ್ ಮಾಡಲು ನಿರ್ಧರಿಸಿತು.

ಅದರಂತೆ ಮೊದಲು ಬ್ಯಾಟಿಂಗ್ ಮಾಡಿದ ಮೈಸೂರು ವಾರಿಯರ್ಸ್ ತಂಡ ನಿಗದಿತ 20 ಓವರ್‌ಗಳಲ್ಲಿ 8 ವಿಕೆಟ್ ಕಳೆದುಕೊಂಡು ಬರೋಬ್ಬರಿ 198 ರನ್ ಕಲೆಹಾಕಿತು. ತಂಡದ ಪರ ನಾಯಕ ಕರುಣ್ ನಾಯರ್ ಸ್ಫೋಟಕ ಅರ್ಧಶತಕ ಸಿಡಿಸಿದರು. ತಮ್ಮ ಇನ್ನಿಂಗ್ಸ್‌ನಲ್ಲಿ 35 ಎಸೆತಗಳನ್ನು ಎದುರಿಸಿದ ಕರುಣ್ 8 ಬೌಂಡರಿ ಹಾಗೂ 3 ಸಿಕ್ಸರ್ ಸಹಿತ 66 ರನ್ ಕಲೆಹಾಕಿದರು. ಕರುಣ್‌ಗೆ ಸಾಥ್ ನೀಡಿದ ರಾಹುಲ್ ದ್ರಾವಿಡ್ ಅವರ ಪುತ್ರ ಸಮಿತ ದ್ರಾವಿಡ್ 24 ಎಸೆತಗಳಲ್ಲಿ 4 ಬೌಂಡರಿ ಹಾಗೂ 1 ಸಿಕ್ಸರ್ ಸಹಿತ 33 ರನ್ ಬಾರಿಸಿದರು. ಇದರೊಂದಿಗೆ ಸಮಿತ್ ತಮ್ಮ ಕಳಪೆ ಫಾರ್ಮ್‌ನಿಂದ ಹೊರಬರುವ ಕೆಲಸ ಮಾಡಿದರು. ವಾಸ್ತವವಾಗಿ ಸಮಿತ್ ಆಡಿದ ಮೊದಲೆರಡು ಪಂದ್ಯಗಳಲ್ಲಿ ಕೇವಲ ಒಂದಂಕಿಗೆ ಸುಸ್ತಾಗಿದ್ದರು. ಇನ್ನು ಕೆಳಕ್ರಮಾಂಕದಲ್ಲಿ ಸ್ಫೋಟಕ ಬ್ಯಾಟಿಂಗ್ ಮಾಡಿದ ಜಗದೀಶ್ ಸುಚಿತ್ 13 ಎಸೆತಗಳಲ್ಲಿ 2 ಬೌಂಡರಿ ಹಾಗೂ 4 ಸಿಕ್ಸರ್ ಸಹಿತ 40 ರನ್‌ಗಳ ಕಾಣಿಕೆ ನೀಡಿದರು. ಈ ಮೂವರ ಆಟದಿಂದ ಮೈಸೂರು ತಂಡ 196 ರನ್ ಕಲೆಹಾಕಿತು.



ಅಜೇಯ ಶತಕ ಸಿಡಿಸಿದ ಸ್ಮರಣ್

**ಗುಲ್ಬರ್ಗ ತಂಡಕ್ಕೆ ಕಳಪೆ ಆರಂಭ**

ಈ ಗುರಿ ಬೆನ್ನಟ್ಟಿದ ಗುಲ್ಬರ್ಗ ತಂಡಕ್ಕೆ ಕಳಪೆ ಆರಂಭ ಸಿಕ್ಕಿತು. ಲುವ್ನಿತ್ ಸಿಸೋಡಿಯಾ 4 ರನ್‌ಗಳಿಗೆ ಸುಸ್ತಾದರೆ, ನಾಯಕ ದೇವದತ್ ಪಡಿಕ್ಕಲ್ 1 ರನ್ ಬಾರಿಸಿ ಪೆವಿಲಿಯನ್ ಸೇರಿಕೊಂಡರು. ಅನೀಶ್ ಇನ್ನಿಂಗ್ಸ್ 24 ರನ್‌ಗಳಿಗೆ ಕೊನೆಗೊಂಡಿತು. ಇಲ್ಲಿಂದ ತಂಡದ ಇನ್ನಿಂಗ್ಸ್ ಜವಬ್ದಾರಿ ಹೊತ್ತ ಸ್ಮರಣ್ ರವಿಚಂದ್ರನ್ ಏಕಾಂಗಿ ಹೋರಾಟ ನಡೆಸಿ ತಂಡವನ್ನು ಗೆಲುವಿನ ದಡ ಮುಟ್ಟಿಸಿದರು.

**ಸ್ಮರಣ್ ಸ್ಮರಣೀಯ ಇನ್ನಿಂಗ್ಸ್**

ಸ್ಮರಣ್ ತಮ್ಮ ಇನ್ನಿಂಗ್ಸ್‌ನಲ್ಲಿ 60 ಎಸೆತಗಳನ್ನು ಎದುರಿಸಿ 11 ಬೌಂಡರಿ ಹಾಗೂ 4 ಸಿಕ್ಸರ್ ಸಹಿತ ಅಜೇಯ 104 ರನ್ ಬಾರಿಸಿದರು. ಒಂದು ವೇಳೆ ಸ್ಮರಣ್ ಅಜೇಯ ಶತಕ ಸಿಡಿಸದಿದ್ದರೆ, ಗುಲ್ಬರ್ಗ ತಂಡಕ್ಕೆ ಈ ಪಂದ್ಯದಲ್ಲೂ ಸೋಲು ಖಚಿತವಾಗಿತ್ತು.

# ಟೆಸ್ಟ್ ಪಂದ್ಯವನ್ನು ಸ್ಥಳಾಂತರಿಸಿದ ಪಾಕ್ ಕ್ರಿಕೆಟ್ ಮಂಡಳಿ

## ಸಿಸಿ ಟೂರ್ನಿಯನ್ನು ಯಾವುದೇ ಕೊರತೆಗಳಿಲ್ಲದಂತೆ ಆಯೋಜಿಸಲು ಮುಂದಾಗಿರುವ ಪಿಸಿಬಿ

ಪಾಕಿಸ್ತಾನ ಕ್ರಿಕೆಟ್ ಮಂಡಳಿಯು ಕರಾಚಿ ಬದಲಿಗೆ ರಾವಲ್ಪಿಂಡಿಯಲ್ಲಿ ಎರಡನೇ ಟೆಸ್ಟ್ ಪಂದ್ಯವನ್ನು ಆಯೋಜಿಸಲು ನಿರ್ಧರಿಸಿದೆ. ಕ್ರೀಡಾಂಗಣ ನಿರ್ಮಾಣ ಕಾಮಗಾರಿಯನ್ನು ಉಲ್ಲೇಖಿಸಿ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಪಿಸಿಬಿ ಹೇಳಿದೆ. ಎರಡನೇ ಟೆಸ್ಟ್ ಆಗಸ್ಟ್ 30 ರಿಂದ ನಡೆಯಲಿದೆ.

ಪಾಕಿಸ್ತಾನ ಮತ್ತು ಬಾಂಗ್ಲಾದೇಶ ನಡುವೆ ಇದೇ ಆಗಸ್ಟ್ 21 ರಿಂದ ಎರಡು ಪಂದ್ಯಗಳ ಟೆಸ್ಟ್ ಸರಣಿ ಆರಂಭವಾಗಲಿದೆ. ಆದರೆ ಅದಕ್ಕೂ ಮುನ್ನ ಪಾಕಿಸ್ತಾನ ಕ್ರಿಕೆಟ್ ಮಂಡಳಿ ಮುಜುಗರದಿಂದ ಪಾರಾಗಲು ಎರಡನೇ ಟೆಸ್ಟ್ ಪಂದ್ಯವನ್ನು ಸ್ಥಳಾಂತರಿಸಿದೆ. ವಾಸ್ತವವಾಗಿ 2025 ರ ಚಾಂಪಿಯನ್ಸ್ ಟ್ರೋಫಿಗೆ ಪಾಕಿಸ್ತಾನ ಆತಿಥ್ಯವಹಿಸುತ್ತಿದೆ. ಹೀಗಾಗಿ ಐಸಿಸಿ ಟೂರ್ನಿಯನ್ನು ಯಾವುದೇ ಕೊರತೆಗಳಿಲ್ಲದಂತೆ ಆಯೋಜಿಸಲು ಮುಂದಾಗಿರುವ ಪಿಸಿಬಿ, ಚಾಂಪಿಯನ್ಸ್ ಟ್ರೋಫಿಗೆ ಆತಿಥ್ಯವಹಿಸುತ್ತಿರುವ ಕ್ರೀಡಾಂಗಣಗಳಲ್ಲಿ ಒಂದಾಗಿರುವ ಕರಾಚಿ ಕ್ರೀಡಾಂಗಣವನ್ನು ನವೀಕರಿಸುತ್ತಿದೆ. ಆದ್ದರಿಂದ ಮುಂಜಾಗೃತ ಕ್ರಮವಾಗಿ ಪಿಸಿಬಿ, ಪಾಕಿಸ್ತಾನ ಹಾಗೂ ಬಾಂಗ್ಲಾದೇಶ ನಡುವಿನ ಟೆಸ್ಟ್ ಸರಣಿಯನ್ನು ಪ್ರೇಕ್ಷಕರಿಲ್ಲದೆ ನಡೆಸಲು ತೀರ್ಮಾನಿಸಿತ್ತು. ಆದರೆ ಪಿಸಿಬಿಯ ಈ ನಿರ್ಧಾರಕ್ಕೆ ಭಾರಿ ವಿರೋಧ ವ್ಯಕ್ತವಾದ ನಂತರ, ಇದೀಗ ಪಿಸಿಬಿ ಈ ಪಂದ್ಯವನ್ನು ಬೇರೆಡೆ ಆಯೋಜಿಸಲು ಮುಂದಾಗಿದೆ.

ಭಾರಿ ವಿರೋಧ ವ್ಯಕ್ತ





**15 ರೂ.ಗೆ ಕ್ರೀಡಾಂಗಣದ ಟಿಕೆಟ್**

ವಾಸ್ತವವಾಗಿ ಕೆಲವು ದಿನಗಳ ಹಿಂದೆ, ಪಿಸಿಬಿ ಕರಾಚಿಯ ರಾಷ್ಟ್ರೀಯ ಕ್ರೀಡಾಂಗಣದಲ್ಲಿ ನಡೆಯುವ ಪಂದ್ಯವನ್ನು ವೀಕ್ಷಿಸಲು ಬರುವ ಅಭಿಮಾನಿಗಳಿಗೆ ಕೇವಲ 50 ಪಾಕಿಸ್ತಾನಿ ರೂಪಾಯಿಗಳಿಗಳಿಗೆ (ಭಾರತದಲ್ಲಿ 15 ರೂಪಾಯಿ) ಟಿಕೆಟ್‌ಗಳನ್ನು ನೀಡುವುದಾಗಿ ಪ್ರಕಟಿಸಿತ್ತು ಇದರಿಂದಲಾದರೂ ಜನರು ಪಂದ್ಯವನ್ನು ವೀಕ್ಷಿಸಲು ಕ್ರೀಡಾಂಗಣಕ್ಕೆ ಬರಬಹುದು ಎಂಬುದು ಪಾಕ್ ಮಂಡಳಿಯ ಈ ನಿರ್ಧಾರದ ಹಿಂದೆ ಇದ್ದ ಉದ್ದೇಶವಾಗಿತ್ತು. ಪಾಕ್ ಮಂಡಳಿಯ ಈ ನಿರ್ಧಾರಕ್ಕೆ ಕಾರಣವೂ ಇದ್ದು ಕಳೆದ 2-3 ವರ್ಷಗಳಿಂದ ಕರಾಚಿಯಲ್ಲಿ ನಡೆದ ಪಾಕಿಸ್ತಾನ ತಂಡ ಹಾಗೂ ಪಿಎಸ್‌ಎಲ್ ಪಂದ್ಯಗಳಲ್ಲಿ ಪ್ರೇಕ್ಷಕರ ಕೊರತೆ ಎದುರಾಗಿತ್ತು. ಇದರಿಂದ ಪಿಸಿಬಿ ಭಾರಿ ಮುಖಭಂಗಕ್ಕೊಳಗಾಗಿತ್ತು.

**ಪಂದ್ಯ ಬೇರೆಡೆಗೆ ಸ್ಥಳಾಂತರ**

ಆದರೆ ಈ ಅಚ್ಚರಿಯ ನಿರ್ಧಾರ ತೆಗೆದುಕೊಂಡ ಕೆಲವೇ ದಿನಗಳ ನಂತರ ಪಿಸಿಬಿ, ಈ ನಿರ್ಧಾರವನ್ನು ರದ್ದುಗೊಳಿಸಿ, ಪ್ರೇಕ್ಷಕರು ಇಲ್ಲದೆ ಖಾಲಿ ಕ್ರೀಡಾಂಗಣದಲ್ಲಿ ಪಂದ್ಯವನ್ನು ನಡೆಸಲು ನಿರ್ಧರಿಸಿತ್ತು. ಮೇಲೆ ಹೇಳಿದಂತೆ ಈ ನಿರ್ಧಾರಕ್ಕೆ ಕಾರಣವನ್ನೂ ನೀಡಿದ್ದ ಪಿಸಿಬಿ, ಚಾಂಪಿಯನ್ಸ್ ಟ್ರೋಫಿಗಾಗಿ ಕ್ರೀಡಾಂಗಣದಲ್ಲಿ ನವೀಕರಣ ಕೆಲಸ ನಡೆಯುತ್ತಿರುವುದರಿಂದ ಖಾಲಿ ಕ್ರೀಡಾಂಗಣದಲ್ಲಿ ಪಂದ್ಯ ನಡೆಸುವುದಾಗಿ ಪಿಸಿಬಿ ಹೇಳಿತ್ತು. ಇದಕ್ಕೆ ಪಾಕಿಸ್ತಾನದ ಕೆಲ ಮಾಜಿ ಕ್ರಿಕೆಟಿಗರು ಆಕ್ಷೇಪ ವ್ಯಕ್ತಪಡಿಸಿದ್ದು, ಖಾಲಿ ಕ್ರೀಡಾಂಗಣದಲ್ಲಿ ಪಂದ್ಯ ಆಡಿದರೆ ಪಾಕಿಸ್ತಾನ ಕ್ರಿಕೆಟ್‌ಗೆ ಅವಮಾನ ಮಾಡಿದಂತಾಗುತ್ತದೆ ಎಂದಿದ್ದರು. ಇದೀಗ ಪಿಸಿಬಿ ಕೂಡ ಇದನ್ನು ಮನಗಂಡಿದ್ದು, ಪಂದ್ಯದ ಸ್ಥಳವನ್ನು ಬದಲಾಯಿಸಲು ನಿರ್ಧರಿಸಿದೆ.

ಭಾನುವಾರ, ಆಗಸ್ಟ್ 18 ರಂದು, ಮಂಡಳಿಯು ಕರಾಚಿ ಬದಲಿಗೆ ರಾವಲ್ಪಿಂಡಿಯಲ್ಲಿ ಎರಡನೇ ಟೆಸ್ಟ್ ಪಂದ್ಯವನ್ನು ಆಯೋಜಿಸಲು ನಿರ್ಧರಿಸಿದೆ. ಕ್ರೀಡಾಂಗಣ ನಿರ್ಮಾಣ ಕಾಮಗಾರಿಯನ್ನು ಉಲ್ಲೇಖಿಸಿ ಈ ನಿರ್ಧಾರ ಕೈಗೊಳ್ಳಲಾಗಿದೆ ಎಂದು ಪಿಸಿಬಿ ಹೇಳಿದೆ.

ಎರಡನೇ ಟೆಸ್ಟ್ ಆಗಸ್ಟ್ 30 ರಿಂದ ನಡೆಯಲಿದೆ. ಮೊದಲ ಟೆಸ್ಟ್ ಪಂದ್ಯವೂ ರಾವಲ್ಪಿಂಡಿಯಲ್ಲಿ ನಡೆಯಲಿರುವ ಕಾರಣ ಎರಡನೇ ಟೆಸ್ಟ್‌ಗಾಗಿ ಹೊಸ ಸ್ಥಳದಲ್ಲಿ ಯಾವುದೇ ಸಿದ್ಧತೆಗಳನ್ನು ಮಾಡಿಕೊಳ್ಳಬೇಕಾಗಿಲ್ಲ ಎಂಬುದು ಪಾಕಿಸ್ತಾನಿ ಮಂಡಳಿಗೆ ಸಿಕ್ಕಿರುವ ಏಕೈಕ ಸಮಾಧಾನವಾಗಿದೆ.

# ವಿಕೆಟ್ ಕೀಪಿಂಗ್ ಬಿಟ್ಟು ಬೌಲಿಂಗ್ ಕಡೆ ಮುಖ ಮಾಡಿದ ರಿಷಬ್ ಪಂತ್

ಚೊಚ್ಚಲ ಆವೃತ್ತಿಯ ದೆಹಲಿ ಪ್ರೀಮಿಯರ್ ಲೀಗ್ ನಿನ್ನೆಯಿಂದ ಆರಂಭವಾಗಿದೆ. ಉದ್ಘಾಟನಾ ಆವೃತ್ತಿಯ ಮೊದಲ ಪಂದ್ಯದಲ್ಲಿ ರಿಷಬ್ ಪಂತ್ ನಾಯಕತ್ವದ ಓಲ್ಡ್ ಡೆಲ್ಲಿ 6 ಹಾಗೂ ದಕ್ಷಿಣ ದೆಹಲಿ ಸೂಪರ್‌ಸ್ಟಾರ್ಸ್ ತಂಡಗಳು ಮುಖಾಮುಖಿಯಾಗಿದ್ದವು. ಈ ಪಂದ್ಯದಲ್ಲಿ ಪಂತ್ ನಾಯಕತ್ವದ ತಂಡ 3 ವಿಕೆಟ್‌ಗಳಿಂದ ಸೋಲೊಪ್ಪಿಕೊಂಡಿತ್ತು. ಇದು ಪಂದ್ಯದ ಸಾರಾಂಶವಾದರೆ, ಈ ಪಂದ್ಯದಲ್ಲಿ ಟೀಂ ಇಂಡಿಯಾ ಅಭಿಮಾನಿಗಳು ಇದುವರೆಗೆ ನೋಡಿರಲು ಸಾಧ್ಯವಾಗದ ಘಟನೆಯೊಂದು ಈ ಪಂದ್ಯದಲ್ಲಿ ನಡೆಯಿತು. ಅದೇನೆಂದರೆ ಇದುವರೆಗೆ ನಾವೆಲ್ಲರೂ ವಿಕೆಟ್ ಕೀಪರ್ ರೂಪದಲ್ಲಿ ನೋಡಿದ್ದ ರಿಷಬ್ ಪಂತ್, ಬೌಲರ್ ಆಗಿ ಅದರಲ್ಲೂ ಲೆಗ್ ಸ್ಪಿನ್ನರ್ ಆಗಿ ಕಾಣಿಸಿಕೊಂಡರು.



ಈ ಪಂದ್ಯದಲ್ಲಿ ಪಂತ್ ತಂಡ ಸೋಲು ಖಚಿತವಾಗಿತ್ತು. ಎದುರಾಳಿ ತಂಡಕ್ಕೆ ಗೆಲುವಿಗೆ ಕೇವಲ ಒಂದು ರನ್ ಬೇಕಾಗಿತ್ತು. ಹೀಗಾಗಿ ರಿಷಬ್ ಪಂತ್ ತಾವೇ ಬೌಲಿಂಗ್ ಮಾಡಲು ಅಖಾಡಕ್ಕಿಳಿದಿದ್ದರು. ಆದರೆ ಪಂತ್ ಎಸೆದ ಮೊದಲ ಎಸೆತದಲ್ಲಿ ಸಿಂಗಲ್ ಕದಿಯುವ ಮೂಲಕ ದಕ್ಷಿಣ ದೆಹಲಿ ಸೂಪರ್‌ಸ್ಟಾರ್ಸ್ ತಂಡ ಜಯದ ನಗೆ ಬೀರಿತು. ಆದಾಗ್ಯೂ ಪಂತ್ ಎಸೆದ ಮೊದಲ ಎಸೆತವೇ ಎಲ್ಲಾರಿಗೂ ಅಚ್ಚರಿ ಮೂಡಿಸಿತ್ತು. ಏಕೆಂದರೆ ರಿಷಬ್ ಪಂತ್ ಲೆಗ್ ಸ್ಪಿನ್ ಬೌಲಿಂಗ್ ಮಾಡಿದರು.

ಬ್ಯಾಟಿಂಗ್‌ನಲ್ಲಿ ರಿಷಬ್ ಪಂತ್ ಫ್ಲಾಪ್

ಈ ಪಂದ್ಯದಲ್ಲಿ ರಿಷಬ್ ಪಂತ್ ಬ್ಯಾಟಿಂಗ್‌ನಲ್ಲಿ ಸಪ್ಪೆ ಪ್ರದರ್ಶನ ನೀಡಿದರು. ಮೂರನೇ ಕ್ರಮಾಂಕದಲ್ಲಿ ಬ್ಯಾಟಿಂಗ್ ಮಾಡಿದ ಅವರ ಬ್ಯಾಟ್‌ನಿಂದ 32 ಎಸೆತಗಳಲ್ಲಿ ಕೇವಲ 35 ರನ್ ಮಾತ್ರ ಬಂದವು. ಈ ಇನ್ನಿಂಗ್ಸ್‌ನಲ್ಲಿ ಪಂತ್ 4 ಬೌಂಡರಿ ಹಾಗೂ ಒಂದು ಸಿಕ್ಸರ್ ಕೂಡ ಬಾರಿಸಿದರು. ಆದಾಗ್ಯೂ ಆರಂಭಿಕ ಅರ್ಪಿತ್ ರಾಣಾ ಸಿಡಿಸಿದ 59 ರನ್ ಮತ್ತು ಡೆತ್ ಓವರ್‌ನಲ್ಲಿ ವಂಶ್ ಬೇಡಿ 19 ಎಸೆತಗಳಲ್ಲಿ ಸಿಡಿಸಿದ 47 ರನ್‌ಗಳಿಂದ ಓಲ್ಡ್ ಡೆಲ್ಲಿ 6 ತಂಡ 197 ರನ್ ಕಲೆಹಾಕಿತು.

ಇದಕ್ಕೆ ಉತ್ತರವಾಗಿ ದಕ್ಷಿಣ ದೆಹಲಿ ಸೂಪರ್ ಸ್ಟಾರ್ಸ್ 5 ಎಸೆತಗಳು ಬಾಕಿ ಇರುವಂತೆಯೇ ಗುರಿ ತಲುಪಿತು. ತಂಡದ ಪರ ನಾಯಕ ಆಯುಷ್ ಬದೋನಿ 29 ಎಸೆತಗಳಲ್ಲಿ 57 ರನ್‌ಗಳ ಇನಿಂಗ್ಸ್ ಆಡಿದರೆ, ಆರಂಭಿಕ ಆಟಗಾರ ಪ್ರಿಯಾಂಶ್ ಆರ್ಯ 30 ಎಸೆತಗಳಲ್ಲಿ 57 ರನ್ ಬಾರಿಸಿ ತಂಡಕ್ಕೆ ಗೆಲುವಿನ ಶುಭಾರಂಭ ನೀಡಿದರು.



# ಧೋನಿಯಂತೆ ಸಿಕ್ಸರ್ ಬಾರಿಸಿದ ಇಶಾನ್ ಕಿಶನ್

ತಾನು ಮಾಡಿಕೊಂಡ ತಪ್ಪಿನಿಂದ ಟೀಂ ಇಂಡಿಯಾದಿಂದ ಹೊರಗುಳಿಯಬೇಕಾದ ದೊಡ್ಡ ಶಿಕ್ಷೆಗೆ ಗುರಿಯಾಗಿರುವ ತಂಡದ ಯುವ ವಿಕೆಟ್ ಕೀಪರ್ ಬ್ಯಾಟ್ಸ್‌ಮನ್ ಇಶಾನ್ ಕಿಶನ್, ಇದೀಗ ತಮ್ಮ ಅದ್ಭುತ ಪ್ರದರ್ಶನದ ಮೂಲಕ ಮತ್ತೊಮ್ಮೆ ರಾಷ್ಟ್ರೀಯ ತಂಡವನ್ನು ಸೇರಿಕೊಳ್ಳುವ ಸನಿಹದಲ್ಲಿದ್ದಾರೆ. ಪ್ರಸ್ತುತ ತಮಿಳುನಾಡಿನಲ್ಲಿ ನಡೆಯುತ್ತಿರುವ ಬುಚ್ಚಿ ಬಾಬು ಟ್ರೋಫಿಯಲ್ಲಿ ಜಾರ್ಖಂಡ್ ತಂಡದ ನಾಯಕರಾಗಿದ್ದ ಇಶಾನ್ ಕಿಶನ್ ಮಧ್ಯಪ್ರದೇಶ ವಿರುದ್ಧ ಎರಡು ವಿಕೆಟ್‌ಗಳಿಂದ ತಂಡವನ್ನು ಗೆಲುವಿನತ್ತ ಮುನ್ನಡೆಸಿದ್ದಾರೆ. ಈ ಪಂದ್ಯದ ಮೊದಲ ಇನ್ನಿಂಗ್ಸ್‌ನಲ್ಲಿ ಭರ್ಜರಿ ಶತಕ ಸಿಡಿಸಿದ್ದ ಇಶಾನ್ ಕಿಶನ್, ಎರಡನೇ ಇನ್ನಿಂಗ್ಸ್‌ನಲ್ಲಿ 41 ರನ್‌ಗಳ ಅಜೇಯ ಇನ್ನಿಂಗ್ಸ್ ಆಡಿದರು. ಈ ಪಂದ್ಯದಲ್ಲಿ ಜಾರ್ಖಂಡ್ ಗೆಲುವಿಗೆ 138 ರನ್ ಗಳಿಸಬೇಕಿತ್ತು. ಕೊನೆಯಲ್ಲಿ ಇಶಾನ್ ಕಿಶನ್ ಎರಡು ಸಿಕ್ಸರ್ ಬಾರಿಸುವ ಮೂಲಕ ತಂಡಕ್ಕೆ ಜಯ ತಂದುಕೊಟ್ಟರು.

ಇದರೊಂದಿಗೆ ಇಶಾನ್ ಕಿಶನ್, ಟೀಂ ಇಂಡಿಯಾದಲ್ಲಿ ಸ್ಥಾನ ಪಡೆಯುವ ಇರಾದೆಯಲ್ಲಿದ್ದು, ದುಲೀಪ್ ಟ್ರೋಫಿಯಲ್ಲೂ ಕಿಶನ್ ಇದೇ ಪ್ರದರ್ಶನ ಮುಂದುವರೆಸಿದರೆ, ಅವರಿಗೆ ಬಾಂಗ್ಲಾದೇಶ ವಿರುದ್ಧದ ಸರಣಿಯಲ್ಲಿ ಸ್ಥಾನ ಸಿಗುವುದು ಖಚಿತ. ಈ ಪಂದ್ಯದಲ್ಲಿ ಕಿಶನ್ ತನ್ನ ಪ್ರದರ್ಶನದ ಮೂಲಕ ಎಲ್ಲಾ ಟೀಕಾಕಾರರ ಬಾಯಿ ಮುಚ್ಚಿಸಿದ್ದಾರೆ. ಮೊದಲ ಇನ್ನಿಂಗ್ಸ್‌ನಲ್ಲಿ ವಿಕೆಟ್ ಕೀಪಿಂಗ್‌ನಲ್ಲಿ ಮೂರು ಅದ್ಭುತ ಕ್ಯಾಚ್‌ಗಳನ್ನು ಪಡೆದಿದ್ದ ಕಿಶನ್, ಇದಲ್ಲದೇ ಶತಕದ ಇನಿಂಗ್ಸ್ ಆಡಿದರು. ಎರಡನೇ ಇನ್ನಿಂಗ್ಸ್‌ನಲ್ಲೂ ಜಾರ್ಖಂಡ್ ತಂಡ ಸಂಕಷ್ಟದಲ್ಲಿದ್ದಾಗ 41 ರನ್‌ಗಳ ಅಜೇಯ ಇನ್ನಿಂಗ್ಸ್ ಆಡಿ ತಂಡವನ್ನು ಗೆಲುವಿನತ್ತ ಮುನ್ನಡೆಸಿದ್ದರು.

Printed by : A. BALACHANDRA, Printed at : RAJHANS ENTERPRISES No. 134, 4th Main Road, Industrial Town, Rajajinagar, Bengaluru 560044, Karnataka. Owned By, Published By, Editor :T. HOMBE GOWDA, No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966